


ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ನವೆಂಬರ್ 28 ಗುರುವಾರ 2024

ಸಂಪುಟ: 45 | ಸಂಚಿಕೆ: 221 | ಪುಟಗಳು: 12


₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695 ಸುದ್ದಿ
ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಇಂದು ಸಂಸದರಾಗಿ ಪ್ರಿಯಾಂಕಾ ಗಾಂಧಿ ಪ್ರಮಾಣವಚನ ಸಾಧ್ಯತೆ



ನವದೆಹಲಿ, ನ.27– ವಯನಾಡಿನ ಸಂಸದರಾಗಿ ಆಯ್ಕೆಯಾಗಿರುವ ಪ್ರಮಾಣಪತ್ರವನ್ನು ವಯನಾಡು ಕಾಂಗ್ರೆಸ್ ನಾಯಕರು ಇಂದು ರಾಹುಲ್ ಗಾಂಧಿ ಸಮ್ಮುಖದಲ್ಲಿ ಪ್ರಿಯಾಂಕಾ ಗಾಂಧಿ ಅವರಿಗೆ ಹಸ್ತಾಂತರಿಸಿದ್ದು, ನಾಳೆ (ನ.28) ಲೋಕಸಭೆಯಲ್ಲಿ ಅವರು ಸಂಸದರಾಗಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಇದೇ ವೇಳೆ, ಪ್ರಿಯಾಂಕಾ ಗಾಂಧಿಗೆ ಸಿಹಿ ತಿನಿಸುವ ಮೂಲಕ ರಾಹುಲ್ ಗಾಂಧಿ ಶುಭಾಶಯ ತಿಳಿಸಿದ್ದಾರೆ.

ಈ ನಡುವೆ, ತಮ್ಮ ಮೇಲೆ ವಯನಾಡು ಜನರು ತೋರಿದ ಅಭೂತಪೂರ್ವ ವಿಶ್ವಾಸ ಮತ್ತು ಬೆಂಬಲಕ್ಕೆ ಪ್ರಿಯಾಂಕಾ ಗಾಂಧಿ ಧನ್ಯವಾದ ತಿಳಿಸಿದ್ದಾರೆ. ಅವರ ಜೊತೆಗಿನ ಸಭೆಯಲ್ಲಿ ಪ್ರಿಯಾಂಕಾ ಗಾಂಧಿ ಅವರು, ಕ್ಷೇತ್ರದಲ್ಲಿ ಮುಂದಿನ ಕೆಲಸಗಳ ಬಗ್ಗೆ ● 6ನೇ ಪುಟಕ್ಕೆ

ಮುಂದಿನ ವರ್ಷವಷ್ಟೆ ತಾಪಂ, ಜಿಪಂ ಚುನಾವಣೆ

ಮೀಸಲು ಅಂತಿಮಗೊಳಿಸಲು ಮತ್ತಷ್ಟು ಕಾಲಾವಕಾಶ ಕೇಳಿದ ಸರಕಾರ



ಬೆಂಗಳೂರು, ನ. 27– ರಾಜ್ಯದಲ್ಲಿ ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿಗಳಿಗೆ ಮೀಸಲು ನಿಗದಿಪಡಿಸುವ ಪ್ರಕ್ರಿಯೆ ಅಂತಿಮಗೊಳಿಸಲು ರಾಜ್ಯ ಸರ್ಕಾರ ಮತ್ತೆ ಹೈಕೋರ್ಟ್‌ನಲ್ಲಿ ನಾಲ್ಕು ವಾರ ಸಮಯಾವಕಾಶ ಕೋರಿದೆ. ಹಾಗಾಗಿ, ಈ ವರ್ಷ ಬಹುತೇಕ ಚುನಾವಣೆ ನಡೆಯುವುದಿಲ್ಲ. 2025ಕ್ಕೆ ಚುನಾವಣೆ ನಡೆಯುವುದು ಖಚಿತವಾಗಿದೆ.

ರಾಜ್ಯದ ಎಲ್ಲಾ ಜಿ.ಪಂ ಹಾಗೂ ತಾಪಂಗಳಿಗೆ 12 ವಾರಗಳಲ್ಲಿ ಮೀಸಲು ಅಂತಿಮಗೊಳಿಸಲಾಗುವುದು ಎಂದು ಸರ್ಕಾರ 2023ರ ಡಿ.19 ರಂದು ಹೈಕೋರ್ಟ್‌ಗೆ ಲಿಖಿತ ಭರವಸೆ ನೀಡಿತ್ತು. ಆ ಭರವಸೆಯಂತೆ ನಡೆದುಕೊಂಡಿಲ್ಲ ಎಂದು ಆರೋಪಿಸಿ ರಾಜ್ಯ ಚುನಾವಣಾ ಆಯೋಗ ರಾಜ್ಯ ಸರಕಾರದ ವಿರುದ್ಧ ನ್ಯಾಯಾಂಗ ನಿಂದನೆ ● 6ನೇ ಪುಟಕ್ಕೆ

ಹಿರಿಯ ನಾಯಕ ಜಿ.ಟಿ.ದೇವೇಗೌಡರನ್ನೆ ಕಡೆಗಣಿಸಿದರೆ ನಮ್ಮ ಗತಿ ಏನು ಎಂಬ ಆತಂಕ ಜೆಡಿಎಸ್ ಇನ್ನಿತರ ಶಾಸಕರಲ್ಲಿದೆ!

● ಚನ್ನಪಟ್ಟಣ ನೂತನ ಶಾಸಕ ಯೋಗೇಶ್ವರ್ ಹೇಳಿಕೆ ● ಕಾಂಗ್ರೆಸ್ ನಾಯಕರು ಟಾಸ್ಕ್ ನೀಡಿದರೆ ಜೆಡಿಎಸ್ ಅತೃಪ್ತರ ಕರೆತರುತ್ತೇನೆ ● ಮುನಿಸಿಕೊಂಡಿದ್ದ ಕುಮಾರಸ್ವಾಮಿ–ನನ್ನ ಒಂದು ಮಾಡಿದ್ದೇ ಜಿಟಿಡಿ



ಸಿ.ಪಿ.ಯೋಗೇಶ್ವರ್

ಮೈಸೂರು, ನ.27–ಹಳೇ ಮೈಸೂರು ವಿಭಾಗದಲ್ಲಿ ಜೆಡಿಎಸ್ ಕ್ಷೀಣಿಸುತ್ತಿದೆ. ಆದ್ದರಿಂದ ನಿಮ್ಮ ರಾಜಕೀಯ ಅಸ್ತಿತ್ವದ ಬಗ್ಗೆ ಈಗಲೇ ತೀರ್ಮಾನ ಕೈಗೊಂಡು ಭವಿಷ್ಯ ರೂಪಿಸಿಕೊಳ್ಳಿ ಎಂದು ಚನ್ನಪಟ್ಟಣ ಶಾಸಕ ಸಿ.ಪಿ.ಯೋಗೇಶ್ವರ್ ಅವರು ಜೆಡಿಎಸ್ ಶಾಸಕರಿಗೆ ಭವಿಷ್ಯದ ಬುದ್ಧಿಪಾಠ ಮಾಡಿದ್ದಾರೆ.

ಸುದ್ದಿವಾಹಿನಿಯೊಂದರ ಸಂದರ್ಶನದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಹೈಕಮಾಂಡ್ ಜವಾಬ್ದಾರಿ ವಹಿಸಿದರೆ ಜೆಡಿಎಸ್ ಶಾಸಕರನ್ನು ಕಾಂಗ್ರೆಸ್‌ಗೆ ಕರೆತರುವುದಾಗಿ ಉಪ ಚುನಾವಣೆ ಫಲಿತಾಂಶದ ನಂತರ ತಾವು ನೀಡಿದ್ದ ಹೇಳಿಕೆ ಬಗ್ಗೆ ಮಾತನಾಡಿದರು. ಉಪ ಚುನಾವಣೆಯಲ್ಲಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ, ಕೇಂದ್ರ ಸಚಿವ ಕುಮಾರಸ್ವಾಮಿ ನಾಯಕತ್ವದಲ್ಲಿ ಸೋತಿದ್ದಾರೆ. ಹಳೇ ಮೈಸೂರು ಭಾಗದಲ್ಲಿ ಅವರನ್ನು ಜನರು ಸಂಪೂರ್ಣವಾಗಿ ತಿರಸ್ಕರಿಸಿದ್ದಾರೆ. ಯಾವುದೇ ಸಮುದಾಯದವರು ಅವರಿಗೆ ಕೈಜೋಡಿಸುತ್ತಿಲ್ಲ. ಹೀಗಿರುವಾಗ ಮುಂದಿನ ಚುನಾವಣೆಯಲ್ಲಿ ನಿಮ್ಮನ್ನು (ಜೆಡಿಎಸ್ ಶಾಸಕರು) ಯಾರು ಸ್ವೀಕಾರ ಮಾಡುತ್ತಾರೆ? ಆದ್ದರಿಂದ ಈಗಲೇ ಒಂದು ತೀರ್ಮಾನ ಮಾಡಿ ಎಂದು ಜೆಡಿಎಸ್ ಶಾಸಕರಿಗೆ ಕಿವಿಮಾತು ಹೇಳಿದ್ದೇನೆ. ಅದನ್ನು ಕೇಳುವುದು ● 6ನೇ ಪುಟಕ್ಕೆ

ಒಬ್ಬ ಶಾಸಕರನ್ನ ಮುಟ್ಟಿ ನೋಡಲಿ...!

ಯೋಗೇಶ್ವರ್‌ಗೆ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ವಾರ್ನಿಂಗ್



ಪುಟ್ಟರಾಜು

ಮಂಡ್ಯ,ನ.27–ನಮ್ಮ ಪಕ್ಷದ ಯಾವುದಾದರೂ ಒಬ್ಬ ಶಾಸಕರನ್ನು ಮುಟ್ಟಿ ನೋಡಲಿ ಎಂದು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ನೂತನ ಶಾಸಕ ಸಿ.ಪಿ. ಯೋಗೇಶ್ವರ್‌ಗೆ ಸವಾಲು ಹಾಕಿದ್ದಾರೆ. ಖಾಸಗಿ ಸುದ್ದಿವಾಹಿನಿಯೊಂದರ ಸಂದರ್ಶನದಲ್ಲಿ ಕಾಂಗ್ರೆಸ್ ಪಕ್ಷ ನನಗೆ ಅವಕಾಶ ನೀಡಿದರೆ, ಜೆಡಿಎಸ್‌ನ ಶಾಸಕರನ್ನು ಪಕ್ಷಕ್ಕೆ ಕರೆದು ತರುವ ಕೆಲಸ ಮಾಡಲು ನಾನು ಸಿದ್ಧ ಎಂದು ಶಾಸಕ ಸಿ.ಪಿ. ಯೋಗೇಶ್ವರ್ ನೀಡಿರುವ ಹೇಳಿಕೆ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಪ್ರತಿಕ್ರಿಯಿಸಿದ ಅವರು, ನಮ್ಮ ಪಕ್ಷದಲ್ಲಿ ಯಾರನ್ನೂ ಮುಟ್ಟೋಕೆ ಆಗಲ್ಲ ಎಂದರು. ಜೆಡಿಎಸ್ ಮುಗಿಸಿ ಬಿಡ್ತೀನಿ ಅಂತಿದ್ದಾರೆ ಯಾರೋ, ನಮ್ಮ ಪಕ್ಷದ ಶಾಸಕರು, ಮಾಜಿ ಶಾಸಕರು, ಮುಖಂಡರನ್ನೂ ಮುಟ್ಟಿ ನೋಡಲಿ ಎಂದು ಸಿ.ಪಿ.ಯೋಗೇಶ್ವರ್ ಹೆಸರು ಹೇಳದೆ ಸವಾಲು ಹಾಕಿದ ಅವರು, ಹಿಂದೆ ಯಾವುದೋ ಆಡಬಿಟ್ಟಿ ದುಡ್ಡು ಸಿಕ್ತು ಅಂತ ಮಧ್ಯಸ್ಥಿಕೆ ವಹಿಸಿ ಕೆಲವು ಶಾಸಕರನ್ನು ಖರೀದಿ ಮಾಡಿದ್ದಾರೆ. ಅದನ್ನೂ ನಾವು ನೋಡಿದ್ದೇವೆ ಎಂದು ಪುಟ್ಟರಾಜು ಯೋಗೇಶ್ವರ್‌ಗೆ ತಿವಿದರು. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಜಯ ಸಾಧಿಸಿರುವ ಸಿ.ಪಿ.ಯೋಗೇಶ್ವರ್ ● 6ನೇ ಪುಟಕ್ಕೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಒಳಗೊಂಡ ಮುಡಾ ನಿವೇಶನ ಹಂಚಿಕೆ ಹಗರಣಕ್ಕೆ ಈಗ ಮತ್ತೊಂದು ತಿರುವು!!

ಮೈಸೂರು ಕೋರ್ಟ್‌ನಲ್ಲಿ ಭೂಮಿಯ ಮೂಲ ಮಾಲೀಕರ ಕುಟುಂಬದ ಸದಸ್ಯೆ ದಾವೆ

● ಮುಖ್ಯಮಂತ್ರಿ ಭಾಮೈದನಿಗೆ ಮಾರಿದ ಭೂಮಿಯಲ್ಲಿ ನಮ್ಮಗೂ ಪಾಲಿದೆ ● ದೇವರಾಜು ಅಣ್ಣನ ಮಗಳು ಜಮುನಾ ಪ್ರತಿಪಾದನೆ; ಖಾತೆ ಮಾಡಿಸಿಕೊಡುವುದಾಗಿ ನಮ್ಮ ಸಹಿ ಪಡೆದು ಮಾರಿದ್ದಾರೆ; ಆರೋಪ

ಮೈಸೂರು, ನ.27(ಆರ್‌ಕೆ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಸಿಎಂ ಸಿದ್ದರಾಮಯ್ಯ ಅವರ ಪತ್ನಿ ಶ್ರೀಮತಿ ಪಾರ್ವತಿ ಅವರಿಗೆ ಶೇ.50:50ರಡಿ 14 ನಿವೇಶನಗಳನ್ನು ಅಕ್ರಮವಾಗಿ ನೀಡಲಾಗಿದೆ ಎಂಬ ಆರೋಪದ ಮೇರೆಗೆ ತನಿಖೆ ನಡೆಯುತ್ತಿರುವ ಬೆನ್ನಲ್ಲೇ ಸದರಿ ಜಮೀನಿಗೆ ಸಂಬಂಧಿಸಿದಂತೆ ಹಕ್ಕು ಚಲಾಯಿಸಿ ಸದರಿ ಭೂಮಿ ಮಾರಾಟ ಮಾಡಿದ್ದ ಮೂಲ ಮಾಲೀಕನ ಕುಟುಂಬ ಸದಸ್ಯರು ಮೈಸೂರಿನ 7ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯದಲ್ಲಿ ದಾವೆ (ಸಿಎನ್‌ಆರ್ ಸಂಖ್ಯೆ: KAMS020031832024) ಹೂಡಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದ ಕೆಸರೆ ಸರ್ವೆ ನಂ.464ರ 3.16 ಎಕರೆ ಜಮೀನನ್ನು



ಜಮುನಾ

ಶ್ರೀಮತಿ ಪಾರ್ವತಿ ಅವರ ಸಹೋದರ ಮಲ್ಲಿಕಾರ್ಜುನಸ್ವಾಮಿ ಅವರಿಗೆ ದೇವರಾಜು ಮಾರಾಟ ಮಾಡಿದ್ದು, ಅದರಲ್ಲಿ ತಮಗೂ ಪಾಲು ಬರಬೇಕಾಗಿದೆ ಎಂದು ದೇವರಾಜು ಅಣ್ಣನ ಮಗಳು ಜಮುನಾ ನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ಜಮೀನು ಮಾರಾಟ ಮಾಡಿದ ದೇವರಾಜು, ಖರೀದಿಸಿದ ಮಲ್ಲಿಕಾರ್ಜುನಸ್ವಾಮಿ, ದಾನ ಪಡೆದು ಮುಡಾದಿಂದ ಪರಿಹಾರವಾಗಿ 14 ನಿವೇಶನ ಪಡೆದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಶ್ರೀಮತಿ ಪಾರ್ವತಿ ಸೇರಿದಂತೆ 10 ಮಂದಿಯನ್ನು ಪ್ರತಿವಾದಿಗಳಾಗಿ ಉಲ್ಲೇಖಿಸಲಾಗಿದೆ.

ವಿವರ: ಕೆಸರೆ ಸರ್ವೆ ನಂ.464ರ 3.16 ಎಕರೆ ಜಮೀನು ದೇವರಾಜು ಮತ್ತು ಸಹೋದರ ಮೈಲಾರಯ್ಯ ಎಂಬುವರಿಗೆ ● 6ನೇ ಪುಟಕ್ಕೆ

ಸಿಎಂ ಪತ್ನಿಗೆ ಬರೀ 14 ನಿವೇಶನ ಮಂಜೂರು ಇರಲಿ; ಮುಡಾದಲ್ಲಿ ಬರೋಬ್ಬರಿ 5 ಸಾವಿರ ಕೋಟಿ ಹಗರಣ ನಡೆದಿದೆ

● ಆರ್‌ಟಿಐ ಗಂಗರಾಜು ಗಂಭೀರ ಆರೋಪ ● ಇಡೀ ಮುಡಾದಲ್ಲಿ ನಡೆದಿರುವ ಸುಮಾರು 5 ಸಾವಿರ ಕೋಟಿ ಹಗರಣದ ತನಿಖೆಯಾಗಬೇಕು ● ಇಡಿ ಮುಂದೆ ಹಾಜರಾಗಿ ಹೇಳಿಕೆ ದಾಖಲು



ಗಂಗರಾಜು

ಬೆಂಗಳೂರು, ನ.27–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) ಶೇ.50:50 ಅನುಪಾತದಡಿ ಅಕ್ರಮವಾಗಿ ನಿವೇಶನಗಳು ಹಂಚಿಕೆಯಾಗಿರುವ ಬಗ್ಗೆ ಮೈಸೂರಿನ ಆರ್‌ಟಿಐ ಕಾರ್ಯಕರ್ತ ಗಂಗರಾಜು ಅವರು ಬುಧವಾರ ಬೆಂಗಳೂರಿನ ಜಾರಿ ನಿರ್ದೇಶನಾಲಯದ (ಇಡಿ) ಕಚೇರಿಯಲ್ಲಿ ಹೇಳಿಕೆ ದಾಖಲಿಸಿದ್ದಾರೆ.

ಮುಡಾದಲ್ಲಿ ಶೇ.50:50 ಅನುಪಾತದಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಶ್ರೀಮತಿ ಪಾರ್ವತಿ ಅವರಿಗೆ 14 ನಿವೇಶನ ನೀಡಿರುವುದೂ ಸೇರಿದಂತೆ ಒಟ್ಟು 5 ಸಾವಿರ ಕೋಟಿ ರೂ. ಅಕ್ರಮ ನಡೆದಿದೆ ಎಂದು ಗಂಗರಾಜು ಇಡಿಗೆ ದೂರು ಸಲ್ಲಿಸಿದ್ದರು. ಈ ದೂರಿನ ಸಂಬಂಧ ಅವರಿಂದ ಹೇಳಿಕೆ ಪಡೆಯಲು ಇಡಿ ಅಧಿಕಾರಿಗಳು ನೀಡಿದ್ದ ನೋಟಿಸ್ ಹಿನ್ನೆಲೆಯಲ್ಲಿ ಅವರು ಇಂದು ಇಡಿ ಕಚೇರಿಗೆ ● 6ನೇ ಪುಟಕ್ಕೆ



ರಾಜ್ಯ ಸರ್ಕಾರಿ ನೌಕರರ ತುಟ್ಟಿಭತ್ಯೆ ದರ ಶೇ.10.75ಕ್ಕೆ ಹೆಚ್ಚಳ

ಬೆಂಗಳೂರು, ನ.27– ರಾಜ್ಯ ಸರ್ಕಾರದಿಂದ ರಚಿಸಲ್ಪಟ್ಟ 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳ ಅಡಿಯಲ್ಲಿ 2024ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ನೀಡಲಾಗುತ್ತಿರುವ ತುಟ್ಟಿಭತ್ಯೆಯ ದರಗಳನ್ನು 1ನೇ ಜುಲೈ 2024 ರಿಂದ ಜಾರಿಗೆ ಬರುವಂತೆ ಪ್ರಸ್ತುತ ಮೂಲ ವೇತನದ 8.50% ರಿಂದ 10.75%ಕ್ಕೆ ಪರಿಷ್ಕರಿಸಿ ಹೆಚ್ಚಳ ಮಾಡಲಾಗಿದೆ.




ಪರಿಷ್ಕೃತ ತುಟ್ಟಿಭತ್ಯೆಯ ದರಗಳ ಹಣ ಆ.1ರ 2024ರಿಂದ ಅನ್ವಯವಾಗಲಿದೆ. ಇನ್ನು ತುಟ್ಟಿಭತ್ಯೆಯ ಉದ್ದೇಶಕ್ಕಾಗಿ ಮೂಲ ವೇತನ ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುತ್ತಿರುವ ವೇತನ ಮತ್ತು ಅದರಲ್ಲಿ ಸ್ಥಗಿತ ವೇತನ ಬಡ್ತಿ, ವೈಯಕ್ತಿಕ ವೇತನ, ಹೆಚ್ಚುವರಿ ವೇತನ ಬಡ್ತಿ ಯಾವುದಾದರೂ ಇದ್ದಲ್ಲಿ, ಅವುಗಳು ಸೇರುತ್ತವೆ. ತುಟ್ಟಿಭತ್ಯೆಯ ಮಂಜೂರಾತಿಯ ಉದ್ದೇಶಕ್ಕಾಗಿ ಮೂಲ ವೇತನಕ್ಕೆ ಮೇಲೆ ಸೂಚಿಸಿರುವುದನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ. ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು, ಕುಟುಂಬ ನಿವೃತ್ತಿ ವೇತನದಾರರು ಮತ್ತು ● 6ನೇ ಪುಟಕ್ಕೆ

ಜಿಟಿಡಿ, ಅವರ ಮಗನ ಜೈಲಿಗೆ ಕಳುಹಿಸಲು ಕಾಂಗ್ರೆಸ್ ಸರ್ಕಾರ ಮುಂದಾಗಿತ್ತು

● ಕುಮಾರಸ್ವಾಮಿ ಗುಟುರು ಹಾಕಿ ತಪ್ಪಿಸಿದ್ದರು ● ಮಾಜಿ ಸಚಿವ ಹೆಚ್.ಡಿ.ರೇವಣ್ಣ ಬಾಂಬ್

ಬೆಂಗಳೂರು, ನ.27(ಕೆಎಂಶಿ)– ಕಾಂಗ್ರೆಸ್ ಸರ್ಕಾರ ಜಿ.ಟಿ.ದೇವೇಗೌಡ ಮತ್ತು ಅವರ ಮಗ ಜಿ.ಡಿ.ಹರೀಶ್‌ಗೌಡರನ್ನು ಜೈಲಿಗೆ ಕಳುಹಿಸಲು ಸಿದ್ಧತೆ ಮಾಡಿಕೊಂಡಿತ್ತು. ಹೆಚ್.ಡಿ.ಕುಮಾರಸ್ವಾಮಿ ಒಂದು ಗುಟುರು ಹಾಕಿ ಅದನ್ನು ತಪ್ಪಿಸಿದ್ದರು. ಇಲ್ಲದೇ ಹೋಗಿದ್ದರೆ ನನ್ನ ಹಾಗೂ ನನ್ನ ಮಕ್ಕಳ ರೀತಿ ಜಿ.ಟಿ.ದೇವೇಗೌಡ ಮತ್ತು ಅವರ ಪುತ್ರ ಹರೀಶ್‌ಗೌಡ ಜೈಲಿನಲ್ಲಿ ಇರಬೇಕಾಗಿತ್ತು ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಬಾಂಬ್ ಸಿಡಿಸಿದ್ದಾರೆ.

ವಿಧಾನಸೌಧದಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 2018ರಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದ ವೇಳೆ ಕಾಂಗ್ರೆಸ್ ಸರ್ಕಾರ ಜಿ.ಟಿ.ದೇವೇಗೌಡ ಮತ್ತು ಅವರ ಮಗನನ್ನು ಬಂಧಿಸಲು ಸಿದ್ಧತೆ ಮಾಡಿಕೊಂಡಿತ್ತು. ಜಿಟಿಡಿ ಬಂಧನಕ್ಕೆ ಎಸ್ಪಿ, ಡಿಎಸ್‌ಪಿ ನೇತೃತ್ವದಲ್ಲಿ ಒಂದು ಪಡೆಯನ್ನೇ ಸಿದ್ಧಪಡಿಸಲಾಗಿತ್ತು. ಆ ಸಂದರ್ಭದಲ್ಲಿ ಈ ವಿಷಯವನ್ನು ನನಗೆ ಆತ್ಮೀಯರಾಗಿದ್ದ ಪೊಲೀಸ್‌ವೊಬ್ಬರು ನನಗೆ ತಿಳಿಸಿದ್ದರು. ನಾನು ಕುಮಾರಸ್ವಾಮಿ ಅವರಿಗೆ ಈ ವಿಷಯವನ್ನು ತಿಳಿಸಿದ ತಕ್ಷಣ, ಕುಮಾರಸ್ವಾಮಿಯವರು ಜಿಟಿಡಿ ಬಂಧನಕ್ಕೆ ಸಿದ್ಧರಾಗಿದ್ದ ಪೊಲೀಸ್ ಅಧಿ



ಮಾಜಿ ಸಚಿವ ಹೆಚ್.ಡಿ.ರೇವಣ್ಣ

ಕಾರಿಗಳಿಗೆ ಫೋನ್ ಮೂಲಕ ಗುಟುರು ಹಾಕಿದರು. ಕುಮಾರಸ್ವಾಮಿಯವರ ಒಂದೇ ಒಂದು ಗುಟುರಿಗೆ ಪೊಲೀಸರು ಜಿ.ಟಿ.ದೇವೇಗೌಡರನ್ನು ಬಂಧಿಸುವುದನ್ನು ಬಿಟ್ಟರು. ಇಲ್ಲದೇ ಹೋಗಿದ್ದರೆ ನನ್ನ ಹಾಗೂ ನನ್ನ ಮಕ್ಕಳ ರೀತಿ ಜಿ.ಟಿ.ದೇವೇಗೌಡ ಮತ್ತು ಅವರ ಪುತ್ರ 20 ದಿನ ಜೈಲಲ್ಲಿ ಕಳೆಯಬೇಕಾಗಿತ್ತು. ಇದನ್ನು ಜಿಟಿಡಿ ಸದಾ ನೆನಪಿಸಿಕೊಳ್ಳಬೇಕು ಎಂದು ರೇವಣ್ಣ ಹೇಳಿದರು.

ಜಿ.ಟಿ.ದೇವೇಗೌಡರ ಅಸಮಾಧಾನ ಸರಿಪಡಿಸುತ್ತೇನೆ

ಕುಮಾರಸ್ವಾಮಿ ಅಂದು ಯಡಿಯೂರಪ್ಪರಿಗೆ ಅಧಿಕಾರ ಹಸ್ತಾಂತರಿಸದಿರಲು ನಾನೇ ಮೂಲ ಕಾರಣ;ಯಾವ ದೇವರ ಮುಂದಾದರೂ ಹೇಳುತ್ತೇನೆ

ಬೆಂಗಳೂರು, ನ.27(ಕೆಎಂಶಿ)–ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ಜಿ.ಟಿ.ದೇವೇಗೌಡರಿಗೆ ಅಸಮಾಧಾನ ಇರುವುದು ನಿಜ ಎಂದಿರುವ ಮಾಜಿ ಸಚಿವ ಹೆಚ್.ಡಿ.ರೇವಣ್ಣ, ತಾವು ಜಿ.ಟಿ.ದೇವೇಗೌಡರ ಅಸಮಾಧಾನವನ್ನು ಸರಿಪಡಿಸುವುದಾಗಿ ತಿಳಿಸಿದರು. ವಿಧಾನಸೌಧದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿ.ಟಿ.ದೇವೇಗೌಡರಿಗೆ ಅವರ ಸ್ಥಾನಮಾನದ ಬಗ್ಗೆ ಅಸಮಾಧಾನ ಇದೆ. ಇಂದು ಸುದ್ದಿಗೋಷ್ಠಿಗೆ ಬರುವಂತೆ ನಾನು ಅವರಿಗೆ ಕರೆದಿದ್ದೆ. ಆದರೆ ಅವರು ಬರಲಿಲ್ಲ. ನಾನು ಸಾ.ರಾ.ಮಹೇಶ್‌ಗಿಂತ ಹೆಚ್ಚಾಗಿ ಜಿ.ಟಿ.ದೇವೇಗೌಡರು ಹೇಳಿದಂತೆ ಕೇಳಿಕೊಂಡು ಬಂದಿದ್ದೇನೆ. ಸಾ.ರಾ.ಮಹೇಶ್ ಬಗ್ಗೆ ಅವರಿಗೆ ತಪ್ಪು ಕಲ್ಪನೆ ಇದೆ. ಅದನ್ನು ಸ್ಪಷ್ಟಪಡಿಸುತ್ತೇನೆ. ಚನ್ನಪಟ್ಟಣ ಉಪ ಚುನಾವಣೆಗೆ ಜಿ.ಟಿ.ದೇವೇಗೌಡರನ್ನು ಹೆಚ್.ಡಿ.ದೇವೇಗೌಡರು ● 6ನೇ ಪುಟಕ್ಕೆ



ಮೈಸೂರು ಮಿತ್ರ ಗುರುವಾರ 28 ನವೆಂಬರ್ 2024

ಚುಂಚನಕಟ್ಟೆ ಜಲಪಾತೋತ್ಸವ ನ.30, ಡಿ.1ರಂದು ಅದ್ಧೂರಿ ಆಚರಣೆ

ಈ ವೇಳೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ವ್ಯವಸ್ಥೆ: ಶಾಸಕ ರವಿಶಂಕರ್ ಮಾಹಿತಿ



ಚುಂಚನಕಟ್ಟೆ ಜಲಪಾತ



ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಮಾಧ್ಯಮದವರಿಗೆ ಶಾಸಕ ಡಿ.ರವಿಶಂಕರ್ ಚುಂಚನಕಟ್ಟೆ ಧನುಷ್ಕೋಟಿ ಜಲ ಪಾತೋತ್ಸವ ಕುರಿತು ಮಾಹಿತಿ ನೀಡಿದರು.

ಮೈಸೂರು,ನ.27(ಎಂಟಿವೈ)–ಮೈಸೂರು ಜಿಲ್ಲೆಯ ಸಾಲಿಗ್ರಾಮ ತಾಲೂಕಿನ ಪುರಾಣ ಪ್ರಸಿದ್ಧ ಧಾರ್ಮಿಕ ಕೇಂದ್ರವಾದ ಚುಂಚನಕಟ್ಟೆಯಲ್ಲಿ ನ.30 ಮತ್ತು ಡಿ.1ರಂದು ಧನುಷ್ಕೋಟಿ ಜಲ ಪಾತೋತ್ಸವವನ್ನು ವಿಜೃಂಭಣೆಯಿಂದ ಆಚರಿಸುತ್ತಿರುವುದಾಗಿ ಶಾಸಕ ಡಿ.ರವಿಶಂಕರ್ ತಿಳಿಸಿದ್ದಾರೆ.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕನ್ನಡನಾಡಿನ ಜೀವನದಿ ಕಾವೇರಿ, ಚುಂಚನಕಟ್ಟೆಯಲ್ಲಿ 65 ಅಡಿ ಎತ್ತರದಿಂದ ಧುಮ್ಮಿಕ್ಕುತ್ತದೆ. ಇದಕ್ಕೆ ಧನುಷ್ಕೋಟಿ ಜಲಪಾತ ಎಂದು ಕರೆಯಲಾಗುತ್ತದೆ. ಪುರಾಣದಲ್ಲೂ ಜಲಪಾತವನ್ನು ಉಲ್ಲೇಖಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕಳೆದ ಕೆಲವು ವರ್ಷಗಳಿಂದ ಧನುಷ್ಕೋಟಿ ಜಲಪಾತೋತ್ಸವ ಆಚರಿಸುವ ಪದ್ಧತಿಯಿದ್ದು, ಕೊರೊನಾ ಹಿನ್ನೆಲೆಯಲ್ಲಿ ಕಳೆದ ವರ್ಷ ಆಚರಿಸಿರಲಿಲ್ಲ. ಈ ಬಾರಿ ನದಿ ಉಕ್ಕಿ ಹರಿಯುತ್ತಿದ್ದು, ಜಲಾಶಯಗಳು ಸಹ ತುಂಬಿರುವ ಹಿನ್ನೆಲೆಯಲ್ಲಿ ನ.30 ಮತ್ತು ಡಿ.1ರಂದು ಚುಂಚನಕಟ್ಟೆಯ ಶ್ರೀರಾಮ ದೇವಾಲಯದ ಆವರಣದಲ್ಲಿ ಅದ್ಧೂರಿಯಾಗಿ ಜಲಪಾತೋತ್ಸವ ಆಚರಿಸಲಾಗುತ್ತಿದೆ. ಈ ಉತ್ಸವದಲ್ಲಿ ಸಾಂಸ್ಕೃತಿಕ, ಧಾರ್ಮಿಕ ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಲಿವೆ ಎಂದರು.

ಜಲಪಾತೋತ್ಸವಕ್ಕೆ ಭಕ್ತರು, ಪ್ರವಾಸಿಗರು ಆಗಮಿಸುವುದರಿಂದ ಕೆ.ಆರ್.ನಗರದಿಂದ ಚುಂಚನಕಟ್ಟೆವರೆಗೆ ರಸ್ತೆ ಗುಂಡಿ ಮುಚ್ಚಲು ಸೂಚಿಸಲಾಗಿದೆ. ಶ್ರೀರಾಮ ದೇವಸ್ಥಾನದ ಆವರಣದಲ್ಲಿ ಸ್ವಚ್ಛತಾ ಕಾರ್ಯ ಭರದಿಂದ ಸಾಗಿದೆ. ಪೂರ್ವಭಾವಿ ಸಭೆ ನಡೆಸಿ ಅಧಿಕಾರಿಗಳಿಗೆ ಜವಾಬ್ದಾರಿ ನೀಡಲಾಗಿದೆ. ಕೆ.ಆರ್.ನಗರದ ಪ್ರಮುಖ ವೃತ್ತ, ಕೆ.ಆರ್.ನಗರ–ಚುಂಚನಕಟ್ಟೆ ಮಾರ್ಗದುದ್ದಕ್ಕೂ ಸಿಗುವ ಗ್ರಾಮಗಳಲ್ಲಿ ವಿಶೇಷ ದೀಪಾಲಂಕಾರ ಮಾಡಲಾಗುತ್ತದೆ ಎಂದು ಶಾಸಕ ರವಿಶಂಕರ್ ಹೇಳಿದರು.

ಎರಡು ದಿನಗಳ ಉತ್ಸವದಲ್ಲಿ 20 ಸಾವಿರ ಜನ ಭಾಗವಹಿಸುವ ನಿರೀಕ್ಷೆ ಇದೆ. ಸಮರ್ಪಕ ಬಸ್ ಸೌಕರ್ಯ ಕಲ್ಪಿಸಲಾಗುತ್ತಿದೆ. ಉಚಿತ ಆರೋಗ್ಯ ತಪಾಸಣೆ, ಸರ್ಕಾರದ ಕಾರ್ಯಕ್ರಮಗಳನ್ನು ಪರಿಚಯಿಸುವ ವಿವಿಧ ಮಳಿಗೆಗಳನ್ನು ತೆರೆಯಲಾಗುತ್ತದೆ ಎಂದು ತಿಳಿಸಿದರು.

50 ಲಕ್ಷ ಅನುದಾನ: ಜಲಪಾತೋತ್ಸವಕ್ಕೆ ಸರ್ಕಾರದಿಂದ 50 ಲಕ್ಷ ರೂ. ಅನುದಾನ ಕಲ್ಪಿಸಲಾಗಿದೆ. ಹಣಕಾಸು ಇಲಾಖೆಯೂ ಒಪ್ಪಿಗೆ ನೀಡಿದೆ. ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಅನುದಾನ ಬಿಡುಗಡೆಯಾಗಿದೆ ಎಂದರು.

ಚಾಲನೆ: ಧನುಷ್ಕೋಟಿ ಜಲಪಾತೋತ್ಸವಕ್ಕೆ ನ.30ರಂದು ಸಂಜೆ 6.30ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಉಪಸ್ಥಿತಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಚಾಲನೆ ನೀಡಲಿದ್ದಾರೆ. ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಕನ್ನಡ–ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ಎಸ್.ತಂಗಡಗಿ, ಸಂಸದರು, ಶಾಸಕರು, ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು ಭಾಗವಹಿಸುವರು ಎಂದರು.

ಸುದ್ದಿಗೋಷ್ಠಿಯಲ್ಲಿ ಉಪ ವಿಭಾಗಾಧಿಕಾರಿ ವಿಜಯಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಸುದರ್ಶನ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಹರೀಶ್ ಇದ್ದರು.

ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ

ನ.30ರಂದು ಸಂಜೆ 4.30ಕ್ಕೆ ಕಲಾವಿದ ಬಸವಯ್ಯ (ಲಕ್ಷ್ಮೀರಾಮ್) ಮತ್ತು ತಂಡದಿಂದ 'ಜನಪದ ಝೇಂಕಾರ', ಸಂಜೆ 5ರಿಂದ 6.30ರವರೆಗೆ 'ಕನ್ನಡ ಸಂಗೀತ ವೈಭವ' ಇನಿದನಿ ಮಣ್ಣ ಮಕ್ಕಳ ಹೊನ್ನಪದಗಳ ಬಳಗದ ಡಾ.ಕಾ.ರಾಮೇಶ್ವರಪ್ಪ ಮತ್ತು ತಂಡ, ರಾತ್ರಿ 7.30ಕ್ಕೆ ಸಂಗೀತ ನಿರ್ದೇಶಕ ರಘು ದೀಕ್ಷಿತ್ ಮತ್ತು ತಂಡದಿಂದ ಸಂಗೀತ ಸಂಜೆ ಕಾರ್ಯಕ್ರಮ ಜರುಗಲಿದೆ.

ಡಿ.1ರಂದು 4.30ಕ್ಕೆ ಮೈಸೂರಿನ ರಶ್ಮಿ ಮತ್ತು ತಂಡದಿಂದ ಜನಪದ ಸಂಗೀತ ಕಾರ್ಯಕ್ರಮ, ಸಂಜೆ 5ಕ್ಕೆ ಮೈಸೂರಿನ ಯು.ರಾಜೇಶ್ ಪಡಿಯಾರ್ ಹಾಗೂ ರಶ್ಮಿ ಚಿಕ್ಕಮಗಳೂರು ಮತ್ತು ತಂಡದಿಂದ ಸಿ.ಅಶ್ವಥ್ ಗೀತೆಗಳ ಗಾಯನ, ಸಂಜೆ 6.30ಕ್ಕೆ ನಿಮಿಕಾ ರತ್ನಾಕರ್, ನಟಿ ಪ್ರಿಯಾಂಕ, ಡ್ರೀಮ್ಸ್ ಇವೆಂಟ್ಸ್ ಅಂಡ್ ಫ್ಯಾಷನ್ ತಂಡದಿಂದ ಸ್ಯಾಂಡಲ್‌ವುಡ್ ನೈಟ್ಸ್, ಸಂಜೆ 7.30ರಿಂದ ರಾತ್ರಿ 9.30ರವರೆಗೆ ಮಣಿಕಾಂತ್ ಕದ್ರಿ, ಹಂಸಿಕಾ ಅಯ್ಯರ್ ತಂಡದಿಂದ ಸಂಗೀತ ಸಂಜೆ ಕಾರ್ಯಕ್ರಮ.

ನ.30ರಂದು ಬೈಕಾಥಾನ್

ಮೈಸೂರು,ನ.27(ಜಿಎ)–ಸಂಚಾರ ನಿಯಮ ಪಾಲನೆ ಕುರಿತು ಗ್ರಾಮೀಣ ಜನರಲ್ಲಿ ಅರಿವು ಮೂಡಿಸಲು ನ.30ರಂದು ರೋಟರಿ ಇ–ಕ್ಲಬ್ ಮೈಸೂರು, ಜೀವರಕ್ಷಾ ಸಂಸ್ಥೆ ಮತ್ತು ವಿವೇಕಾನಂದ ಯೂತ್ ಮೂವ್‌ಮೆಂಟ್ ಸಹಯೋಗದೊಂದಿಗೆ ಬೈಕಾಥಾನ್ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ರೋಟೇರಿಯನ್ ತೇಜೇಶ್‌ಕುಮಾರ್ ಈ ವಿಷಯ ತಿಳಿಸಿ, ಅಂದು ಬೆಳಗ್ಗೆ 7 ಗಂಟೆಗೆ ನಗರದ ಕೋಟೆ ಆಂಜನೇಯಸ್ವಾಮಿ ದೇವಸ್ಥಾನ ಬಳಿ ಸಂಚಾರ ನಿಯಮ ಪಾಲನೆ ನಿರ್ಲಕ್ಷ್ಯದಿಂದ ಆಗುವ ಅನಾಹುತ, ಪಾಲಿಸುವುದರಿಂದ ಆಗುವ ಪ್ರಯೋಜನ ಕುರಿತು ಅಣಕು ಕಾರ್ಯಕ್ರಮ ನಡೆಯಲಿದೆ. ಬಳಿಕ ವಿಂಟೇಜ್ ಕಾರು, ಸೂಪರ್ ಬೈಕ್ ಮತ್ತು 75 ಅತ್ಯಾಧುನಿಕ ಬೈಕ್‌ಗಳು ಬೈಕ್‌ಥಾನ್‌ನಲ್ಲಿ ಪಾಲ್ಗೊಳ್ಳಲಿದ್ದು, ರ್‍ಯಾಲಿಯು ಹೆಚ್.ಡಿ.ಕೋಟೆ, ಚಾಮರಾಜನಗರ ತಲುಪಿ ಅಲ್ಲಿಯೂ ಈ ರೀತಿಯ ಕಾರ್ಯಕ್ರಮ ಆಯೋಜಿಸಲಾಗುವುದು ಎಂದರು. ಗೋಷ್ಠಿಯಲ್ಲಿ ಜೀವರಕ್ಷಾ ಸಂಸ್ಥೆಯ ವಲಯ ವ್ಯವಸ್ಥಾಪಕ ಸತ್ಯರಾಜ್, ಎನ್.ಪ್ರವೀಣ್ ಉಪಸ್ಥಿತರಿದ್ದರು.

ಕನ್ನಡ ರಾಜ್ಯೋತ್ಸವ...



ಮೈಸೂರಿನ ದೊಡ್ಡ ಒಕ್ಕಲಗೇರಿಯ ಅಕ್ಕಿಚೌಕ ವೃತ್ತದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಶಿವಕುಮಾರ್ ಗೌಡ, ಫಾಲ್ಕನ್ ಮಾದೇಗೌಡ, ದಿ ಮೈಸೂರು ಕೋಆಪರೇಟಿವ್ ಬ್ಯಾಂಕ್ ಎಸ್‌ಟಿ ವಿಭಾಗದ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಕೆ.ಗಿರೀಶ್, ಶ್ರೀನಿವಾಸ್, ಗೌರೀಶ್‌ಕುಮಾರ್, ನಾಗೇಶ್, ಕೃಷ್ಣ ಶರವಣ, ಅಭಿ, ಗ್ಯಾರೇಜ್ ಸುರೇಶ್ ಇನ್ನಿತರರಿದ್ದರು.

ಕೆ.ಆರ್.ನಗರ ಶ್ರೀರಾಮ ಸಕ್ಕರೆ ಕಾರ್ಖಾನೆ ಶೀಘ್ರ ಪುನರಾರಂಭ

●ಶಾಸಕ ರವಿಶಂಕರ್ ಮಾಹಿತಿ ●ಮುಂದಿನ ವರ್ಷದಿಂದ ಕಬ್ಬು ಅರೆಯುವ ಕಾರ್ಯ

ಮೈಸೂರು, ನ.27(ಎಂಟಿವೈ)– ಕಬ್ಬು ಬೆಳೆಗಾರರಿಗೆ ನೆರವಾಗುವ ನಿಟ್ಟಿನಲ್ಲಿ ಕೆ.ಆರ್.ನಗರದ ಶ್ರೀರಾಮ ಸಕ್ಕರೆ ಕಾರ್ಖಾನೆ ಕಾರ್ಯಾರಂಭ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದ್ದಾರೆ.

ಮೈಸೂರಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀರಾಮ ಸಕ್ಕರೆ ಕಾರ್ಖಾನೆ ಪುನರಾರಂಭ ಮಾಡಿ ಕೆ.ಆರ್.ನಗರ ಮಾತ್ರವಲ್ಲದೆ, ಮೈಸೂರು ಭಾಗದ ರೈತರಿಗೆ ನೆರವಾಗಲು ಕ್ರಮ ಕೈಗೊಳ್ಳಲಾಗಿದೆ. ಕಾರ್ಖಾನೆ ಪುನರಾರಂಭಿಸಲು ಈ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅನುಮತಿ ನೀಡಲಾಗಿತ್ತು. ಆದರೆ, ಕಾರ್ಖಾನೆ ಪುನರಾರಂಭಕ್ಕೆ ಸಂಬಂಧಿಸಿದಂತೆ ಯಾವುದೇ ನೋಂದಣಿ ಪ್ರಕ್ರಿಯೆ ನಡೆದಿರಲಿಲ್ಲ. ಈ ಹಿಂದೆ ಅನುಮತಿ ಪಡೆದಿದ್ದ ಸಂಸ್ಥೆಯೇ ಕಾರ್ಖಾನೆಯನ್ನು ಪುನಾರಂಭ ಮಾಡುವುದಾಗಿ ಹೇಳಿದ್ದು, ಈ ಹಿನ್ನೆಲೆಯಲ್ಲಿ ಮುಂದಿನ 40 ವರ್ಷಗಳ ಕಾಲ ಶ್ರೀರಾಮ ಕಾರ್ಖಾನೆಯನ್ನು ಮುನ್ನಡೆಸಿಕೊಂಡು ಹೋಗುವ ಒಪ್ಪಂದ ಮಾಡಿಕೊಂಡು ನೋಂದಣಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಕಾರ್ಖಾನೆ ಆರಂಭಿಸಲಾಗುತ್ತದೆ. ನೋಂದಣಿ ಪ್ರಕ್ರಿಯೆಗಾಗಿ ಜನವರಿವರೆಗೆ ಕಾಲಾವಕಾಶ ಕೇಳಿದ್ದಾರೆ ಎಂದರು.

ನಮ್ಮ ಭಾಗದ ರೈತರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಅಧಿವೇಶನದಲ್ಲಿ ಶ್ರೀರಾಮ ಸಕ್ಕರೆ ಕಾರ್ಖಾನೆ ಪುನರಾರಂಭ ಕುರಿತು ಚರ್ಚೆ ಮಾಡಿದ್ದೇನೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಖಾನೆ ಆರಂಭಕ್ಕೆ ವಿಶೇಷ ಕಾಳಜಿ ವಹಿಸಿದ್ದಾರೆ. ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಅವರೊಂದಿಗೂ ಚರ್ಚೆ ಮಾಡಿದ್ದೇನೆ. ನಿರಾಣಿ ಶುಗರ್ಸ್ ಸಂಸ್ಥೆಯೊಂದಿಗೆ ಮಾತುಕತೆ ನಡೆದಿದೆ. ಮುಂದಿನ ವರ್ಷದಿಂದ ಕಬ್ಬು ಅರೆಯಲಾಗುತ್ತದೆ ಎಂದು ಹೇಳಿದರು.

ಅನೈತಿಕ ಚಟುವಟಿಕೆಗೆ ಕಡಿವಾಣ; ಶಾಸಕ ಶ್ರೀವತ್ಸ ಖಡಕ್ ಸೂಚನೆ



ಮೈಸೂರು ನಗರಪಾಲಿಕೆ ವಾರ್ಡ್ ನಂ.56ರ ಕೃಷ್ಣಮೂರ್ತಿಪುರಂ ಹಾಗೂ ಲಕ್ಷ್ಮಿಪುರಂ ವ್ಯಾಪ್ತಿಯಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಪಾದಯಾತ್ರೆ ನಡೆಸಿದರು.

ಮೈಸೂರು,ನ.27–ಮೈಸೂರು ನಗರಪಾಲಿಕೆ ವಾರ್ಡ್ ನಂ.56ರ ಕೃಷ್ಣಮೂರ್ತಿಪುರಂ ಹಾಗೂ ಲಕ್ಷ್ಮಿಪುರಂ ವ್ಯಾಪ್ತಿಯಲ್ಲಿ ಮದ್ಯವ್ಯಸನಿಗಳು, ಗಾಂಜಾ ಸೇವನೆ ಮಾಡುವವರ ಉಪಟಳ ದಿನದಿಂದ ದಿನಕ್ಕೆ ಹೆಚ್ಚಾಗಿದ್ದು, ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕುವಂತೆ ಪಾದಯಾತ್ರೆ ವೇಳೆ ಸಾರ್ವಜನಿಕರಿಂದ ಕೇಳಿ ಬಂದ ದೂರಿನ ಹಿನ್ನಲೆಯಲ್ಲಿ ಕ್ರಮ ಕೈಗೊಳ್ಳುವಂತೆ ಪೊಲೀಸ್ ಅಧಿಕಾರಿಗಳಿಗೆ ಶಾಸಕ ಟಿ.ಎಸ್.ಶ್ರೀವತ್ಸ ಖಡಕ್ ಸೂಚನೆ ನೀಡಿದರು.

ಮಂಗಳವಾರ ಬೆಳಗ್ಗೆ ಕೃಷ್ಣಮೂರ್ತಿಪುರಂ ಹಾಗೂ ಲಕ್ಷ್ಮಿಪುರಂ ವ್ಯಾಪ್ತಿಯಲ್ಲಿ ಶಾಸಕರು ಪಾದಯಾತ್ರೆ ಮೂಲಕ ಮನೆ–ಮನೆಗೆ ತೆರಳಿ ಸಾರ್ವಜನಿಕರ ಸಮಸ್ಯೆ ಆಲಿಸಿದರು. ಈ ವೇಳೆ ಸ್ಥಳೀಯರು ಈ ಭಾಗದಲ್ಲಿ ಎರಡು ಕಡೆ ರಸ್ತೆ ಕಾಮಗಾರಿ ನಡೆದಿಲ್ಲ. ಒಳಚರಂಡಿ ಸಮಸ್ಯೆಯೂ ಇದೆ ಎಂಬುದನ್ನು ಗಮನಕ್ಕೆ ತಂದರು. ಇದಕ್ಕೆ ಸ್ಪಂದಿಸಿದ ಶಾಸಕರು ಕೂಡಲೇ ರಸ್ತೆ ನಿರ್ಮಾಣ ಹಾಗೂ ಯುಜಿಡಿ ಸಮಸ್ಯೆ ಪರಿಹಾರಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ವೇಳೆ ಈ ವ್ಯಾಪ್ತಿಯಲ್ಲಿ ದಿನೇ ದಿನೆ ಗಾಂಜಾ ಸೇವನೆ ಹಾಗೂ ಮದ್ಯವ್ಯಸನಿಗಳ ಹಾವಳಿ ಹೆಚ್ಚಾಗಿದ್ದು, ರಸ್ತೆಯಲ್ಲಿ ತಿರುಗಾಡಲೂ ಭಯ ಬೀಳುವ ಪರಿಸ್ಥಿತಿ ಎದುರಾಗಿದೆ.ಅಲ್ಲದೇ ಶಾಲಾ, ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಕೂಡ ರಸ್ತೆ ಪಕ್ಕ ನಿಂತು ಹರಟೆ ಹೊಡೆಯುತ್ತಿರುತ್ತಾರೆ ಎಂಬ ದೂರು ಕೇಳಿ ಬಂದಿತು. ಸ್ಥಳದಲ್ಲಿದ್ದ ಪೊಲೀಸರಿಗೆ ಈ ಸಂಬಂಧ ಕ್ರಮ ಕೈಗೊಳ್ಳುವಂತೆ ತಿಳಿಸಿದರಲ್ಲದೇ, ನಾಳೆಯಿಂದ ದಿನಂಪ್ರತಿ ಪೊಲೀಸ್ ಗರುಡ ವಾಹನ ಗಸ್ತಿಗೆ ಖಡಕ್ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ವಾರ್ಡಿನ ಪ್ರಮುಖರಾದ ವಿಶ್ವ, ಪಿ.ಟಿ ಕೃಷ್ಣ, ರವಿ, ಮಧು, ಜೈರಾಮ್, ಪ್ರದೀಪ್ ಕುಮಾರ್, ಕಿಶೋರ್, ಶಶಿ, ಮುಂತಾದವರು ಹಾಜರಿದ್ದರು.

ನಾಳೆ ಪತ್ರಕರ್ತರಿಗೆ ಬೃಹತ್ ಆರೋಗ್ಯ ತಪಾಸಣಾ ಶಿಬಿರ

ಮೈಸೂರು, ನ.27(ಎಂಟಿವೈ)– ಪತ್ರಕರ್ತರು, ಪತ್ರಿಕಾ ವಿತರಕರು ಹಾಗೂ ಪತ್ರಿಕಾ ಸಂಸ್ಥೆಗಳ ಎಲ್ಲ ಸಿಬ್ಬಂದಿ ಹಾಗೂ ಕುಟುಂಬದ ಸದಸ್ಯರಿಗಾಗಿ ಪತ್ರಕರ್ತರ ಭವನದಲ್ಲಿ ನ.29ರಂದು 9ರಿಂದ ಮಧ್ಯಾಹ್ನ 1 ಗಂಟೆವರೆಗೆ 'ಉಚಿತ ಆರೋಗ್ಯ ತಪಾಸಣಾ ಶಿಬಿರ' ಆಯೋಜಿಸಲಾಗಿದೆ ಎಂದು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರ, ಮೈಸೂರು ಜಿಲ್ಲಾ ಪತ್ರಕರ್ತರ ಸಂಘ ಹಾಗೂ ಜೆಎಸ್‌ಎಸ್ ಮಾಧ್ಯಮ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದ್ದು, ಪತ್ರಕರ್ತರು, ವಿತರಕರು, ಪತ್ರಿಕಾ ಕಚೇರಿ ಸಿಬ್ಬಂದಿ ಹಾಗೂ ಕುಟುಂಬದ ಸದಸ್ಯರು ಶಿಬಿರದಲ್ಲಿ ಪಾಲ್ಗೊಳ್ಳಬಹುದಾಗಿದೆ. ಶಿಬಿರದಲ್ಲಿ 10 ಲಕ್ಷ ಮೌಲ್ಯದ ಔಷಧಿ ಉಚಿತವಾಗಿ ವಿತರಿಸಲಾಗುವುದು ಎಂದರು.

ನರರೋಗ ತಜ್ಞ ಡಾ.ಶುಶ್ರುತ್‌ಗೌಡ ಮಾತನಾಡಿ, ಇತ್ತೀಚಿನ ದಿನಗಳಲ್ಲಿ 35 ರಿಂದ 40 ವರ್ಷ ವಯಸ್ಸಿನೊಳಗಿನವರೂ ಅನಾರೋಗ್ಯದಿಂದ ಸಾವಿಗೀಡಾಗುತ್ತಿರುವುದು ಬೇಸರದ ಸಂಗತಿ. ಹೃದ್ರೋಗ, ಪಾರ್ಶ್ವವಾಯು ಸೇರಿದಂತೆ ಇನ್ನಿತರ ಆರೋಗ್ಯ ಸಮಸ್ಯೆಗಳಿಗೆ ಬಿಪಿ, ಶುಗರ್ ಹಾಗೂ ಬದಲಾದ ಜೀವನ ಶೈಲಿಯೇ ಕಾರಣ. ಹೀಗಾಗಿ ಆರೋಗ್ಯ ಶಿಬಿರದಲ್ಲಿ ಪಾಲ್ಗೊಂಡು ತಪಾಸಣೆ ಮಾಡಿಸಿಕೊಂಡು ಮುಂಜಾಗರೂಕತೆ ವಹಿಸುವುದು ಸೂಕ್ತ ಎಂದರು.


ಜೆಎಸ್‌ಎಸ್ ಮಾಧ್ಯಮ ಸಂಸ್ಥೆಯ ಶ್ರೀಹರಿ ಮಾತನಾಡಿ, ಪತ್ರಕರ್ತರ ತುರ್ತು ಆರೋಗ್ಯ ವೆಚ್ಚಕ್ಕಾಗಿ ತಾವು ಪ್ರತಿ ವರ್ಷ ಒಂದು ಲಕ್ಷ ನೀಡುವುದಾಗಿ ಪ್ರಕಟಿಸಿದರು. ಸುದ್ದಿಗೋಷ್ಠಿಯಲ್ಲಿ ಡಾ.ಗುರುಬಸವರಾಜ್, ಡಾ.ಆಂಟನಿ ಪಾಲ್, ಡಾ.ಚಂದ್ರಶೇಖರ್, ಡಾ.ಶೆಣೈ, ಪರ್ತಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ ಇದ್ದರು.



ಕರಾಟೆ ಪಂದ್ಯಾವಳಿ

ಜ್ಯೋತಿ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಯಾದ ಡೀನ್ ಅರ್ಜುನ್ 2024–25ನೇ ಸಾಲಿನ ರಾಜ್ಯಮಟ್ಟದ ಕರಾಟೆ ಪಂದ್ಯಾವಳಿಯಲ್ಲಿ ಪ್ರಥಮ ಬಹುಮಾನ ಪಡೆದು, ದೆಹಲಿಯಲ್ಲಿ ನಡೆಯುವ ರಾಷ್ಟ್ರ ಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ.

ಹಾಸ್ಯ ಕಲಾವಿದರಾದ ಗಂಗಾವತಿ ಪ್ರಾಣೇಶ್, ನರಸಿಂಹ ಜೋಶಿಗೆ ಸನ್ಮಾನ



ಮೈಸೂರಿನ ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣಧಾಮದಲ್ಲಿ ನಡೆದ ಹಾಸ್ಯ ಸಂಜೆ ಕಾರ್ಯಕ್ರಮದಲ್ಲಿ ಮನರಂಜಿಸಿದ ಹಾಸ್ಯ ಕಲಾವಿದರಾದ ಗಂಗಾವತಿ ಪ್ರಾಣೇಶ್ ಹಾಗೂ ನರಸಿಂಹ ಜೋಶಿ ಅವರನ್ನು ಮಯೂರ ಕನ್ನಡ ಯುವಕರ ಬಳಗದ ವತಿಯಿಂದ ಸನ್ಮಾನಿಸಲಾಯಿತು. ಶ್ರೀ ಕೃಷ್ಣ ಟ್ರಸ್ಟ್ ಉಪಾಧ್ಯಕ್ಷ ರವಿಶಾಸ್ತ್ರಿ, ಮಯೂರ ಕನ್ನಡ ಯುವಕರ ಬಳಗದ ಅಧ್ಯಕ್ಷ ಜಿ.ರಾಘವೇಂದ್ರ, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಜೆಡಿಎಸ್ ಕಾರ್ಯಾಧ್ಯಕ್ಷ ಪ್ರಕಾಶ್ ಪ್ರಿಯದರ್ಶನ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಅರಿವು ಸಂಸ್ಥೆಯ ಅಧ್ಯಕ್ಷ ಶ್ರೀಕಾಂತ್ ಕಶ್ಯಪ್, ಭೈರತಿ ಲಿಂಗರಾಜು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಹುಟ್ಟುಹಬ್ಬದ ಶುಭಾಶಯ...



ಹುಟ್ಟುಹಬ್ಬ ಆಚರಿಸಿಕೊಂಡ ಮಾಜಿ ಕಾರ್ಪೋರೇಟರ್ ಮಹದೇಶ್ ಅವರಿಗೆ ಪಡುವಾರಹಳ್ಳಿ ಪಾಪಣ್ಣ, ಸುಣ್ಣದಕೇರಿ ರಮೇಶ್, ಎನ್.ಕೃಷ್ಣಮೂರ್ತಿ, ಸತ್ಯನಾರಾಯಣ, ನಂದಕುಮಾರ್, ರಮೇಶ್ ಶುಭಾಶಯ ಕೋರಿದರು. ಈ ವೇಳೆ ಮಾಜಿ ಕಾರ್ಪೋರೇಟರ್ ಭಾಗ್ಯ ಮಹದೇಶ್ ಉಪಸ್ಥಿತರಿದ್ದರು.

ನ.30ರಂದು ತೆರೆದ ಮನೆ, ವಿಜ್ಞಾನ ಮೇಳ

ಮೈಸೂರು,ನ.27–ಮೈಸೂರಿನ ಶ್ರೀರಾಂಪುರದಲ್ಲಿರುವ ಮಹಾವೀರ ವಿದ್ಯಾ ಮಂದಿರ (ಶ್ರೀ ಜೈನ್ ಎಜುಕೇಶನ್ ಸೊಸೈಟಿ) ಶಾಲೆಯಲ್ಲಿ ನ.30ರಂದು ಬೆಳಗ್ಗೆ 10ರಿಂದ ಮಧ್ಯಾಹ್ನ 2ರವರೆಗೆ ತೆರೆದ ಮನೆ ಮತ್ತು ವಿಜ್ಞಾನ ಮೇಳ ಏರ್ಪಡಿಸಲಾಗಿದೆ. ಮುಖ್ಯ ಅತಿಥಿಯಾಗಿ ಡಾ.ಎನ್.ಎಂ.ಶಾಮಸುಂದರ್ ಹಾಗೂ ಚಾಮರಾಜನಗರದ ಗ್ರಾವಿಟಿ ಸೈನ್ಸ್ ಫೌಂಡೇಷನ್ ಕಾರ್ಯದರ್ಶಿ ಎ.ಎಸ್.ಅಭಿಷೇಕ್ ಭಾಗವಹಿಸಲಿದ್ದಾರೆ. ಶ್ರೀ ಜೈನ್ ಎಜುಕೇಷನ್ ಸೊಸೈಟಿ ಅಧ್ಯಕ್ಷ ಡಾ.ಬಾಹುಬಲ್ ಜಿ. ನಗಾವಿ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂವಿಧಾನ ದಿನಾಚರಣೆ...



ಮೈಸೂರು ವಿಶ್ವ ವಿದ್ಯಾನಿಲಯ ಕಾನೂನು ಅಧ್ಯಯನ ವಿಭಾಗದಲ್ಲಿ ಸಂವಿಧಾನ ದಿನ ಆಚರಿಸಲಾಯಿತು. ಹಿರಿಯ ವಕೀಲ ಕೆ.ಆರ್. ಶಿವಶಂಕರ್, ವಿಭಾಗದ ಮುಖ್ಯಸ್ಥ ಸುರೇಶ್ ಬೆಂಜಮಿನ್, ಡಾ. ರಮೇಶ್, ಡಾ. ಲೋಹಿತ್ ರಾಮಸ್ವಾಮಿ ಉಪಸ್ಥಿತರಿದ್ದರು.

ನಿಧನ



ದೊಡ್ಡಮರಿನಾಯಕ

ತೊಂಡವಾಡಿ, ನ.27–ಗುಂಡ್ಲುಪೇಟೆ ತಾಲೂಕು ತೊಂಡವಾಡಿ ಗ್ರಾಮದ ದೊಡ್ಡಮರಿನಾಯಕ(62) ಅವರು ಇಂದು (ಬುಧವಾರ) ನಿಧನರಾದರು. ಮೃತರು ಪತ್ನಿ ಜಯಮ್ಮ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದು, ಗ್ರಾಮದ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.




ಪಳನಿ ಪ್ರಕಾಶ್

ವಿರಾಜಪೇಟೆ, ನ.27–ಪಟ್ಟಣದ ಮಲಬಾರ್ ರಸ್ತೆಯ ನಿವಾಸಿ ಹಾಗೂ ಆದಿವಾಸಿ ಮುಖಂಡ ಪಳನಿ ಪ್ರಕಾಶ್ (58) ಹೃದಯಾಘಾತದಿಂದ ಬುಧವಾರ ನಿಧನರಾದರು.

ಮೃತರು ತಾಯಿ ಕಣ್ಣಮ್ಮ, ಪತ್ನಿ, ಇಬ್ಬರು ಪುತ್ರರು, ಏಳು ಸಹೋದರರು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಗುರುವಾರ ಸಂಜೆ ವಿರಾಜಪೇಟೆ ಮಲಬಾರ್ ಹಿಂದೂ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

28.11.2024 ಗುರುವಾರ, ಮಳೆ ನಕ್ಷತ್ರ: ಅನೂರಾಧ, 19.11.2024 ರಿಂದ 01.12.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಕೃಷ್ಣ ಪಕ್ಷ, ತಿಥಿ: ತ್ರಯೋದಶಿ, ನಕ್ಷತ್ರ: ಚಿತ್ತ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಪಾರ್ಕಿನ್‌ಸನ್ಸ್ ಕಾಯಿಲೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.

■ **ನವ ಕರ್ನಾಟಕ ಪಬ್ಲಿಕೇಷನ್ ಪ್ರೈವೇಟ್ ಲಿಮಿಟೆಡ್:** ಕನ್ನಡ ರಾಜ್ಯೋತ್ಸವದ ಪ್ರಯುಕ್ತ ವಿಶೇಷ ರಿಯಾಯಿತಿ ಪುಸ್ತಕ ಮಾರಾಟ, ಸ್ಥಳ: ಚಾಮರಾಜ ಜೋಡಿರಸ್ತೆ, ರಾಮಸ್ವಾಮಿ ಸರ್ಕಲ್ ಬೆಳಗ್ಗೆ 9.30ರಿಂದ.

■ **ಜಗದ್ಗುರು ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ (ಶ್ರೀ ಸುತ್ತೂರು ಕ್ಷೇತ್ರ, ಮೈಸೂರು ಜಿಲ್ಲೆ):** ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಕರ್ತೃ ಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಗಳು, ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಸ್ಥಳ: ಮಠದ ಆವರಣ, ಬೆಳಗ್ಗೆಯಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10 ರಿಂದ.

■ **ಸದ್ವಿದ್ಯಾ ಶಿಕ್ಷಣ ಸಂಸ್ಥೆಗಳು, ಸದ್ವಿದ್ಯಾ ಪ್ರೌಢಶಾಲೆ :** ಪ್ರತಿಭಾ ಪುರಸ್ಕಾರ, ಪುದುವಟ್ಟು ಬಹುಮಾನಗಳ ವಿತರಣಾ ಸಮಾರಂಭ, ಅಧ್ಯಕ್ಷತೆ : ಸಂಸ್ಥೆ ಅಧ್ಯಕ್ಷ ಪ್ರೊ. ಎಂ.ಎಸ್.ಕೆ. ನರಹರಿಬಾಬು, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್. ಶ್ರೀವತ್ಸ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಟಿ. ಜವರೇಗೌಡ, ಕಾರ್ಯದರ್ಶಿ ಎಂ.ಡಿ. ಗೋಪಿನಾಥ್, ಸ್ಥಳ: ಟಿ.ಪಿ. ಕೈಲಾಸಂ ರಂಗ ಮಂಟಪ, ಬೆಳಗ್ಗೆ 10ಕ್ಕೆ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ :** 69ನೇ ಕನ್ನಡ ರಾಜ್ಯೋತ್ಸವ ಸಮಾರಂಭ, ಅಧ್ಯಕ್ಷತೆ: ಕರ್ನಾಟಕ ರಾಜ್ಯ ಮುಕ್ತ ವಿವಿ ಕುಲಪತಿ ಡಾ. ಶರಣಪ್ಪ ವಿ. ಹಲಸೆ, ಉದ್ಘಾಟನೆ : ಸಾಹಿತಿ ಪ್ರೊ. ಸಿ. ನಾಗಣ್ಣ, ಸನ್ಮಾನ : ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಶಿಲ್ಪಿ ಅರುಣ್ ಯೋಗಿರಾಜ್, ಉಪಸ್ಥಿತರು: ಕರಾಮುವಿವಿ ಕುಲಸಚಿವ ಪ್ರೊ. ಕೆ.ಬಿ. ಪ್ರವೀಣ, ಕರಾಮುವಿವಿ ಡೀನ್ ಪ್ರೊ.ಎನ್. ಲಕ್ಷ್ಮೀ, ಕರಾಮುವಿವಿ ಕುಲಸಚಿವ ಡಾ. ಹೆಚ್. ವಿಶ್ವನಾಥ್, ಹಣಕಾಸು ಅಧಿಕಾರಿ ಡಾ. ಎಸ್. ನಿರಂಜನ್‌ರಾಜ್, ಪ್ರೊ. ಎಂ. ರಾಮನಾಥಂ ನಾಯುಡು, ಪ್ರಾಸ್ತಾವಿಕ ನುಡಿ : ಸಂಯೋಜಕ ಡಾ.ಎನ್.ಆರ್. ಚಂದ್ರೇಗೌಡ, ಸ್ಥಳ: ಘಟಿಕೋತ್ಸವ ಭವನ, ಕರಾಮುವಿವಿ, ಬೆಳಗ್ಗೆ 10.30ಕ್ಕೆ.

■ **ವಾತ್ಸಲ್ಯ ಶಿಕ್ಷಣ ಮಹಾವಿದ್ಯಾಲಯ:** ಸ್ನೇಹ ಸಂಪದ ಬೀಳ್ಕೊಡುಗೆ ಸಮಾರಂಭ, ಸಾನ್ನಿಧ್ಯ: ಶ್ರೀ ನಟರಾಜ ಪ್ರತಿಷ್ಠಾನದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಮುಖ್ಯ ಅತಿಥಿಗಳು: ಡೀನ್ ಶಿಕ್ಷಣ ನಿಕಾಯ ಪ್ರೊ.ಸಿ. ವೆಂಕಟೇಶ್, ಶೈಕ್ಷಣಿಕ ಸಂಯೋಜಕ ಡಾ.ಜಯಪ್ರಕಾಶ್, ಅಧ್ಯಕ್ಷತೆ: ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ, ಉಪಸ್ಥಿತರು: ಪ್ರಿನ್ಸಿಪಾಲ್ ಡಾ.ಮಹೇಶ ದಳಪತಿ, ಸ್ಥಳ: ಶ್ರೀ ನಟರಾಜ ಸಭಾಂಗಣ, ಬೆಳಗ್ಗೆ 11ಕ್ಕೆ.

■ **ಸದ್ವಿದ್ಯಾ ಶಿಕ್ಷಣ ಸಂಸ್ಥೆಗಳು :** ಕನ್ನಡ ರಾಜ್ಯೋತ್ಸವ, ಅಧ್ಯಕ್ಷತೆ : ಸಂಸ್ಥೆ ಅಧ್ಯಕ್ಷ ಪ್ರೊ. ಎಂ.ಎಸ್.ಕೆ. ನರಹರಿಬಾಬು, ಮುಖ್ಯ ಅತಿಥಿಗಳು : ಡಾ. ನಾರಾಯಣ ಹೆಗಡೆ, ಕಾರ್ಯದರ್ಶಿ ಎಂ.ಡಿ. ಗೋಪಿನಾಥ್, ಸ್ಥಳ: ಟಿ.ಪಿ. ಕೈಲಾಸಂ ರಂಗ ಮಂಟಪ, ಮಧ್ಯಾಹ್ನ 2ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸೀರೆಯ ಸೊಬಗು –ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ : ಜಯಶ್ರೀ ಹೆಗಡೆ, 6.40 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ: ಶಭಾನ ಮತ್ತು ಕೀರ್ತಿ. ಎಸ್. ಬೈಂದೂರು, ಪರಿಕಲ್ಪನೆ : ಅಬ್ದುಲ್ ರಶೀದ್, 6.50 ರೈತರಿಗೆ ಸಲಹೆ, 7.15 ಹಸಿರುಹೊನ್ನು– ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಅರಣ್ಯ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಚಿತ್ರ ಶ್ರೀಕೃಷ್ಣ–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಾಡಿನಲ್ಲಿನ ಕಥೆಗಳು. ಪ್ರಸ್ತುತಿ: ಜಿ. ಶಾಂತಕುಮಾರ್ **ಮಧ್ಯಾಹ್ನ:** 12.35–ದೇವರನಾಮ, 12.45 ಚಿತ್ರಗೀತೆಗಳು, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 4.00 ಜನಪದ ಸಂಗೀತ, 4.30 ಕನ್ನಡ ಭಾರತೀ, 6.10 ಸೀರೆಯ ಸೊಬಗು –ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ: ಜಯಶ್ರೀ ಹೆಗಡೆ, 6.50 ಕೃಷಿರಂಗ–ಕಿಸಾನ್ ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ 'ನಂ ಕಂಪನಿ' ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ ಕನಕಪುರ ಕುರಿ ಮತ್ತು ಮೇಕೆ ಸಾಕಾಣಿಕೆ ರೈತ ಉತ್ಪಾದಕ ಕಂಪನಿಯ ಕಾರ್ಯ ಚಟುವಟಿಕೆ ಕುರಿತು ಕಂಪನಿಯ ನಿರ್ದೇಶಕರಾದ ಎನ್.ಕೆ. ನಾಗೇಗೌಡ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ–ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ 'ಕನ್ನಡ ಸಾಹಿತ್ಯದತ್ತ ಯುವಜನತೆಯ ಒಲವು' ಕುರಿತು ಮಾತುಕತೆ. ಭಾಗವಹಿಸುತ್ತಾರೆ : ಭವಿತಾ. ಬಿ, ಲಾವಣ್ಯ. ಎನ್, ಸುಮಂತ್. ಸಿ ಮತ್ತು ವಿಜಯ್ ಕುಮಾರ್. ಟಿ., 9.30 ಕನ್ನಡ ಭಾರತಿ, 10.00 ನಾಟಕ 'ಈ ನೆಲ', ರಚನೆ–ಆಶಾ ಹೆಗಡೆ, ನಿರ್ಮಾಣ–ಉಮೇಶ್. ಎಸ್. ಎಸ್, 10.30 ಸವಿನೆನಪು

■ **ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶಿಕ್ಷಕರ ಸಂಘ:** ಆಧ್ಯಾತ್ಮಿಕ ಆರೋಗ್ಯದ ವೈಜ್ಞಾನಿಕ ವಿಚಾರ ಸಂಕಿರಣ, ಸಾನ್ನಿಧ್ಯ: ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷ ಶ್ರೀ ಮುಕ್ತಿದಾನಂದಜಿ ಮಹಾರಾಜ್, ಉದ್ಘಾಟನೆ: ಎಂಎಂಸಿ ಮತ್ತು ಆರ್‌ಐ ಡೀನ್ ಮತ್ತು ನಿರ್ದೇಶಕರಾದ ಡಾ.ಕೆ.ಎನ್. ದಾಕ್ಷಾಯಿಣಿ, ಅಧ್ಯಕ್ಷತೆ: ಸಂಸ್ಕೃತ ವಿಶ್ವವಿದ್ಯಾನಿಲಯ ವಿಶ್ರಾಂತ ಉಪಕುಲಪತಿ ಡಾ. ಮಲ್ಲೇಪುರಂ ಜಿ.ವೆಂಕಟೇಶ್, ಪ್ರಾಸ್ತಾವಿಕ ಭಾಷಣ: ಎಂಎಂಸಿ ಮತ್ತು ಆರ್‌ಐ ಶಿಕ್ಷಕರ ಸಂಘದ ಅಧ್ಯಕ್ಷೆ ಡಾ.ಸುಧಾ, ದಿಕ್ಸೂಚಿ ಉಪನ್ಯಾಸ: ವೈದ್ಯ ಸಾಹಿತಿ ಡಾ.ಎಸ್.ಪಿ.ಯೋಗಣ್ಣ, ಉಪಸ್ಥಿತರು: ಡಾ.ಬಿ.ವಿ.ಕುಮಾರಸ್ವಾಮಿ, ಡಾ.ಸಂಜೀವ ಕುಲಕರ್ಣಿ, ಡಾ.ಬಿ.ಜಿ.ಜ್ಞಾನದೇವ್, ಡಾ.ಪಿ.ಎ.ಬಸವಣ್ಣ, ಡಾ.ಗಜಾನನ ಹೆಗಡೆ, ಡಾ. ಕೆ.ಎಸ್.ರಾಧಾಕೃಷ್ಣ ರಾಮರಾವ್, ಸ್ಥಳ: ಪ್ಲಾಟಿನಂ ಜ್ಯೂಬಿಲಿ ಅಲ್ಯೂಮ್ನಿ ಸಭಾಂಗಣ, ಜೆ.ಕೆ. ಮೈದಾನ, ಸಂಜೆ 4ಕ್ಕೆ.

■ **ಚಾರು ಸಾಂಸ್ಕೃತಿಕ ಪ್ರತಿಷ್ಠಾನ :** ಕನ್ನಡ ರಾಜ್ಯೋತ್ಸವ, ಅಭ್ಯಾಗತರು : ಬಿ.ಎಂ. ರಾಮಚಂದ್ರ, ಚಾರು ರಂಗಗೀತೆ ತಂಡದಿಂದ ಕನ್ನಡ ಗಾನನಮನ, ಸ್ಥಳ: ಚಾರು ಸಾಂಸ್ಕೃತಿಕ ಪ್ರತಿಷ್ಠಾನ, ಸಂಜೆ 4.30ಕ್ಕೆ.

■ **ಶ್ರೀ ವೀರಭದ್ರೇಶ್ವರಸ್ವಾಮಿ ಹಾಗೂ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್ :** ಕಾರ್ತಿಕ ಮಾಸದ ವಿಶೇಷ ಪೂಜಾ ಮಹೋತ್ಸವ, ಪ್ರತಿನಿತ್ಯ ಬೆಳಗ್ಗೆ ರುದ್ರಾಭಿಷೇಕ, ಸಂಜೆ 7ಕ್ಕೆ ಪ್ರಾಕಾರೋತ್ಸವ, ಸ್ಥಳ: ದೇವಸ್ಥಾನದ ಆವರಣ, ಡಿ. ಬನುಮಯ್ಯ ರಸ್ತೆ, ಕೆ.ಆರ್. ಮೊಹಲ್ಲಾ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀ ಮದ್ಭಗವದ್ಗೀತಾ ಕುರಿತು ಉಪನ್ಯಾಸ, ಸ್ಥಳ: ಸ್ವಾಮಿ ಶಾಂಭವಾನಂದಜಿ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

ಕೂರ್ಗಲ್ ಗ್ರಾಮದಲ್ಲಿಂದು, ಪಿರಿಯಾಪಟ್ಟಣ ತಾಲೂಕು

■ **ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ತಾಲೂಕು ಶರಣ ಸಾಹಿತ್ಯ ಪರಿಷತ್ತು ಪಿರಿಯಾಪಟ್ಟಣ:** ದತ್ತಿ ಉಪನ್ಯಾಸ ಸಮಾರಂಭ, ಸಾನ್ನಿಧ್ಯ: ದಿಂಡಗಾಡು ಬಸವಜ್ಯೋತಿ ಮಠದ ಶ್ರೀ ಅಪ್ಪಾಜಿ ಸ್ವಾಮಿಗಳು, ಉದ್ಘಾಟನೆ: ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಹೆಳವರಹುಂಡಿ ಸಿದ್ದಪ್ಪ, ಡಾ.ಡಿ.ಎಂ.ಮಹೇಂದ್ರಮೂರ್ತಿ ಅವರಿಂದ ಸಾಂಸ್ಕೃತಿಕ ನಾಯಕ ಬಸವಣ್ಣ ಕುರಿತು ಉಪನ್ಯಾಸ, ಅಧ್ಯಕ್ಷತೆ: ಪಿರಿಯಾಪಟ್ಟಣ ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಶಿವಯೋಗ, ಪ್ರಾಸ್ತಾವಿಕ ನುಡಿ: ಜಿಲ್ಲಾ ಶರಣ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷ ಎಂ.ಚಂದ್ರಶೇಖರ್, ಮುಖ್ಯ ಅತಿಥಿಗಳು: ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ಎನ್. ಕುಮಾರಸ್ವಾಮಿ, ಸ್ಥಳ: ಕೆ.ಬಿ.ಶಿವಕುಮಾರಸ್ವಾಮಿಯವರ ತೋಟದ ಮನೆ, ಬೆಳಗ್ಗೆ 10.30ಕ್ಕೆ

ಮಾನಸಿಕ, ದೈಹಿಕ ಸದೃಢತೆಗೆ ಕ್ರೀಡೆ ಅತ್ಯವಶ್ಯ

ಮೂರು ದಿನಗಳ ಪೊಲೀಸ್ ವಾರ್ಷಿಕ ಕ್ರೀಡಾಕೂಟ ಉದ್ಘಾಟಿಸಿದ ಜಿ.ಲಕ್ಷ್ಮೀಕಾಂತ ರೆಡ್ಡಿ ಅಭಿಮತ





ಮೈಸೂರಿನ ಸಿಎಆರ್ ಮೈದಾನದಲ್ಲಿ ಬುಧವಾರ ಆರಂಭವಾದ ಪೊಲೀಸ್ ವಾರ್ಷಿಕ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಕ್ರೀಡಾಪಟುವಿಗೆ ಕ್ರೀಡಾ ಜ್ಯೋತಿ ಹಸ್ತಾಂತರಿಸಿದರು. ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಡಿಸಿಪಿಗಳಾದ ಎಂ. ಮುತ್ತುರಾಜು, ಎಸ್.ಜಾಹ್ನವಿ, ಅಶ್ವಾರೋಹಿ ದಳದ ಕಮಾಂಡೆಂಟ್ ಶೈಲೇಂದ್ರ, ಸೆಸ್ಕ್ ವಿಚಕ್ಷಕ ದಳದ ಎಸ್ಪಿ ಸವಿತಾ ಹೂಗಾರ, ಸಿಎಆರ್ ಡಿಸಿಪಿ ಎ.ಮಾರುತಿ ಅವರಿದ್ದಾರೆ (ಎಡಚಿತ್ರ). ಓಟದ ಸ್ಪರ್ಧೆಯಲ್ಲಿ ಪಾಲ್ಗೊಂಡ ಕ್ರೀಡಾಪಟುಗಳನ್ನು ಬಲಚಿತ್ರದಲ್ಲಿ ಕಾಣಬಹುದು.

ಮೈಸೂರು, ನ.27(ಆರ್‌ಕೆ)– ಮಾನಸಿಕ ಹಾಗೂ ದೈಹಿಕ ಸದೃಢತೆಗೆ ಕ್ರೀಡೆ ಪ್ರಮುಖ ಪಾತ್ರ ವಹಿಸಲಿದೆ ಎಂದು ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ ಇಂದಿಲ್ಲಿ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ನಗರ ಪೊಲೀಸ್ ಘಟಕದ ವತಿಯಿಂದ ಮೈಸೂರಿನ ಸಿಎಆರ್ ಮೈದಾನದಲ್ಲಿ ಇಂದಿನಿಂದ ಆರಂಭವಾದ ಪೊಲೀಸ್ ವಾರ್ಷಿಕ ಕ್ರೀಡಾಕೂಟವನ್ನು ಬಲೂನು ಹಾರಿಬಿಡುವ ಮೂಲಕ ಉದ್ಘಾಟಿಸಿದ ಬಳಿಕ ಕ್ರೀಡಾಪಟುಗಳನ್ನು ದ್ದೇಶಿಸಿ ಮಾತನಾಡಿದ ಅವರು, ದೈಹಿಕ ಮತ್ತು ಮಾನಸಿಕ ಸದೃಢತೆಗೆ ಕ್ರೀಡೆ ಅತ್ಯವಶ್ಯವಾಗಿದ್ದು, ದಿನದ 24 ಗಂಟೆಯೂ ಒತ್ತಡದಲ್ಲಿ ಕೆಲಸ ಮಾಡುವ ಶಿಸ್ತಿನ ಪೊಲೀಸ್ ಕರ್ತವ್ಯದಲ್ಲಿರುವವರಿಗೆ ಕ್ರೀಡೆ ಒತ್ತಡ ನಿವಾರಿಸಲಿದೆ ಎಂದರು.

ಪ್ರತೀ ಇಲಾಖೆಯಲ್ಲೂ ಪ್ರತೀ ವರ್ಷ ಕ್ರೀಡಾಕೂಟಗಳು ನಡೆಯುತ್ತವೆ. ಆದರೆ, ಶಿಸ್ತಿನ ಇಲಾಖೆಯ ಪೊಲೀಸರು ಒಗ್ಗಟ್ಟಿನಿಂದ ಶಿಸ್ತುಬದ್ಧ ಕೆಲಸ ನಿರ್ವಹಿಸುವ ಜೊತೆಗೆ ಒಗ್ಗಟ್ಟು ಮತ್ತು ಏಕತೆ ಅಳವಡಿಸಿಕೊಳ್ಳಲು ಕ್ರೀಡೆ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅವರು ತಿಳಿಸಿದರು. ಪೊಲೀಸ್ ವಾರ್ಷಿಕ ಕ್ರೀಡಾಕೂಟದಲ್ಲಿ ಭಾಗವಹಿಸುವುದು ಪ್ರಮುಖವಾಗಿದ್ದು, ಸೋಲು–ಗೆಲುವು ಪ್ರಧಾನವಾಗುವುದಿಲ್ಲ. ತಾಳ್ಮೆ ಕಳೆದುಕೊಳ್ಳದೇ ಕೆಲಸ ಮಾಡುವ ಪೊಲೀಸರು ಕ್ರೀಡಾ ಮನೋಭಾವನೆ ಬೆಳೆಸಿಕೊಂಡರೆ ಒತ್ತಡ ಕಡಿಮೆಯಾಗಲಿದೆ ಎಂದು ಲಕ್ಷ್ಮೀಕಾಂತ ರೆಡ್ಡಿ ಇದೇ ಸಂದರ್ಭ ನುಡಿದರು. ಆಕರ್ಷಕ ಪಥ ಸಂಚಲನ, ಕ್ರೀಡಾ ಜ್ಯೋತಿ ಆಗಮನ, ಕ್ರೀಡಾಪಟುಗಳಿಂದ ಪ್ರತಿಜ್ಞಾ ವಿಧಿ ಸ್ವೀಕರಿಸಿದ ಬಳಿಕ ವಿವಿಧ ಕ್ರೀಡೆಗಳು ಆರಂಭವಾದವು. ಮೊದಲು ನಡೆದ 800 ಮೀಟರ್ ಓಟದ ಸ್ಪರ್ಧೆಯಲ್ಲಿ ಎನ್‌ಆರ್ ಉಪವಿಭಾಗದ ಶಶಾಂಕ್, ಕೆಆರ್ ಉಪವಿಭಾಗದ ನಾಗೇಂದ್ರ ಹಾಗೂ ಸಿಎಆರ್‌ನ ಸಂಜಯ್ ಕ್ರಮವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ಪಡೆದರು. ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಡಿಸಿಪಿಗಳಾದ ಎಂ.ಮುತ್ತುರಾಜು, ಎಸ್.ಜಾಹ್ನವಿ, ಅಶ್ವಾರೋಹಿ ದಳದ ಕಮಾಂಡೆಂಟ್ ಶೈಲೇಂದ್ರ, ಚೆಸ್ಕಾಂ ವಿಚಕ್ಷಣ ದಳದ ಎಸ್ಪಿ ಸವಿತಾ ಹೂಗಾರ, ಸಿಎಆರ್ ಡಿಸಿಪಿ ಮಾರುತಿ ಹಾಗೂ ಇತರರು ವಾರ್ಷಿಕ ಕ್ರೀಡಾಕೂಟದ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಮೂರು ದಿನಗಳ ಕಾಲ ನಡೆಯುವ ಕ್ರೀಡಾಕೂಟದಲ್ಲಿ ಓಟದ ಸ್ಪರ್ಧೆ, ಎತ್ತರ ಜಿಗಿತ, ಉದ್ದ ಜಿಗಿತ, ಗುಂಡು ಎಸೆತ, ಕಬಡ್ಡಿ, ಖೋಖೋ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆಯಲಿವೆ. ನ.29ರಂದು ಸಂಜೆ 4 ಗಂಟೆಗೆ ಕ್ರೀಡಾಕೂಟದ ಸಮಾರೋಪ ಸಮಾರಂಭ ನಡೆಯಲಿದ್ದು, ಅರಣ್ಯ ಸಂರಕ್ಷಣಾಧಿಕಾರಿ ಡಾ.ಎಂ.ಮಾಲತಿ ಪ್ರಿಯಾ ಮುಖ್ಯ ಅತಿಥಿಯಾಗಿ ಭಾಗವಹಿಸುವರು.

ಹಣ ನೀಡಿ ಮತ ಹಾಕೋರು, ಹಾಕಿಸಿಕೊಳ್ಳುವವರು ಇರುವವರೆಗೂ ಪ್ರಜಾಪ್ರಭುತ್ವ ಸರಿಯಾಗದು

ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಬೇಸರದ ನುಡಿ



ಹೊರಟ್ಟಿ

ಬೆಂಗಳೂರು, ನ.27– ನಾನು ಪರಿಷತ್‌ಗೆ ಬಂದಾಗ 9.30ಕ್ಕೆ ಕಲಾಪ ಶುರುವಾಗುತ್ತಿತ್ತು, ರಾತ್ರಿ 8ಕ್ಕೆ ಮುಗಿಯುತ್ತಿತ್ತು. ಈಗ ವಿಧಾನ ಪರಿಷತ್ ಗೌರವ ಕಡಿಮೆ ಆಗುತ್ತಿದೆ. ಕಲಾಪಗಳು ಸರಿಯಾಗಿ ನಡೆಯುತ್ತಿಲ್ಲ. ನಮ್ಮ ದೇಶದಲ್ಲಿ ಎಲ್ಲಿಯವರೆಗೆ ದುಡ್ಡು ಕೊಟ್ಟು ವೋಟ್ ಹಾಕಿಸಿಕೊಳ್ಳೋರು, ವೋಟ್ ಹಾಕೋರು ಇರುತ್ತಾರೋ ಅಲ್ಲಿಯವರೆಗೂ ಪ್ರಜಾಪ್ರಭುತ್ವ ಸರಿ ಆಗಲ್ಲ. ಇದೆಲ್ಲವನ್ನೂ ಕಾಲವೇ ಸುಧಾರಣೆ ಮಾಡಬೇಕು ಎಂದು ವಿಧಾನಪರಿಷತ್ ಸದಸ್ಯರ ಆಯ್ಕೆ ವ್ಯವಸ್ಥೆ ಬಗ್ಗೆ ಬಸವರಾಜ ಹೊರಟ್ಟಿ ಬೇಸರ ಹೊರಹಾಕಿದ್ದಾರೆ.

ಕಲಾಪದಲ್ಲಿ ಭಾಗಿಯಾದ ಎಲ್ಲಾ ಶಾಸಕರ ಬಗ್ಗೆ ನನಗೆ ಮಾಹಿತಿ ಗೊತ್ತಿದೆ. ಅವರು ಏನು ಚರ್ಚೆ ಮಾಡಿದ್ದಾರೆ ಎಂಬುದು ನನಗೆ ಗೊತ್ತಿದೆ. ಎಲ್ಲರಿಗೂ ಗಾಡ್‌ಫಾದರ್ ಇದ್ದಾರೆ. ಆದರೆ, ನನಗೆ ಯಾರೂ ಇಲ್ಲ. ರಾಜಕೀಯಕ್ಕೆ ನನ್ನನ್ನು ಯಾರೂ ಕರೆತಂದಿಲ್ಲ. ನಾನೇ ನನ್ನ ಸ್ವಂತ ಶಕ್ತಿಯಿಂದ ರಾಜಕೀಯಕ್ಕೆ ಬಂದಿದ್ದೇನೆ ಎಂದು ಬೆಂಗಳೂರಿನಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ.

ರಾಜಕೀಯಕ್ಕೆ ಬಂದ ಮೇಲೆ ಗಾಡ್ ಫಾದರ್ ಶುರುವಾದರು. ಈಗೀಗ ವಿಧಾನ ಪರಿಷತ್ ಗೌರವ ಕಡಿಮೆ ಆಗುತ್ತಿದೆ. ಕಲಾಪಗಳು ಸರಿಯಾಗಿ ನಡೆಯುತ್ತಿಲ್ಲ. ಎಲ್ಲದ್ದಕ್ಕೂ ಬಾವಿಗೆ ಇಳಿದು ಧಿಕ್ಕಾರ ಕೂಗುವ ಅಭ್ಯಾಸ ಶುರುವಾಗಿದೆ. ನಾವೆಲ್ಲ ಅಜೆಂಡಾ ಇಟ್ಟುಕೊಂಡು, ಓದಿಕೊಂಡು ಬರುತ್ತಿದ್ದೆವು. ಈಗ ಪ್ರಶ್ನೆ ಕೇಳಿ ಎರಡು ನಿಮಿಷಕ್ಕೆ ಹೊರಗೆ ಹೋಗುತ್ತಾರೆ ಎಂದು ಹೊರಟ್ಟಿ ಹೇಳಿದ್ದಾರೆ.

ಬೆಂಗಳೂರಿನ ವಿಧಾನಸೌಧದಲ್ಲಿ ನಡೆದ ನಿವೃತ್ತ ವಿಧಾನಪರಿಷತ್ತು ಶಾಸಕರ ಬೀಳ್ಕೊಡುಗೆ ಸಮಾರಂಭದಲ್ಲಿ ಬಸವರಾಜ ಹೊರಟ್ಟಿ ಈ ಬಗ್ಗೆ ಬೇಸರ ಹೊರಹಾಕಿದ್ದಾರೆ. ಏ.2023ರಿಂದ ಅ.2024ರ ಅವಧಿಯಲ್ಲಿ ನಿವೃತ್ತರಾಗಿರುವ ವಿಧಾನ ಪರಿಷತ್ತಿನ ಶಾಸಕರಿಗೆ ಬೀಳ್ಕೊಡುಗೆ ಸಮಾರಂಭ ನಡೆಯಿತು. ಈಗ ವಿಧಾನ ಪರಿಷತ್ ಅಂದರೆ ಮುನಿಸಿಪಾಲಿಟಿ ಆಗಿದೆ. ನನಗೆ ಇದರ ಬಗ್ಗೆ ಸಾಕಷ್ಟು ನೋವಿದೆ. ರಾಜಕೀಯ ಪುಡಾರಿಗಳು ಯಾರು ಇರುತ್ತಾರೋ ಅವರನ್ನು ತಂದು ತಂದು ವಿಧಾನ ಪರಿಷತ್‌ಗೆ ಹಾಕುತ್ತಾರೆ. ಪರಿಷತ್ ನಿರಾಶ್ರಿತರ ಕೇಂದ್ರದ ರೀತಿ ಆಗಿದೆ. ಕಲಾಪಗಳು ಕಾಲಕ್ಕೆ ಸರಿಯಾಗಿ ನಡೆಯಲ್ಲ. ಶಿಕ್ಷಕರ ಮತದಾರ ಕ್ಷೇತ್ರದಿಂದಲೂ ಶಿಕ್ಷಕರು ಸಹ ದುಡ್ಡು ತೆಗೆದುಕೊಂಡು ಮತ ಹಾಕ್ತಾ ಇದ್ದಾರೆ. ಹಾಗಾದರೆ, ರಾಜಕೀಯ ಎಲ್ಲಿಗೆ ಬರುತ್ತಿದೆ ಎಂದುಆಕ್ರೋಶ ಹೊರ ಹಾಕಿದ್ದಾರೆ.

ಬಂಡವಾಳ ಉತ್ಪಾದಿಸುವಲ್ಲಿ 'ಭೂ ನಗದೀಕರಣ' ನಿರ್ಣಾಯಕ ಪಾತ್ರ

ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಜಂಟಿ ನಿರ್ದೇಶಕಿ ಡಾ.ಎಂ.ಎಸ್.ಪಂಕಜ



ಮೈಸೂರಿನ ಸದರನ್ ಸ್ಟಾರ್ ಹೋಟೆಲ್ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ 'ಲ್ಯಾಂಡ್ ಮಾನಿಟೈಸೇಷನ್ ಮತ್ತು ಫ್ಯೂಚರಿಸ್ಟಿಕ್ ಸಸ್ಟೈನಬಲ್ ಲಿವಿಂಗ್ ಲೇಔಟ್ ಡಿಸೈನ್' ಕುರಿತ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಲಾಯಿತು.

ಮೈಸೂರು,ನ.27(ಪಿಎಂ)– ಬಂಡವಾಳ ಉತ್ಪಾದಿಸುವ ಮೂಲಕ ನಗರಾಭಿವೃದ್ಧಿ ಮತ್ತು ರಿಯಲ್ ಎಸ್ಟೇಟ್‌ನಲ್ಲಿ 'ಭೂ ನಗದೀಕರಣ' ನಿರ್ಣಾಯಕ ಪಾತ್ರ ವಹಿಸಲಿದೆ ಎಂದು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕಿ ಡಾ.ಎಂ.ಎಸ್.ಪಂಕಜ ಹೇಳಿದರು.

ಮೈಸೂರಿನ ಸದರನ್ ಸ್ಟಾರ್ ಹೋಟೆಲ್ ಸಭಾಂಗಣದಲ್ಲಿ ನರೆಡ್ಕೊ ಮೈಸೂರು ಘಟಕದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ 'ಲ್ಯಾಂಡ್ ಮಾನಿಟೈಸೇಷನ್ ಮತ್ತು ಫ್ಯೂಚರಿಸ್ಟಿಕ್ ಸಸ್ಟೈನಬಲ್ ಲಿವಿಂಗ್ ಲೇಔಟ್ ಡಿಸೈನ್' ಕುರಿತು ಅವರು ಮಾತನಾಡಿದರು. ಭೂ ನಗದೀಕರಣವು ಅನುಪಯುಕ್ತ ಸ್ವತ್ತನ್ನು ಆದಾಯದ ಮೂಲಕವಾಗಿ ಪರಿವರ್ತಿಸುವ ಪ್ರಕ್ರಿಯೆಯಾಗಿದ್ದು, ಮಾರಾಟ, ಗುತ್ತಿಗೆ ಹಾಗೂ ಅಭಿವೃದ್ಧಿ ಯೋಜನೆಗಳಿಗೆ ಬಳಸುವುದು ಸೇರಿದಂತೆ ಈ ಮೂರು ವಿಧದಲ್ಲಿ ಇದನ್ನು ಮಾಡಬಹುದು. ಇದು ಭೂಮಿ ಆರ್ಥಿಕ ಮೌಲ್ಯ ವೃದ್ಧಿಸಲು ಸಹಕಾರಿಯಾಗುತ್ತದೆ. ಇದು ಸರ್ಕಾರಗಳು ಮತ್ತು ಡೆವಲಪರ್‌ಗಳಿಗೆ ದೀರ್ಘಾವಧಿಯ ಆರ್ಥಿಕ ಬೆಳವಣಿಗೆಗಾಗಿ ಭೂಮಿ ಆರ್ಥಿಕ ಸಾಮರ್ಥ್ಯವನ್ನು ಹೆಚ್ಚಿಸಲು ಸಹಾಯಕ ಎಂದು ವಿವರಿಸಿದರು.

ಭೂಮಿ ನಗದೀಕರಣ ಎಂಬುದನ್ನು ಅಮೃತ್ ಯೋಜನೆಯಡಿ ಸಹ ಪರಿಚಯಿಸಲಾಗಿದೆ. ಸರ್ಕಾರದ ಏಜೆನ್ಸಿಗಳು ಬಳಕೆ ಮಾಡಿಕೊಳ್ಳದೇ ಅನುಪಯುಕ್ತವಾಗಿರುವ ಭೂಮಿಯನ್ನು ಭೂ ನಗದೀಕರಣ ಪರಿಕಲ್ಪನೆಯಲ್ಲಿ ಆರ್ಥಿಕಾಭಿವೃದ್ಧಿಗೆ ಪೂರಕವಾಗಿ ಬಳಸಿಕೊಳ್ಳಬಹುದು. ತಮ್ಮ ಅಧೀನದ ತುಂಡು ಭೂಮಿ ಪ್ರಯೋಜನಕ್ಕೆ ಬಾರದಿದ್ದಾಗ ಸರ್ಕಾರದ ವಿವಿಧ ಏಜೆನ್ಸಿಗಳಿಗೆ ಇದು ಪ್ರಯೋಜನಕಾರಿಯಾಗಿದೆ. ಡೆವಲಪರ್ಸ್ ಮುಂದೆ ಬಂದರೆ ಅವರಿಗೆ ಅವಕಾಶ ದೊರೆಯಲಿದ್ದು, ಕೇಂದ್ರ ಸರ್ಕಾರ ಇದನ್ನು ಹೊಸ ಯೋಜನೆಯಾಗಿ ಅಮೃತ ಯೋಜನೆಯಡಿ ಪರಿಚಯಿಸಿದೆ. ಮಾರಾಟಕ್ಕೆ ಬದಲು ಗುತ್ತಿಗೆ ನೀಡಲು ಅವಕಾಶವಿದೆ. ಜೊತೆಗೆ ಪಿಪಿಪಿ ಮಾಡೆಲ್‌ನಲ್ಲಿ ಅಭಿವೃದ್ಧಿ ಯೋಜನೆಗಳಿಗೂ ಬಳಸಿಕೊಳ್ಳಬಹುದು ಎಂದು ತಿಳಿಸಿದರು.

ಇದಕ್ಕೂ ಮುನ್ನ ತಮ್ಮ ಯೋಜನೆಗಳಿಗೆ ಶೀಘ್ರ ಅನುಮೋದನೆ ಕೊಡಲು ಆದ್ಯತೆ ನೀಡಬೇಕೆಂಬ ನರೆಡ್ಕೊ ಮೈಸೂರು ಘಟಕದ ಅಧ್ಯಕ್ಷ ವಿ.ಸಿ.ರವಿಕುಮಾರ್ ಅವರ ಮನವಿಗೆ ಪೂರಕವಾಗಿ ಮಾತನಾಡಿದ ಡಾ.ಪಂಕಜ, ಬಡಾವಣೆ ಅನುಮೋದನೆ, ಭೂ ಪರಿವರ್ತನೆ ಸಂಬಂಧ 2ರಿಂದ 5 ಎಕರೆ ಭೂಮಿ ಇದ್ದರೆ, ನಮ್ಮ ವ್ಯಾಪ್ತಿಗೆ ಬರಲಿದೆ. ಬಡಾವಣೆ ಅನುಮೋದನೆ ಸಂಬಂಧ ನೀವು ಮೊದಲು ಆಯಾಯ ಪಿಡಿಓಗಳಿಗೆ ಸಂಬಂಧಿಸಿದ ದಾಖಲೆಗಳೊಂದಿಗೆ ಅರ್ಜಿ ನಮೂನೆ ಸಲ್ಲಿಸಬೇಕಾಗುತ್ತದೆ. ಪಿಡಿಓಯಿಂದ ಸಂಬಂಧಿಸಿದ ಸಹಾಯಕ ನಿರ್ದೇಶಕರಿಗೆ ಇದು ಹೋಗಲಿದೆ. ಅವರು ಪರಿಶೀಲಿಸಿ ಎಲ್ಲವೂ ಸರಿ ಇದ್ದರೆ ನಮಗೆ ಕಳುಹಿಸುತ್ತಾರೆ ಎಂದರು.

ನಮ್ಮ ಮೈಸೂರಿನ ವಿಭಾಗದ ಕಚೇರಿ ವ್ಯಾಪ್ತಿಗೆ ಒಟ್ಟು 8 ಜಿಲ್ಲೆಗಳು ಬರಲಿದ್ದು, ಸರಿಯಾದ ದಾಖಲೆಗಳು ಒದಗಿಸದೇ ಇದ್ದರೆ ಮಾತ್ರ ಸ್ಪಷ್ಟೀಕರಣ ಕೇಳುತ್ತವೆ. ಎಲ್ಲವೂ ಸರಿಯಿದ್ದರೆ ಶೀಘ್ರವೇ ವಿಲೇವಾರಿ ಮಾಡುತ್ತೇವೆ. ಸರಿಯಾದ ದಾಖಲೆಗಳನ್ನು ಸೂಕ್ತ ಸಮಯಕ್ಕೆ ಸಲ್ಲಿಸಿದರೆ ಶೀಘ್ರ ಅನುಮೋದಿಸಿ ವಿಲೇವಾರಿ ಮಾಡಲು ಅನುಕೂಲವಾಗಲಿದೆ. ಪ್ರತಿ ತಿಂಗಳು ಯಾವ್ಯಾವ ಹಂತದಲ್ಲಿ ಯಾವ್ಯಾವ ಕಡತಗಳು ಬಾಕಿ ಉಳಿದಿವೆ ಎಂಬುದನ್ನು ಪರಿಶೀಲಿಸಲಾಗುತ್ತದೆ ಎಂದು ತಿಳಿಸಿದರು. ನರೆಡ್ಕೊ ಮೈಸೂರು ಘಟಕದ ಮಾಜಿ ಅಧ್ಯಕ್ಷ ದಿವ್ಯೇಶ್, ಕಾರ್ಯಾಧ್ಯಕ್ಷ ಟಿ.ಜಿ.ಆದಿಚೇಷನ್‌ಗೌಡ, ಕಾರ್ಯದರ್ಶಿ ಜಿ.ಕೆ.ಸುಧೀಂದ್ರ, ಉಪಾಧ್ಯಕ್ಷ ಡಾ.ಎಂ.ಡಿ.ರಾಘವೇಂದ್ರ ಪ್ರಸಾದ್, ಖಜಾಂಚಿ ಎ.ಪಿ.ನಾಗೇಶ್ ಮತ್ತಿತರರು ಹಾಜರಿದ್ದರು.

> "ಯೋಜನಾ ಇಲಾಖೆ ಸಹಕಾರದಿಂದಲೇ ಮೈಸೂರಲ್ಲಿ ರಿಯಲ್ ಎಸ್ಟೇಟ್ ಉದ್ಯಮ ದಿನೇ ದಿನೆ ಅಭಿವೃದ್ಧಿಯತ್ತ ದಾಪುಗಾಲಿಡುತ್ತಿದೆ. ಇದು ಮೈಸೂರು ನಗರದ ತ್ವರಿತ ಬೆಳವಣಿಗೆಗೆ ಸಹಕಾರಿಯಾಗುತ್ತದೆ. –ಎ.ಪಿ.ನಾಗೇಶ್, ಖಜಾಂಚಿ, ನರೆಡ್ಕೊ ಮೈಸೂರು ಘಟಕ.

ದೇಶದಲ್ಲಿ ವಕ್ಫ್ ಮಂಡಳಿಯ 58,929 ಆಸ್ತಿ ಅತಿಕ್ರಮ; ಕರ್ನಾಟಕದಲ್ಲಿ 869

ನವದೆಹಲಿ, ನ.27– ದೇಶದಲ್ಲಿ ವಕ್ಫ್ ಮಂಡಳಿಗಳ 58,929 ಆಸ್ತಿಗಳ ಅತಿಕ್ರಮವಾಗಿರುವ ಆರೋಪ ಕೇಳಿಬಂದಿದೆ. ಇದರಲ್ಲಿ ಕರ್ನಾಟಕದ 869 ಆಸ್ತಿಗಳೂ ಸೇರಿವೆ ಎಂದು ಕೇಂದ್ರ ಸರ್ಕಾರ ಹೇಳಿದೆ.

ಲೋಕಸಭೆಯಲ್ಲಿ ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ಕೇಳಿದ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಕೇಂದ್ರದ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರೆಣ್ ರಿಜಿಜು, ಕಾಲ ಕಾಲಕ್ಕೆ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ಸಾಕಷ್ಟು ದೂರುಗಳು ಕೇಂದ್ರೀಯ ವಕ್ಫ್ ಪರಿಷತ್‌ಗೆ ಬಂದಿವೆ. ಅವುಗಳನ್ನು ಆಯಾ ಸಂದರ್ಭದಲ್ಲೇ ರಾಜ್ಯ ವಕ್ಫ್ ಮಂಡಳಿ ಮತ್ತು ಸರ್ಕಾರಕ್ಕೆ ಕಳುಹಿಸಿ ಸೂಕ್ತ ಕ್ರಮಕ್ಕೆ ಶಿಫಾರಸು ಮಾಡಲಾಗಿದೆ ಎಂದಿದ್ದಾರೆ

ಎನ್‌ಸಿಪಿ, ಶಿವಸೇನಾ ಜತೆ ಚರ್ಚಿಸಿದ ಬಳಿಕ ಮಹಾರಾಷ್ಟ್ರ ನೂತನ ಮುಖ್ಯಮಂತ್ರಿ ಆಯ್ಕೆ ಬಗ್ಗೆ ನಿರ್ಧಾರ: ಬಿಜೆಪಿ

ಮುಂಬೈ, ನ.27– ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡ ನಂತರವೇ ಮಹಾರಾಷ್ಟ್ರದಲ್ಲಿ ಸರ್ಕಾರ ರಚಿಸಲಾಗುವುದು ಎಂದು ಭಾರತೀಯ ಜನತಾ ಪಕ್ಷದ(ಬಿಜೆಪಿ) ನಾಯಕ ಅಶೋಕ್ ಚವಾಣ್ ಬುಧವಾರ ಹೇಳಿದ್ದಾರೆ.

ಇಂದು ಎಎನ್‌ಐ ಜೊತೆ ಮಾತನಾಡಿದ ಅವರು, ಮೂರು ಪಕ್ಷಗಳ ಮೈತ್ರಿ ಇದೆ. ಆದ್ದರಿಂದ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡ ನಂತರವೇ ಮಹಾರಾಷ್ಟ್ರ ನೂತನ ಸಿಎಂ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಾಗುವುದು. ಫಲಿತಾಂಶ ಪ್ರಕಟವಾಗಿ ಕೇವಲ 4 ದಿನಗಳು ಆಗಿರುವುದರಿಂದ ಯಾವುದೇ ವಿಳಂಬವಿಲ್ಲ. ರಾಮದಾಸ್ ಅಠವಳೆ ಅವರು ಸ್ಥಿರ ಸರ್ಕಾರ ರಚನೆಯಾಗಲಿದೆ ಎಂದು ಹೇಳಿರುವುದು ಅವರ ವೈಯಕ್ತಿಕ ಅಭಿಪ್ರಾಯ ಎಂದಿದ್ದಾರೆ.

ಈ ಹಿಂದೆ ನವೆಂಬರ್ 26ರಂದು, ಕೇಂದ್ರ ಸಚಿವ ರಾಮದಾಸ್ ಅಠವಳೆ ಅವರು, ದೇವೇಂದ್ರ ಫಡ್ನವಿಸ್ ಅವರು ಮಹಾಯುತಿ ಸರ್ಕಾರವನ್ನು ಮುನ್ನಡೆಸಬೇಕು, ಮಹಾರಾಷ್ಟ್ರದ ಜನರು ಅವರನ್ನು ಮುಂದಿನ ಮುಖ್ಯಮಂತ್ರಿಯಾಗಬೇಕೆಂದು ಬಯಸುತ್ತಾರೆ ಮತ್ತು ಏಕನಾಥ್ ಶಿಂಧೆ ಅವರು ಉಪ ಮುಖ್ಯಮಂತ್ರಿಯಾಗಬಹುದು ಅಥವಾ ಮೋದಿ ಸರ್ಕಾರದಲ್ಲಿ ಕೇಂದ್ರ ಸಚಿವರಾಗಬಹುದು ಎಂದು ಹೇಳಿದ್ದರು. ಶಿವಸೇನೆ ನಾಯಕ ಏಕನಾಥ್ ಶಿಂಧೆ ಅವರು ಮಹಾರಾಷ್ಟ್ರ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಹೊಸ ಸರ್ಕಾರ ರಚನೆಯಾಗುವವರೆಗೂ ಹಂಗಾಮಿ ಸಿಎಂ ಆಗಿ ಮುಂದುವರೆದಿದ್ದಾರೆ. ಆದರೆ, ಮಹಾರಾಷ್ಟ್ರ ಸರ್ಕಾರವನ್ನು ಯಾರು ಮುನ್ನಡೆಸುತ್ತಾರೆ ಎಂಬುದನ್ನು ಮಹಾಯುತಿ ಮೈತ್ರಿಕೂಟ ಇನ್ನೂ ನಿರ್ಧರಿಸಿಲ್ಲ. ಬಿಜೆಪಿ ಹೈಕಮಾಂಡ್ ದೇವೇಂದ್ರ ಫಡ್ನವೀಸ್ ಅವರನ್ನು ಮುಂದಿನ ಸಿಎಂ ಎಂದು ಅಂತಿಮಗೊಳಿಸಿದೆ ಎಂದು ತಿಳಿದ ನಂತರ ಶಿಂಧೆ ಅವರು ತೀವ್ರ ಅಸಮಾಧಾನಗೊಂಡಿದ್ದಾರೆ ಎಂದು ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಅಠವಳೆ) ಅಧ್ಯಕ್ಷರು ಹೇಳಿದ್ದಾರೆ.

ಮೈಸೂರು ವಿಜಯನಗರದಲ್ಲಿ ಸ್ನೇಕ್ ಶ್ಯಾಂ ಪುತ್ರನಿಂದ ಭಾರೀ ಗಾತ್ರದ ಹೆಬ್ಬಾವು ರಕ್ಷಣೆ



ಹೆಬ್ಬಾವು ರಕ್ಷಣೆ ಮಾಡಿದ ಉರಗ ತಜ್ಞ ಸ್ನೇಕ್ ಶ್ಯಾಂ ಮತ್ತು ಅವರ ಪುತ್ರ ಸೂರ್ಯಕೀರ್ತಿ ಅವರನ್ನು ಕಾಣಬಹುದು.

ಮೈಸೂರು, ನ.27(ಎಂಕೆ)– ಮೈಸೂರಿನ ವಿಜಯನಗರ 2ನೇ ಹಂತದಲ್ಲಿ ರಸ್ತೆ ದಾಟುತ್ತಿದ್ದ ಭಾರಿ ಗಾತ್ರದ ಹೆಬ್ಬಾವನ್ನು ರಕ್ಷಣೆ ಮಾಡಲಾಗಿದೆ.

ಇಲ್ಲಿನ ಸಂಜೀವಯ್ಯ ಸ್ಮಾರಕ ಚಾರಿಟಬಲ್ ಟ್ರಸ್ಟ್ ಸಮೀಪದ ರಸ್ತೆಯಲ್ಲಿ ಗುರುವಾರ ರಾತ್ರಿ 8.30ರ ವೇಳೆ ರಸ್ತೆ ದಾಟುತ್ತಿದ್ದ ಸುಮಾರು 9–10 ಅಡಿ ಉದ್ದದ ಹೆಬ್ಬಾವನ್ನು ಕಂಡು ವಾಹನ ಸವಾರರು, ಸ್ಥಳೀಯ ನಿವಾಸಿಗಳು ಗಾಬರಿಗೊಂಡು ಅರಣ್ಯ ಇಲಾಖೆ ಹಾಗೂ ಉರಗ ತಜ್ಞ ಸ್ನೇಕ್ ಶ್ಯಾಮ್‌ಗೆ ಮಾಹಿತಿ ನೀಡಿದ್ದಾರೆ.

ನಂತರ ವಿಷಯ ತಿಳಿದು ಸ್ಥಳಕ್ಕೆ ಧಾವಿಸಿದ ಉರಗ ತಜ್ಞ ಸ್ನೇಕ್ ಶ್ಯಾಮ್ ಮತ್ತು ಅವರ ಪುತ್ರ ಸೂರ್ಯಕೀರ್ತಿ ಹೆಬ್ಬಾವನ್ನು ರಕ್ಷಣೆ ಮಾಡಿದ್ದಾರೆ. 8 ವರ್ಷ ವಯಸ್ಸಿನ ಹೆಬ್ಬಾವು ಇದಾಗಿದ್ದು, ಸುರಕ್ಷಿತವಾಗಿ ಕಾಡಿಗೆ ಬಿಡಲಾಗಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಮನೆ ಸುತ್ತಮುತ್ತ ಹಾವುಗಳು ಕಂಡುಬಂದಲ್ಲಿ ಕೂಡಲೇ ಮೊ.99805–57797 ಸಂಪರ್ಕಿಸುವಂತೆ ಉರಗ ತಜ್ಞ ಸ್ನೇಕ್ ಶ್ಯಾಮ್ ಮನವಿ ಮಾಡಿದ್ದಾರೆ.

ರೈಲ್ವೆ ನೌಕರರ ಕನ್ನಡ ಬಳಗದಿಂದ ಕನ್ನಡ ರಾಜ್ಯೋತ್ಸವ ಆಚರಣೆ



ಮೈಸೂರು ರೈಲ್ವೆ ನಿಲ್ದಾಣದಲ್ಲಿ ಬುಧವಾರ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಮೈಸೂರು, ನ.27(ಎಂಕೆ)– ಮೈಸೂರು ರೈಲ್ವೆ ನಿಲ್ದಾಣದ ಆವರಣದಲ್ಲಿ ರೈಲ್ವೆ ನೌಕರರ ಕನ್ನಡ ಬಳಗದ ವತಿಯಿಂದ 69ನೇ ಕನ್ನಡ ರಾಜ್ಯೋತ್ಸವವನ್ನು ಬುಧವಾರ ಅದ್ದೂರಿಯಾಗಿ ಆಚರಿಸಲಾಯಿತು.

ನೈರುತ್ಯ ರೈಲ್ವೆ ಮೈಸೂರು ವಿಭಾಗೀಯ ಕಚೇರಿ ಆವರಣದಿಂದ ರೈಲ್ವೆ ನಿಲ್ದಾಣದವರೆಗೆ ಸಾಂಸ್ಕೃತಿಕ ಕಲಾತಂಡಗಳೊಡನೆ ಬೆಳ್ಳಿರಥದಲ್ಲಿ ಭುವನೇಶ್ವರಿ ದೇವಿಯ ಮೆರವಣಿಗೆ ನಡೆಯಿತು. ನಂತರದ ವೇದಿಕೆ ಕಾರ್ಯಕ್ರಮವನ್ನು ನೈರುತ್ಯ ರೈಲ್ವೆ ಮೈಸೂರು ವಿಭಾಗೀಯ ಮಂಡಲ ವ್ಯವಸ್ಥಾಪಕಿ ಶಿಲ್ಪಿ ಅಗರವಾಲ್ ಉದ್ಘಾಟಿಸಿದರು. ಬಳಿಕ ಕನ್ನಡದಲ್ಲೇ ಮಾತುಗಳನ್ನಾಡಿದ ಅವರು, ಕರ್ನಾಟಕ ರಾಜ್ಯ ಸ್ಥಾಪನೆಗೆ ಶ್ರಮಿಸಿದ ಎಲ್ಲಾ ಮಹನೀಯರನ್ನು ಸ್ಮರಿಸುವುದು ಕನ್ನಡಿಗರ ಕರ್ತವ್ಯವಾಗಿದೆ. ನಾವೆಲ್ಲರು ಸೇರಿ ಕನ್ನಡ ಭಾಷೆ ಉಳಿವಿಗೆ ಶ್ರಮಿಸುವ ಕೆಲಸ ಮಾಡೋಣ ಎಂದರಲ್ಲದೆ ನೆರೆದಿದ್ದವರಿಗೆ ಕನ್ನಡ ರಾಜ್ಯೋತ್ಸವದ ಶುಭಾಶಯ ಕೋರಿದರು.

ಕಾರ್ಯಕ್ರಮದ ವಿಶೇಷ ಅತಿಥಿಯಾಗಿ ಭಾಗವಹಿಸಿದ್ದ ಜಿಪಂ ಸಿಇಓ ಕೆ.ಎಂ.ಗಾಯತ್ರಿ ಮಾತನಾಡಿ, ನವೆಂಬರ್ ತಿಂಗಳಲ್ಲಿ ಎಲ್ಲೆಡೆಯೂ ಕನ್ನಡ ರಾಜ್ಯೋತ್ಸವ ಆಚರಣೆಯಾಗುತ್ತದೆ. ರಾಜ್ಯ ಸರ್ಕಾರ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ ನಡೆಯುವುದು ಸಾಮಾನ್ಯ. ಆದರೆ ಕೇಂದ್ರ ಸರ್ಕಾರದ ರೈಲ್ವೆ ಸಂಸ್ಥೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ ಮಾಡುತ್ತಿರುವುದು ವಿಶೇಷವಾಗಿದೆ. ಈ ನಿಟ್ಟಿನಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಆಯೋಜನೆ ಮಾಡಿರುವುದು ಅಭಿನಂದನಾರ್ಹ ಎಂದು ಶ್ಲಾಘಿಸಿದರಲ್ಲದೆ ಕನ್ನಡಿಗರಿಗೆ ಅನುಕೂಲವಾಗುವಂತೆ ರೈಲ್ವೆ ಕಾರ್ಯಚಟುವಟಿಕೆಗಳನ್ನು ನಡೆಸುವಂತೆ ಮನವಿ ಮಾಡಿದರು.

ವರ್ಷಪೂರ್ತಿ ಕನ್ನಡ ಭಾಷೆಯನ್ನು ಬಳಸಬೇಕು. ಕನ್ನಡ ಭಾಷೆ ನಮ್ಮ ಮನೆಯ ಭಾಷೆಯಾಗಿದ್ದು, ಮೊದಲು ಮನೆಯಿಂದಲೇ ಭಾಷೆ ಬಳಕೆಯಾಗಬೇಕು. ಅನ್ಯ ಭಾಷೆಗಳನ್ನು ಪ್ರೀತಿಸುತ್ತಲೇ ನಮ್ಮ ಭಾಷೆಯನ್ನು ಬಳಸಿ, ಗೌರವಿಸಬೇಕು. 10ನೇ ಶತಮಾನ ದಿಂದ ಇಲ್ಲಿಯವರೆಗೆ ಬೆಳೆದು ಬಂದಿರುವ ಕನ್ನಡ ಭಾಷಾ ಸಾಹಿತ್ಯವನ್ನು ಉಳಿಸಿಕೊಳ್ಳು ವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಆಂಗ್ಲ ಕನ್ನಡಿಗರಾಗದೇ ಕನ್ನಡಿಗರಾಗಿಯೇ ಎಲ್ಲರೂ ಉಳಿಯಬೇಕು ಎಂದು ತಿಳಿಸಿದರು.

ನಿವೃತ್ತ ಪ್ರಾಧ್ಯಾಪಕ ಪ್ರೊ.ಸಿ.ನಾಗಣ್ಣ ಮಾತನಾಡಿ, 1857ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದಿಂದ ಆರಂಭವಾದ ಭಾಷಾವಾರು ಪ್ರಾಂತ್ಯಗಳ ವಿಂಗಡಣೆಯ ಪ್ರಸ್ತಾಪಕ್ಕೆ ಮುನ್ನುಡಿ ಬರೆದದ್ದು, ಜಾನ್ ಬ್ರೈಟ್. ಆರಂಭದಲ್ಲಿ ಬಂಗಾಳ, ಬಿಹಾರ ಮತ್ತು ಒರಿಸ್ಸಾ ಪ್ರದೇಶವನ್ನು ಉತ್ಕಲ ಎಂದು ಕರೆಯಲಾಗುತ್ತಿತ್ತು. ನಂತರ ಭಾಷಾವಾರು ಪ್ರಾಂತ್ಯಗಳ ವಿಂಗಡಣೆ ವಿಚಾರ ಮುನ್ನೆಲೆಗೆ ಬಂದಾಗ ಆಲೂರು ವೆಂಕಟರಾಯರು ಕನ್ನಡಿಗರ ಅಳಿವು–ಉಳಿವು ಏಕೀಕರಣದಿಂದ ಮಾತ್ರ ಸಾಧ್ಯ ಎಂದು ಹೇಳಿದರು. ಅಂದಿನಿಂದ ಕರ್ನಾಟಕ ಏಕೀಕರಣಕ್ಕಾಗಿ ಹೋರಾಟಗಳು ನಡೆದವು ಎಂದು ಕರ್ನಾಟಕ ಏಕೀಕರಣ ಕುರಿತು ಸಂಕ್ಷಿಪ್ತವಾಗಿ ತಿಳಿಸಿಕೊಟ್ಟರು. ನಂತರ ನೀತು ನಿನಾದ್ ಮತ್ತು ತಂಡದಿಂದ ಸಂಗೀತ ರಸಸಂಜೆ ಕಾರ್ಯಕ್ರಮ ನಡೆಯಿತು. ನೈರುತ್ಯ ರೈಲ್ವೆ ಮೈಸೂರು ವಿಭಾಗದ ಹೆಚ್ಚುವರಿ ಮಂಡಲ ರೈಲ್ವೆ ವ್ಯವಸ್ಥಾಪಕ ವಿನಾಯಕ್ ಆರ್.ನಾಯಕ್, ಹಿರಿಯ ವಿಭಾಗೀಯ ಕಾರ್ಮಿಕ ಅಧಿಕಾರಿ ವಿಷ್ಣುಗೌಡ, ರೈಲ್ವೆ ಆಸ್ಪತ್ರೆ ಮುಖ್ಯ ವೈದ್ಯಕೀಯ ವ್ಯವಸ್ಥಾಪಕ ಡಾ.ಬಿ.ಎನ್.ಅಶೋಕ್ ಕುಮಾರ್, ರೈಲ್ವೆ ನೌಕರರ ಕನ್ನಡ ಬಳಗದ ಗೌರವಾಧ್ಯಕ್ಷ ಶಾಂತರಾಜು, ಅಧ್ಯಕ್ಷ ಕೆ.ಸುಬ್ರಹ್ಮಣ್ಯ, ಪ್ರಧಾನ ಕಾರ್ಯದರ್ಶಿ ಹೆಚ್.ಎಸ್.ಶಿವಕುಮಾರ್, ಕಾರ್ಯಾಧ್ಯಕ್ಷ ಡಿ.ಅನಂತಕುಮಾರ್, ಖಜಾಂಚಿ ಡಿ.ಸುನೀಲ್, ಉಪಾಧ್ಯಕ್ಷ ವೆಂಕಟರಾಜು ಮತ್ತಿತರರು ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ಹೆಂಡತಿ ಬೆಳಗ್ಗೆ ಎದ್ದ ಕೂಡ್ಲೆ ಅಲಂಕಾರ ಮಾಡಿಕೊಳ್ಳುತ್ತಿದ್ದಳು

ಗಂಡ : ನಿನಗೆ ಹುಚ್ಚು ಹಿಡಿದಿದೆ.
ಇಷ್ಟು ಬೇಗ ಯಾಕೆ ಅಲಂಕಾರ ಮಾಡಿಕೊಳ್ಳುತ್ತಿದ್ಯ?

ಹೆಂಡತಿ : ಬಾಯಿ ಮುಚ್ಚಿ ಸಾಕು, ನನ್ ಫೋನ್
ಲಾಕ್ ಓಪನ್ ಆಗ್ತಿಲ್ಲ. ಅದು ನನ್ನ ಮುಖದ ಗುರುತು
ಹಿಡಿತಿಲ್ಲ. ಅದಕ್ಕೆ ಅಲಂಕಾರ ಮಾಡ್ಕೊತ್ತಾ ಇದ್ದೆ!

ಮೈಸೂರು ಮಿತ್ರ

ಗುರುವಾರ, 28 ನವೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಯಾರನ್ನೇ ಆದರೂ ಪರೀಕ್ಷಿಸದೇ ನಂಬಬಾರದು,
ನಂಬಿದ ಮೇಲೆ ಪರೀಕ್ಷಿಸಬಾರದು–ತಿರುವಳ್ಳುವರ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ರಾವಣನ ಮಾತಿಗೆ ಮನಸೋತವ,
ರಾಮನ ಮಾತಿಗೆ ಜಾಣನಾಗುವನೇ?

ನಿಮ್ಮ ಪತ್ರಗಳು

■ ಬಿಜೆಪಿ ಬಣ ರಾಜಕೀಯ ಕಾರ್ಯಕರ್ತರಲ್ಲಿ ಹತಾಶೆ

ಮಾನ್ಯರೆ,

ರಾಜ್ಯ ಬಿಜೆಪಿಯಲ್ಲಿ ನಡೆಯುತ್ತಿರುವ ಇಬ್ಬಣಗಳ ರಾಜಕೀಯ ಕದನ ಕಾಂಗ್ರೆಸ್‌ಗೆ ವರದಾನವಾಗಿ ಪರಿಣಮಿಸಿದೆ. ಅತ್ತ ಬಸನಗೌಡ ಪಾಟೀಲ್ ಯತ್ನಾಳ್ ಬಣ, ಇತ್ತ ರಾಜ್ಯಾಧ್ಯಕ್ಷ ವಿಜಯೇಂದ್ರ ಬಣಗಳ ಒಳ ಜಗಳದಿಂದ ಪಕ್ಷದ ಕಾರ್ಯಕರ್ತರಲ್ಲಿ ಹತಾಶೆ ಭಾವನೆ ಮೂಡಿದೆ. ಇವರಿಬ್ಬರ ಪ್ರತಿಷ್ಠೆಯ ಪ್ರತೀಕವಾಗಿ ಆಡಳಿತ ಪಕ್ಷದ ಕಾಂಗ್ರೆಸ್ ಶಾಸಕರ ಸಂಖ್ಯಾಬಲಕ್ಕೆ ಕೊಡುಗೆ ನೀಡಿದಂತಾಗಿದೆ.

ಕಾಂಗ್ರೆಸ್ ಸರ್ಕಾರದ ವಿರುದ್ಧದ ಹೋರಾಟಗಳ ಆದೇಶಕ್ಕೆ ಕವಡೆ ಕಾಸಿನ ಕಿಮ್ಮತ್ತು ನೀಡದ ಯತ್ನಾಳ್ ತಮ್ಮದೇ ಪ್ರತ್ಯೇಕ ತಂಡ ರಚಿಸಿಕೊಂಡು ರಾಜ್ಯಾಧ್ಯಕ್ಷರಿಗೆ ಸೆಡ್ಡು ಹೊಡೆಯುವ ಮೂಲಕ ವಿಭಿನ್ನ ಹಾದಿ ತುಳಿದಿರುವುದು ಶಿಸ್ತಿನ ಪಕ್ಷ ಎಂದೇ ಕರೆಯಲ್ಪಡುವ ಬಿಜೆಪಿಗೆ ನಿಜಕ್ಕೂ ಶೋಭೆ ತರುವ ವಿಚಾರವಲ್ಲ. ಪ್ರಾರಂಭದಿಂದಲೂ ಯಡಿಯೂರಪ್ಪ ಕುಟುಂಬ ರಾಜಕಾರಣವನ್ನು ವಿರೋಧಿಸಿಕೊಂಡೇ ಬರುತ್ತಿರುವ ಯತ್ನಾಳ್, ಅವರನ್ನು ಬಹಿರಂಗವಾಗೇ ಟೀಕಿಸುವ ಮೂಲಕ ಆರ್‌ಎಸ್‌ಎಸ್ ರಾಜೀ ಸಂಧಾನಕ್ಕೂ ಬಗ್ಗಿದಂತೆ ಕಂಡುಬಂದಿಲ್ಲ.

ಈ ಇಬ್ಬಣಗಳ ರಾಜಕೀಯ ಪ್ರತಿಷ್ಠೆಯಿಂದಾಗಿ ಮೊನ್ನೆ ನಡೆದ 3 ಕ್ಷೇತ್ರಗಳ ಉಪ ಕದನಗಳಲ್ಲಿ ಬಿಜೆಪಿ ನೆಲ ಕಚ್ಚಲು ಕಾರಣವೆಂದು ರಾಜಕೀಯ ವಲಯಗಳಲ್ಲಿ ವದಂತಿಗಳು ಕೇಳಿಬರುತ್ತಿವೆ. ಉಪಚುನಾವಣೆಗಳ ಸ್ಪೆಷಲಿಸ್ಟ್ ಎಂದೇ ಕರೆಯುವ ಬಿ.ವೈ.ವಿಜಯೇಂದ್ರರವರ ತಂತ್ರಗಾರಿಕೆ ಫಲ ನೀಡಿಲ್ಲ. ಅಲ್ಲದೇ ಯತ್ನಾಳ್ ಅವರ ಹೇಳಿಕೆಗಳು ಉಪಕದನದ ಫಲಿತಾಂಶದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿರುವ ಬಗ್ಗೆ ವಿಶ್ಲೇಷಿಸಲಾಗುತ್ತಿದೆ. ಇಷ್ಟೆಲ್ಲಾ ವಿದ್ಯಮಾನಗಳು ನಡೆಯುತ್ತಿದ್ದರೂ ದೆಹಲಿ ಹೈಕಮಾಂಡ್ ಮಾತ್ರ ತಟಸ್ಥ ಧೋರಣೆ ತಳೆದಿದ್ದು ಸಕಾಲದಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳದೇ ಇದ್ದರೆ ರಾಜ್ಯದಲ್ಲಿ ಬಿಜೆಪಿ ಬಲಹೀನವಾಗುವ ಕಾಲ ಬಹಳ ದೂರವಿಲ್ಲ.

– ಹೆಚ್.ಆರ್.ಪ್ರಸಾದ್, ವಿವೇಕಾನಂದನಗರ, ಮೈಸೂರು.

■ ಹಿಂದಿ ನಮ್ಮ ರಾಷ್ಟ್ರ ಭಾಷೆಯೇ?

ಮಾನ್ಯರೆ,

ಇದೇ ನವೆಂಬರ್ 14ರ ನೆಹರೂ ಜನ್ಮದಿನದ ಮಕ್ಕಳ ದಿನಾಚರಣೆಯಂದು ಬೆಳಿಗ್ಗೆ 10 ಗಂಟೆಗೆ ಆಕಾಶವಾಣಿಯಲ್ಲಿ ರಾಜ್ಯವ್ಯಾಪಿ ಏಕಕಾಲಕ್ಕೆ ಪ್ರಸಾರವಾದ ಮಕ್ಕಳ ಕಾರ್ಯಕ್ರಮದಲ್ಲಿ ಶಿರಸಿ ತಾಲೂಕಿನ ಶಾಲೆಯೊಂದರ ವಿದ್ಯಾರ್ಥಿನಿಯು ಹಿಂದಿ ನಮ್ಮ ರಾಷ್ಟ್ರ ಭಾಷೆ ಎಂದು ಹೇಳಿದಳು. ಇದನ್ನು ಕೇಳಿ ನನಗೆ ಆಶ್ಚರ್ಯವಾಯಿತು. ಈಕೆಗೆ ಹಿಂದಿ ಭಾರತದ ರಾಷ್ಟ್ರ ಭಾಷೆ ಎಂದು ಹೇಳಿಕೊಟ್ಟ ಶಿಕ್ಷಕರು ಯಾರು? ಆಕೆ ಇದನ್ನು ಹೇಳಿದಾಗ ಅದು ಶಿಕ್ಷಕರ ಗಮನಕ್ಕೆ ಬರಲಿಲ್ಲವೇ? ಇದನ್ನು ಧ್ವನಿ ಮುದ್ರಿಸಿಕೊಳ್ಳುವಾಗ ಆಕಾಶವಾಣಿ ಸಿಬ್ಬಂದಿಗಳ ಗಮನಕ್ಕೆ ಬರಲಿಲ್ಲವೇಕೆ? ಸಂವಿಧಾನದಲ್ಲಿನ 8ನೇ ಪರಿಚ್ಛೇದದ ಪ್ರಕಾರ ಮಾನ್ಯತೆ ಪಡೆದ 22 ಭಾಷೆಗಳಂತೆ ಹಿಂದಿ ಕೂಡ ಸೇರಿದೆ ಅಷ್ಟೆ ಆದರೆ ಇಂಗ್ಲೀಷ್ ಮತ್ತು ಹಿಂದಿ ಭಾಷೆಗಳನ್ನು ಸರ್ಕಾರದ ಅಧಿಕೃತ ಭಾಷೆಗಳೆಂದು ಮಾನ್ಯ ಮಾಡಲಾಗಿದೆ. ಸಂವಿಧಾನವು ಭಾರತದ ಯಾವ ಭಾಷೆಯನ್ನು ರಾಷ್ಟ್ರ ಭಾಷೆ ಎಂದು ಹೇಳಿಲ್ಲ ಎನ್ನುವುದು ಗಮನಾರ್ಹ. ಏಕೆಂದರೆ ಒಕ್ಕೂಟ ವ್ಯವಸ್ಥೆಯಲ್ಲಿ ವಿವಿಧ ಭಾಷೆಗಳನ್ನಾಡುವ ಜನರಿರುವಾಗ ಹಾಗೂ ಭಾಷಾವಾರು ಪ್ರಾಂತ್ಯಗಳ ಆಧಾರದಲ್ಲಿ ರಾಜ್ಯಗಳು ರಚನೆಯಾಗಿರುವಾಗ ಯಾವುದೇ ಭಾಷೆಯನ್ನು ಅಧಿಕೃತವಾಗಿ ರಾಷ್ಟ್ರ ಭಾಷೆ ಎಂದು ಎಲ್ಲಾ ರಾಜ್ಯಗಳು ಒಪ್ಪುವುದಿಲ್ಲ. ಹೀಗಿರುವಾಗ ವಿದ್ಯಾರ್ಥಿಗಳಿಗೆ ಹಿಂದಿ ರಾಷ್ಟ್ರ ಭಾಷೆ ಎಂದು ತಪ್ಪು ಮಾಹಿತಿ ನೀಡಿ ವಿದ್ಯಾರ್ಥಿಗಳನ್ನು ಹಾದಿ ತಪ್ಪಿಸುವುದು ಖಂಡನೀಯ. ಈ ಬಗ್ಗೆ ಶಿಕ್ಷಣ ಇಲಾಖೆ ಸ್ಪಷ್ಟೀಕರಣ ನೀಡಲಿ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು

■ ಶಿಕ್ಷಣ ಸಚಿವ ಸುಶಿಕ್ಷಿತನಾಗಿರಬೇಕು....!

ಮಾನ್ಯರೆ,

'ವಿದ್ಯಾಮಂತ್ರಿಗೆ ಕನ್ನಡ ಬರೊಲ್ಲ' ಎಂದ ವಿದ್ಯಾರ್ಥಿಯ ವಿರುದ್ಧ ಕ್ರಮ ಕೈಗೊಳ್ಳುವಂತೆ ಶಿಕ್ಷಣ ಸಚಿವ ಮಧು ಬಂಗಾರಪ್ಪ ಫರ್ಮಾನು ಹೊರಡಿಸಿದ್ದಾರೆ. ಯಾವುದೇ ವ್ಯಕ್ತಿಗೆ 'ಕನ್ನಡ ಬರೊಲ್ಲ' ಎಂದು ಹೇಳುವುದು ಅಪರಾಧವೇ? ಖಂಡಿತಾ ಅಲ್ಲ. ಜನಪ್ರತಿನಿಧಿಗಳಾಗಲು ಯಾವುದೇ ವಿದ್ಯಾರ್ಹತೆ ಕಡ್ಡಾಯವಿಲ್ಲದೇ ಇರುವುದರಿಂದ ವಿದ್ಯಾಮಂತ್ರಿಯು ಕನ್ನಡ ಭಾಷೆಯನ್ನು ಓದಲು, ಬರೆಯಲು ಬಲ್ಲವನಾಗಿರಬೇಕು ಎಂದು ನಿರೀಕ್ಷಿಸುವುದೇ ತಪ್ಪು!

ವಿಧಾನಸಭಾ ಸದಸ್ಯರಿಗೆ ಕನಿಷ್ಠ 25 ವರ್ಷ ಹಾಗೂ ವಿಧಾನಪರಿಷತ್ ಸದಸ್ಯರಿಗೆ ಕನಿಷ್ಠ 30 ವರ್ಷ ವಯಸ್ಸನ್ನು ಕಡ್ಡಾಯಗೊಳಿಸಲಾಗಿದೆಯೇ ಹೊರತು ಯಾವುದೇ ವಿದ್ಯಾರ್ಹತೆಯನ್ನು ಸಂವಿಧಾನವು ನಿಗದಿಗೊಳಿಸಿಲ್ಲ. ಮಾತು ಬಾರದ ಕಿವಿ ಕೇಳದ ವ್ಯಕ್ತಿಯೂ ಶಾಸಕನಾಗಬಹುದು. ಮಂತ್ರಿಯಾಗಬಹುದು. ಆತ ಮಾನಸಿಕವಾಗಿ ಸ್ವಸ್ಥನಾಗಿರಬೇಕು. ಆತ ಭಾರತದ ಪ್ರಜೆಯಾಗಿರಬೇಕು. ಆತ ಅಪರಾಧಿಯಾಗಿರಬಾರದು. ಅವಿದ್ಯಾವಂತನೂ ಶಾಸಕನಾಗಬಹುದು. ಮಂತ್ರಿಯಾಗಬಹುದು. ಹಾಗೆಂದ ಮಾತ್ರಕ್ಕೆ 'ವಿದ್ಯಾಮಂತ್ರಿಗೆ ಕನ್ನಡ ಬರೊಲ್ಲ' ಎಂಬ ಘೋಷಣೆಯು ಶಿಕ್ಷಾರ್ಹ ಅಪರಾಧವಂತೂ ಖಂಡಿತಾ ಆಗಲಾರದು.

ಕಾರ್ಯಕ್ರಮವೊಂದರಲ್ಲಿ ನಮ್ಮ ಶಿಕ್ಷಣ ಮಂತ್ರಿಗಳು ಕನ್ನಡವನ್ನು ಕಷ್ಟಪಟ್ಟು ತಪ್ಪು ತಪ್ಪಾಗಿ ಓದಿದ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆದ ಹಿನ್ನೆಲೆಯಲ್ಲಿ ಆ ವಿದ್ಯಾರ್ಥಿಯು ವಿದ್ಯಾಮಂತ್ರಿಗೆ ಕನ್ನಡ ಬರೊಲ್ಲ ಎಂದು ಭಾವಿಸಿರಬಹುದು.

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

■ ನಗು ಉಣಬಡಿಸಿದ ಹಾಸ್ಯ ಸಂಜೆ

ಮಾನ್ಯರೆ,

ನ.25 ರಂದು ಕಡೆ ಕಾರ್ತಿಕ ಸೋಮವಾರ ಮೈಸೂರಿನ ಸರಸ್ವತಿಪುರಂನಲ್ಲಿರುವ ಶ್ರೀಕೃಷ್ಣಧಾಮದ ಶ್ರೀ ಕೃಷ್ಣ ಭವನದಲ್ಲಿ ನಡೆದ ಹಾಸ್ಯ ಸಂಜೆ ಕಾರ್ಯಕ್ರಮ ತುಂಬಾ ಸೊಗಸಾಗಿ ಮೂಡಿಬಂತು. ತಿಂಗಳ ಸಾಂಸ್ಕೃತಿಕೋತ್ಸವ ಕಾರ್ಯಕ್ರಮದಲ್ಲಿ ಶ್ರೀ ಕೃಷ್ಣ ಟ್ರಸ್ಟ್ ಮತ್ತು ಶ್ರೀ ಕೃಷ್ಣ ಮಿತ್ರ ಮಂಡಳಿ ವತಿಯಿಂದ ಡಿ.ದೇವರಾಜ ಅರಸು ರಸ್ತೆಯಲ್ಲಿರುವ ಭೀಮ ಜ್ಯೂಯಲರ್ಸ್ ಮಾಲೀಕರಾದ ಗೋಪಾಲಕೃಷ್ಣ ಅವರ ಪ್ರಾಯೋಜಕತ್ವದಲ್ಲಿ ನಗೆ ಸಾರ್ವಭೌಮ ಶ್ರೀ ಗಂಗಾವತಿ ಪ್ರಾಣೇಶ್ ಅವರ ನೇತೃತ್ವದಲ್ಲಿ ನರಸಿಂಹ ಜೋಶಿ ಮತ್ತು ಬಸವರಾಜ ಮಹಾಮನಿಯವರ ಹಾಸ್ಯ ಕಿಕ್ಕಿರಿದು ತುಂಬಿದ್ದ ಸಭಾಂಗಣದಲ್ಲಿ ಪ್ರೇಕ್ಷಕರನ್ನು ನಗೆಗಡಲಲ್ಲಿ ತೇಲಿಸಿ ನಗುವನ್ನು ಉಣಬಡಿಸಿತು. ಇಂತಹ ಸುಂದರ ಕಾರ್ಯಕ್ರಮ ಏರ್ಪಾಡು ಮಾಡಿದ ಶ್ರೀ ಕೃಷ್ಣ ಟ್ರಸ್ಟ್ ಮತ್ತು ಶ್ರೀ ಕೃಷ್ಣ ಮಿತ್ರ ಮಂಡಳಿಯ ಎಲ್ಲಾ ಪದಾಧಿಕಾರಿಗಳಿಗೆ ನೆರೆದಿದ್ದ ಎಲ್ಲಾ ಪ್ರೇಕ್ಷಕರ ಪರವಾಗಿ ತುಂಬು ಹೃದಯದ ಧನ್ಯವಾದಗಳು

–ಅಹಲ್ಯ. ಸಿ.ನಾ. ಚಂದ್ರ, ಜನತಾನಗರ, ಮೈಸೂರು



ನಿವೇದಿತ ಹೆಚ್.
ಇಂಗ್ಲಿಷ್ ಉಪನ್ಯಾಸಕಿ
ಯುವರಾಜ ಕಾಲೇಜು
ಮೈಸೂರು.

ಮಂಥನ

ಬೆಳ್ಳಿ ತೆರೆಯ ಹಿಂದೆ–ಮುಂದೆ ಮರೆಯಬೇಕಿದೆ ಕನ್ನಡ


ಎಸ್.ಜಾನಕಿ


ರತ್ನಮಾಲಾ ಪ್ರಕಾಶ್


ಸೌಂದರ್ಯ


ರಾಜೇಶ್ ಕೃಷ್ಣನ್


ಮಂಜುಳಾ ಗುರುರಾಜ್


ಚೇತನ್


ನಂದಿತಾ


ಚೈತ್ರಾ ಹೆಚ್.ಜಿ.


ಆಕಾಂಕ್ಷಾ

ರಾಜ್ಯೋತ್ಸವದ ತಿಂಗಳು ಮುಗಿಯಲು ಇನ್ನೇನು ಕೆಲವೇ ದಿನಗಳು ಬಾಕಿ ಇವೆ. ನಿಜ ಹೇಳಬೇಕೆಂದರೆ ಕನ್ನಡದ ಬಗ್ಗೆ ಮಾತು, ಚರ್ಚೆ, ಚಿಂತನ–ಮಂಥನಗಳು ಪ್ರತಿಕ್ಷಣವೂ ಆಗುತ್ತಿರಬೇಕು. ನಮ್ಮ ಮನಸ್ಸಿನಲ್ಲಿ ನಾಲಿಗೆಯ ಮೇಲೆ ಕನ್ನಡ ನಲಿದಾಡುತ್ತಿರಬೇಕು. ಕನ್ನಡವನ್ನು ನೆನಪಿಸಿಕೊಳ್ಳುವುದಕ್ಕಾಗಿ ನಾವು ನವೆಂಬರ್ ತಿಂಗಳನ್ನು ಮಾತ್ರ ಮೀಸಲಾಗಿಸಿರುವುದು ಕನ್ನಡ ನಾಡಿನ ದುರಂತವೇ ಹೌದಾದರೂ ಸತ್ಯವೂ ಹೌದು. ನವೆಂಬರ್‌ನಲ್ಲಿ ನಾವು ಕನ್ನಡದ ಬಗ್ಗೆ ಮಾಡಿದ ಚಿಂತನೆ ಸ್ವಲ್ಪವಾದರೂ ಕನ್ನಡಿಗರ ಮನಸ್ಸು ಹೊಕ್ಕು ಕೊಂಚ ಬದಲಾವಣೆಗೆ ನಾಂದಿ ಹಾಡಲೆಂಬ ಆಶಾಭಾವ.

ಕನ್ನಡವನ್ನು ಉಳಿಸಿ ಬೆಳೆಸಿ ಎಂಬ ಕೂಗು ಇದ್ದೇ ಇದೆ. ಎಲ್ಲಾ ಕ್ಷೇತ್ರದಲ್ಲೂ ಕನ್ನಡಿಗರನ್ನು ಮೂಲೆಗುಂಪಾಗಿಸಿ ಪರಭಾಷೆಯವರನ್ನು ಮೆರೆಸುವ ಚಾಳಿ, ಅಭ್ಯಾಸ, ಔದಾರ್ಯ ಏನೆಂದಾದರೂ ಕರೆಯಿರಿ, ಕನ್ನಡಿಗರಿಗೆ ರಕ್ತಗತವಾಗಿದೆ. ಕನ್ನಡಿಗರಿಗೂ ಮುನ್ನುಗ್ಗಿ ಹೋಗುವ ಜಗಳಗಂಟ ಸ್ವಭಾವ ಇಲ್ಲವಾದ್ದರಿಂದ ಇದು ಇತ್ತೀಚೆಗಿನ ದಿನಗಳಲ್ಲಿ ಮೇರೆ ಮೀರುತ್ತಿದೆ ಎಂಬುದು ಎಲ್ಲರಿಗೆ ಮನವರಿಕೆ ಆಗುತ್ತಿದೆ.

ಹಾಗೆಯೇ ಕಣ್ಣಾಡಿಸಿದಾಗ ಎಲ್ಲರ ಮನೆಮಾತಾಗಿರುವ ಎಲ್ಲರಿಗೂ ಪ್ರಿಯವಾಗಿರುವ, ಎಲ್ಲರಿಗೂ ತಲುಪುವ ಗುಣವಿರುವ ನಮ್ಮ ಚಲನಚಿತ್ರ ಕ್ಷೇತ್ರ ಅದೆಷ್ಟು ಪರಭಾಷಿಕರಿಗೆ ಮಣೆ ಹಾಕಿದೆ ಎನ್ನುವುದು ಅಚ್ಚರಿ ಮೂಡಿಸುತ್ತದೆ. ಇದಕ್ಕೆ ಕಾರಣ ಚಲನಚಿತ್ರ ಪ್ರೇಮಿಗಳಿಗೆ ತಿಳಿದದ್ದೇ. ಚಲನಚಿತ್ರಗಳ ಯುಗ ಪ್ರಾರಂಭವಾದಾಗ, ಮದ್ರಾಸು ದಕ್ಷಿಣ ಭಾರತೀಯ ಭಾಷೆಗಳ ಚಲನಚಿತ್ರಗಳ ತವರಾಗಿತ್ತು. ಅಲ್ಲಿಯೇ ಸ್ಟುಡಿಯೋಗಳು ಇದ್ದ ಕಾರಣ, ಶೂಟಿಂಗ್, ಎಡಿಟಿಂಗ್, ಡಬ್ಬಿಂಗ್, ರೆಕಾರ್ಡಿಂಗ್ ಸೇರಿದಂತೆ, ಸಿನಿಮಾಗೆ ಸಂಬಂಧಿಸಿದ ಎಲ್ಲ ಕೆಲಸಗಳೂ ಅಲ್ಲಿಯೇ ನಡೆಯುತ್ತಿದ್ದವು.

ಕನ್ನಡದ ಹಲವು ನಿರ್ಮಾಪಕರು, ನಿರ್ದೇಶಕರು, ಕಲಾವಿದರು, ಸಂಗೀತ ನಿರ್ದೇಶಕರು, ತಂತ್ರಜ್ಞರು ಮಾತ್ರವಲ್ಲದೆ ಕಲಾವಿದರೂ ಮದ್ರಾಸಿನಲ್ಲಿಯೇ ನೆಲೆಸಿದ್ದರು. ಹಾಗಾಗಿ ಪ್ರಾರಂಭದ ವರ್ಷಗಳಲ್ಲಿ ಕನ್ನಡ ಚಿತ್ರಗಳಲ್ಲಿ ಬಹುಭಾಷಾ ಕಲಾವಿದರೇ ನಟಿಸುತ್ತಿದ್ದರು. ನಾಯಕ ನಟರನ್ನು ಬಿಟ್ಟರೆ ಬಹುತೇಕ ಬೇರೆಲ್ಲ ಕಲಾವಿದರು ತಮಿಳಿನವರೇ ಆಗಿರುತ್ತಿದ್ದರು. ನಿಧಾನವಾಗಿ ಕನ್ನಡದ ನಟಿಯರು, ಪೋಷಕನಟರು, ಬಾಲಕಲಾವಿದರು ಚಲನಚಿತ್ರರಂಗವನ್ನು ಪ್ರವೇಶಿಸಿ ಕನ್ನಡಮಯ ವಾತಾವರಣ ಉಂಟಾಯಿತು. 60ರ ದಶಕದಲ್ಲಿ ಡಾ.ರಾಜ್‌ಕುಮಾರ್‌ರಿಂದ ಹಿಡಿದು ಇಡೀ ಚಿತ್ರರಂಗವೇ ಕರ್ನಾಟಕಕ್ಕೆ ಸ್ಥಳಾಂತರಗೊಂಡು ಚಂದನವನ ಕಂಗೊಳಿಸತೊಡಗಿತು. ಕನ್ನಡದ ಚಿತ್ರ ಹವ್ಯಾಸಿಗಳಿಗೆ ಪ್ರೀಮಿಯರ್ ಸ್ಟುಡಿಯೋ ಇರುವವರೆಗೂ ಮೈಸೂರು ನೆಲೆಬೀಡಾಗಿತ್ತು. ಮೈಸೂರಿನ ಬೀದಿಗಳಲ್ಲಿ ಪ್ರಸಿದ್ಧ ನಟನಟಿಯರು ಇದ್ದರು. ನಂತರದ ದಿನಗಳಲ್ಲಿ ಬೆಂಗಳೂರಿನ ಇಡೀ ಗಾಂಧೀನಗರ ಚಂದನವನದ ಮುಖ್ಯ ಕಚೇರಿಯಾಗಿದ್ದು ಇತಿಹಾಸ.

ಒಮ್ಮೆ ಹಾಗೇ ಹಿಂದಕ್ಕೆ ಜಾರಿ ನೋಡಿ?! ಗಾಯಕರು ಎಂದಾಕ್ಷಣ ಎ.ಎಂ.ರಾಜಾ, ಘಂಟಸಾಲ, ಪಿ.ಬಿ.ಶ್ರೀನಿವಾಸ್, ಎಸ್.ಪಿ.ಬಾಲಸುಬ್ರಮಣ್ಯಂ, ಯೇಸುದಾಸ್, ಪಿ.ಜಯಚಂದ್ರನ್, ಮನು, ಸೋನು ನಿಗಂ, ಕೈಲಾಶ್ ಖೇರ್, ಕುನಾಲ್ ಗಂಜಾವಾಲ, ಟಿಪ್ಪು, ಉದಿತ್ ನಾರಾಯಣ್, ಪಂಕಜ್ ಉದಾಸ್, ಕುಮಾರ್ ಸಾನು, ಅರ್ಜಿತ್ ಸಿಂಗ್, ಸಿಡ್ ಶ್ರೀರಾಮ್ ಹಿಂದಿ ಚಿತ್ರರಂಗದ ಮೊಹಮದ್ ರಫಿ, ಕಿಶೋರ್ ಕುಮಾರ್, ಮನ್ನಾಡೆ, ಮುಖೇಶ್, ಮಹೇಂದ್ರ ಕಪೂರ್ ಹೀಗೆ ಎಲ್ಲರೂ ಕನ್ನಡ ಚಿತ್ರ ರಸಿಕರ ಮನಗೆದ್ದಿದ್ದಾರೆ. ಹಿಂದಿನ ತಲೆಮಾರಿನ ಗಾಯಕರು ಕನ್ನಡ ಬಲ್ಲವರಾಗಿದ್ದು, ಕನ್ನಡದ ಜಾಯಮಾನ ಅರಿತು ಶ್ರದ್ಧೆಯಿಂದ ಕನ್ನಡತನಕ್ಕೆ ಚ್ಯುತಿ ಬಾರದಂತೆ ಹಾಡಿದ್ದಾರೆ. ಇಂದಿಗೂ ಅವರ ಹಾಡುಗಳನ್ನು ನಾವು ಕೇಳಿ ಆಸ್ವಾದಿಸುತ್ತೇವೆ. 90ರ ದಶಕದ ನಂತರ ಕರ್ಕಶಯುಕ್ತ ಹಾಡುಗಳ ಜಮಾನ ಶುರುವಾಯ್ತು. ಅದು ಯಾರು ಹಾಡಿದರೇನು ಅರ್ಥವಾಗಲಿಲ್ಲವಲ್ಲ ಬಿಡಿ! ಕನ್ನಡದವರೇ ಆದ, ಅತ್ಯುತ್ತಮ ಗೀತೆಗಳನ್ನು ಹಾಡಿದ ರಾಜೇಶ್ ಕೃಷ್ಣನ್, ರಮೇಶ್ ಚಂದ್ರ, ಚೇತನ್, ಶಾಸ್ತ್ರಿ ಅವರುಗಳಿಗೆ ಒಳ್ಳೆ ಅವಕಾಶಗಳು ದೊರೆಯಲೇ ಇಲ್ಲ. ಅವಕಾಶಗಳಿಗಾಗಿ ಅವರು ಹೆಣಗಿದ್ದನ್ನು ಅವರೇ ಅನೇಕ ಸಂದರ್ಶನಗಳಲ್ಲಿ ತೋಡಿಕೊಂಡಿದ್ದಾರೆ. ಅವರನ್ನು ಕೇವಲ ಟ್ರ್ಯಾಕ್ ಸಿಂಗರ್‌ಗಳಾಗಿ, ಅಥವಾ ಅವರಿಚ್ಛೆಯ ಗಾಯಕರು ದೊರೆಯದಾಗ ಆಪತ್ಬಾಂಧವರಂತೆ ಕನ್ನಡ ಚಿತ್ರರಂಗ ಬಳಸಿಕೊಂಡಿದೆ. ಇವರುಗಳ ಮಧ್ಯೆ, ಆಸ್ಕರ್ ವಿಜೇತ ರೆಹಮಾನ್ ತಂಡದಿಂದ ಬಂದ ಒಂದೇ ಕಾರಣಕ್ಕಾಗಿ ವಿಜಯ್ ಪ್ರಕಾಶ್ ಅವರಿಗೆ ಸ್ಟಾರ್ ಪಟ್ಟ ದೊರೆತಿದೆ ಎನ್ನುವುದು ಕಹಿಸತ್ಯ.

ರಫಿ ಅವರಿಂದ ಒಂದೇ ಬಳ್ಳಿಯ ಹೂಗಳು ಚಿತ್ರಕ್ಕೆ, ನೀನೆಲ್ಲಿ ನಡೆವೆ ದೂರ ಹಾಡನ್ನು ಸತ್ಯಂ ಹಾಡಿಸಿದ ನಂತರ ಅವರಿಗೆ ಸಾಕಷ್ಟು ಕನ್ನಡ ಚಿತ್ರಗೀತೆಗಳಲ್ಲಿ ಹಾಡುವ ಅವಕಾಶಗಳನ್ನು ನೀಡಲು ಮುಂದಾದ ನಿರ್ದೇಶಕರಿಗೆ, ಕನ್ನಡದ ಸಂಸ್ಕೃತಿ ಭಾಷೆಗಳ ನಿಜ ಪರಿಚಯವಿಲ್ಲದ ನಾನು, ಹಾಡುಗಳಿಗೆ ನ್ಯಾಯ ಸಲ್ಲಿಸಲಾರೆ. ದಯವಿಟ್ಟು ನಿಮ್ಮ ಭಾಷೆ ಬಲ್ಲವರಿಂದ ಹಾಡಿಸಿ ಎಂದು ನಯವಾಗಿ ನಿರಾಕರಿಸಿದರಂತೆ. ಆ ಒಂದು ಹಾಡನ್ನು ಹಾಡಲು, ಕನ್ನಡ ಪದಗಳ ಉಚ್ಚಾರಣೆಗಳನ್ನು ಕರಗತ ಮಾಡಿಕೊಳ್ಳಲು ಒಂದು ತಿಂಗಳು ತೆಗೆದುಕೊಂಡರಂತೆ!

> “ಕನ್ನಡದವರನ್ನು ಮೂಲೆಗುಂಪಾಗಿಸುವ ಯತ್ನ ಎಲ್ಲೆಡೆಯೂ ಕಣ್ಣಿಗೆ ರಾಚುತ್ತಿದೆ. ಅಂತೆಯೇ ಸಿನಿಮಾ ಕ್ಷೇತ್ರದಲ್ಲಿಯೂ ಇದೆ ಎನ್ನುವುದು ಅರಗಿಸಿಕೊಳ್ಳಲು ಕಷ್ಟವಾಗುವ ಸತ್ಯ. ಆದರೆ ಈ ಪರಿಸ್ಥಿತಿಯನ್ನು ತಡೆಯಬೇಕು ಎಂಬುದಷ್ಟೇ ಕನ್ನಡಿಗರ ಆಶಯ. ಅತ್ಯುತ್ತಮ ಗಾಯಕರು, ನಟನಟಿಯರು ಇರುವ ಕನ್ನಡ ಚಿತ್ರರಂಗ ಒಂದಷ್ಟು ವರ್ಷಗಳ ಹಿಂದೆ ಇಡೀ ಭಾರತಕ್ಕೆ ಹೊಸ ಅಲೆಯ ಚಿತ್ರಗಳನ್ನು ನೀಡಿ ಮಾರ್ಗದರ್ಶಿಯಾಗಿತ್ತು. ಅಂತಹ ಉದ್ಯಮ ಪರಭಾಷೆಯವರ ಅನವಶ್ಯಕ ದಾಳಿಯಿಂದ ಸತ್ವಹೀನವಾಗುವುದನ್ನು ನಾವು ನೋಡುವುದು ಬೇಡ ಎಂಬುದಷ್ಟೇ ಈ ಲೇಖನದ ಆಶಯ.

ಇನ್ನು ಹಿನ್ನೆಲೆ ಗಾಯಕಿಯರ ವಿಷಯಕ್ಕೆ ಬಂದರೆ, ಲತಾ ಮಂಗೇಶ್ಕರ್, ಆಶಾ ಭೋಂಸ್ಲೆ, ಸುಲಕ್ಷಣಾ ಪಂಡಿತ್, ಎ.ರಾಣಿ, ಸೂಲ ಮಂಗಲಂ ರಾಜಲಕ್ಷ್ಮಿ, ಪಿ.ಲೀಲಾ, ಎಸ್.ಜಾನಕಿ, ಪಿ.ಸುಶೀಲ, ವಾಣಿ ಜಯರಾಂ, ಎಲ್ ಆರ್ ಈಶ್ವರಿ, ಎಸ್.ಪಿ.ಶೈಲಜಾ, ಕೆ.ಎಸ್.ಚಿತ್ರಾ, ಸುನಿಧಿ ಚೌಹಾಣ್, ಶ್ರೇಯಾ ಘೋಷಾಲ್, ಬಾಂಬೆ ಜಯಶ್ರೀ, ಸ್ವರ್ಣಲತಾ, ಮೊನಾಲಿ ಠಾಕುರ್, ಉಷಾ ಉತ್ತುಪ್ ಹೀಗೆ ಪಟ್ಟಿ ಬೆಳೆಯುತ್ತಾ ಹೋಗುತ್ತದೆ. ಎಸ್.ಜಾನಕಿ, ಪಿ.ಸುಶೀಲ ಅವರ ಕಾಲದಲ್ಲಿಯಂತೂ ಕನ್ನಡ ಗಾಯಕಿಯರಿಗೆ, ಒಂದು ಚಿಕ್ಕ ನೆಲೆಯನ್ನೂ ತಮಗಾಗಿ ಮಾಡಿಕೊಳ್ಳಲಾಗಲಿಲ್ಲ ಏಕೆ ಎಂಬುದು ಇಂದಿಗೂ ತರ್ಕಕ್ಕೆ ಸಿಗುವುದಿಲ್ಲ. ಕನ್ನಡ ಚಿತ್ರರಂಗದಲ್ಲಿ ಹಿನ್ನೆಲೆ ಗಾಯನಕ್ಕೆ ಪ್ರಶಸ್ತಿ ಇಲ್ಲ ಎಂಬ ತಾರತಮ್ಯ ಸರಿ ಹೋಗುವವರೆಗೂ ಹಾಡುವುದಿಲ್ಲ ಎಂದು ಎಸ್.ಜಾನಕಿ ಅವರು ಕನ್ನಡದಲ್ಲಿ ಹಾಡುವುದನ್ನು ಸ್ವಲ್ಪದಿನಗಳ ಮಟ್ಟಿಗೆ ನಿಲ್ಲಿಸಿದಾಗ, ಕನ್ನಡದ ಗಾಯಕಿಯರನ್ನು ಅನಿವಾರ್ಯವಾಗಿ ಹಾಡಿಸಲು ಶುರು ಮಾಡಿದಾಗ, ಮಂಜುಳಾ ಗುರುರಾಜ್, ಬೆಂಗಳೂರು ಲತಾ ಅವರಂತಹ ಗಾಯಕಿಯರು ಮುಂದೆ ಬಂದು ತಮ್ಮ ಪ್ರತಿಭೆಯನ್ನು ಸಾಬೀತುಪಡಿಸಿದರೂ, ಜಾನಕಿ ಚಿತ್ರಾ ಅವರಿಗೆ ದೊರೆತಂತಹ ಅವಕಾಶಗಳು ದೊರೆಯಲಿಲ್ಲ ಎಂಬುದು ವಿಷಾದದ ವಿಷಯವೇ ಸರಿ.. ಅದೇ ಸಮಯದಲ್ಲಿ ಭಾವಗೀತೆಗಳನ್ನು ಹಾಡುತ್ತಿದ್ದ ರತ್ನಮಾಲಾ ಪ್ರಕಾಶ್, ಕಸ್ತೂರಿ ಶಂಕರ್, ಬಿ.ಆರ್.ಛಾಯಾ ಅವರಂತಹ ಗಾಯಕಿಯರು ತಮ್ಮ ಗಾಯನಕ್ಕಾಗಿ ಪ್ರಶಸ್ತಿಗಳನ್ನು ಪಡೆದುಕೊಂಡರೂ ಅವಕಾಶ ವಂಚಿತರಾಗಿಯೇ ಉಳಿದರು. ಜಾನಕಿ, ಸುಶೀಲ, ವಾಣಿ ಜಯರಾಂ, ಈಶ್ವರಿ, ಚಿತ್ರಾ ಅವರು ಕನ್ನಡ ಭಾಷೆಯವರಂತೆಯೇ ಗೀತೆಗಳಿಗೆ ಭಾವ ತುಂಬಿ ಹಾಡಿ ಇಂದಿಗೂ ಅಜರಾಮರರಾಗಿದ್ದಾರೆ. ಶ್ರೇಯಾ ಘೋಷಾಲ್ ಕೂಡಾ ಇದೇ ಕಾರಣಕ್ಕೆ ಅತ್ಯಂತ ಆಪ್ತರೆನಿಸುತ್ತಾರೆ. ಆದರೆ ಉಳಿದ ಗಾಯಕಿಯರ ಬಗ್ಗೆ ಹೀಗೆ ಮನಃಪೂರ್ತಿಯಾಗಿ ಹೇಳಲಾಗುವುದಿಲ್ಲ. ಆದರೆ ಇವರ ಆಗಮನದಿಂದ ಸಂಗೀತಾ ಕಟ್ಟಿ, ಎಂ.ಡಿ.ಪಲ್ಲವಿ, ಚೈತ್ರಾ, ಅನುರಾಧ ಭಟ್, ಶಮಿತಾ ಮಲ್ನಾಡ್, ವಾರಿಜಾಶ್ರೀ, ಸುನೀತಾ ಮತ್ತು ನಂದಿತಾ ಅವರಂತಹ ಪ್ರತಿಭಾದೈತ್ಯರು ಕನಿಷ್ಠ ಅವಕಾಶಕ್ಕೂ ಹೆಣಗಾಡಬೇಕಾಯಿತು.

ಸಂಗೀತಕ್ಕೆ ಸಂಬಂಧಿಸಿದ ಹಲವಾರು ರಿಯಾಲಿಟಿ ಶೋಗಳಲ್ಲಿ ಅದ್ಭುತ ಪ್ರತಿಭಾವಂತರು ಬೆಳಕಿಗೆ ಬರುತ್ತಾರೆ. ಆದರೆ, ಅವರ ಪಯಣ ಅಲ್ಲಿಯೇ ನಿಂತುಬಿಡುತ್ತದೆ. ಲಕ್ಷ್ಮೀ ಮತ್ತು ಇಂದೂ ನಾಗರಾಜ್ ಸಹೋದರಿಯರು, ಆಕಾಂಕ್ಷಾ ಬಾದಾಮಿ, ಸುಹಾನ ಇವರೆಲ್ಲ One film wonder ಆಗಿ ತೆರೆಮರೆಗೆ ಸರಿದು ಬಿಡುತ್ತಾರೆ. ರಾಷ್ಟ್ರ ಪ್ರಶಸ್ತಿಗಳಿಸಿದರೂ ಬಿಂದು ಮಾಲಿನಿಯೂ ಮರೆತೇ ಹೋಗುತ್ತಾರೆ.

ಕನ್ನಡದ ಸಂಗೀತ ನಿರ್ದೇಶಕರೇ ಪರಭಾಷೆಯ ಗಾಯಕರಿಗೆ ಮಣೆ ಹಾಕುತ್ತಾರೆ ಎಂಬ ಆರೋಪಕ್ಕೆ ಉತ್ತರಿಸುತ್ತಾ ನಿರ್ದೇಶಕರು, ನಿರ್ಮಾಪಕರ ಕಡೆ ಬೆರಳು ತೋರಿಸುತ್ತಾರೆ, ನಿರ್ಮಾಪಕರು ಪ್ರೇಕ್ಷಕರ ಒತ್ತಾಯ ಎಂದು ಅತ್ತ ಕಡೆ! ಅಂತೂ ಇಂತೂ ಕುಂತಿ ಮಕ್ಕಳಿಗೆ ರಾಜ್ಯವಿಲ್ಲ ಎನ್ನುವ ಕತೆಯಾಗಿದೆ!

ಇದು ಗಾಯಕ–ಗಾಯಕಿಯರ ಕತೆಯಾದರೆ, ನಾಯಕಿಯರ ಆಯ್ಕೆಯಲ್ಲಿನ ಅಧ್ವಾನವನ್ನು ನೀವು ನೋಡಿಯೇ ಇರುತ್ತೀರಿ. ಇಲ್ಲಿಯೂ ಅದೇ ಕಥೆ, ಹಿಂದಿನ ತಲೆಮಾರಿನ ನಾಯಕಿಯರ ಬದ್ಧತೆ, ಕರ್ತವ್ಯಪರತೆ ಇಲ್ಲದ ಗ್ಲಾಮರ್ ಗೊಂಬೆಗಳು ಕನ್ನಡದ ನೆಲದಲ್ಲಿ ಅಪಸವ್ಯಗಳನ್ನು ಉಂಟುಮಾಡಿದ್ದಾರೆ ಎಂದರೆ ಖಂಡಿತಾ ಉತ್ಪ್ರೇಕ್ಷೆ ಅಲ್ಲ.

ಜಮುನಾ, ಸಾಹುಕಾರ್ ಜಾನಕಿ, ಪಂಢರೀಬಾಯಿ, ಸಂಧ್ಯಾ, ಕೃಷ್ಣಕುಮಾರಿ, ಲಕ್ಷ್ಮೀ, ಸರಿತಾ, ಗೀತಾ, ಸುಹಾಸಿನಿ, ಮೋಹಿನಿ, ಪಾರ್ವತಿ ಮೆನನ್ ಇವರುಗಳಿಗೆ ಕನ್ನಡ ಬೇರೆ ಭಾಷೆಯೇ ಅಲ್ಲ ಎನಿಸುವಷ್ಟು ಸುಲಲಿತ. ಇನ್ನು ಮಾಧವಿ, ಮಹಾಲಕ್ಷ್ಮಿ, ಅರ್ಚನಾ, ಅಂಬಿಕಾ, ರಾಧಾ, ಮೀನಾ, ರೋಜಾ, ಮಾಲಾಶ್ರೀ, ಸಿತಾರಾ ಇವರುಗಳಿಗೆ ಬಿ.ಜಯಶ್ರೀ, ಸರ್ವಮಂಗಳಾ, ಶಶಿಕಲಾ ಅವರುಗಳು ದನಿಯಾಗಿದ್ದರು ಎಂಬುದು ಮರೆತೇ ಹೋಗುವಷ್ಟು ನುರಿತ ಕನ್ನಡತಿಯರಾಗಿಬಿಟ್ಟಿದ್ದರು.

ತೀರಾ ದುರ್ದೆಶೆ ಪ್ರಾರಂಭವಾದುದು, 90ರ ದಶಕದಲ್ಲಿ. ಕೊನೆಯ ಪಕ್ಷ ಕನ್ನಡ ಸಂಭಾಷಣೆಗಳಿಗೆ ತಕ್ಕುದಾಗಿ ತುಟಿಯಾಡಿಸುವಷ್ಟೂ ಅಭ್ಯಾಸ ಮಾಡುವ ಶ್ರದ್ಧೆ, ಬದ್ಧತೆ ಪ್ರೀತಿಯಿರದ ನಾಯಕಿಯರು ಅದೆಷ್ಟು ಜನ ಬಂದು ಹೋಗಲಿಲ್ಲ. ಕಡೆಪಕ್ಷ ಚಿತ್ರದ ಹೆಸರನ್ನೂ ಉಚ್ಚರಿಸಲು ಬರದವರು. ನಾನಿಲ್ಲಿ ಅವರ ಹೆಸರುಗಳನ್ನೆಲ್ಲಾ ಹೇಳಹೊರಟರೆ, ಬೇರೆ ಏನನ್ನೂ ಹೇಳಲಾಗುವುದಿಲ್ಲ. ಆಗಿನ ಒಂದಷ್ಟು ವರ್ಷಗಳು ಕನ್ನಡದ ನಿರ್ಮಾಪಕ ನಿರ್ದೇಶಕರುಗಳಿಗೆ ಒಂದು ಮೂಢನಂಬಿಕೆಯೇ ಬಂದಂತಿತ್ತು. ಹಿಂದಿ ಅಥವಾ ಬೇರೆ ಭಾಷೆಯ ನಾಯಕಿಯರಿದ್ದರೆ ಮಾತ್ರ ಚಿತ್ರ ಗೆಲ್ಲುತ್ತದೆ ಎಂದು. ನಿಧಾನಕ್ಕೆ ಆ ಮಂಕು ಹರಿಯಿತೆನ್ನಿ. ಆದರೂ ದೊಡ್ಡ ದೊಡ್ಡ ನಟರ ಚಿತ್ರಗಳಿಗೆ ಕನ್ನಡ ನಾಯಕಿಯರಿದ್ದರೆ ಚಿತ್ರದ ಶ್ರೀಮಂತಿಕೆಗೆ ಅಡ್ಡಿಯಾಗುತ್ತದೆ ಎಂಬ ಅನಿಸಿಕೆ ಗಾಢವಾಗಿತ್ತು. ಸುದೀಪ್, ದರ್ಶನ್, ಪುನೀತ್, ಉಪೇಂದ್ರ, ಶಿವರಾಜ್‌ಕುಮಾರ್, ರಮೇಶ್, ವಿಷ್ಣುವರ್ಧನ್‌ರ ಕೊನೆಯ ಹತ್ತುವರುಷಗಳ ಚಿತ್ರಗಳಲ್ಲಿ ಎಷ್ಟು ಕನ್ನಡದ ನಾಯಕಿಯರಿದ್ದರು ಎಂದು ಒಮ್ಮೆ ನೆನಪು ಮಾಡಿಕೊಳ್ಳಿ?

ಎಷ್ಟರ ಮಟ್ಟಿಗಿನ ಅತಿರೇಕಕ್ಕೆ ಇದು ಹೋಯಿತೆಂದರೆ, ಹಿಂದಿಯ ಧಾರಾವಾಹಿಗಳಲ್ಲಿ ಕೆಲಸ ಮಾಡುವ ನಟಿಯರನ್ನು ಸುದೀಪ್, ಪುನೀತ್, ದರ್ಶನ್‌ರ ಚಿತ್ರಗಳಿಗೆ ಹಾಕಿಕೊಂಡದ್ದಿದೆ. ಕಾರಣ ಕೇಳಿದರೆ, ಅವರಿಗೆ ಕ್ಯಾಮೆರಾ ಆಂಗಲ್‌ಗಳ ಬಗ್ಗೆ ತಿಳಿದಿರುತ್ತದೆ, ಹೊಸದಾಗಿ ಹೇಳಿಕೊಡುವ ತಲೆನೋವಿಲ್ಲ ಎಂದು ಹೇಳುತ್ತಾರೆ!

ಧ್ಯಾನ್, ಅಕ್ಷಯ್ ಆನಂದ್‌ರಂತಹ ಕನ್ನಡ ಬರದವರನ್ನೂ ನಾಯಕರಾಗಿ ಕೆಲವು ಕಾಲ ಮೆರೆಸಿದ್ದಾಯಿತು.

ಪರಭಾಷಾ ನಟರ ವ್ಯಾಮೋಹದ ಪಿಡುಗು ಪೋಷಕವರ್ಗದ ನಟರ ಆಯ್ಕೆಯಲ್ಲಿಯೂ ಸ್ವಲ್ಪ ದಿನಗಳ ಕಾಲ ಆವರಿಸಿತ್ತು. ಸದ್ಯಕ್ಕೆ ಕಡಿಮೆಯಾಗಿದೆ. ಈಗಲೂ ಖಳನಟರ ಪಾತ್ರಗಳಿಗೆ ಆಶೀಶ್ ವಿದ್ಯಾರ್ಥಿ, ರವಿಕಾಳೆ, ಅಷುತೋಷ್ ರಾಣಾ, ರಾಹುಲ್ ದೇವ್, ಪ್ರದೀಪ್ ರಾವತ್, ಮುಖೇಶ್ ರಿಷಿ, ಸೋನು ಸೂದ್ ಸೇರಿದಂತೆ ಉತ್ತರದ ನಟರು ಮತ್ತು ತೆಲುಗು ತಮಿಳುಗಳ ನಟರು ಈಗಲೂ ಅಬ್ಬರಿಸುತ್ತಿದ್ದಾರೆ.

ಇಂದಿನ ಬಹುತೇಕ ಕನ್ನಡ ಚಲನಚಿತ್ರಗಳಲ್ಲಿ ಕನ್ನಡ ಸಂಸ್ಕೃತಿಯ ಗಂಧವೇ ಇರದ ಬಗ್ಗೆ ಇನ್ನೊಮ್ಮೆ ಮಾತನಾಡೋಣ.

ಇಲ್ಲಿ ಬೇರೆ ಭಾಷೆಯವರ ಬಗ್ಗೆ ಯಾವುದೇ ಅಸಹನೆಯ ಬಗ್ಗೆ ಮಾತಾಡುತ್ತಿಲ್ಲ. ಆದರೆ ಇಲ್ಲಿಗೆ ಬಂದು ಹಣ, ಪ್ರೀತಿ, ಖ್ಯಾತಿಯನ್ನು ಗಳಿಸುವ ಎಷ್ಟುಜನ ಕನ್ನಡದ ಮಣ್ಣಿಗೆ ಕೃತಜ್ಞರಾಗಿದ್ದಾರೆ, ಭಾಷೆ ಕಲಿತಿದ್ದಾರೆ ಇತ್ತೀಚೆಗೆ ಮಂಗಳೀ ಎನ್ನುವ ತೆಲುಗು ಗಾಯಕಿ, ಕನ್ನಡದಲ್ಲಿ ಮಾತನಾಡಿ ಎಂದು ಪ್ರೇಕ್ಷಕರು ಕೇಳಿದ್ದಕ್ಕೆ, ಸ್ವಲ್ಪವೂ ಸೌಜನ್ಯವಿಲ್ಲದಂತೆ, ತೆಲುಗು ಅರ್ಥವಾಗುತ್ತದಲ್ಲ ನಿಮಗೆ. ಇನ್ನೇಕೆ ಕನ್ನಡ ಎಂದು ವೇದಿಕೆಯ ಮೇಲಿನಿಂದಲೇ ಹೇಳಿದ್ದು ಸುದ್ದಿಯಾಗಿತ್ತು. ನಾವೇ ಅವರಿಗೆ ಈ ಸಲಿಗೆ ಕೊಟ್ಟಿದ್ದೇವೆ ಎಂಬುದೂ ನಿಜ! ಮತ್ತೆ ಅದೇ ಹೇಳಬೇಕು... ಅವರಿವರನ್ನು ನೋಡಿ ಕಲಿಯಬಾರದೇ?

ಇತ್ತೀಚೆಗೆ ಸ್ವಲ್ಪಮಟ್ಟಿಗಿನ ಬದಲಾವಣೆ ಕಾಣುತ್ತಿದೆ. ಸಂಚಿತ್ ಹೆಗ್ಡೆ ಬೇರೆ ಭಾಷೆಗಳಲ್ಲೂ ಹಾಡುತ್ತಿದ್ದಾರೆ. ರಶ್ಮಿಕಾ ಮಂದಣ್ಣ, ರುಕ್ಮಿಣಿ ವಸಂತ್, ಶ್ರೀಲೀಲಾ, ಶ್ರದ್ಧಾ ಶ್ರೀನಾಥ್, ನಿತ್ಯಾ ಮೆನನ್, ಪ್ರಿಯಾಂಕ ಮೋಹನ್, ಶ್ರೀನಿಧಿ ಹೆಗ್ಡೆ, ಅಚ್ಯುತ, ಕಿಶೋರ್, ವಸಿಷ್ಟ ಸಿಂಹ, ಧನಂಜಯ್, ಅವಿನಾಶ್ ತೆಲುಗು ತಮಿಳು ಸಿನಿಮಾಗಳಲ್ಲಿ ಮಿಂಚುತ್ತಿದ್ದಾರೆ. ಅಲ್ಲಿಗೆ ಹೋಗಿ ಬಂದ ಮೇಲೆ ಅವರಿಗೆ ಇಲ್ಲಿ ವಿಶೇಷ ಮರ್ಯಾದೆ! ಸೌಂದರ್ಯ, ನಿತ್ಯಾ ಮೆನನ್ ಅವರಿಗೆ ಕನ್ನಡ ಚಿತ್ರರಂಗ ಮಾಡಿದ್ದೂ ಹಾಗೆಯೇ! ವಿಚಿತ್ರ ಎನಿಸುವುದಿಲ್ಲವೇ? ಒಟ್ಟಿನಲ್ಲಿ ಕನ್ನಡದವರನ್ನು ಮೂಲೆಗುಂಪಾಗಿಸುವ ಯತ್ನ ಎಲ್ಲೆಡೆಯೂ ಕಣ್ಣಿಗೆ ರಾಚುತ್ತಿದೆ.

ಯಾವುದೇ ಸಂಘಟನೆಗೆ ಭಾಷೆ ಮುಖ್ಯ

ಕನ್ನಡ ರಾಜ್ಯೋತ್ಸವ ಉದ್ಘಾಟಿಸಿ ಪೂರ್ಣಚಂದ್ರ ತೇಜಸ್ವಿ ಅಭಿಮತ

ಮೈಸೂರು, ನ.27– ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನ ಸ್ನಾತಕೋತ್ತರ ಕೇಂದ್ರದ ವತಿಯಿಂದ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಮೈಸೂರಿನ ಸಂಗೀತ ನಿರ್ದೇಶಕರಾದ ಪೂರ್ಣಚಂದ್ರ ತೇಜಸ್ವಿ ಮುಖ್ಯ ಅತಿಥಿಗಳಾಗಿದ್ದರು. ಅವರು ತಮ್ಮ ಭಾಷಣದಲ್ಲಿ ಕನ್ನಡ ಭಾಷೆಯನ್ನು ಕರ್ನಾಟಕದಲ್ಲಿರುವ ಎಲ್ಲರೂ ಪ್ರೀತಿಸಿ ತಮ್ಮ ದೈನಂದಿನ ಜೀವನದಲ್ಲಿ ಹೆಚ್ಚು ಹೆಚ್ಚು ಬಳಸಬೇಕು. ಕನ್ನಡ ರಾಜ್ಯೋತ್ಸವವು ಪ್ರತಿಯೊಂದು ಮನೆಯ ಲ್ಲಿಯೂ ಇನ್ನಿತರ ಹಬ್ಬಗಳಂತೆ ಆಚರಿಸಬೇಕೆಂದು ತಿಳಿಸಿದರು.

ವಿದ್ಯಾರ್ಥಿಗಳು ತಮ್ಮ ಪಠ್ಯದ ಜೊತೆಗೆ ಪಠ್ಯೇತರ ಚಟು ವಟಿಕೆಗಳಲ್ಲಿಯೂ ಕೂಡ ಸಕ್ರಿಯವಾಗಿ ಭಾಗವಹಿಸುವ ಮೂಲಕ ನಮ್ಮ ಜ್ಞಾನಾರ್ಜನೆ ಮಾಡಬೇಕೆಂದು ತಿಳಿಹೇಳಿದರು. ಕನ್ನಡ ಭಾಷೆಯ ಅಳಿವು ಹಾಗೂ ಉಳಿವಿಗಾಗಿ ಹೋರಾಡಿ ಪ್ರಾಣತ್ಯಾಗ ಮಾಡಿದವರನ್ನು ಸ್ಮರಿಸುವುದು ಪ್ರತಿಯೊಬ್ಬ ಕನ್ನಡಿಗನ ಆದ್ಯ ಕರ್ತವ್ಯವಾಗಬೇಕೆಂದು ನುಡಿದರು.



ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನ ಸ್ನಾತಕೋತ್ತರ ಕೇಂದ್ರದ ವತಿಯಿಂದ ಏರ್ಪಡಿಸಿದ್ದ ಕನ್ನಡ ರಾಜ್ಯೋತ್ಸವವನ್ನು ಮೈಸೂರಿನ ಸಂಗೀತ ನಿರ್ದೇಶಕರಾದ ಪೂರ್ಣಚಂದ್ರ ತೇಜಸ್ವಿ ಉದ್ಘಾಟಿಸಿದರು.

ಅಧ್ಯಕ್ಷೀಯ ನುಡಿಗಳನ್ನಾಡಿದ ಕಾಲೇಜಿನ ಪ್ರಾಂಶುಪಾಲ ಡಾ.ಎಸ್. ಮರೀಗೌಡ, ಕರ್ನಾಟಕ ಜನತೆ ಕನ್ನಡ ರಾಜ್ಯೋತ್ಸವವನ್ನು ಪ್ರತಿಯೊಂದು ಮನೆಯಲ್ಲೂ ಆಚರಿಸಿ. ಕನ್ನಡವನ್ನು ಹೆಚ್ಚು ಪ್ರೀತಿಸುವ ಮೂಲಕ ಕನ್ನಡ ಮಾತೃ ಭಾಷೆಯನ್ನೂ ಬೆಳೆಸಬೇಕು ಎಂದರು.

ವಿದ್ಯಾರ್ಥಿಗಳು ಈ ದಿನದ ಕಾರ್ಯಕ್ರಮವನ್ನು ಬಹಳ ಶಿಸ್ತಿನಿಂದ ಆಚರಿಸಿದ್ದಕ್ಕಾಗಿ ಅವರನ್ನು ಅಭಿನಂದಿಸಿದರು. ಭಾಷಾ ಚಳುವಳಿಯು ಭಾರತದಲ್ಲಿ ಮೊದಲಿಗೆ ಬಂಗಾಳದಲ್ಲಿ 1905 ರಲ್ಲಿ ಪ್ರಾರಂಭವಾಯಿತು ಹಾಗೂ 1956ರಲ್ಲಿ ಹಳೇ ಮೈಸೂರು ರಾಜ್ಯವನ್ನು ಕರ್ನಾಟಕವೆಂದು ಅಂದಿನ ಸರ್ಕಾರ ಮರುನಾಮಕರಣ ಮಾಡಿತು ಎಂದರು.

ಸ್ನಾತಕೋತ್ತರ ಕೇಂದ್ರದ ಮುಖ್ಯಸ್ಥರಾದ ಡಾ.ಎಸ್. ಪೂರ್ಣಿಮ ಹಾಗೂ ಇತರ ಅಧ್ಯಾಪಕ ಹಾಗೂ ಅಧ್ಯಾಪಕೇತರರು ಹಾಗೂ ಎಂಕಾಂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಬಾಂಗ್ಲಾದಲ್ಲಿ ಹಿಂದೂ ಮುಖಂಡನ ಬಂಧನ

ವಿಶ್ವಸಂಸ್ಥೆ ಮಧ್ಯ ಪ್ರವೇಶಕ್ಕೆ ಭಾರತ ಆಗ್ರಹ

ನವದೆಹಲಿ: ಬಾಂಗ್ಲಾದೇಶದಲ್ಲಿ ಹಿಂದೂ ಸಂಘಟನೆಯ ಮುಖಂಡ ಚಿನ್ಮಯಿ ಕೃಷ್ಣ ದಾಸ್ ಬ್ರಹ್ಮಚಾರಿ ಅವರನ್ನು ಬಂಧಿಸಿರುವುದಕ್ಕೆ ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಕಿಡಿಕಾರಿದ್ದಾರೆ. ಚಿನ್ಮಯಿ ಅವರ ಬಂಧನವು ಮಾನವೀಯತೆ ಮೇಲೆ ನಡೆಸಿದ ದಾಳಿ ಎಂದು ಕಟುವಾಗಿ ಹೇಳಿದ್ದಾರೆ.

ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಅವಧಿಯಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ದಾಳಿಯು, ಆ ದೇಶವು ಮೂಲಭೂತವಾದಿಗಳ ಹಿಡಿತದಲ್ಲಿ ಸಿಲುಕಿದೆ ಎಂಬುದನ್ನು ಪ್ರತಿಬಿಂಬಿಸುತ್ತಿದೆ. ಈ ವಿಚಾರದಲ್ಲಿ ವಿಶ್ವಸಂಸ್ಥೆ ಮಧ್ಯ ಪ್ರವೇಶಿಸಬೇಕು ಎಂದು ಒತ್ತಾಯಿಸಿದ್ದಾರೆ.

ಸಂಸತ್ತಿನ ಆವರಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿರುವ ಸಿಂಗ್, ಬಾಂಗ್ಲಾದೇಶದ ಉಸ್ತುವಾರಿ ಪ್ರಧಾನಿಯು ಮೂಲಭೂತವಾದಿಗಳ ಹಿಡಿತದಲ್ಲಿ ಸಿಲುಕಿದ್ದಾರೆ. ಹಿಂದೂಗಳ ಮೇಲಿನ ದಾಳಿಯು, ಮಾನವೀಯತೆ ಮೇಲಿನ ದಾಳಿಯಾಗಿದೆ. ವಿಶ್ವಸಂಸ್ಥೆಯು ಈ ವಿಚಾರದಲ್ಲಿ ಮಧ್ಯ ಪ್ರವೇಶಿಸಬೇಕು ಎಂದು ಹೇಳಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಲೋಕಸಭೆ ಅಧಿವೇಶನ: ಸಾಮಾಜಿಕ ಮಾಧ್ಯಮಗಳಲ್ಲಿ ಅಶ್ಲೀಲ ಕಂಟೆಂಟ್

ಕಠಿಣ ಕಾನೂನು ತರಲು ಕೇಂದ್ರ ಸಚಿವರ ಆಗ್ರಹ



ನವದೆಹಲಿ, ನ.27–ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಕಟವಾಗುತ್ತಿರುವ ಯಾವುದೇ ವಿಷಯಗಳು ಸಂಪಾದಕೀಯ ತಂಡ ಮೇಲ್ವಿಚಾರಣೆ ಇಲ್ಲದೆಯೇ ಪ್ರಕಟಗೊಳ್ಳುತ್ತಿವೆ. ಹಾಗಾಗಿ ಅಲ್ಲಿನ ಕಂಟೆಂಟ್‌ಗಳಲ್ಲಿ ಅಶ್ಲೀಲ ವಿಚಾರಗಳು ಪ್ರಕಟಗೊಳ್ಳುತ್ತಿವೆ. ಇದನ್ನು ತಡೆಯಲು ಕಠಿಣವಾದ ಕಾನೂನಿನ ಅಗತ್ಯವಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಬುಧವಾರ ಬೆಳಿಗ್ಗೆ ಲೋಕಸಭಾ ಅಧಿವೇಶನದ ಮುಂದೆ ಸಾಮಾಜಿಕ ಮಾಧ್ಯಮಗಳ ಕಂಟೆಂಟ್ ಕುರಿತಾದ ಪ್ರಶ್ನೆಯು ಚರ್ಚೆಗೆ ಬಂತು. ವಿರೋಧ ಪಕ್ಷಗಳು ಅದಾನಿ ಕುರಿತು ಚರ್ಚೆಗೆ ಅವಕಾಶ ಕೊಡಬೇಕು ಎಂದು ಘೋಷಣೆಗಳನ್ನು ಕೂಗುತ್ತಾ ಗಲಾಟೆ ನಡೆಸಿದವು. ಅದರ ಮಧ್ಯೆಯೇ ಸಾಮಾಜಿಕ ಮಾಧ್ಯಮಗಳಲ್ಲಿ ಕಂಟೆಂಟ್ ಮೇಲೆ ನಿಯಂತ್ರಣ ಹೇರಲು ಕಠಿಣ ಕಾನೂನಿನ ಅವಶ್ಯಕತೆಯ ಬಗ್ಗೆ ಚರ್ಚೆಯು ನಡೆಯಿತು.

ಸಾಮಾಜಿಕ ಮಾಧ್ಯಮಗಳು ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಹಾಗೂ ಮುಕ್ತ ಮಾಧ್ಯಮದ ವೇದಿಕೆಯಾಗಿದೆ. ಆದರೆ, ಅಲ್ಲಿ ಅಧಿಕೃತ ಮಾಧ್ಯಮಗಳಲ್ಲಿ ಇರುವಂತೆ ವಿಷಯಗಳನ್ನು ಗಮನಿಸಲು ಸಂಪಾದಕೀಯ ತಂಡವು ಇರುವುದಿಲ್ಲ. ಹಾಗೇ ಸೋಶಿಯಲ್ ಮೀಡಿಯಾ ಪ್ಲಾಟ್‌ಫಾರ್ಮ್‌ಗಳು ಸೃಷ್ಟಿಯಾಗಿರುವ ದೇಶಗಳಿಗೂ ಹಾಗೂ ಭಾರತಕ್ಕೂ ಸಾಂಸ್ಕೃತಿಕ ವ್ಯತ್ಯಾಸಗಳಿವೆ. ಹಾಗಾಗಿ ಸಂಸತ್ತಿನ ಸ್ಥಾಯಿ ಸಮಿತಿಯಿಂದ ಈ ಕುರಿತು ಪರಿಶೀಲನೆ ಆಗಬೇಕು, ಕಠಿಣ ಕಾನೂನುಗಳನ್ನು ತರಬೇಕು ಎಂದು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಆಗ್ರಹಿಸಿದರು.

ಬಿಜೆಪಿ ಸಂಸದ ಅರುಣ್ ಗೋವಿಲ್ ಅವರು ಲೋಕಸಭೆಯಲ್ಲಿ ಕೇಳಿದ ಪ್ರಶ್ನೆಗೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಪ್ರತಿಕ್ರಿಯಿಸಿ ಮಾತನಾಡಿದರು. ಆದರೆ, ವಿಪಕ್ಷಗಳ ಸದಸ್ಯರ ಗಲಾಟೆಯು ಜೋರಾಗುತ್ತಿದ್ದಂತೆ ಲೋಕಸಭೆ ಮತ್ತು ರಾಜ್ಯ ಸಭೆಯ ಎರಡೂ ಸದನಗಳನ್ನು ದಿನದ ಮಟ್ಟಿಗೆ ಮುಂದೂಡಲಾಗಿದೆ.

ಜಿ.ಟಿ.ದೇವೇಗೌಡರಿಗೆ ಹುಟ್ಟುಹಬ್ಬ: ದಿನಸಿ ಕಿಟ್ ವಿತರಣೆ



ಮೈಸೂರಿನ ಏಕಲವ್ಯನಗರದಲ್ಲಿ ಜಿ.ಟಿ.ದೇವೇಗೌಡರ ಅಭಿಮಾನಿಗಳ ಬಳಗದಿಂದ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರಿಗೆ ಬೃಹತ್ ಸೇಬಿನ ಹಾರ ಸಮರ್ಪಿಸುವ ಮೂಲಕ ಅವರಿಗೆ ಹುಟ್ಟುಹಬ್ಬದ ಶುಭಾಶಯ ಕೋರಲಾಯಿತು. ಗ್ರಾಪಂ ಸದಸ್ಯೆ ತೇಜಸ್ವಿನಿ ಶ್ರೀಧರ್, ಜಿಟಿಡಿ ಅಭಿಮಾನಿಗಳ ಬಳಗದ ಸಂಸ್ಥಾಪಕ ನಂದನರಾಜ್, ಮುಖಂಡರಾದ ಮಲ್ಲೇಶ್, ಆನಂದ್, ಶ್ರೀನಿವಾಸ್, ಲಿಂಗರಾಜು, ಮಹದೇವಸ್ವಾಮಿ, ಸಿದ್ದರಾಜು, ನವೀನ್, ರವಿ, ಮಹೇಂದ್ರ, ಶಿವಲಿಂಗು, ಮಂಜಣ್ಣ, ಸಂತೋಷ್ ಮತ್ತಿತರರು ಹಾಜರಿದ್ದರು.



ಮೈಸೂರಿನ ಏಕಲವ್ಯನಗರದಲ್ಲಿ ಬಡವರಿಗೆ ದಿನಸಿ ಕಿಟ್‌ಗಳನ್ನು ವಿತರಿಸುವ ಮೂಲಕ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಜಿ.ಟಿ.ದೇವೇಗೌಡರು ದಿನಸಿ ಕಿಟ್‌ಗಳನ್ನು ವಿತರಣೆ ಮಾಡಿದರು. ದಲಿತ ಸಂಘರ್ಷ ಸಮಿತಿ ಸಂಚಾಲಕ ನಿಂಗರಾಜ ಮಲ್ಲಾಡಿ ಮತ್ತಿತರರು ಇದ್ದಾರೆ.

ಮೈಸೂರು, ನ.27(ಎಂಕೆ)– ಮೈಸೂರಿನ ಏಕಲವ್ಯನಗರದಲ್ಲಿ ಬಡವರಿಗೆ ದಿನಸಿ ಕಿಟ್ ವಿತರಿಸುವ ಮೂಲಕ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ ಹುಟ್ಟುಹಬ್ಬ ಆಚರಿಸಲಾಯಿತು.

ಜಿಟಿಡಿ ಅಭಿಮಾನಿ ಬಳಗ ಹಾಗೂ ದಲಿತ ಸಂಘರ್ಷ ಸಮಿತಿ ಸಂಚಾಲಕ ನಿಂಗರಾಜ ಮಲ್ಲಾಡಿ ನೇತೃತ್ವದಲ್ಲಿ ಬಡ ಕುಟುಂಬಗಳಿಗೆ ದಿನಸಿ ಕಿಟ್ ವಿತರಿಸಿ ಹುಟ್ಟುಹಬ್ಬ ಆಚರಿಸಲಾಯಿತು. ಇದೇ ವೇಳೆ ಬೃಹತ್ ಸೇಬಿನ ಹಾರ ಹಾಕಿ ಅಭಿಮಾನ ತೋರಲಾಯಿತು. ಗ್ರಾಪಂ ಸದಸ್ಯೆ ತೇಜಸ್ವಿನಿ ಶ್ರೀಧರ್, ಜಿಟಿಡಿ ಅಭಿಮಾನಿಗಳ ಬಳಗದ ಸಂಸ್ಥಾಪಕ ನಂದನರಾಜ್, ಮುಖಂಡರಾದ ಮಲ್ಲೇಶ್, ಆನಂದ್, ಶ್ರೀನಿವಾಸ್, ಲಿಂಗರಾಜು, ಮಹದೇವಸ್ವಾಮಿ, ಸಿದ್ದರಾಜು,ನವೀನ್, ರವಿ, ಮಹೇಂದ್ರ, ಶಿವಲಿಂಗು, ಮಂಜಣ್ಣ, ಸಂತೋಷ್ ಮತ್ತಿತರರಿದ್ದರು.

ನ.30, ಕನ್ನಡಾಂಬೆ ರತ್ನ ಪ್ರಶಸ್ತಿ ಪ್ರದಾನ

ಮೈಸೂರು,ನ.27(ಜಿಎ)–ಮೈಸೂರಿನ ಕನ್ನಡಾಂಬೆ ರಕ್ಷಣಾ ವೇದಿಕೆ ವತಿಯಿಂದ ಕನ್ನಡಾಂಬೆ ಹಬ್ಬ ಪ್ರಯುಕ್ತ ಕನ್ನಡಾಂಬೆ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ನ.30ರಂದು ಸಂಜೆ 4 ಗಂಟೆಗೆ ಹೂಟಗಳ್ಳಿ ಬಡಾವಣೆಯ ಸಂತೆಮಾಳ ಮೈದಾನದಲ್ಲಿ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಬಿ.ಬಿ.ರಾಜಶೇಖರ್ ಈ ವಿಷಯ ತಿಳಿಸಿ, ಕಾರ್ಯಕ್ರಮದಲ್ಲಿ ಬಸವಜಯ ಮೃತ್ಯುಂಜಯ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಅರ್ಜುನ್ ಅವಧೂತ ಗುರೂಜಿ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಶಾಸಕ ವಿನಯ್ ಕುಲಕರ್ಣಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಶಾಸಕ ಜಿ.ಟಿ.ದೇವೇಗೌಡ ಅಧ್ಯಕ್ಷತೆ ವಹಿಸಲಿದ್ದಾರೆ. ಬಳಿಕ ಹಾಸ್ಯ ಕಲಾವಿದರಿಂದ ಮನರಂಜನೆ ಕಾರ್ಯಕ್ರಮ ಇರಲಿದೆ. ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವವರನ್ನು ಅಭಿನಂದಿಸಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ನಂಜುಂಡ, ಶಿವಕುಮಾರ್, ಮಂಜುಳಾ ಉಪಸ್ಥಿತರಿದ್ದರು.

ಬಿಎಸ್‌ಎನ್‌ಎಲ್ ಕಚೇರಿಯಲ್ಲಿ ಕನ್ನಡ ರಾಜ್ಯೋತ್ಸವ



ಟಿ.ಕೆ ಲೇಔಟ್‌ನಲ್ಲಿರುವ ಬಿಎಸ್‌ಎನ್‌ಎಲ್ ರೀಜನಲ್ ಟೆಲಿಕಾಂ ತರಬೇತಿ ಕೇಂದ್ರದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಮೈಸೂರು,ನ.27–ಮೈಸೂರು, ಮಂಡ್ಯ, ಕೊಡಗು ಮತ್ತು ಚಾಮರಾಜನಗರ ಜಿಲ್ಲೆಗಳ ಬಿಎಸ್‌ಎನ್‌ಎಲ್ ಸಿಬ್ಬಂದಿ ಮತ್ತು ಫ್ರಾಂಚೈಸಿಗಳು ತಮ್ಮ ಕುಟುಂಬದೊಂದಿಗೆ 69ನೇ ಕನ್ನಡ ರಾಜ್ಯೋತ್ಸವವನ್ನು ಟಿ.ಕೆ.ಲೇಔಟ್‌ನಲ್ಲಿರುವ ಬಿಎಸ್‌ಎನ್‌ಎಲ್ ರೀಜನಲ್ ಟೆಲಿಕಾಂ ತರಬೇತಿ ಕೇಂದ್ರದಲ್ಲಿ ಸಡಗರದಿಂದ ಆಚರಿಸಿದರು.

ಮುಖ್ಯ ಅತಿಥಿಗಳನ್ನು ಡೊಳ್ಳು–ಕುಣಿತದೊಂದಿಗೆ ಸ್ವಾಗತಿಸುವುದರೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಧ್ವಜಾರೋಹಣವನ್ನು ನಟನಾ ರಂಗಶಾಲೆ ಪ್ರಾಂಶುಪಾಲರಾದ ಮೇಘಾ ಸಮೀರ ಮತ್ತು ಸಹಾಯಕ ಪೊಲೀಸ್ ಆಯುಕ್ತ ಎಸ್.ಎನ್.ಸಂದೇಶ್‌ಕುಮಾರ್ ನೆರವೇರಿಸಿದರು. ಬಿಎಸ್‌ಎನ್‌ಎಲ್ ಉಪ ಪ್ರಧಾನ ವ್ಯವಸ್ಥಾಪಕ ಎಂ. ರವಿಶಂಕರ್ ಅತಿಥಿಗಳನ್ನು ಸ್ವಾಗತಿಸಿದರು. ಜನರಲ್ ಮ್ಯಾನೇಜರ್ ರಾಜೇಂದ್ರಕುಮಾರ್ ಸಿಂಗ್ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ನಟನ ರಂಗಶಾಲೆ ಪ್ರಾಂಶುಪಾಲ ಮೇಘಾ ಸಮೀರ ಮಾತನಾಡಿ, ಕನ್ನಡ ಭಾಷೆಯ ವೈಭವವನ್ನು ಆಳವಾಗಿ ಸಾರಿದರು. ಎಸ್.ಎನ್.ಸಂದೇಶ್ ಕುಮಾರ್ ಅವರು ಕರ್ನಾಟಕದ ಸಂಸ್ಕೃತಿಗೆ ಅದ್ಭುತವಾದ ಒಳನೋಟವನ್ನು ನೀಡಿದರು. ಬಿಎಸ್‌ಎನ್‌ಎಲ್ ಸಿಬ್ಬಂದಿ, ಫ್ರಾಂಚೈಸಿಗಳು ಮತ್ತು ಅವರ ಕುಟುಂಬಗಳು ಹಲವಾರು ಸಾಂಸ್ಕೃತಿಕ ಚಟುವಟಿಕೆಗಳನ್ನು ಪ್ರಸ್ತುತಪಡಿಸಿದರು. ಬಿಎಸ್‌ಎನ್‌ಎಲ್ ಸಿಬ್ಬಂದಿ ಮತ್ತು ಫ್ರಾಂಚೈಸಿಗಳಿಗೆ ನಡೆದ ಕನ್ನಡ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು. 2023–24ನೇ ಸಾಲಿನ ಎಲ್ಲಾ ಸ್ಟ್ರೀಮ್‌ಗಳಲ್ಲಿ ಅಗ್ರ ಎರಡು ಫ್ರಾಂಚೈಸಿಗಳನ್ನು ಗುರುತಿಸಿ ಗೌರವಿಸಲಾಯಿತು. ರಾಷ್ಟ್ರ ಮಟ್ಟದ ಬಿಎಸ್‌ಎನ್‌ಎಲ್ ಕ್ರೀಡಾಕೂಟದಲ್ಲಿ ವಿಜೇತರಾದವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

'ಮೈಬಿಲ್ಡ್–24' ಕಟ್ಟಡ ಸಾಮಗ್ರಿ ವಸ್ತುಪ್ರದರ್ಶನ

ಮೈಸೂರು, ನ.27(ಎಸ್‌ಪಿಎನ್)– ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಮತ್ತು ಮೈಸೂರು ಬಿಲ್ಡರ್ಸ್ ಚಾರಿಟಬಲ್ ಟ್ರಸ್ಟ್ ವತಿಯಿಂದ ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ ಡಿ.12ರಿಂದ 16ರವರೆಗೆ ನಡೆಯುವ 'ಮೈಬಿಲ್ಡ್–24' ಬೃಹತ್ ಕಟ್ಟಡ ಸಾಮಗ್ರಿ ವಸ್ತುಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ಈ ಪ್ರದರ್ಶನದಲ್ಲಿ ವಿದ್ಯಾರ್ಥಿಗಳಿಗೆ 'ವಾಯ್ಸ್ ಆಫ್ ಮೈಬಿಲ್ಡ್' ಗಾಯನ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಇದರ ಸೆಮಿಫೈನಲ್ ಡಿ.13ರಂದು ಸಂಜೆ 6ಕ್ಕೆ ನಡೆಯಲಿದೆ. 15ರಂದು ಸಂಜೆ 6ಕ್ಕೆ ಅಂತಿಮ ಸುತ್ತು(ಫೈನಲ್ಸ್) ನಡೆಯಲಿದೆ. ಈ ಸ್ಪರ್ಧೆಯಲ್ಲಿ ಮೂರು ನಗದು ಬಹುಮಾನ ನಿಗದಿಪಡಿಸಿದ್ದು, ಜೊತೆಗೆ ಸಮಾಧಾನಕರ ಬಹುಮಾನ ಇರಲಿದೆ ಎಂದು ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಮೈಸೂರು ಘಟಕ ಪ್ರಕಟಣೆಯಲ್ಲಿ ತಿಳಿಸಿದೆ. ಈ ಸ್ಪರ್ಧೆಯ ಆಡಿಷನ್ ಡಿ.1ರಂದು ಮೈಸೂರು ಬಿಲ್ಡರ್ಸ್ ಚಾರಿಟಬಲ್ ಟ್ರಸ್ಟ್‌ನ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಕಚೇರಿ ವಿಳಾಸ: ನಂ.34/ಡಿ, ಅಕ್ಕಮಹಾದೇವಿ ರಸ್ತೆ, ಎರಡನೇ ಹಂತ, ಇಂಡಸ್ಟ್ರಿಯಲ್ ಸಬರ್ಬ್, ಮೈಸೂರು–570008. ಅಲ್ಲದೆ ಸ್ಪರ್ಧಿಗಳು ತಮ್ಮ ಹೆಸರನ್ನು ಸ್ಥಳದಲ್ಲಿಯೇ ನೋಂದಾಯಿಸಲು ಅವಕಾಶವಿದೆ. ಆಸಕ್ತಿಯುಳ್ಳವರು ಸಾಂಸ್ಕೃತಿಕ ಸಮಿತಿ ಸಂಯೋಜಕ ವಿ.ಗುರುದತ್ (98451–82053), ರಾಜೇಶ್ ದರೇರ –(90360–19604), ವಿಜಯ ಅಶ್ವಿನ್ (98443–38548) ಅವರನ್ನು ಸಂಪರ್ಕಿಸಬಹುದು.

ಮೈಸೂರು ಪೂರ್ವ ವಲಯ ಬಡಾವಣೆಗಳಿಗೆ ಮೂಲ ಸೌಲಭ್ಯಕ್ಕೆ ಆಗ್ರಹ

ಮೈಸೂರು,ನ.27(ಎಂಟಿವೈ)– ಮೈಸೂರು–ತಿ.ನರಸೀಪುರ ರಸ್ತೆಗೆ ಹೊಂದಿಕೊಂಡಂತೆ ಇರುವ ಮೈಸೂರು ಪೂರ್ವ ವಲಯ ಬಡಾವಣೆಗಳು ಮೂಲ ಸೌಲಭ್ಯ, ಭದ್ರತೆ ಕೊರತೆ ಎದುರಿಸುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಜಿಲ್ಲಾ ಮಂತ್ರಿ ಡಾ.ಹೆಚ್.ಸಿ.ಮಹದೇವಪ್ಪ ಪೂರ್ವ ವಲಯ ಬಡಾವಣೆಗಳ ನಿವಾಸಿಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಒದಗಿಸುವಂತೆ ಪೂರ್ವ ವಲಯ ಬಡಾವಣೆಗಳ ಒಕ್ಕೂಟದ ಅಧ್ಯಕ್ಷ ಎ.ಎಂ.ಬಾಬು ಮನವಿ ಮಾಡಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಹಲವು ವರ್ಷಗಳ ಹಿಂದೆಯೇ ನಿರ್ಮಾಣವಾಗಿರುವ ಪೂರ್ವ ವಲಯಗಳ ಬಡಾವಣೆಗಳು ಮೂಲ ಸೌಲಭ್ಯದಿಂದ ವಂಚಿತವಾಗಿವೆ. ಈ ಬಡಾವಣೆಗಳಿಗೆ ಭದ್ರತೆಯೇ ಇಲ್ಲದಂತಾಗಿದ್ದು, ಕಳ್ಳ–ಕಾಕರ ಹಾವಳಿ ಮಿತಿ ಮೀರಿದೆ. ಬಡಾವಣೆಯ ರಸ್ತೆಗಳಲ್ಲೇ ಮದ್ಯ ಸೇವನೆ ಮಾಡುವ ಪರಿಪಾಠ ಹೊಂದಿದ್ದು, ಇದರಿಂದ ಸ್ಥಳೀಯರಿಗೆ ತೊಂದರೆಯಾಗುತ್ತಿದೆ ಎಂದು ವಿಷಾದಿಸಿದರು.

ಈ ಬಡಾವಣೆ ನಿವಾಸಿಗಳಿಗೆ ಗಡಸು ನೀರು ಪೂರೈಸಲಾಗುತ್ತಿದೆ. ಹೀಗಾಗಿ ಅಮೃತ್ ಯೋಜನೆ ಹಾಗೂ ಜಲ ಜೀವನ್ ಮಿಷನ್ ಸೌಲಭ್ಯ ಕಲ್ಪಿಸಬೇಕು. ಒಳಚರಂಡಿ ವ್ಯವಸ್ಥೆ ಸಮರ್ಪಕಗೊಳಿಸಬೇಕು. ಸರ್ಕಾರಿ ಶಾಲೆ, ಅಂಚೆ ಕಚೇರಿ, ಆಸ್ಪತ್ರೆ, ಆಟದ ಮೈದಾನ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು. ಬೃಹತ್ ಮೈಸೂರಿಗೆ ಈ ಬಡಾವಣೆಗಳ ಸೇರ್ಪಡೆ ಮಾಡಬೇಕು. ಹೊರವರ್ತುಲ ರಸ್ತೆಯಲ್ಲಿ ವಾಹನ ದಟ್ಟಣೆ ಹೆಚ್ಚಾಗಿದ್ದು, ಅಪಘಾತ ಸಂಭವಿಸುತ್ತಿವೆ. ಇದನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕು, ನಿರ್ಜನ ಪ್ರದೇಶಗಳಲ್ಲಿ ಮದ್ಯವ್ಯಸನಿಗಳು ಮದ್ಯ ಸೇವಿಸಿ ಕಿರಿಕಿರಿಯುಂಟು ಮಾಡುತ್ತಿದ್ದಾರೆ. ಮಾದಕ ವಸ್ತುಗಳ ಮಾರಾಟವೂ ಇಲ್ಲಿ ನಡೆದಿದೆ. ಹೀಗಾಗಿ ಇವುಗಳಿಗೆ ಕಡಿವಾಣ ಹಾಕಬೇಕು ಎಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಪೂರ್ವ ವಲಯ ಬಡಾವಣೆಗಳ ಒಕ್ಕೂಟದ ಕಾರ್ಯದರ್ಶಿ ಆರ್.ನರಸಿಂಹಯ್ಯ, ಸಿದ್ದು, ಶಿವಕುಮಾರಸ್ವಾಮಿ, ಡಿ.ಆರ್. ಜಯಸ್ವಾಮಿ, ಸಿದ್ದರಾಜೇಗೌಡ, ಬೊಮ್ಮೇಗೌಡ, ಶಿವಣ್ಣ, ಥಾಮಸ್ ಉಪಸ್ಥಿತರಿದ್ದರು.

ಸುಣ್ಣದಕೇರಿಯಲ್ಲಿ ಶ್ರೀ ಮಹದೇಶ್ವರ ಸ್ವಾಮಿ ರಥೋತ್ಸವ...



ಮೈಸೂರಿನ ಸುಣ್ಣದಕೇರಿಯಲ್ಲಿ ಕಡೆ ಕಾರ್ತಿಕ ಸೋಮವಾರದಂದು ಶ್ರೀ ಮಹದೇಶ್ವರ ಸ್ವಾಮಿ ರಥೋತ್ಸವ ಹಾಗೂ ಕೊಂಡೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಈ ವೇಳೆ ಹೆಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು, ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜು, ಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ, ಮುಖಂಡರಾದ ಸತೀಶ್, ಸಿದ್ದಪ್ಪ ಇತರರಿದ್ದರು.

ಗರ್ಭಿಣಿ ಪತ್ನಿಯ ಮೇಲೆ ಅನುಮಾನಗೊಂಡು ಆಕೆಯೂ ಸೇರಿದಂತೆ ತಾಯಿ, ಇಬ್ಬರು ಮಕ್ಕಳ ಕೊಂದ ಹಂತಕನಿಗೆ ಗಲ್ಲುಶಿಕ್ಷೆ

ಮೈಸೂರು, ನ.27(ಎಂಕೆ)– ಪತ್ನಿ ಮೇಲೆ ಅನುಮಾನಗೊಂಡು ಆಕೆಯೂ ಸೇರಿದಂತೆ ತನ್ನ ತಾಯಿ, ಮಕ್ಕಳನ್ನು ಹತ್ಯೆಗೈದ ಆರೋಪಿಗೆ ಮೈಸೂರಿನ 5ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು ಮರಣದಂಡನೆ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ. ಸರಗೂರು ತಾಲೂಕು ಚಾಮೇಗೌಡನಹುಂಡಿ ಗ್ರಾಮದ ಮಣಿಕಂಠಸ್ವಾಮಿ ಮರಣದಂಡನೆಗೆ ಗುರಿಯಾದ ಆರೋಪಿ. 8 ವರ್ಷದ ಹಿಂದೆ ಹೆಗ್ಗನೂರು ಗ್ರಾಮದ ದೇವಮ್ಮ ಎಂಬುವರ ಪುತ್ರಿ ಗಂಗೆ ಎಂಬಾಕೆಯನ್ನು ವಿವಾಹವಾಗಿದ್ದ ಈತನಿಗೆ 4 ವರ್ಷದ ಸಾಮ್ರಾಟ್ ಮತ್ತು ಒಂದೂವರೆ ವರ್ಷದ ರೋಹಿತ್ ಎಂಬ ಇಬ್ಬರು ಮಕ್ಕಳಿದ್ದು, ಕೊಲೆಯಾಗುವ ವೇಳೆ ಈತನ ಪತ್ನಿ 9 ತಿಂಗಳ ಗರ್ಭಿಣಿಯಾಗಿದ್ದಳು.

ದೈಹಿಕವಾಗಿ ಅಂಗವಿಕಲನಾಗಿದ್ದು, ಟೈಲರಿಂಗ್ ಕೆಲಸ ಮಾಡಿಕೊಂಡಿದ್ದ ಮಣಿಕಂಠಸ್ವಾಮಿ, ತನ್ನ ಸಹೋದರ ರಮೇಶ ಹಾಗಾಗ ತನ್ನ ಮನೆಗೆ ಬಂದು ಅತ್ತಿಗೆ ಗಂಗೆ ಜೊತೆ ಮಾತನಾಡುತ್ತಿದ್ದರಿಂದ ಅನುಮಾನಗೊಂಡು ಗಲಾಟೆ ಮಾಡುತ್ತಿದ್ದ. ಇದರಿಂದ ಮನನೊಂದು ತವರು ಮನೆ ಸೇರಿದ್ದ ಗಂಗೆಯನ್ನು ಗ್ರಾಮಸ್ಥರೊಂದಿಗೆ ನ್ಯಾಯ ಪಂಚಾಯ್ತಿ ಮಾಡಿಸಿ ಮನೆಗೆ ವಾಪಸ್ ಕರೆದುಕೊಂಡು ಬರಲಾಗಿತ್ತು. 2021ರ ಏ.26ರಂದು ಗಂಗೆಯನ್ನು ಹೆರಿಗೆಗೆಂದು ಕರೆದುಕೊಂಡು ಹೋಗಲು ಬಂದಿದ್ದ ಆಕೆಯ ತವರು ಮನೆಯವರೊಂದಿಗೆ ಜಗಳ ಮಾಡಿದ ಮಣಿಕಂಠಸ್ವಾಮಿ, ಏ.28 ರಂದು ಈ ಮಕ್ಕಳು ನನಗೆ ಹುಟ್ಟಿಲ್ಲವೆಂದು ಗಲಾಟೆ ಮಾಡಿದ್ದಾನೆ. ಜಗಳ ಬಿಡಿಸಿ ಸಮಾಧಾನ ಮಾಡಲು ಬಂದ ತನ್ನ ತಾಯಿ ಕೆಂಪಾಜಮ್ಮಳ ಜೊತೆಗೂ ಗಲಾಟೆ ಮಾಡಿದ್ದಾನೆ.

ಇಷ್ಟಕ್ಕೆ ಸುಮ್ಮನಾಗದ ಮಣಿಕಂಠಸ್ವಾಮಿ, ಅದೇ ದಿನ ರಾತ್ರಿ ಎಲ್ಲರೂ ಮಲಗಿದ್ದ ವೇಳೆ ತಾನು ನಡೆದಾಡಲು ಬಳಸುವ ಕಬ್ಬಿಣದ ಗುಜ್ಜಿ(ಊರುಗೋಲು)ನಿಂದ 9 ತಿಂಗಳ ಗರ್ಭಿಣಿಯಾದ ತನ್ನ ಹೆಂಡತಿ ಗಂಗೆ, ತಾಯಿ ಕೆಂಪಾಜಮ್ಮ ಹಾಗೂ ತನ್ನ ಮಗ ಸಾಮ್ರಾಟ್‌ನ ತಲೆ ಮತ್ತು ಮುಖಕ್ಕೆ ಹೊಡೆದು ಸಾಯಿಸಿದ್ದಾನೆ. ಅಲ್ಲದೆ ತನ್ನ ಒಂದೂವರೆ ವರ್ಷದ ಮತ್ತೊಬ್ಬ ಮಗ ರೋಹಿತ್ ಕುತ್ತಿಗೆ ಹಿಸುಕಿ ಕೊಂದು ಪರಾರಿಯಾಗಿದ್ದ. ಗಂಗೆಯ ತವರು ಮನೆಯವರು ನೀಡಿದ ದೂರನ್ನು ಆಧರಿಸಿ ಸರಗೂರು ಪೊಲೀಸರು ಪ್ರಕರಣ ದಾಖಲಿಸಿದ್ದರು. ಹೆಚ್.ಡಿ.ಕೋಟೆಯ ಸರ್ಕಲ್ ಇನ್‌ಸ್ಪೆಕ್ಟರ್ ಎನ್.ಆನಂದ್ ಪ್ರಕರಣದ ತನಿಖೆ ನಡೆಸಿ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಧೀಶರಾದ ಗುರುರಾಜ್ ಸೋಮ ಕ್ಕಲವರ್, ಆರೋಪ ಸಾಬೀತಾದ್ದರಿಂದ ಮರಣದಂಡನೆ ಹಾಗೂ 10 ಸಾವಿರ ದಂಡ ವಿಧಿಸಿದ್ದಾರೆ. ಸರ್ಕಾರದ ಪರವಾಗಿ ಬಿ.ಇ.ಯೋಗೇಶ್ವರ್ ವಾದಿಸಿದ್ದರು.

ಓಶೋಕಾಯ್ ಮಾರ್ಷಲ್ ಆರ್ಟ್ಸ್‌ಗೆ ಚಿನ್ನದ ಪದಕ



ಓಶೋಕಾಯ್ ಮಾರ್ಷಲ್ ಆರ್ಟ್ಸ್ ಕಾಲೇಜಿನ ತಂಡ ಕಲ್ಲಿಕೋಟೆಯಲ್ಲಿ ನಡೆದ ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಪಂದ್ಯಾವಳಿಯಲ್ಲಿ ಬಹುಮಾನ ಪಡೆದಿದೆ.

ಮೈಸೂರು, ನ. 27– ಮೈಸೂರಿನ ಓಶೋಕಾಯ್ ಮಾರ್ಷಲ್ ಆರ್ಟ್ಸ್ ಕಾಲೇಜಿನ ತಂಡವು ಇತ್ತೀಚೆಗೆ ಕೇರಳದ ಕಲ್ಲಿಕೋಟೆಯಲ್ಲಿ ನಡೆದ ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಪಂದ್ಯಾವಳಿಯಲ್ಲಿ 3 ಚಿನ್ನ, 1 ಬೆಳ್ಳಿ, 3 ಕಂಚಿನ ಪದಕಗಳನ್ನು ಪಡೆದಿದೆ. ಪ್ರೊ ಕಿಕ್ ಬಾಕ್ಸಿಂಗ್‌ನಲ್ಲಿ ದ್ವಿತೀಯ ಬಹುಮಾನ ಪಡೆದಿದ್ದಾರೆ. ಬಾಲಕಿಯರ ವಿಭಾಗದಲ್ಲಿ ಮಿಥಿಲಾ (ಪ್ರಥಮ), ಎನ್. ದೀಪಿಕಾ (ತೃತೀಯ); ಬಾಲಕರ ವಿಭಾಗದಲ್ಲಿ ಎನ್.ಸಂತೋಷ್ ಕುಮಾರ್, ರವಿಕುಮಾರ್ ರೋಹಿಲ್ಲಾ (ಪ್ರಥಮ), ಆರ್.ಶಶಾಂಕ್ (ದ್ವಿತೀಯ), ಕರ್ಣ್, ಎಚ್.ಸಿ. ತೇಜಸ್ (ತೃತೀಯ), ಪ್ರೊ ಕಿಕ್ ಬಾಕ್ಸಿಂಗ್‌ನಲ್ಲಿ ಆರ್.ಪರಿತೋಷ್ ದ್ವಿತೀಯ ಬಹುಮಾನ ಪಡೆದು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ ಎಂದು ಕಾಲೇಜು ಪ್ರಾಂಶುಪಾಲ ಡಾ.ಕೃಷ್ಣಮೂರ್ತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಿಳೆಯರು ಕರ್ನಲ್ ಆಗಲು ಅರ್ಹರಲ್ಲ



ನವದೆಹಲಿ: ಭಾರತೀಯ ಸೇನೆಯಲ್ಲಿ ಕರ್ನಲ್ ಹುದ್ದೆಯಲ್ಲಿರುವ ಮಹಿಳಾ ಅಧಿಕಾರಿಗಳ ಕಾರ್ಯಕ್ಷಮತೆಯ ಬಗ್ಗೆ ನಿ.ಲೆಫ್ಟಿನೆಂಟ್ ಜನರಲ್ ರಾಜೀವ್ ಪುರಿ ಅಸಮಾಧಾನ ವ್ಯಕ್ತಪಡಿಸಿದ್ದು, ಅವರು ಆ ಹುದ್ದೆಗೇರಲು ಅರ್ಹರಲ್ಲ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ನ.20ರಂದು ನಿವೃತ್ತರಾದ ಪುರಿ, ಈಶಾನ್ಯ ಕಮಾಂಡ್‌ನ ಮುಖ್ಯಾಧಿಕಾರಿಗೆ ತಮ್ಮ ವಿಮರ್ಶೆಗಳನ್ನೊಳಗೊಂಡ ವರದಿ ಸಲ್ಲಿಸಿದ್ದಾರೆ. ಅದರಲ್ಲಿ ಮಹಿಳಾ ಕರ್ನಲ್‌ಗಳಲ್ಲಿ ಅಹಂ ಸಮಸ್ಯೆ ಹಾಗೂ ಸಹಾನುಭೂತಿಯ ಕೊರತೆಯಿದೆ. ಅವರಿಗೆ ನಾಯಕರಾಗಲು ತರಬೇತಿ ನೀಡಲಾಗಿಲ್ಲ. ಅವರು ಅತಿಯಾಗಿ ದೂರುವ ಪ್ರವೃತ್ತಿ ಹೊಂದಿದ್ದು, ಎಲ್ಲರೂ ತಾವು ಹೇಳಿದಂತೆ ಕೇಳಬೇಕು ಎಂದು ನಿರೀಕ್ಷಿಸುತ್ತಾರೆ. ಕಳೆದೊಂದು ವರ್ಷದಿಂದ ಮಹಿಳೆಯರು ಅಧಿಕಾರಿಗಳಾಗಿರುವ ಯೂನಿಟ್‌ಗಳಲ್ಲಿ ಹಲವಾರು ಸಮಸ್ಯೆಗಳು ಉದ್ಭವಿಸುತ್ತಿವೆ. ಕಿರಿಯರನ್ನು ಪ್ರೋತ್ಸಾಹಿಸುವ ಬದಲು ಅವಹೇಳನ ಮಾಡುತ್ತಾರೆ. ತಮ್ಮ ಸಣ್ಣ ಸಾಧನೆಗಳಿಗೂ ಪ್ರಶಂಸೆ ಬಯಸುತ್ತಾರೆ.

ಯಾವ ಭಾಷೆಯನ್ನಾದರೂ ಕಲಿಯಿರಿ; ಆದರೆ ಮಾತೃಭಾಷೆ ಕನ್ನಡಕ್ಕೆ ಆದ್ಯತೆ ನೀಡಿ

ಮೈಸೂರು ಟ್ರಾವೆಲ್ಸ್ ಅಸೋಸಿಯೇಷನ್‌ನಿಂದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಮಹನೀಯರ ಕಿವಿಮಾತು



ಮೈಸೂರು ಟ್ರಾವೆಲ್ಸ್ ಅಸೋಸಿಯೇಷನ್ ನಾದಬ್ರಹ್ಮ ಸಂಗೀತ ಸಭಾದಲ್ಲಿ ಏರ್ಪಡಿಸಿದ್ದ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸಂವಹನ ಪ್ರಕಾಶಕ ಡಿ.ಎನ್.ಲೋಕಪ್ಪ, ಆಕಾಶವಾಣಿ ಹಿರಿಯ ಉದ್ಘೋಷಕ ಪ್ರಭುಸ್ವಾಮಿ ಚ.ಮಳಿಮಠ ಅವರನ್ನು ಸನ್ಮಾನಿಸಲಾಯಿತು. ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸಮುದ್ಯತಾ ಶ್ರೋತ್ರ ಸಂಘದ ಅಧ್ಯಕ್ಷ ಕಣ್ಣೂರು ವಿ.ಗೋವಿಂದಾಚಾರಿ, ಸ್ಕಾಲ್ ಇಂಟರ್ ನ್ಯಾಷನಲ್ ಅಧ್ಯಕ್ಷ ಜಯಕುಮಾರ್, ರಾಜ್ಯೋತ್ಸವ ಸಮಿತಿ ಅಧ್ಯಕ್ಷ ಶ್ರೀನಿವಾಸ್, ಡೇವಿಡ್, ಮಂಜುನಾಥ್, ರವಿ ಇತರರಿದ್ದರು.

ಮೈಸೂರು, ನ.27–ಭಾಷೆ ಎಂಬುದು ದ್ವೇಷಿಸುವ ವಸ್ತುವಲ್ಲ, ಎಷ್ಟು ಭಾಷೆ ಬೇಕಾದರೂ ಕಲಿಯಿರಿ. ಆದರೆ ಮಾತೃಭಾಷೆಗೆ ಆದ್ಯತೆ ನೀಡಿ ಎಂದು ಮೈಸೂರು ಆಕಾಶವಾಣಿ ಹಿರಿಯ ಉದ್ಘೋಷಕ ಪ್ರಭುಸ್ವಾಮಿ ಮಳಿಮಠ ಕರೆ ನೀಡಿದರು.

ಮೈಸೂರು ಟ್ರಾವೆಲ್ಸ್ ಅಸೋಸಿಯೇಷನ್ ಜೆಎಲ್‌ಬಿ ರಸ್ತೆಯ ನಾದಬ್ರಹ್ಮ ಸಂಗೀತ ಸಭಾದಲ್ಲಿ ಏರ್ಪಡಿಸಿದ್ದ ಕನ್ನಡ ರಾಜ್ಯೋತ್ಸವದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಕನ್ನಡದ ಜೊತೆಗೆ ಇಂಗ್ಲಿಷ್, ಹಿಂದಿ ಸೇರಿದಂತೆ ಎಷ್ಟು ಬೇಕಾದರೂ ಭಾಷೆ ಕಲಿಯಿರಿ. ಆದರೆ ಮಾತೃಭಾಷೆಯನ್ನು ಪ್ರೀತಿಸಿ ಎಂದರು.

ಪ್ರಾಥಮಿಕ ಶಿಕ್ಷಣವನ್ನು ಮಾತೃಭಾಷೆಯಲ್ಲಿ ಕಲಿಯುವ ಮಕ್ಕಳು ಹೆಚ್ಚು ಬುದ್ಧಿಮತ್ತೆ ಹೊಂದಿರುತ್ತಾರೆ. ಆದ್ದರಿಂದ ಮನೆಯಿಂದಲೇ ಮಾತೃಭಾಷೆ ಕಲಿಸುವ ಕೆಲಸ ಆಗಬೇಕು ಎಂದರು.

ಯಾವುದೇ ವಸ್ತುವಾದರೂ ಬಳಸದಿದ್ದರೆ ಹಾಳಾಗುತ್ತದೆ. ಆದ್ದರಿಂದ ಕನ್ನಡ ಭಾಷೆಯನ್ನು ಬಳಸಿ. ಸಂವಹನಕ್ಕೆ ಭಾಷೆ ಬೇಕು. ಅದನ್ನು ಬಳಸಬೇಕಾದರೆ ಅಧ್ಯಯನ ಕೂಡ ಮುಖ್ಯವಾಗುತ್ತದೆ. ಸಾಹಿತ್ಯ ಕೃತಿಗಳನ್ನು ಓದುವ ಮೂಲಕ ಜಗತ್ತನ್ನು ಅರಿಯಿರಿ ಎಂದು ಹೇಳಿದರು.

ಮತ್ತೊರ್ವ ಸನ್ಮಾನಿತರಾದ ಸಂವಹನ ಪ್ರಕಾಶನದ ಡಿ.ಎನ್. ಲೋಕಪ್ಪ ಮಾತನಾಡಿ, ಕನ್ನಡಕ್ಕಾಗಿ ಕೈ ಎತ್ತು ನಿನ್ನ ಕೈ ಕಲ್ಪವೃಕ್ಷವಾಗುತ್ತದೆ ಎಂದು ಕುವೆಂಪು ಹೇಳಿದ್ದರು. ಆದರೆ ಏಕೀಕರಣವಾಗಿ ಇಷ್ಟು ವರ್ಷಗಳಾದರೂ ಇನ್ನೂ ಕರ್ನಾಟಕದ ಗಡಿ, ಜಲ, ನೆಲ, ಭಾಷೆ ಮತ್ತಿತರ ಸಮಸ್ಯೆಗಳು ಬಗೆಹರಿದಿಲ್ಲ ಎಂದು ವಿಷಾದಿಸಿದರು.

ಪ್ರತಿಯೊಬ್ಬರೂ ಕನ್ನಡದ ಬಗ್ಗೆ ಅಭಿಮಾನ ಬೆಳೆಸಿಕೊಳ್ಳಬೇಕು. ಕನ್ನಡ ಪುಸ್ತಕ ಹಾಗೂ ಪತ್ರಿಕೆಗಳನ್ನು ಓದಬೇಕು. ಎಲ್ಲರ ಮನೆಯಲ್ಲೂ ಒಂದು ಪುಟ್ಟದಾದ ಗ್ರಂಥಾಲಯ ಇರಬೇಕು ಎಂದರು.

ಮೈಸೂರು ಆಕಾಶವಾಣಿ ಕೇಳುಗರ ಬಳಗವಾದ ಸಮುದ್ಯತಾ ಶ್ರೋತ್ರು ಸಂಘದ ಅಧ್ಯಕ್ಷ ಕಣ್ಣೂರು ವಿ. ಗೋವಿಂದಾಚಾರಿ ಮಾತನಾಡಿ, ವಾಹನಗಳ ಮೇಲೆ ಕನ್ನಡದಲ್ಲಿ ಘೋಷವಾಕ್ಯ ಬರೆಸಿ ಎಂದರು.

ಕನ್ನಡ ರಾಜ್ಯೋತ್ಸವ ಸಮಿತಿ ಅಧ್ಯಕ್ಷ ಸಿ.ಎಸ್.ಶ್ರೀನಿವಾಸ್ ಸ್ವಾಗತಿಸಿ, ಪ್ರಾಸ್ತಾವಿಕ ಭಾಷಣ ಮಾಡಿದರು. ಸ್ಕಾಲ್ ಇಂಟರ್ ನ್ಯಾಷನಲ್ ಅಧ್ಯಕ್ಷ ಸಿ.ಟಿ. ಜಯಕುಮಾರ್ ವಂದಿಸಿದರು. ಸನ್ಮಾನಿತರನ್ನು ಕಾರ್ಯದರ್ಶಿ ಮಂಜುನಾಥ್, ಎ.ಸಿ.ರವಿ ಪರಿಚಯಿಸಿದರು. ಅನಿತಾ ಡೇವಿಡ್ ಪ್ರಾರ್ಥಿಸಿದರು. ಧಾತ್ರಿ ಭಾರದ್ವಾಜ್ ನಿರೂಪಿಸಿದರು. ನಂತರ ಕನ್ನಡ ಗೀತೆಗಳ ಗಾಯನ ನಡೆಯಿತು.

ನಾಳೆ ನಿರ್ದೇಶಕರ ಸ್ಥಾನದ ಚುನಾವಣೆ

ಮೈಸೂರು,ನ.27–ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಮೈಸೂರು ಜಿಲ್ಲಾ ಶಾಖೆಯ ಅವಧಿ ಕಾರ್ಯಕಾರಿ ಸಮಿತಿಯ ನಿರ್ದೇಶಕರ ಆಯ್ಕೆಗಾಗಿ ನ.16ರಂದು ಚುನಾವಣೆಯನ್ನು ನಡೆಸಲಾಯಿತು. ಆದರೆ, ಮತ ಕ್ಷೇತ್ರದ ಸಂಖ್ಯೆ: 13ರ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ ಅಡಿಯಲ್ಲಿ ಬರುವ ಉಳಿದ ಸಿಬ್ಬಂದಿ–(01) ವಿಭಾಗದಲ್ಲಿ ನಾಮಪತ್ರ ಸಲ್ಲಿಸಿದ್ದ ಅಭ್ಯರ್ಥಿಯ ನಾಮಪತ್ರವನ್ನು ನಿಯಮಾರೀತ್ಯ ತಿರಸ್ಕರಿಸಲಾಯಿತು. ಇದರ ವಿರುದ್ಧ ಅಭ್ಯರ್ಥಿಯೊಬ್ಬರು ಆ ಕ್ಷೇತ್ರದ ಚುನಾವಣೆಯನ್ನು ಸ್ಥಗಿತಗೊಳಿಸುವಂತೆ ಮನವಿ ಸಲ್ಲಿಸಿದ್ದ ಹಿನ್ನೆಲೆಯಲ್ಲಿ ಚುನಾವಣೆಯನ್ನು ತಡೆ ಹಿಡಿಯಲಾಗಿತ್ತು.

ನ.27 ರಂದು ನ್ಯಾಯಾಲಯವು ಸದರಿ ಅಭ್ಯರ್ಥಿಯ ಅರ್ಜಿಯನ್ನು ವಜಾಗೊಳಿಸಿದ ಹಿನ್ನೆಲೆಯಲ್ಲಿ, ಈ ಚುನಾವಣೆಯನ್ನು ನ.29ರಂದು ಬೆಳಗ್ಗೆ 9 ರಿಂದ 4 ಗಂಟೆಯವರೆಗೆ ಧನ್ವಂತ್ರಿ ರಸ್ತೆಯ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಟ್ಟಡದಲ್ಲಿ ನಡೆಸಲಾಗುವುದು ಎಂದು ಜಿಲ್ಲಾ ಶಾಖೆಯ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ(ರಿ) ಚುನಾವಣಾಧಿಕಾರಿ ಡಾ.ಹೊನ್ನಯ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಮಿತ್ರ ಗುರುವಾರ 28 ನವೆಂಬರ್ 2024

ಕನ್ನಡದಲ್ಲಿ ಶಿಕ್ಷಣ ಪಡೆಯುವವರ ಸಂಖ್ಯೆ ಕ್ಷೀಣ

ಸಿದ್ದಗಂಗಾ ಮಠದ ಪೀಠಾಧ್ಯಕ್ಷ ಶ್ರೀ ಸಿದ್ದಲಿಂಗ ಮಹಾ ಸ್ವಾಮಿಗಳು ಆತಂಕ

ಪಾಂಡವಪುರ: ಕರ್ನಾಟಕದಲ್ಲಿ ಕನ್ನಡ ಭಾಷೆಯನ್ನು ಉಳಿಸುವುದಕ್ಕಾಗಿ ಹೋರಾಟ ಮಾಡುವ ಸ್ಥಿತಿ ನಿರ್ಮಾಣವಾಗಿದೆ, ಕನ್ನಡ ಮಾಧ್ಯಮ ಶಾಲೆಗಳು, ಕನ್ನಡ ಓದುವ ಮಕ್ಕಳ ಸಂಖ್ಯೆ ದಿನೇದಿನೆ ಕ್ಷೀಣಿಸುತ್ತಿವೆ ಎಂದು ಸಿದ್ದಗಂಗಾ ಮಠದ ಪೀಠಾಧ್ಯಕ್ಷರಾದ ಶ್ರೀಸಿದ್ದಲಿಂಗಮಹಾಸ್ವಾಮೀಜಿಗಳು ಆತಂಕ ವ್ಯಕ್ತಪಡಿಸಿದರು.

ಪಟ್ಟಣದ ಕೃಷ್ಣಾನಗರ 3ನೇ ಹಂತದ ಶ್ರೀಬಾಲ ಶನೇಶ್ವರಸ್ವಾಮಿ ಭಕ್ತಮಂಡಳಿ ಆಯೋಜಿಸಿದ್ದ ಕಾರ್ತಿಕ ಮಾಸದ ಲಕ್ಷ ದೀಪೋತ್ಸವ, ಕನ್ನಡ ರಾಜ್ಯೋತ್ಸವ, ಸಿದ್ದಗಂಗಾ ಶ್ರೀಗಳಿಗೆ ಗುರುವಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಗುರುವಂದನೆ ಸ್ವೀಕರಿಸಿ ಅವರು ಮಾತನಾಡಿದರು.

ಕನ್ನಡ ಭಾಷೆಯ ಬಗ್ಗೆ ಪ್ರತಿಯೊಬ್ಬರು ಅಭಿಮಾನ ಬೆಳೆಸಿಕೊಳ್ಳಬೇಕು. ನಮ್ಮ ಹೆತ್ತ ತಂದೆ-ತಾಯಿಗೆ ನೀಡುವಷ್ಟು ಗೌರವವನ್ನು ಕನ್ನಡ ಭಾಷೆಗೂ ನೀಡಬೇಕು. ಕರ್ನಾಟಕದಲ್ಲಿ ಕನ್ನಡ ಭಾಷೆಯ ಉಳಿವಿಗಾಗಿ ಹೋರಾಟ ಮಾಡುವ ಸಂದರ್ಭ ಎದುರಾಗಿರುವುದು ದುರಂತ. ಸಂವಿಧಾನದಲ್ಲಿ ಎಲ್ಲಾ ಭಾಷೆಗಳನ್ನು ಕಲಿಯಲು ಅವಕಾಶ ನೀಡಲಾಗಿದೆ ಕನ್ನಡಿಗರು ಬೇರೆ ಭಾಷೆಯ ಕಲಿಯುವ ಜತೆಗೆ ಕನ್ನಡ ಭಾಷೆಯ ಬಗ್ಗೆ ಅಭಿಮಾನ ಬೆಳೆಸಿಕೊಳ್ಳಬೇಕು. ನಾವು ಎಷ್ಟೇ ಎತ್ತರದ ಸ್ಥಾನದಲ್ಲಿ ಇದ್ದರೂ ಸಹ ಕನ್ನಡ ಭಾಷೆಯ ಮೇಲಿನ ಅಭಿಮಾನ ಕಡಿಮೆಯಾಗಬಾರದು. ಕನ್ನಡ ಮಾತನಾಡುವುದು, ಕನ್ನಡ ಪುಸ್ತಕ, ಪತ್ರಿಕೆಗಳನ್ನು ಓದುವ ಹವ್ಯಾಸ ರೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ಸಿದ್ದಗಂಗಾ ಮಠವು ಜಾತಿ-ಮತ, ಧರ್ಮ ಬೇದವಿಲ್ಲದೆ ಅನೇಕ ಸಾಮಾಜಿಕ ಕೆಲಸ ಮಾಡಿದೆ, ನಾಡಿನ ಅನೇಕ ಬಡ ಮಕ್ಕಳಿಗೆ ಅನ್ನದಾಸೋಹದ ಜತೆಗೆ ಅಕ್ಷರ ದಾಸೋಹ ನೀಡುತ್ತಿದೆ. ಮಠದಲ್ಲಿ ಶಿಕ್ಷಣ ಕಲಿತಿರುವಂತಹ ಅನೇಕ ವಿದ್ಯಾರ್ಥಿಗಳು ರಾಜ್ಯ, ರಾಷ್ಟ್ರದಲ್ಲಿ ದೊಡ್ಡ ದೊಡ್ಡ ಉನ್ನತವಾದ ಹುದ್ದೆಗಳನ್ನು ಅಲಂಕರಿಸಿ ದೇಶವನ್ನು ಕಟ್ಟುವ ಕೆಲಸ ಮಾಡುತ್ತಿರುವುದನ್ನು ನಾನು ಶಾಸಕ, ಸಚಿವ, ಸಂಸದನಾಗಿ ನೋಡಿದ್ದೇನೆ. ಇಂತಹ ಪುಣ್ಯದ ಕೆಲಸವನ್ನು ನಮ್ಮ ನಾಡಿನ ಮಠಗಳು ಮಾಡುತ್ತಿರುವುದು ನಮ್ಮೆಲ್ಲರ ಹೆಮ್ಮೆಯಾಗಿದೆ ಎಂದರು.

ಇದೇ ವೇಳೆ ಸಿದ್ದಗಂಗಾ ಮಠದ ಪೀಠಾಧ್ಯಕ್ಷರಾದ ಶ್ರೀಸಿದ್ದಲಿಂಗಮಹಾಸ್ವಾಮೀಜಿಗಳಿಗೆ ಗುರುವಂದನಾ ಕಾರ್ಯಸಕ್ರಮ ನಡೆಸಿ ಅಭಿ ನಂಧಿಸಲಾಯಿತು. ಕಾರ್ತಿಕ ಮಾಸದ ಅಂಗವಾಗಿ ಶ್ರೀಬಾಲ ಶನೇಶ್ವರಸ್ವಾಮಿ ಭಕ್ತ ಮಂಡಳಿ ವತಿಯಿಂದ ಲಕ್ಷ ದೀಪೋತ್ಸವ ಆಚರಣೆ ಮಾಡಲಾಯಿತು. ಕಾವ್ಯಸಂಗಮ ಕವಿ ಗೋಷ್ಠಿ, ಚಲನಚಿತ್ರ ನಟ-ನಟಿಯರಿಂದ ರಸಸಂಜೆ ಕಾರ್ಯಕ್ರಮ ನಡೆಯಿತು.

ಸಮಾರಂಭದಲ್ಲಿ ಬೇಬಿಬೆಟ್ಟ ಶ್ರೀರಾಮ ಯೋಗೀಶ್ವರ ಮಠದ ಪೀಠಾಧ್ಯಕ್ಷ ಶಿವ ಬಸವಮಹಾಸ್ವಾಮೀಜಿ, ಶ್ರೀಬಾಲಶನೇಶ್ವರ ಭಕ್ತಿಮಂಡಳಿ ಕಾರ್ಯದರ್ಶಿ ಡಾ.ರವಿತೇಜ, ಪುರಸಭೆ ಸದಸ್ಯ ಕೃಷ್ಣಅಣ್ಣಯ್ಯ, ತಹಶೀಲ್ದಾರ್ ಸಂತೋಷ್, ರೈತಸಂಘ ನಾಯಕಿ ಸುನೀತ ಪುಟ್ಟಣ್ಣಯ್ಯ, ಕಾಯಕ ಯೋಗಿ ಪೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್, ಕನ್ನಡ ಸೇನೆ ಜಿಲ್ಲಾಧ್ಯಕ್ಷ ಎಚ್.ಸಿ. ಮಂಜುನಾಥ್, ಲಿಂಗಾಯಕ ಮಹಾಸಭಾ ಜಿಲ್ಲಾಧ್ಯಕ್ಷ ಎಂ.ಎಸ್.ಮಂಜುನಾಥ್, ರೈತ ಮುಖಂಡ ವಿಜಯ್‌ಕುಮಾರ್, ಕನಕ ಯುವ ಬಳಗದ ಅಧ್ಯಕ್ಷ ಬೆಟ್ಟಹಳ್ಳಿ ಸ್ವಾಮೀಗೌಡ ಸೇರಿದಂತೆ ಹಲವರು ಭಾಗವಹಿಸಿದ್ದರು.



ಪಾಂಡವಪುರ ಪಟ್ಟಣದ ಕೃಷ್ಣಾನಗರದ ಶ್ರೀಬಾಲ ಶನೇಶ್ವರಸ್ವಾಮಿ ಭಕ್ತಿ ಮಂಡಳಿ ವತಿಯಿಂದ ನಡೆದ ಕಾರ್ತಿಕ ಮಾಸದ ಲಕ್ಷ ದೀಪೋತ್ಸವ, ಕನ್ನಡ ರಾಜ್ಯೋತ್ಸವ, ಸಿದ್ದಗಂಗಾಶ್ರೀಗಳಿಗೆ ಗುರುವಂದನಾ ಕಾರ್ಯಕ್ರಮದಲ್ಲಿ ಸಿದ್ದಗಂಗಾ ಮಠದ ಪೀಠಾಧ್ಯಕ್ಷ ಶ್ರೀಸಿದ್ದಲಿಂಗಮಹಾಸ್ವಾಮೀಜಿಗಳಿಗೆ ಗುರುವಂದನೆ ಸಲ್ಲಿಸಲಾಯಿತು.

ಮದ್ಯವ್ಯಸನ ತೊರೆಯಲು ಧರ್ಮಸ್ಥಳ ಶ್ರೀಕ್ಷೇತ್ರದ ಯೋಜನೆ ದಾರಿದೀಪ

ಕೆ.ಆರ್.ಪೇಟೆ: ಹೆತ್ತವರನ್ನು ರಕ್ಷಣೆ ಮಾಡುವುದು ಮಕ್ಕಳ ಧರ್ಮ, ಪ್ರಜೆಗಳ ರಕ್ಷಣೆ ಮಾಡುವುದು ರಾಜನ ಧರ್ಮ, ಭಕ್ತರ ರಕ್ಷಣೆ ಮಾಡುವುದು ಗುರುಗಳ ಧರ್ಮ, ಆದರೆ ಬಡವರ, ದೀನ ದಲಿತರ ಹಾಗೂ ಇಂತಹ ಮದ್ಯ ವ್ಯಸನಿಗಳನ್ನು ಸರಿದಾರಿಗೆ ತರುವ ಕೆಲಸ ಮಾಡುವುದಿದ್ದರೆ ಅದು ಶ್ರೀಕ್ಷೇತ್ರ ಧರ್ಮಸ್ಥಳ ಸಂಘದಿಂದ ಮಾತ್ರ ಸಾಧ್ಯ ಎಂದು ಮಾಜಿ ಸಚಿವ ಕೆ.ಸಿ.ನಾರಾಯಣಗೌಡ ಹೇಳಿದರು.

ತಾಲೂಕಿನ ಬೂಕನಕೆರೆ ಗ್ರಾಮದ ಪಂಚಾಯತಿ ಸಮುದಾಯ ಭವನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕೆ.ಆರ್.ಪೇಟೆ ಹಾಗೂ ಬೂಕನಕೆರೆ ವಲಯದಿಂದ ಆಯೋಜಿಸಿದ್ದ 1887ನೇ ಮದ್ಯವರ್ಜನ ಶಿಬಿರ ವ್ಯವಸ್ಥಾಪನ ಸಮಿತಿ ಸಮಾರೋಪ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅಂಧಕಾರದಲ್ಲಿದ್ದ ಬಾಳಿಗೆ ಹೊಸ ಬೆಳಕು ನೀಡಿ ಇಡೀ ಕುಟುಂಬವನ್ನು ಬೆಳಗಿಸಿದ ಈ ಮದ್ಯವರ್ಜನ ಶಿಬಿರವು ಸಮಾಜಕ್ಕೆ ಮಾದರಿ ಮತ್ತು ಆದರ್ಶಪ್ರಾಯವಾಗಿದೆ. ಕುಡಿತದಿಂದ ನಿಮ್ಮ ಜೀವನವನ್ನು ಹಾಳು ಮಾಡಿಕೊಳ್ಳಬೇಡಿ. ಇದರಿಂದ ನಿಮ್ಮ ಆರೋಗ್ಯ, ದುಡ್ಡು, ಸಮಾಜ ಹಾಗೂ ನಿಮ್ಮ ಕುಟುಂಬವೇ ಹಾಳಾಗಿ ನೀವು ಬೀದಿಗೆ ಬರುತ್ತೀರಿ. ಈ ಕುಡಿತದಿಂದ ಮುಕ್ತರಾಗಿ ಸುಖ ಜೀವನ ನಡೆಸಿ, ಸಮಾಜದಲ್ಲಿರುವ ಪ್ರತಿಯೊಬ್ಬನಿಗೂ ಸಂಸ್ಕಾರ ಕೊಡುವ ಕಾರ್ಯ ನಡೆಯಬೇಕು. ಒಬ್ಬ ವ್ಯಕ್ತಿಯನ್ನು ಪರಿವರ್ತನೆ ಮಾಡಿ ಸಂಸ್ಕಾರ ಕೊಡುವ ಕಾರ್ಯಶ್ರೇಷ್ಠ ಹಾಗೂ ಪುಣ್ಯದ ಕಾರ್ಯವಾಗಿದೆ ಎಂದು ಹೇಳಿದರು.

ಜಿಲ್ಲಾ ಜನಜಾಗೃತಿ ಉಪಾಧ್ಯಕ್ಷರು ಹಾಗೂ ಸಮಾಜ ಸೇವಕರಾದ ಆರ್‌ಟಿಓ ಮಲ್ಲಿಕಾರ್ಜುನ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆಯ ಜಿಲ್ಲಾ ಅಧ್ಯಕ್ಷ ಜಯರಾಮ್ ತೋಟಿ, ಜಿಲ್ಲಾ ನಿರ್ದೇಶಕ ಕೇಶವ್ ದೇವಾಂಗ, ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ತಾಲೂಕು ಯೋಜನಾಧಿಕಾರಿ ತಿಲಕ್‌ರಾಜ್, ತಾಪಂ ಮಾಜಿ ಸದಸ್ಯರಾದ ಹೆಳವೇಗೌಡ (ಹುಲ್ಲೆಗೌಡ), ಮೀನಾಕ್ಷಿ ಪುಟ್ಟರಾಜು, ಬೂಕನಕೆರೆ ಗ್ರಾಪಂ ಅಧ್ಯಕ್ಷ ಬಿ.ಆರ್.ಶ್ಯಾಮ್‌ಪ್ರಸಾದ್, ಸಾಹಿತಿ ಬಲ್ಲೇನಹಳ್ಳಿ ಮಂಜುನಾಥ್, ಪುರಸಭೆಯ ಮಾಜಿ ಸದಸ್ಯ ಕೆ.ಆರ್.ನೀಲಕಂಠ, ಧರ್ಮಸ್ಥಳ ಸಂಸ್ಥೆಯ ಮೇಲ್ವಿಚಾರಕ ಪ್ರಕಾಶ್ ಆಚಾರ್ಯ, ತಾಲೂಕು ಬಿಜೆಪಿ ಉಪಾಧ್ಯಕ್ಷ ಚೋಕನಹಳ್ಳಿ ಪ್ರಕಾಶ್, ವಕೀಲ ನಂದೀಶ್, ಜಿಲ್ಲಾ ಜನಜಾಗೃತಿ ಸದಸ್ಯರಾದ ಪ್ರಸನ್ನ, ಪದ್ಮ, ಮುಖಂಡ ಮಂಜುನಾಥ್, ಸೇರಿದಂತೆ ಪ್ರಗತಿಬಂಧು, ಸ್ವ-ಸಹಾಯ ಸಂಘಗಳ ಒಕ್ಕೂಟ ಅಧ್ಯಕ್ಷರು ಸರ್ವಸದಸ್ಯರು ಹಾಗೂ ಸೇವಾ ಪ್ರತಿನಿಧಿಗಳು ಬೂಕನಕೆರೆ ವಲಯ ನವಜೀವನ ಸಮಿತಿ ಸದಸ್ಯರು ಸೇರಿದಂತೆ ಉಪಸ್ಥಿತರಿದ್ದರು.



ಮದ್ಯವರ್ಜನ ಶಿಬಿರ ವ್ಯವಸ್ಥಾಪನ ಸಮಿತಿ ಸಮಾರೋಪ ಸಮಾರಂಭದಲ್ಲಿ ಮಾತನಾಡುತ್ತಿರುವ ಮಾಜಿ ಸಚಿವ ಕೆ.ಸಿ.ನಾರಾಯಣಗೌಡ

ಅರ್ಜಿ ಆಹ್ವಾನ

ಮಂಡ್ಯ,ನ.27- ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಪಂಗಡದ-1(10+1) ಕುರಿ/ಮೇಕೆ ಘಟಕ ಸ್ಥಾಪಿಸಲು ಶೇಖಡಾ 90 ಸಹಾಯಧನದೊಂದಿಗೆ (ಅದರಲ್ಲಿ ಸಹಾಯಧನ-59400 ಬ್ಯಾಂಕ್ ಸಾಲ ಅಥವಾ ಫಲಾನುಭವಿವಂತಿಕೆ -6600)ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಊಗಿನಹಳ್ಳಿ ಬೋರೆಯಲ್ಲಿ ಕಾರೇಮೆಳೆ ಸಿಂಗಮ್ಮನ ಜಾತ್ರೆ



ಕಿಕ್ಕೇರಿ: ಹೋಬಳಿಯ ಊಗಿನಹಳ್ಳಿ ಗ್ರಾಮದ ಬೋರೆಯಲ್ಲಿ ಕಾರೇಮೆಳೆಯಲ್ಲಿ ನೆಲೆಸಿರುವ ಶಕ್ತಿಯ ಸಿಂಗಮ್ಮದೇವಿ ಜಾತ್ರಾ ಮಹೋತ್ಸವ ಸಂಭ್ರಮದಿಂದ ನೆರವೇರಿತು. ಹೋಬಳಿಯಲ್ಲದೆ ತಾಲೂಕಿನ ವಿವಿಧ ಮೂಲೆಗಳಿಂದ ಜನತೆ ಸಂಭ್ರಮದಿಂದ ಭಾಗವಹಿಸಿ ಸಂಜೆ ವೇಳೆಯ ಜಾತ್ರೆಗೆ ಸಾಕ್ಷಿಯಾದರು. ಜಾನುವಾರುಗಳ ಜಾತ್ರೆ ಎಂದೇ ಪ್ರತೀತಿಯಿರುವ ಜಾತ್ರೆಗೆ ರೈತಾಪಿ ಜನತೆ ತಮ್ಮ ಜಾನುವಾರು, ಕುರಿಗಳನ್ನು ತಂದು ದೇವಿಯ ಗುಡಿ ಸುತ್ತ ಪ್ರದಕ್ಷಿಣೆ ಹಾಕಿಸಿದರು. ಜಾನುವಾರುಗಳಿಗೆ ಚಕ್ಕುಲಿ, ಕೋಡಂಬಳಿಯಂತಹ ತಿನಿಸುಗಳನ್ನು ಕೊರಳಿಗೆ ಹಾಕಿ ರೋಗರುಜಿನ ಬಾರದಂತೆ ಸಿಂಗಮ್ಮದೇವಿಯಲ್ಲಿ ಪ್ರಾರ್ಥಿಸಿದರು.

ಯುವಕರು, ನೂತನ ದಂಪತಿಗಳು ಹೆಚ್ಚಿನ ಸಂಖ್ಯೆಯಲ್ಲಿ ಜಾತ್ರೆಯಲ್ಲಿ ಭಾಗವಹಿಸಿದರೆ, ರೈತಾಪಿ ಜನತೆ ತಮ್ಮ ಜಾನುವಾರುಗಳಿಗೆ ಬಣ್ಣ ಬಣ್ಣದ ಟೇಪು, ಗೆಜ್ಜೆ ಕಟ್ಟಿ, ತಿಲಕವಿಟ್ಟು ಗುಡಿಯ ಮುಂದೆ ಆರತಿ ಬೆಳಗಿದರು. ಸರತಿಯಲ್ಲಿ ನಿಂತು ದೇವಿಯ ದರ್ಶನ ಪಡೆದರು.

ದಾನ ಗಜೇಂದ್ರ ಕುಟುಂಬದವರು ಸಾಮೂಹಿಕ ಅನ್ನ ಸಂತರ್ಪಣೆ ಏರ್ಪಡಿಸಿದ್ದರು. ಗ್ರಾಮದ ಕಲಾವಿದರಿಂದ ಕುರುಕ್ಷೇತ್ರ ಪೌರಾಣಿಕ ನಾಟಕ ಏರ್ಪಡಿಸಲಾಗಿತ್ತು.

ದೇವಸ್ಥಾನ ಉದ್ಘಾಟನೆ ವೇಳೆ ಅಭಿನಂದನೆ



ಭಾರತೀನಗರದ ಅಣ್ಣೂರು ಗ್ರಾಮದಲ್ಲಿ ಮಂಚಮ್ಮದೇವಿ ದೇವಸ್ಥಾನದ ಕರಗ ಪ್ರತಿಷ್ಠಾಪನೆ ಹಾಗೂ ದೇವಿ ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಆಶಯ್ ಮಧು ಮಾದೇಗೌಡ, ಅವಿನಾಶ್, ತಾಪಂ ಮಾಜಿ ಸದಸ್ಯ ಬಿಗಿರಿಶ್ ಅವರನ್ನು ಅಭಿನಂದಿಸಿ ಗೌರವಿಸಲಾಯಿತು.

ಸಹಸ್ರ ಕಾರ್ತಿಕ ದೀಪೋತ್ಸವ

ಟಿ.ನರಸೀಪುರ, ನ.27- ಟಿ.ನರಸೀಪುರ ತಾಲೂಕು ಬನ್ನೂರಿನ ಶ್ರೀ ವ್ಯಾಸರಾಜ ಮಠದ ಶ್ರೀ ಜನ್ಮಾಂಜನೇಯನ ಸನ್ನಿಧಾನದಲ್ಲಿ ಡಿ.1 ರಂದು ಸಹಸ್ರ ಕಾರ್ತಿಕ ದೀಪೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅಂದು ಸಂಜೆ 5 ಗಂಟೆಗೆ ದೀಪೋತ್ಸವ ನಡೆಯಲಿದ್ದು, ಸೋಸಲೆ ಮಠದ ಪೀಠಾಧಿಪತಿ ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಶ್ರೀ ಕೋದಂಡರಾಮ ಸ್ವಾಮಿ ದೇವಸ್ಥಾನದ ಪ್ರಧಾನ ಅರ್ಚಕ ಕೃಷ್ಣಸ್ವಾಮಿ ಅಯ್ಯಂಗಾರ್, ಶಿವ ದೇವಾಲಯದ ಪ್ರಭುಸ್ವಾಮಿ, ಶ್ರೀ ವ್ಯಾಸರಾಜ ಮಠದ ಡಾ.ಗುರುರಾಜ ಆಚಾರ್ಯ, ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ರವಿಕುಮಾರ್, ಸರ್ಕಾರಿ ಪಶು ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಶಿವಕುಮಾರ್, ನಾಡಗೌಡರಾದ ಪಾರ್ಥಸಾರಥಿ, ಬಾಲರಾಜ್ ಗೌಡ, ರಾಜೇಂದ್ರ ಇನ್ನಿತರರು ಭಾಗವಹಿಸಲಿದ್ದು, ಭಕ್ತಾದಿಗಳು ಸಕಾಲಕ್ಕೆ ಬಂದು ದೀಪಗಳನ್ನು ಬೆಳಗಿಸುವಂತೆ ಶ್ರೀ ಮಠದ ಡಾ.ಗುರುರಾಜ ರಾವ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ಉದ್ಯೋಗ ಮೇಳ

ಮಂಡ್ಯ,ನ.27- ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಹಾಗೂ ಮೆ॥ ಬೆಲ್‌ಸ್ಟಾರ್ ಮೈಕ್ರೋ ಫೈನಾನ್ಸ್ ಲಿ, ಮೆ॥ ಬಂಧನ್ ಬ್ಯಾಂಕ್, ಮತ್ತು ಮೆ॥ ಎಲ್.ಐ.ಸಿ ಸಂಸ್ಥೆಯವರ ಸಹಯೋಗದಲ್ಲಿ ನೇರ ಸಂದರ್ಶನ ನಡೆಯಲಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿಯಿರುವ ಹುದ್ದೆಗಳಿಗೆ ಎಸ್‌ಎಸ್‌ಎಲ್‌ಸಿ, ಪಿಯುಸಿ & ಯಾವುದೇ ಪದವಿ ಉತ್ತೀರ್ಣರಾದ 18ರಿಂದ 32 ವರ್ಷದೊಳಗಿನ ಅಭ್ಯರ್ಥಿಗಳು ನವೆಂಬರ್ 29 ರಂದು ಬೆಳಿಗ್ಗೆ 10.30 ಗಂಟೆಗೆ ಮಂಡ್ಯ ಮೆ॥ ಬೆಲ್‌ಸ್ಟಾರ್ ಮೈಕ್ರೋ ಫೈನಾನ್ಸ್ಲಿ ಇಲ್ಲಿ ಸಂದರ್ಶನಕ್ಕೆ ಹಾಜರಾಗತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ 08232-295124 ಮತ್ತು 91646 42684, 8660061488, 89706 46629 ಅನ್ನು ಸಂಪರ್ಕಿಸಬಹುದು ಮತ್ತು ಮೆ॥ ಆರ್‌ಸೆಟಿ (ಬ್ಯಾಂಕ್ ಆಫ್ ಬರೋಡ) ಇಲ್ಲಿ ಸ್ವಯಂ ಉದ್ಯೋಗ ಮಾಡಲು ನೀಡುವ ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಿದ್ದಾರೆ ಎಂದು ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಎಲ್ಲಾ ವರ್ಗಗಳು ಕೈಹಿಡಿದಿವೆ: ಅಸಾದುಲ್ಲಾಖಾನ್



ಮಂಡ್ಯ,ನ.27- ಇತ್ತೀಚೆಗೆ ಮುಕ್ತಾಯಗೊಂಡ ಚನ್ನಪಟ್ಟಣ, ಸಂಡೂರು ಹಾಗೂ ಶಿಗ್ಗಾವಿ ಕ್ಷೇತ್ರಗಳ ಉಪಚುನಾವಣೆಯಲ್ಲಿ ಅಹಿಂದ ಮತಗಳ ಜೊತೆಗೆ ಎಲ್ಲಾ ವರ್ಗದ ಮತದಾರರು ಕಾಂಗ್ರೆಸ್ ಪಕ್ಷವನ್ನು ಕೈಹಿಡಿದಿದ್ದು, ರಾಜ್ಯದ ಜನತೆ ಕಾಂಗ್ರೆಸ್ ಪರವಾಗಿದ್ದಾರೆ ಎಂದು ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಸಾದುಲ್ಲಾಖಾನ್ ಹೇಳಿದರು.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದ ಜನತೆಗೆ ಕಾಂಗ್ರೆಸ್ ಸರ್ಕಾರ ನೀಡಿರುವ ಐದು ಗ್ಯಾರಂಟಿಗಳು ಸಮರ್ಪಕವಾಗಿ ಜಾರಿಯಾಗಿವೆ. ಯಾವುದೇ ಸಮಸ್ಯೆಗಳಿಲ್ಲದೇ ಜನರ ಮನೆ ಬಾಗಿಲಿಗೆ ಹೋಗುತ್ತಿದೆ. ಜನ ಕಾಂಗ್ರೆಸ್ ಸರ್ಕಾರದ ಮೇಲೆ ವಿಶ್ವಾಸ ವಿಟ್ಟಿದ್ದು, ಆ ವಿಶ್ವಾಸವೇ ಮೂರು ಕ್ಷೇತ್ರದಲ್ಲೂ ಗೆಲುವಿಗೆ ಕಾರಣವಾಗಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಪರ ಕೇವಲ ಅಹಿಂದ ಮತದಾರರು ಮಾತ್ರ ಇದ್ದಾರೆ ಎಂಬ ಆರೋಪವಿತ್ತು. ಆದರೆ ಈ ಚುನಾವಣೆಯ ಫಲಿತಾಂಶ ನೋಡಿದರೆ ಎಲ್ಲಾ ವರ್ಗಗಳು ಸಹ ಕಾಂಗ್ರೆಸ್ ಪರವಾಗಿವೆ ಎಂಬುದು ಗೋಚರವಾಗುತ್ತಿದೆ. ಹಳೇ ಮೈಸೂರು ಭಾಗದ ಚನ್ನಪಟ್ಟಣ, ಕಿತ್ತೂರು ಕರ್ನಾಟಕದ ಶಿಗ್ಗಾವಿ ಹಾಗೆಯೇ ಕಲ್ಯಾಣ ಕರ್ನಾಟಕದ ಸಂಡೂರು ಮೂರು ಭಾಗದಲ್ಲೂ ಎಲ್ಲಾ ವರ್ಗದ ಜನ ಕಾಂಗ್ರೆಸ್ ಕೈಹಿಡಿದಿದ್ದಾರೆ. ಇದಕ್ಕೆ ನಮ್ಮ ಸರ್ಕಾರದ ಕಾರ್ಯವೈಖರಿಯೇ ಕಾರಣ ಎಂದು ಪ್ರಶಂಸಿಸಿದರು.

ಅದರಲ್ಲೂ ಚನ್ನಪಟ್ಟಣದಲ್ಲಿ ಅಲ್ಪಸಂಖ್ಯಾತರು, ದಲಿತರು, ಹಿಂದುಳಿದವರ ಜೊತೆಗೆ ಕ್ಷೇತ್ರದ ಅತಿದೊಡ್ಡ ಓಟ್ ಬ್ಯಾಂಕ್ ಆಗಿರುವ ಒಕ್ಕಲಿಗರು ಸಹ ಕಾಂಗ್ರೆಸ್ ಗೆಲುವಿಗೆ ಶ್ರಮಿಸಿದ್ದಾರೆ. 30 ಸಾವಿರಕ್ಕೂ ಅಧಿಕ ಮುಸ್ಲಿಂ ಮತದಾರರಿರುವ ಕ್ಷೇತ್ರದಲ್ಲಿ ಬಹುತೇಕ ಮತಗಳು ಯೋಗೇಶ್ವರ್‌ಗೆ ಲಭಿಸಿದೆ. ಇನ್ನು ಗ್ರಾಮೀಣ ಪ್ರದೇಶದಲ್ಲೂ ಸಹ ಯೋಗೇಶ್ವರ್ ಲೀಡ್ ಆಗಿದ್ದಾರೆ. ಇದಕ್ಕೆ ಒಕ್ಕಲಿಗರ ಮತದಾರರೇ ಕಾರಣ. ಜಮೀರ್ ಅಹ್ಮದ್ ಹೇಳಿಕೆಯಿಂದ ಹಿನ್ನಡೆಯಾಗಬಹುದೆಂಬ ಆತಂಕವಿದ್ದರೂ ಒಕ್ಕಲಿಗರು ಯಾವುದನ್ನು ತಲೆಕೆಡಿಸಿಕೊಳ್ಳದೇ ಕಾಂಗ್ರೆಸ್ ಅಭ್ಯರ್ಥಿಗೆ ಮತ ಕೊಟ್ಟಿದ್ದಾರೆ ಎಂದರು.

ಒಂದನೇ ಪುಟದಿಂದ

ತಾಪಂ, ಜಿಪಂ ಚುನಾವಣೆ

ಅರ್ಜಿ ಸಲ್ಲಿಸಿ 6 ತಿಂಗಳಾದರೂ ಸರಕಾರ ಮೀಸಲು ಅಂತಿಮಗೊಳಿಸಿಲ್ಲ. ಬದಲಿಗೆ ಕಾಲಾವಕಾಶ ಕೇಳುತ್ತಾ ಚುನಾವಣೆ ಮುಂದೂಡುತ್ತಲೇ ಇದೆ.

ರಾಜ್ಯ ಚುನಾವಣಾ ಆಯೋಗ ಸಲ್ಲಿಸಿರುವ ನ್ಯಾಯಾಂಗ ನಿಂದನೆ ಅರ್ಜಿ ಜತೆಗೆ, ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ- ಉಪಾಧ್ಯಕ್ಷ ಸ್ಥಾನದ ಮೀಸಲು ಪ್ರಕಟಿಸಲು ಏಕಸದಸ್ಯ ಪೀಠದ ಆದೇಶ ಪಾಲಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಸಲ್ಲಿಸಿರುವ ಎರಡು ಪ್ರತ್ಯೇಕ ನ್ಯಾಯಾಂಗ ನಿಂದನೆ ಅರ್ಜಿಗಳು ಮುಖ್ಯ ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ಹಾಗೂ ನ್ಯಾ. ಕೆ.ವಿ.ಅರವಿಂದ್ ಅವರಿದ್ದ ವಿಭಾಗೀಯ ಪೀಠದ ಮುಂದೆ ಬುಧವಾರ ವಿಚಾರಣೆಗೆ ನಿಗದಿಯಾಗಿದ್ದವು.

ಕೋರ್ಟ್ ಕಲಾಪ ಆರಂಭವಾಗುತ್ತಿದ್ದಂತೆಯೇ ಹೆಚ್ಚುವರಿ ಅಡ್ವೊಕೇಟ್ ಜನರಲ್ ಪ್ರತಿಮಾ ಹೊನ್ನಾಪುರ, ಜಿ.ಪಂ, ತಾ.ಪಂ.ಗಳಿಗೆ ಮೀಸಲು ಅಂತಿಮಗೊಳಿಸಲು ನಾಲ್ಕು ವಾರ ಕಾಲಾವಕಾಶಬೇಕು. ಕನಿಷ್ಠ ಜನವರಿ ಮೊದಲ ವಾರದವರೆಗೆ ಸಮಯಬೇಕು. ಕೊಡಗು ಜಿಲ್ಲೆಯ ಕ್ಷೇತ್ರ ಪುನರ್ ವಿಂಗಡಣೆ ವಿಳಂಬವಾಗಿದ್ದರಿಂದ ಎಲ್ಲಾ ಜಿಲ್ಲೆಗಳ ಮೀಸಲು ನಿಗದಿ ತಡವಾಗಿದೆ. ಮೀಸಲು ಸಿದ್ಧಪಡಿಸಿ ಸರ್ಕಾರಕ್ಕೆ ರವಾನಿಸಲಾಗಿದೆ. ಶೀಘ್ರದಲ್ಲೇ ಕರಡು ಮೀಸಲು ಹೊರಡಿಸಿ, ಸಾರ್ವಜನಿಕರಿಂದ ಆಕ್ಷೇಪಣೆ ಆಹ್ವಾನಿಸಲಾಗುವುದು. ಬಳಿಕ ಮೀಸಲು ಪಟ್ಟಿಯನ್ನು ಮುಂದಿನ ಕ್ರಮಕ್ಕಾಗಿ ರಾಜ್ಯ ಚುನಾವಣಾ ಆಯೋಗಕ್ಕೆ ಕಳಿಸಿಕೊಡಲಾಗುವುದು ಎಂದು ಮನವಿ ಮಾಡಿದರು. ಚುನಾವಣಾ ಆಯೋಗದ ಪರ ವಾದಿಸಿದ ಹಿರಿಯ ವಕೀಲ ಕೆ.ಎನ್.ಫಣೀಂದ್ರ, ಈಗಾಗಲೇ ಬಹಳ ವಿಳಂಬವಾಗಿದೆ. ಕಳೆದೊಂದು ವರ್ಷದಿಂದ ಮೀಸಲು ನಿಗದಿ ನೆನೆಗುದಿಗೆ ಬಿದ್ದಿದೆ. ಈಗ ಮತ್ತೆ ಜನವರಿವರೆಗೂ ಕಾಲಾವಕಾಶ ಕೇಳುತ್ತಿದೆ. ಅದಕ್ಕಾದರೂ ಬದ್ಧರಾಗಿರುವಂತೆ ಸರಕಾರದ ಹೇಳಿಕೆಯನ್ನು ನ್ಯಾಯಾಲಯ ದಾಖಲಿಸಿಕೊಳ್ಳಬೇಕು ಎಂದು ಮನವಿ ಮಾಡಿಕೊಂಡರು. ವಾದ-ಪ್ರತಿವಾದ ಆಲಿಸಿದ ನ್ಯಾಯಪೀಠ, ವಿಚಾರಣೆಯನ್ನು ಡಿ.12ಕ್ಕೆ ಮುಂದೂಡಿತು. ಅಲ್ಲದೆ, ಕಾಲಾವಕಾಶ ನೀಡುವ ಬಗ್ಗೆ ಮುಂದಿನ ವಿಚಾರಣೆ ದಿನ ನಿರ್ಧರಿಸಲಾಗುವುದು ಎಂದು ಹೇಳಿತು.

ಆತಂಕ ಜೆಡಿಎಸ್ ಇನ್ನಿತರ ಶಾಸಕರಲ್ಲಿದೆ!

ಬಿಡುವುದು ಅವರಿಗೆ ಸೇರಿದ ವಿಚಾರ ಎಂದರು. ಜೆಡಿಎಸ್ ಶಾಸಕರನ್ನು ಕಾಂಗ್ರೆಸ್‌ಗೆ ಕರೆತರಲು ಅವಕಾಶ ಸಿಕ್ಕಿದರೆ ಕರೆತರುತ್ತೇನೆ. ಆದರೆ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದಂತೆ ಈಗಾಗಲೇ ನಮ್ಮ ಪಕ್ಷದಲ್ಲಿ 139 ಶಾಸಕರಿದ್ದಾರೆ. ಜೆಡಿಎಸ್ ಶಾಸಕರನ್ನು ಕರೆತರುವಂತೆ ಕೆಪಿಸಿಸಿ ಅಧ್ಯಕ್ಷರಾಗಲೀ, ಪಕ್ಷದ ಯಾವುದೇ ನಾಯಕರಾಗಲೀ ನನಗೆ ಟಾಸ್ಕ್ ಕೊಟ್ಟಿಲ್ಲ. ಆದರೆ ಜೆಡಿಎಸ್‌ನಲ್ಲಿ ಅನೇಕ ಶಾಸಕರು ಅಸಮಾಧಾನಗೊಂಡಿದ್ದಾರೆ. ಚಾಮುಂಡೇಶ್ವರಿ ಕ್ಷೇತ್ರದ ಶಾಸಕರಾದ ಜಿ.ಟಿ.ದೇವೇಗೌಡರು ಅವರ ಮನಸ್ಸಿನ ಭಾವನೆಗಳನ್ನು ವ್ಯಕ್ತಪಡಿಸುತ್ತಿದ್ದಾರೆ. ಅದೇ ರೀತಿ ಜೆಡಿಎಸ್‌ನ ಬಹಳಷ್ಟು ಶಾಸಕರು ಅಸಮಾಧಾನಗೊಂಡವರಾಗಿದ್ದು, ನನ್ನೊಂದಿಗೆ ಮಾತನಾಡಿದ್ದಾರೆ. ಕುಮಾರಸ್ವಾಮಿ ದೆಹಲಿಗೆ ಹೋಗುತ್ತಾರೆ. ಏನೇನು ಮಾಡುತ್ತಾರೋ ಗೊತ್ತಿಲ್ಲ. ನಮ್ಮ ರಾಜಕೀಯದ ಅಸ್ತಿತ್ವ ಏನಾಗುತ್ತೋ ಏನೋ ಎಂದು ಜೆಡಿಎಸ್ ಶಾಸಕರೇ ಮಾತನಾಡುತ್ತಿದ್ದಾರೆ ಎಂದರು.

ಜಿ.ಟಿ.ದೇವೇಗೌಡರು ಹಿರಿಯ ರಾಜಕಾರಣಿಯಾಗಿದ್ದು, ಮುನಿಸಿಕೊಂಡಿದ್ದ ನನ್ನನ್ನು ಮತ್ತು ಕುಮಾರಸ್ವಾಮಿಯವರನ್ನು ಒಂದುಗೂಡಿಸಿದ್ದೇ ಅವರು. ಹಳೆಯದನ್ನೆಲ್ಲಾ ಮರೆತುಬಿಡು ಎಂದು ನನ್ನನ್ನು ಕುಮಾರಸ್ವಾಮಿ ಬಳಿಗೆ ಕರೆದುಕೊಂಡು ಹೋದವರು. ಅಂತಹ ಹಿರಿಯರಿಗೆ ಈ ಪರಿಸ್ಥಿತಿ ಆದರೆ ನಮ್ಮ ಪರಿಸ್ಥಿತಿ ಏನಾಗಬಹುದು ಎಂದು ಜೆಡಿಎಸ್‌ನಲ್ಲಿ ಅನೇಕರು ಮಾತನಾಡಿಕೊಳ್ಳುತ್ತಿದ್ದಾರೆ. ಹೀಗಾಗಿ ಆ ಪಕ್ಷದ ಶಾಸಕರಿಗೆ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳಲು ಉತ್ತಮವಾದ ಬೇರೊಂದು ರಾಜಕೀಯ ಪಕ್ಷಕ್ಕೆ ಸೇರಿಕೊಳ್ಳಿ. ಅದರ ಬಗ್ಗೆ ಈಗಲೇ ತೀರ್ಮಾನ ಮಾಡಿ ಎಂದು ಜನರಲ್ ಆಗಿ ಹೇಳಿದ್ದೇನೆ. ಅವರು ಯಾವ ತೀರ್ಮಾನ ಕೈಗೊಳ್ಳುತ್ತಾರೋ ನೋಡಬೇಕಾಗಿದೆ ಎಂದು ಯೋಗೇಶ್ವರ್ ಹೇಳಿದರು.

ಪ್ರಿಯಾಂಕಾ ಗಾಂಧಿ ಪ್ರಮಾಣವಚನ ಸಾಧ್ಯತೆ

ಅರ್ಥಪೂರ್ಣ ಚರ್ಚೆ ನಡೆಸಿದ್ದಾರೆ. ಸ್ಥಳೀಯ ಸಮಸ್ಯೆಗಳನ್ನು ಪರಿಹರಿಸುವತ್ತ ಗಮನಹರಿಸಿದ್ದು, ವಯನಾಡಿನ ಅಭಿವೃದ್ಧಿ ಹಾಗೂ ಜನರ ಕಲ್ಯಾಣಕ್ಕಾಗಿ ಕೆಲಸ ಮಾಡುತ್ತೇವೆ ಎಂದು ಭರವಸೆ ನೀಡಿರುವುದಾಗಿ ಮೂಲಗಳು ತಿಳಿಸಿವೆ. ಶನಿವಾರ ನಡೆದ ವಯನಾಡು ಲೋಕಸಭಾ ಉಪ ಚುನಾವಣೆಯ ಮತ ಎಣಿಕೆಯಲ್ಲಿ ನಾಲ್ಕು ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಪ್ರಿಯಾಂಕಾ ಜಯಗಳಿಸಿದ್ದರು. ಈ ವರ್ಷ ನಡೆದಿದ್ದ ಲೋಕಸಭೆ ಚುನಾವಣೆಯಲ್ಲಿ ತಮ್ಮ ಸಹೋದರ ರಾಹುಲ್ ಗಾಂಧಿ ಗೆಲುವಿನ ಅಂತರಕ್ಕಿಂತಲೂ ಅಧಿಕ ಮತಗಳ ಅಂತರದಿಂದ ಪ್ರಿಯಾಂಕಾ ಜಯ ಸಾಧಿಸಿದ್ದರು. ಸಿಪಿಐ(ಎಂ) ನೇತೃತ್ವದ ಎಲ್‌ಡಿಎಫ್‌ನ ಸತ್ಯನ್ ಮೊಕೇರಿ ಅವರನ್ನು ಸೋಲಿಸಿದ್ದ ಪ್ರಿಯಾಂಕಾ ಆರು ಲಕ್ಷಕ್ಕೂ ಹೆಚ್ಚು ಮತಗಳನ್ನು ಪಡೆದಿದ್ದರು.

ಒಬ್ಬ ಶಾಸಕರನ್ನ ಮುಟ್ಟಿ ನೋಡಲಿ...!

ಕ್ಷೇತ್ರದ ಅಭಿವೃದ್ಧಿ ಬಗ್ಗೆ ಗಮನ ಹರಿಸಬೇಕು. ಅದನ್ನು ಬಿಟ್ಟು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಮನೆಯಲ್ಲಿರಬೇಕು. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ರಣ ಹೇಡಿ ಎಂಬ ಹೇಳಿಕೆ ನೀಡುತ್ತಿದ್ದು, ಗೌಡರ ಕುಟುಂಬದ ಬಗ್ಗೆ ಮಾತನಾಡುವ ನೈತಿಕತೆ ಯೋಗೇಶ್ವರ್‌ಗೆ ಇಲ್ಲ ಎಂದು ಇದೇ ವೇಳೆ ಅವರು ಹೇಳಿದರು.

ಶ್ರೇಷ್ಠ ನಾಯಕನ ಭ್ರಮೆ: ಚನ್ನಪಟ್ಟಣ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಗೆದ್ದಿದ್ದಾರೆ. ಜನರು ನೀಡಿದ ತೀರ್ಪಿಗೆ ನಾವು ತಲೆಬಾಗಿದ್ದೇವೆ. ಯೋಗೇಶ್ವರ್ ಗೆಲುವಿನ ಮದದಲ್ಲಿ ದೇವೇಗೌಡರನ್ನು ಮನೆಯಲ್ಲಿ ಇರಿ ಎನ್ನುವುದು, ಕುಮಾರಸ್ವಾಮಿ ಅವರನ್ನು ರಣಹೇಡಿ ಎಂದಿರುವುದು ಸರಿಯಲ್ಲ, ಈ ಮಾತಿನಿಂದ ಅವರ ಗೌರವ ಹೆಚ್ಚಾಗುವುದಿಲ್ಲ. ದೇವೇಗೌಡರ ಕುಟುಂಬದ ಬಗ್ಗೆ ಮಾತನಾಡಿ, ಶ್ರೇಷ್ಠ ನಾಯಕರಾಗುವ ಭ್ರಮೆಯಲ್ಲಿದ್ದಾರೆ ಎಂದು ಛೇಡಿಸಿದರು. ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಡಾ.ಕೆ.ಅನ್ನದಾನಿ, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಮನ್‌ಮುಲ್ ಮಾಜಿ ಅಧ್ಯಕ್ಷ ಬಿ.ಆರ್. ರಾಮಚಂದ್ರ, ಬಿಜೆಪಿ ಜಿಲ್ಲಾ ವಕ್ತಾರ ಸಿ.ಟಿ.ಮಂಜುನಾಥ್ ಉಪಸ್ಥಿತರಿದ್ದರು.

ಜಿಟಿಡಿಗೆ ದೊಡ್ಡ ಹುದ್ದೆ ಕಾದಿದೆ: ಜೆಡಿಎಸ್ ಪಕ್ಷದಲ್ಲಿ ಜಿ.ಟಿ.ದೇವೇಗೌಡರ ಅಸಮಾಧಾನ ಸಂಬಂಧ ಪ್ರಶ್ನೆಗೆ ಉತ್ತರ ನೀಡಿದ ಅವರು, ಪಕ್ಷ ಎಂದರೇ ಸಣ್ಣಪುಟ್ಟ ಅಸಮಾಧಾನ ಇರುವುದು ಸಾಮಾನ್ಯ. ಅದನ್ನು ಸರಿಪಡಿಸುವ ಕೆಲಸವನ್ನು ಮಾಡುತ್ತೇವೆ. ಎಲ್ಲರನ್ನು ಜೊತೆಗೆ ತೆಗೆದುಕೊಂಡು ಹೋಗುವ ಕೆಲಸವಾಗುತ್ತದೆ. ಜಿ.ಟಿ.ದೇವೇಗೌಡ ಹಾಗೂ ಸಾ.ರಾ. ಮಹೇಶ್ ನಡುವೆ ಭಿನ್ನಾಭಿಪ್ರಾಯ ಇದೆ. ಅದನ್ನು ಸರಿಪಡಿಸುತ್ತೇವೆ. ಜೊತೆಗೆ ಮುಂದಿನ ದಿನಗಳಲ್ಲಿ ಜಿ.ಟಿ.ದೇವೇಗೌಡರಿಗೆ ದೊಡ್ಡ ಹುದ್ದೆ ಪಕ್ಷದಲ್ಲಿ ಕಾದಿದೆ ಎಂದು ಭವಿಷ್ಯ ನುಡಿದರು. ಚನ್ನಪಟ್ಟಣ ಉಪಚುನಾವಣೆಯಲ್ಲಿ ಮಂಡ್ಯ ಜಿಲ್ಲೆಯ ಜೆಡಿಎಸ್ ಪಕ್ಷದ ಕಾರ್ಯಕರ್ತರು ನಿಖಿಲ್ ಅವರಿಗಾಗಿ ಹಗಲಿರುಳು ಶ್ರಮಿಸಿದ್ದಾರೆ. ಚುನಾವಣೆ ಮುಗಿಯುವವರೆಗೂ ಚನ್ನಪಟ್ಟಣದ ಹೋಟೆಲ್‌ಗಳು, ಸಂಬಂಧಿಗಳ ಮನೆಯಲ್ಲೇ ಬೀಡು ಬಿಟ್ಟು, ನಿರಂತರವಾಗಿ ಶ್ರಮವಹಿಸಿ, ದುಡಿದಿದ್ದಾರೆ. ನಿಖಿಲ್ ಕುಮಾರಸ್ವಾಮಿ ಅವರನ್ನು ಗೆಲ್ಲಿಸುವ ಸಲುವಾಗಿ ಶ್ರಮವಹಿಸಿದ ಎಲ್ಲಾ ಕಾರ್ಯಕರ್ತರು, ಮುಖಂಡರಿಗೆ ಧನ್ಯವಾದ ಅರ್ಪಿಸಿದರು.

ಈಗ ಮತ್ತೊಂದು ತಿರುವು!!

ಸೇರಿದ್ದಾಗಿದ್ದು, ಜಮೀನಿಗೆ ಖಾತೆ ಮಾಡಿಸಿಕೊಡುವುದಾಗಿ ತಿಳಿಸಿ, ದೇವರಾಜು, ತನ್ನ ತಾಯಿ (ಮೈಲಾರಯ್ಯ ಪತ್ನಿ) ಯಿಂದ ಸಹಿ ಪಡೆದು ಅದನ್ನು ದುರುಪಯೋಗಪಡಿಸಿಕೊಂಡು ಜಮೀನನ್ನು ಮಲ್ಲಿಕಾರ್ಜುನಸ್ವಾಮಿ ಅವರಿಗೆ ಮಾರಾಟ ಮಾಡಿದ್ದಾರೆ. ಈ ಜಮೀನು ಮಾರಾಟದ ವೇಳೆ ನಮ್ಮ ತಾಯಿಯಾಗಲೀ, ನಾವಾಗಲೀ, ಯಾರೂ ಸಹಿ ಮಾಡಿಲ್ಲ. ನಮ್ಮನ್ನು ವಂಚಿಸಿ ಜಮೀನನ್ನು ದೇವರಾಜು ಮಾರಾಟ ಮಾಡಿದ್ದಾರೆ. ಈ ಜಮೀನಿನಲ್ಲಿ ತಮಗೂ ಪಾಲು ಬರಬೇಕಾಗಿದೆ ಎಂದು ಮೈಲಾರಯ್ಯ ಪುತ್ರಿ ಜಮುನಾ ಮತ್ತು ಪುತ್ರ ಮಂಜುನಾಥ್ ದಾವೆಯಲ್ಲಿ ತಿಳಿಸಿದ್ದಾರೆ.

ಈ ಸಂಬಂಧ ಸುದ್ದಿಗಾರರೊಂದಿಗೆ ಮಾತನಾಡಿದ ದೇವರಾಜು ಅಣ್ಣ ಮೈಲಾರಯ್ಯ ಪುತ್ರ ಮಂಜುನಾಥ್, ಜಮೀನಿಗೆ ಖಾತೆ ಮಾಡಿಸಿಕೊಡುವುದಾಗಿ ಚಿಕ್ಕಪ್ಪ ದೇವರಾಜು ನಮ್ಮ ತಾಯಿ ಹಾಗೂ ನಮ್ಮಿಂದ ಸಹಿ ಪಡೆದಿದ್ದರು. ಜಮೀನು ನಮ್ಮ ಹೆಸರಿಗೆ ಆಗುತ್ತದೆ ಎಂದು ನಂಬಿ ನಾವೂ ಸಹಿ ಮಾಡಿದ್ದೆವು. ಆದರೆ ಅವರು ನಮ್ಮ ಗಮನಕ್ಕೇ ಬಾರದೆ ಮಲ್ಲಿಕಾರ್ಜುನಸ್ವಾಮಿ ಅವರಿಗೆ ಜಮೀನನ್ನು ಮಾರಾಟ ಮಾಡಿದ್ದಾರೆ. ಆ ಜಮೀನಿನಲ್ಲಿ ನಮಗೂ ಪಾಲು ಬರಬೇಕಾಗಿದ್ದು, ಅದಕ್ಕಾಗಿ ನ್ಯಾಯಾಲಯದ ಮೆಟ್ಟಿಲೇರಿದ್ದೇವೆ ಎಂದು ತಿಳಿಸಿದರು.

5 ಸಾವಿರ ಕೋಟಿ ಹಗರಣ ನಡೆದಿದೆ

ಹಾಜರಾಗಿ ಹೇಳಿಕೆ ನೀಡಿದ್ದಾರೆ. ಈ ಕುರಿತು 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯಿಸಿದ ಅವರು, ನಾನು ಈ ಹಿಂದೆ ಇಡಿ ಅಧಿಕಾರಿಗಳ ಮುಂದೆ ಹಾಜರಾಗಿದ್ದಾಗ ಕೆಲ ದಾಖಲೆಗಳನ್ನು ಸಲ್ಲಿಸಿದ್ದೆ. ಆ ಸಂದರ್ಭದಲ್ಲಿ ನನ್ನ ಹೇಳಿಕೆ ದಾಖಲಿಸಿರಲಿಲ್ಲ. ಇಂದು ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿರುವ ಇಡಿ ಅಧಿಕಾರಿಗಳು, ಅದಕ್ಕೆ ಪೂರಕವಾದ ದಾಖಲೆಗಳನ್ನು ನನ್ನಿಂದ ಪಡೆದಿದ್ದಾರೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಶ್ರೀಮತಿ ಬಿ.ಎಂ.ಪಾರ್ವತಿ ಅವರಿಗೆ ಮಂಜೂರಾಗಿರುವುದು ಕೇವಲ 14 ನಿವೇಶನ ಅಷ್ಟೇ. ಅದೊಂದು 20 ಕೋಟಿ ಹಗರಣ ಇರಬಹುದು. ಆದರೆ ಮುಡಾದಲ್ಲಿ ಶೇ.50:50, ಪ್ರೋತ್ಸಾಹದಾಯಕ ಹಾಗೂ ಬದಲಿ ನಿವೇಶನ ಹೆಸರಿನಲ್ಲಿ ಸುಮಾರು 5 ಸಾವಿರ ಕೋಟಿ ರೂ.ನಷ್ಟು ಅಕ್ರಮ ನಡೆದಿದ್ದು, ಅದರ ಬಗ್ಗೆ ತನಿಖೆಯಾಗಬೇಕು ಎಂಬುದು ನನ್ನ ಉದ್ದೇಶ ಎಂದರು. ಲೋಕಾಯುಕ್ತ ಹಾಗೂ ನಿವೃತ್ತ ನ್ಯಾಯಮೂರ್ತಿ ದೇಸಾಯಿ ಆಯೋಗದ ತನಿಖೆ ನಡೆಯುತ್ತಿದೆ. ಜೊತೆಗೆ ಇದೀಗ ಜಾರಿ ನಿರ್ದೇಶನಾಲಯವು ತನಿಖೆ ಮಾಡುತ್ತಿದೆ. ಈ ತನಿಖೆಗಳಲ್ಲಿ ನಿಷ್ಪಕ್ಷಪಾತವಾದ ವರದಿ ಬಾರದಿದ್ದರೆ ಆರೋಪಿಗಳು ನುಣುಚಿಕೊಳ್ಳುವ ಆತಂಕವಿದೆ ಎಂದು ಗಂಗರಾಜು ಹೇಳಿದರು.

ಜಿ.ಟಿ.ದೇವೇಗೌಡರ ಅಸಮಾಧಾನ ಸರಿಪಡಿಸುತ್ತೇನೆ

ಕರೆದದ್ದು ನಿಜ. ಆದರೆ ಅವರು ಬಂದಿಲ್ಲ. ಅವರ ಮಗ ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡ ಚನ್ನಪಟ್ಟಣಕ್ಕೆ ಬಂದು ಒಂದು ಜಿಲ್ಲಾ ಪಂಚಾಯ್ತಿ ಉಸ್ತುವಾರಿ ವಹಿಸಿಕೊಂಡು ಕೆಲಸ ಮಾಡಿದ್ದಾರೆ. ಜಿ.ಟಿ.ದೇವೇಗೌಡರನ್ನು ಸರಿಪಡಿಸುವುದು ನಮಗೆ ಗೊತ್ತು. ಅವರು ನಮ್ಮನ್ನು ಬಿಟ್ಟು ಎಲ್ಲಿಯೂ ಹೋಗುವುದಿಲ್ಲ. ಹೆಚ್.ಡಿ.ದೇವೇಗೌಡ ಮತ್ತು ಕುಮಾರಸ್ವಾಮಿಯೇ ನಮ್ಮ ನಾಯಕರು. ನಮ್ಮನ್ನು ಯಾರೂ ಬೇರ್ಪಡಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಚನ್ನಪಟ್ಟಣ ಉಪ ಚುನಾವಣಾ ಪ್ರಚಾರಕ್ಕೆ ತಾವು ಹೋಗದಿರುವ ಬಗ್ಗೆ ಸ್ಪಷ್ಟನೆ ನೀಡಿದ ರೇವಣ್ಣ, ನನ್ನ ಮತ್ತು ಕುಮಾರಸ್ವಾಮಿ ಮಧ್ಯೆ ಯಾವುದೇ ರೀತಿಯ ಅಸಮಾಧಾನ ಇಲ್ಲ. ದೇವಸ್ಥಾನದಲ್ಲಿ ಬಿದ್ದು ಗಾಯಗೊಂಡಿದ್ದರಿಂದ ನಾನು ಚನ್ನಪಟ್ಟಣ ಉಪ ಚುನಾವಣೆಯಲ್ಲಿ ಪ್ರಚಾರಕ್ಕೆ ಹೋಗಿಲ್ಲ ಅಷ್ಟೇ ಎಂದು ಸ್ಪಷ್ಟಪಡಿಸಿದರು. ಕುಮಾರಸ್ವಾಮಿ ಅಂದು ಯಡಿಯೂರಪ್ಪ ಅವರಿಗೆ ಅಧಿಕಾರ ಹಸ್ತಾಂತರ ಮಾಡದಿರುವುದಕ್ಕೆ ನಾನೇ ಕಾರಣ, ನನ್ನಿಂದ ದೊಡ್ಡ ತಪ್ಪು ಆಗಿದೆ. ಮೊದಲ ಬಾರಿಗೆ ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿ 20 ತಿಂಗಳ ಆಡಳಿತದ ನಂತರ ಬಿಜೆಪಿ ಜೊತೆ ಮಾಡಿಕೊಂಡ ಒಪ್ಪಂದದಂತೆ ಯಡಿಯೂರಪ್ಪ ಅವರಿಗೆ ಅಧಿಕಾರ ಹಸ್ತಾಂತರ ಮಾಡಲು ಮುಂದಾಗಿದ್ದರು. ಆದರೆ, ಯಡಿಯೂರಪ್ಪ ಅವರಿಗೆ ಅಧಿಕಾರ ಹಸ್ತಾಂತರ ಮಾಡುವುದನ್ನು ತಪ್ಪಿಸಿದ್ದು ನಾನೇ, ನನ್ನಿಂದ ದೊಡ್ಡ ತಪ್ಪಾಗಿದೆ, ಕ್ಷಮೆ ಯಾಚಿಸುತ್ತೇನೆ. ಅಧಿಕಾರ ಹಸ್ತಾಂತರ ತಪ್ಪಿಸಿದ ಸತ್ಯ ಯಾರಿಗೂ ತಿಳಿದಿಲ್ಲ, ಆ ಆರೋಪಕ್ಕೆ ಯಾರ್ಯಾರನ್ನೋ ಗುರಿ ಮಾಡಲಾಯಿತು, ಇದೀಗ ಸತ್ಯ ಹೇಳುತ್ತಿದ್ದೇನೆ, ದೇವರ ಮುಂದೆಯೂ ಹೇಳುತ್ತೇನೆ ಎಂದರು. ಚನ್ನಪಟ್ಟಣ ಉಪ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಅಭ್ಯರ್ಥಿ ಗತಿಯಿಲ್ಲದೆ, ಸಿ.ಪಿ. ಯೋಗೇಶ್ವರ್ ಅವರನ್ನು ವಿಮಾನದಲ್ಲಿ ಕರೆದುಕೊಂಡು ಹೋಗಿ ರಾಜೀನಾಮೆ ಕೊಡಿಸಿ, ಪಕ್ಷದ ಅಭ್ಯರ್ಥಿಯನ್ನಾಗಿ ಮಾಡಿದರು. ಈಗ ಅವರು ಶಾಸಕರಾಗಿದ್ದಾರೆ, ಸಿದ್ದರಾಮಯ್ಯ ಅವರನ್ನು ಮಂತ್ರಿ ಮಾಡಲಿ, ಅವರು ಸಚಿವರಾದರೆ ನಮ್ಮ ಜಿಲ್ಲೆ ಮತ್ತು ಕ್ಷೇತ್ರಕ್ಕೆ ಕೆಲಸ ಮಾಡಿಸಿಕೊಳ್ಳುತ್ತೇನೆ ಎಂದರು.

ತುಟ್ಟಿಭತ್ಯೆ ದರ ಶೇ.10.75ಕ್ಕೆ ಹೆಚ್ಚಳ

ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು, ಕುಟುಂಬ ನಿವೃತ್ತಿ ವೇತನದಾರರಿಗೂ ಸಹ 1ನೇ ಜುಲೈ 2024ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರಗಳನ್ನು ಮೂಲ ನಿವೃತ್ತಿ ವೇತನ, ಕುಟುಂಬ ನಿವೃತ್ತಿ ವೇತನದ ಪ್ರಸಕ್ತ 8.50%ರಿಂದ 10.75%ಗೆ ಹೆಚ್ಚಿಸಿ ಮಂಜೂರು ಮಾಡಲಾಗಿದೆ. ಆದರೆ, ಪರಿಷ್ಕೃತ ತುಟ್ಟಿ ಭತ್ಯೆಯ ದರಗಳ ಆರ್ಥಿಕ ಲಾಭವು ಅ.1ರ 2024ರಿಂದ ಲಭ್ಯವಾಗುತ್ತದೆ. ತುಟ್ಟಿ ಭತ್ಯೆಯ ಮಂಜೂರಾತಿಯ ಉದ್ದೇಶಕ್ಕಾಗಿ ಕರ್ನಾಟಕ ನಾಗರಿಕ ಸೇವಾ ನಿಯಮಗಳಲ್ಲಿ ಸೂಚಿಸಿರುವ ಮೂಲ ನಿವೃತ್ತಿ ವೇತನ, ಕುಟುಂಬ ನಿವೃತ್ತಿ ವೇತನವನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ ಎಂದು ತಿಳಿಸಲಾಗಿದೆ.

ಯುಜಿಸಿ, ಎಐಸಿಟಿಇ, ಐಸಿಎಆರ್ ವೇತನ ಶ್ರೇಣಿಗಳ ನಿವೃತ್ತ ನೌಕರರುಗಳಿಗೂ ಈ ಆದೇಶಗಳು ಅನ್ವಯಿಸುತ್ತವೆ. ಸರ್ಕಾರದ ಮತ್ತು ಜಿಲ್ಲಾ ಪಂಚಾಯತ್‌ಗಳ ಪೂರ್ಣಾವಧಿ ನೌಕರರಿಗೆ, ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ವರ್ಕ್‌ಚಾರ್ಜ್ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ವಿಶ್ವವಿದ್ಯಾಲಯಗಳಲ್ಲಿ ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ನೌಕರರಿಗೆ ಈ ಆದೇಶ ಅನ್ವಯಿಸುತ್ತದೆ. ಯುಜಿಸಿ, ಎಐಸಿಟಿಇ, ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಗಳ ನ್ಯಾಯಾಂಗ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು. ಈ ಆದೇಶದ ಮೇರೆಗೆ ಲಭ್ಯವಿರುವ ತುಟ್ಟಿಭತ್ಯೆಯನ್ನು ನಗದಾಗಿ ಪಾವತಿ ಮಾಡುವುದು. ತುಟ್ಟಿ ಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು. ಈ ಆದೇಶಗಳನ್ವಯ ಪಾವತಿ ಮಾಡಬೇಕಾಗಿರುವ ತುಟ್ಟಿಭತ್ಯೆ ಬಾಕಿ ಮೊತ್ತವನ್ನು, 2024ರ ಡಿಸೆಂಬರ್ ಮಾಹೆಯ ವೇತನ ಬಟವಾಡೆಗೂ ಮೊದಲು ಪಾವತಿ ಮಾಡತಕ್ಕದ್ದಲ್ಲ. ತುಟ್ಟಿ ಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ ಎಂದು ಆದೇಶ ಹೊರಡಿಸಲಾಗಿದೆ.

ಬೆಂಗಳೂರಿನ 20 ಕಡೆಗಳಲ್ಲಿ ಲೋಕಾಯುಕ್ತ ದಾಳಿ

ಬೆಂಗಳೂರು, ನ.27- ಬಿಬಿಎಂಪಿಯ ಇಬ್ಬರು ಅಧಿಕಾರಿಗಳ ನಿವಾಸ, ಕಚೇರಿ ಸೇರಿದಂತೆ ಬೆಂಗಳೂರಿನ 20 ಕಡೆಗಳಲ್ಲಿ ಲೋಕಾಯುಕ್ತರು ಬುಧವಾರ ದಾಳಿ ನಡೆಸಿದ್ದಾರೆ. ಅಪಾರ ಪ್ರಮಾಣದ ಅಕ್ರಮ ಹಣದ ವಹಿವಾಟು ಮತ್ತು ಅವರೊಂದಿಗೆ ಸಂಪರ್ಕ ಹೊಂದಿದ್ದ ಅಧಿಕಾರಿಗಳು, ಬಿಲ್ಡರ್‌ಗಳು ಮತ್ತು ಉದ್ಯಮಿಗಳಿಂದ ಅಕ್ರಮ ಆಸ್ತಿ ಗಳಿಕೆಯ ಸುಳಿವು ಸಿಕ್ಕ ಹಿನ್ನೆಲೆಯಲ್ಲಿ ಈ ದಾಳಿ ನಡೆಸಲಾಗಿದೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ. ಬಿಲ್ಡರ್‌ಗಳು ಮತ್ತು ಕೈಗಾರಿಕೋದ್ಯಮಿಗಳ ನಿವಾಸಗಳು ಮತ್ತು ಕಚೇರಿಗಳ ಮೇಲೂ ದಾಳಿ ನಡೆಸಲಾಗಿದೆ ಎಂದು ತಿಳಿದುಬಂದಿದೆ.

ಬೆಂಗಳೂರಿನ ದೇವಯ್ಯ ಪಾರ್ಕ್ ಬಳಿಯಿರುವ ಮಹಿಳಾ ಬಿಬಿಎಂಪಿ ಕಲ್ಯಾಣ ಅಧಿಕಾರಿಯೊಬ್ಬರ ನಿವಾಸದಲ್ಲಿ ಲೋಕಾಯುಕ್ತ ತಂಡ ಕೆಲವು ದಾಖಲೆಗಳನ್ನು ವಶಪಡಿಸಿಕೊಂಡಿದೆ. ವೈಯಾಲಿಕಾವಲ್ ಬಡಾವಣೆಯಲ್ಲಿರುವ ಉಪ ಲೆಕ್ಕಾಧಿಕಾರಿ ನಿವಾಸದ ಮೇಲೂ ದಾಳಿ ನಡೆದಿದೆ. ಬಿಬಿಎಂಪಿ ಪಶ್ಚಿಮ ವಲಯದ ಕಲ್ಯಾಣ ಕಾರ್ಯಕ್ರಮಗಳ ಫಲಾನುಭವಿಗಳ ಹಣವನ್ನು ಸಹಕಾರ ಸಂಘಗಳ ಖಾತೆಗಳಿಗೆ ವರ್ಗಾಯಿಸುವ ಮೂಲಕ ವಂಚನೆ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದೆ.

ಲೋಕಾಯುಕ್ತ ಡಿವೈಎಸ್ಪಿ ಸುನೀಲ್ ವೈ ನಾಯಕ್ ನೇತೃತ್ವದ ತಂಡ ದಾಳಿ ನಡೆಸಿದೆ. ಉದ್ಯಮಿಯೊಬ್ಬರ ಕತ್ರಿಗುಪ್ಪೆಯಲ್ಲಿರುವ ನಿವಾಸದ ಮೇಲೂ ದಾಳಿ ನಡೆದಿದೆ. ನಗರದಲ್ಲಿರುವ ಕೆಲ ಸಹಕಾರಿ ಸೊಸೈಟಿಗಳ ಕಚೇರಿಗಳ ಮೇಲೂ ದಾಳಿ ನಡೆಸಲಾಗಿದೆ. ಅಪಾರ ಪ್ರಮಾಣದ ಹಣ ವಹಿವಾಟು ಪ್ರಕರಣದಲ್ಲಿ ಅಧಿಕಾರಿಗಳು, ಬಿಲ್ಡರ್‌ಗಳು ಹಾಗೂ ಉದ್ಯಮಿಗಳ ಸಂಪರ್ಕ ಕುರಿತು ಮಾಹಿತಿ ಸಂಗ್ರಹಿಸಿ ದಾಳಿ ನಡೆಸಲಾಗಿದೆ. ಈ ಮಧ್ಯೆ ತುಮಕೂರಿನ ಆರ್‌ಟಿಒ ಕಚೇರಿಯ ಮೇಲೆ 10ಕ್ಕೂ ಹೆಚ್ಚು ಲೋಕಾಯುಕ್ತ ಪೊಲೀಸರನ್ನೊಳಗೊಂಡ ತಂಡ ದಾಳಿ ನಡೆಸಿದೆ. ಬಿಹೆಚ್ ರಸ್ತೆಯಲ್ಲಿರುವ ಆರ್‌ಟಿಒ ಕಚೇರಿಯಲ್ಲಿ ಬೆಳಗ್ಗೆ 11 ಗಂಟೆ ಸುಮಾರಿಗೆ ದಾಳಿ ನಡೆದಿದೆ. ಇಡೀ ಕಚೇರಿಯನ್ನು ನಿಯಂತ್ರಣಕ್ಕೆ ತೆಗೆದುಕೊಂಡ ಲೋಕಾಯುಕ್ತ ಅಧಿಕಾರಿಗಳು ಎಲ್ಲಾ ಕೆಲಸಗಳನ್ನು ಪರಿಶೀಲಿಸಿದ್ದಾರೆ. ಕಚೇರಿಯ ಅಧಿಕಾರಿ ಹಾಗೂ ಸಂದರ್ಶಕರನ್ನು ಪ್ರಶ್ನಿಸಿದ್ದಾರೆ.

ಇತ್ತೀಚೆಗೆ ನ.12ರಂದು ಬೆಂಗಳೂರು, ಬೀದರ್, ಬೆಳಗಾವಿ, ಧಾರವಾಡ, ಮೈಸೂರು, ದಾವಣಗೆರೆ ಜಿಲ್ಲೆಯ ಸರ್ಕಾರಿ ಅಧಿಕಾರಿಗಳ ಕಚೇರಿ ಹಾಗೂ ನಿವಾಸದ ಮೇಲೆ ಲೋಕಾಯುಕ್ತರು ದಾಳಿ ನಡೆಸಿದ್ದರು. ಅಧಿಕಾರಿಗಳ ಮನೆಯಿಂದ ಅಪಾರ ಪ್ರಮಾಣದ ನಗದು ಹಾಗೂ ಚಿನ್ನಾಭರಣ ವಶಕ್ಕೆ ಪಡೆದಿದ್ದರು.

ಮೈಸೂರು ಮಿತ್ರ ಗುರುವಾರ 28 ನವೆಂಬರ್ 2024

ಸರ್ಕಾರದ ವಿರುದ್ಧ ನಿರಂತರ ಹೋರಾಟ

ಎಸ್‌ಡಿಪಿಐ ರಾಜ್ಯ ಸಮಿತಿ ಸಭೆಯಲ್ಲಿ ನಿರ್ಣಯ



ಮೈಸೂರಲ್ಲಿ ಎಸ್‌ಡಿಪಿಐ ಕರ್ನಾಟಕದ ರಾಜ್ಯ ಪ್ರತಿನಿಧಿ ಸಭೆ ನಡೆಯಿತು.

ಮೈಸೂರು,ನ.27–ಎಸ್‌ಡಿಪಿಐ ಕರ್ನಾಟಕ 2 ದಿನಗಳ ರಾಜ್ಯ ಪ್ರತಿನಿಧಿ ಸಭೆಯಲ್ಲಿ ಕರ್ನಾಟಕದಲ್ಲಿ ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ವಿರುದ್ಧ ಜಾತಿ ಗಣತಿ ವರದಿಯ ಬಿಡುಗಡೆ, ಒಳ ಮೀಸಲಾತಿ ಜಾರಿ ಮತ್ತು ಮುಸ್ಲಿಮರ ಮೀಸಲಾತಿ ಹೆಚ್ಚಳ ಕುರಿತಂತೆ ನಿರಂತರ ಹೋರಾಟ ನಡೆಸುವ ಬಗ್ಗೆ ತೀರ್ಮಾನ ಮಾಡಲಾಯಿತು.

ರಾಷ್ಟ್ರೀಯ ಮುಖಂಡರಾದ ಬಿ.ಎಂ. ಕಾಂಬ್ಳೆ, ಅಬ್ದುಲ್ ಮಜೀದ್ ಫೈಜಿ, ಮೊಹಮ್ಮದ್ ಅಶ್ರಫ್, ಇಲ್ಯಾಸ್ ತುಂಬೆ, ಅಲ್ಫಾನ್ಸ್ ಫ್ರಾಂಕೊ, ಡಾ.ಮೆಹಬೂಬ್ ಶರೀಫ್, ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಕೆಳಕಂಡ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಪ್ರಮುಖ ನಿರ್ಣಯಗಳು

- ಕರ್ನಾಟಕ ಕಾಂಗ್ರೆಸ್ ಸರ್ಕಾರದ ಜನದ್ರೋಹಿ ನಡವಳಿಕೆಗಳಾದ ಒಳ ಮೀಸಲಾತಿ ನಿರಾಕರಣೆ, ಮೀಸಲಾತಿ ಪ್ರಮಾಣ ಹೆಚ್ಚಳದ ನಿರಾಕರಣೆ, ಜಾತಿ ಜನಗಣತಿ ಬಿಡುಗಡೆಗೆ ನಿರಾಕರಣೆ ಕುರಿತಂತೆ ರಾಜ್ಯ ವ್ಯಾಪಿ ಜನ ಚಳವಳಿಗಳನ್ನು ನ್ಯಾಯ ಸಿಗುವವರೆಗೂ ಕಾಯ್ದುಕೊಳ್ಳುವುದು.
- ರಾಜ್ಯದ ಶೋಷಿತ ಸಮುದಾಯಗಳಿಗೆ ಸಂವಿಧಾನ ಬದ್ಧ ಹಕ್ಕುಗಳನ್ನು ದೊರಕಿಸುವುದಕ್ಕಾಗಿ ಶಾಸನ ಸಭೆಗೆ ಪ್ರವೇಶಿಸಲೇಬೇಕಾದ ಅನಿವಾರ್ಯತೆಗೆ ಶಾಸನಸಭೆ ಪ್ರವೇಶಿಸಲು ನಿರಂತರವಾದ ಹೋರಾಟ ಜನಜಾಗೃತಿ ರಾಜಕೀಯ ಚಳುವಳಿಗಳು ಮತ್ತು ಕಾರ್ಯತಂತ್ರಗಳನ್ನು ರೂಪಿಸುವುದು.
- ಬಿಜೆಪಿ ಕಾಲದ ಎಲ್ಲಾ ಹಗರಣಗಳು ವಿಶೇಷವಾಗಿ ಕೋವಿಡ್ ಹಗರಣಗಳಿಗೆ ಸಂಬಂಧಪಟ್ಟಂತೆ ಕಾಂಗ್ರೆಸ್ ರಾಜ್ಯ ಸರ್ಕಾರವು ಕೇವಲ ಬಾಯಿಮಾತಿನ ಹೇಳಿಕೆಗಳು ಮತ್ತು ಕ್ರಮಗಳಿಗೆ ಮಾತ್ರ ಸೀಮಿತವಾಗಿದೆ. ದುರಿತ ಕಾಲದಲ್ಲೂ ಭ್ರಷ್ಟಾಚಾರದ ಮೂಲಕ ರಾಜ್ಯದ ಖಜಾನೆ ಕೊಳ್ಳೆ ಹೊಡೆದ ಬಿಜೆಪಿಯ ವಿರುದ್ಧ ದಿಟ್ಟ ಮತ್ತು ಕಠಿಣ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕು.
- ದ್ವೇಷ ಭಾಷಣಕಾರರ ವಿರುದ್ಧ ಮತ್ತು ಸಮಾಜಕ್ಕೆ ತಪ್ಪು ಸಂದೇಶಗಳನ್ನು ನೀಡುವುದರ ಮೂಲಕ ಅಶಾಂತಿ ಹರಡುತ್ತಿರುವ ಕೆಲವು ಮಾಧ್ಯಮಗಳ ವಿರುದ್ಧ ಸರ್ಕಾರ ನಿಗಾ ಇಡಬೇಕು. ಅಗತ್ಯ ಬಿದ್ದಲ್ಲಿ ಇಂತಹ ಸಮಾಜ ವಿರೋಧಿ ವ್ಯಕ್ತಿಗಳು ಮತ್ತು ಮಾಧ್ಯಮಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಹಿಂಜರಿಯಬಾರದು.
- ಗೋ ಹತ್ಯಾ ನಿಷೇಧ ಕಾಯ್ದೆಯನ್ನು ಹಿಂಪಡೆಯಬೇಕು. ಮತಾಂತರ ನಿಷೇಧ ಕಾಯ್ದೆಯನ್ನು ರದ್ದುಪಡಿಸಬೇಕು ಮತ್ತು ಹಿಜಾಬ್ ನಿಷೇಧ ಆದೇಶವನ್ನು ಹಿಂಪಡೆಯಬೇಕು.
- ವಕ್ಫ್ ಮಂಡಳಿಯ ಸ್ವಾಯತ್ತತೆಗೆ ಧಕ್ಕೆ ಉಂಟು ಮಾಡುವ ಕೋಮುವಾದಿ ಶಕ್ತಿಗಳ ಯಾವುದೇ ಷಡ್ಯಂತ್ರಗಳಿಗೆ ರಾಜ್ಯ ಸರ್ಕಾರವು ಮಣಿಯಬಾರದು.
- ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ ಹೈದರಾಬಾದ್–ಕರ್ನಾಟಕ ಅಭಿವೃದ್ಧಿ ಮಂಡಳಿಯ ಮಾದರಿಯಲ್ಲಿ ಉತ್ತರ ಕರ್ನಾಟಕ ಅಭಿವೃದ್ಧಿ ಮಂಡಳಿಯನ್ನು ರಚಿಸಬೇಕು.
- ಕರಾವಳಿ ಕರ್ನಾಟಕದಲ್ಲಿ ನಿರುದ್ಯೋಗ ಕೊನೆಗೊಳಿಸಿ ಸ್ಥಳೀಯ ಯುವಕರಿಗೆ ಉದ್ಯೋಗದ ಅವಕಾಶಗಳನ್ನು ಸೃಷ್ಟಿಸುವ ನಿಟ್ಟಿನಲ್ಲಿ ಪ್ರವಾಸೋದ್ಯಮ ಹಾಗೂ ಇನ್ನಿತರ ಅವಕಾಶ ಇರುವಂತಹ ವಲಯಗಳಿಗೆ ಪ್ರಾಧಾನ್ಯತೆ ನೀಡಿ ವಿಶೇಷ ಯೋಜನೆಯನ್ನು ರೂಪಿಸುವುದು, ಇದಕ್ಕಾಗಿ ಮುಂದಿನ ಬಜೆಟ್‌ನಲ್ಲಿ ಕನಿಷ್ಠ ಮೂರು ಸಾವಿರ ಕೋಟಿ ರೂಪಾಯಿ ಮೀಸಲಿಡುವುದು.
- ಮಂಗಳೂರು ಬಾಗಲಕೋಟೆ, ಉತ್ತರ ಕನ್ನಡ ಇತ್ಯಾದಿ ಜಿಲ್ಲೆಗಳಲ್ಲಿ ಸರಕಾರಿ ಮೆಡಿಕಲ್ ಕಾಲೇಜು ಮತ್ತು ಸರಕಾರಿ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಸ್ಥಾಪಿಸುವಂತೆ ಸರ್ಕಾರವನ್ನು ಒತ್ತಾಯಿಸುವುದಾಗಿ ಎಸ್‌ಡಿಪಿಐ ಆರನೇ ರಾಜ್ಯ ಪ್ರತಿನಿಧಿ ಸಭೆಯು ನಿರ್ಣಯ ಕೈಗೊಂಡಿದೆ.

ನ.30, ಡಿ.1 ಸಂವಿಧಾನ ಓದು ಅಧ್ಯಯನ ಶಿಬಿರ


ಮೈಸೂರು, ನ.27 (ಎಂಟಿವೈ)– ಮೈಸೂರು ವಿಶ್ವವಿದ್ಯಾನಿಲಯದ ವಿಜ್ಞಾನ ಭವನದಲ್ಲಿ ನ.30 ಮತ್ತು ಡಿ.1ರಂದು ಜಿಲ್ಲಾ ಮಟ್ಟದ 'ಸಂವಿಧಾನ ಓದು ಅಧ್ಯಯನ ಶಿಬಿರ' ಆಯೋಜಿಸಲಾಗಿದೆ ಎಂದು ಸಂವಿಧಾನ ಓದು ಅಭಿಯಾನ–ಕರ್ನಾಟಕ ಸಂಸ್ಥೆಯ ರಾಜ್ಯ ಕೇಂದ್ರ ಸಂಯೋಜಕ ಬಿ.ರಾಜಶೇಖರ ಮೂರ್ತಿ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂವಿಧಾನ ಓದು ಅಭಿಯಾನ–ಕರ್ನಾಟಕ ವತಿಯಿಂದ ಸಂವಿಧಾನ ಓದು ಅಧ್ಯಯನ ಶಿಬಿರ ಆಯೋಜಿಸಿದೆ. ನ.30ರಂದು ಬೆಳಗ್ಗೆ 10ಕ್ಕೆ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ ದಾಸ್ ಶಿಬಿರವನ್ನು ಉದ್ಘಾಟಿಸಲಿದ್ದಾರೆ. ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್, ವಿಶ್ರಾಂತ ಕುಲಪತಿ ಪ್ರೊ.ಪಿ.ವೆಂಕಟರಾಮಯ್ಯ, ಪ್ರಗತಿಪರ ಚಿಂತಕರಾದ ಸುಶೀಲ ಬಸವಲಿಂಗಯ್ಯ ಇನ್ನಿತರರು ಪಾಲ್ಗೊಳ್ಳಲಿದ್ದಾರೆ ಎಂದರು.

ಶಿಬಿರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನದಾಸ್, ಶಾಂತಿ ನಾಗಲಾಪುರ, ಡಾ.ಗೋವಿಂದಪ್ಪ ಪಾವಗಡ, ಬಿ.ರಾಜಶೇಖರಮೂರ್ತಿ, ಡಾ.ಕರಿಯಣ್ಣ ವಿಷಯ ಮಂಡಿಸಲಿದ್ದಾರೆ. ಶಿಬಿರದ ಎರಡನೇ ದಿನ ಡಿ.1ರಂದು ಸಂಜೆ 4ಕ್ಕೆ ಸಮಾರೋಪ ಮತ್ತು ಪ್ರಶಸ್ತಿಪತ್ರ ವಿತರಣಾ ಸಮಾರಂಭ ನಡೆಯಲಿದೆ. ಡಾ. ಸಬೀರ ಅಹಮ್ಮದ್ ಮುಲ್ಲಾ, ವಿ.ಆರ್. ಶೈಲಜಾ ಇನ್ನಿತರರು ಪಾಲ್ಗೊಳ್ಳುವರು. ಜಿಲ್ಲೆಯ ಎಲ್ಲಾ ತಾಲೂಕುಗಳ ಪ್ರತಿನಿಧಿಗಳು, ವಿದ್ಯಾರ್ಥಿಗಳು, ಸಾಮಾಜಿಕ–ಸಾಂಸ್ಕೃತಿಕ ಹಾಗೂ ಪ್ರಗತಿಪರ ಆಶಯವುಳ್ಳ ಸುಮಾರು 300 ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಓದು ಅಭಿಯಾನ–ಕರ್ನಾಟಕ ಸಂಸ್ಥೆಯ ಮುಖಂಡರಾದ ಹೆಚ್.ಎನ್.ಶ್ರೀಹರಿ, ಉಗ್ರ ನರಸಿಂಹೇಗೌಡ, ಸುಶೀಲ ಬಸು, ಅನಿಲ್ ಇದ್ದರು.

ಹುಟ್ಟುಹಬ್ಬದ ಶುಭಾಶಯ...



ಮಾಜಿ ಕಾರ್ಪೊರೇಟರ್ ಮಹದೇಶ್ ಅವರಿಗೆ ಜೆಡಿಎಸ್ ಜಿಲ್ಲಾ ಉಪಾಧ್ಯಕ್ಷ ಕೆ.ಆರ್. ಮಿಲ್ ಶಿವಣ್ಣ, ಪ್ರಧಾನ ಕಾರ್ಯದರ್ಶಿ ಮಧುಸೂದನ್ ಎಂ, ಹಾಗೂ ಸುರೇಶ್ ಗೋಲ್ಡ್ ಹುಟ್ಟುಹಬ್ಬದ ಶುಭಾಶಯ ಕೋರಿದರು.

ಜೆಡಿಎಸ್‌ನಿಂದ ಶಾಸಕರ ಖಾಲಿ ಮಾಡಿಸಲು ಅವರೇನು ಕುರಿಗಳೇ...

ಚನ್ನಪಟ್ಟಣ ನೂತನ ಶಾಸಕ ಸಿ.ಪಿ.ಯೋಗೇಶ್ವರ್‌ಗೆ ಪರಾಜಿತ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ತಿರುಗೇಟು

ಬೆಂಗಳೂರು, ನ.27(ಕೆಎಂಶಿ)–ಚನ್ನಪಟ್ಟಣ ಉಪ ಚುನಾವಣೆ ಗೆಲುವಿನಲ್ಲೂ ಕಾಂಗ್ರೆಸ್ ವಿಕೃತಿ ಮೆರೆಯುತ್ತಿದೆ ಎಂದು ಯುವ ಜಾತ್ಯತೀತ ಜನತಾದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಟೀಕಿಸಿದ್ದಾರೆ.

ಪಕ್ಷದ ಕಾರ್ಯಕರ್ತರಿಗೆ ಬರೆದಿರುವ ಸುದೀರ್ಘ ಪತ್ರದಲ್ಲಿ ಅವರು, ಜೆಡಿಎಸ್ ಶಾಸಕರನ್ನು ಖಾಲಿ ಮಾಡಿಸುತ್ತೇನೆ ಎಂಬ ಸಿ.ಪಿ.ಯೋಗೇಶ್ವರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪಕ್ಷ ನನಗೆ ಟಾಸ್ಕ್ ಕೊಡಲಿ, ಕೇವಲ ಹದಿನೈದೇ ದಿನದಲ್ಲಿ ಜೆಡಿಎಸ್ ಪಕ್ಷವನ್ನು ಖಾಲಿ ಮಾಡಿಬಿಡುತ್ತೇನೆ ಎನ್ನುವ ದರ್ಪ, ಅಹಂಕಾರ ಆ ಗೆಲುವಿನಲ್ಲಿ ವ್ಯಕ್ತವಾದ ವಿಕೃತಿ, ಜನಾದೇಶವನ್ನು ದೈವ ನಿರ್ಣಯವೆಂದು ಭಾವಿಸಿ, ಕ್ಷೇತ್ರದ ಜನತೆಯ ಪದತಲಕ್ಕೆ ಅರ್ಪಣೆಯಾಗಬೇಕಿದ್ದ ಗೆಲುವು ವಿರೋಧ ಪಕ್ಷವನ್ನು ನಿರ್ನಾಮ ಮಾಡುವ, ಎದುರಾಳಿಯ ಸೋಲನ್ನು ಅವಹೇಳನ ಮಾಡುವ, ವಿರೋಧಿ ನಾಯಕರನ್ನು ಕೀಳಾಗಿ ನಿಂದಿಸುವ ವಿಕಾರ ಅವಸ್ಥೆಗೆ ಹೋಗಬಾರದಿತ್ತು.

ಆ ಗೆಲುವಿಗೆ ನಾನೂ ಶುಭ ಹಾರೈಸಿದ್ದೆ ಹಾಗೂ ಚನ್ನಪಟ್ಟಣಕ್ಕೆ ಒಳ್ಳೆಯದಾಗಲಿ ಎಂದು ಆಶಿಸಿದ್ದೆ. ಸೋಲಿನ ಹತಾಶೆಯಲ್ಲಿ ಗೆದ್ದವರ ಮೇಲೆ ನಾನು ವಿಷಕಾರಿಕೊಳ್ಳಲಿಲ್ಲ, ಅಂಥ ವಿಕೃತಿ ನನ್ನ ನೆರಳಿಗೂ ಸುಳಿಯಲು ಬಿಡುವುದಿಲ್ಲ. ಜೆಡಿಎಸ್ ಪಕ್ಷದಿಂದ ಶಾಸಕರನ್ನು ಖಾಲಿ ಮಾಡಿಸುತ್ತೇನೆ ಎಂದರೆ ನಮ್ಮ ಶಾಸಕರೇನು ಮಾರುಕಟ್ಟೆಯಲ್ಲಿ ಸಿಗುವ ಮಾರಾಟದ ವಸ್ತುಗಳೇ ಅಥವಾ ಸಂತೆಯಲ್ಲಿ ಕಸಾಯಿಖಾನೆಗೆ ಕೊಂಡೊಯ್ಯುವ ಕುರಿಗಳೇ ಅಥವಾ ಹರಾಜಿಗಿಟ್ಟ ಸರಕೇ. ಜನರಿಂದ ಆಯ್ಕೆಯಾಗಿ ಬಂದ ಜನಪ್ರತಿನಿಧಿಗಳು ಇವರ ಪಾಲಿಗೆ ಬೀದಿಯಲ್ಲಿ ಬಿಕರಿಯಾಗುವ ಪದಾರ್ಥಗಳೇ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಶಾಸಕನೊಬ್ಬ,



ನಿಖಿಲ್ ಕುಮಾರಸ್ವಾಮಿ

ವಿಧಾನಸಭಾಧ್ಯಕ್ಷರಿಂದ ಗೌಪ್ಯತೆಯ ಪ್ರಮಾಣವಚನ ಸ್ವೀಕರಿಸುವ ಮುನ್ನವೇ ಸಂವಿಧಾನಬಾಹಿರ, ಜನತಂತ್ರ ವಿರೋಧಿ ಕೃತ್ಯಕ್ಕೆ ಇಳಿದು ಒಬ್ಬ ಕ್ರಿಮಿನಲ್ ರೀತಿ ಮಾತನಾಡುತ್ತಾನೆಂದರೆ, ಎಂತಹ ಸ್ಥಿತಿಯಲ್ಲಿ ಕರ್ನಾಟಕ ಇದೆ ಎಂಬುದನ್ನು ಬಿಂಬಿಸುತ್ತದೆ.

ರಾಜಕಾರಣ ವ್ಯಾಪಾರವಲ್ಲ: ಕಾಂಗ್ರೆಸ್ ಸಂಸದರು ಲೋಕಸಭೆಯಲ್ಲಿ ಸಂವಿಧಾನದ ಪ್ರತಿಯನ್ನು ಕೈಯ್ಯಲ್ಲಿ ಹಿಡಿದು ಪ್ರಮಾಣವಚನ ಸ್ವೀಕರಿಸುತ್ತಾರೆ, ನಿತ್ಯವೂ ಸಂವಿಧಾನ ಪೀಠಿಕೆ ಪಠಣ ಮಾಡುತ್ತಾರೆ, ಯಾವ ಪುರುಷಾರ್ಥಕ್ಕೆ, ಅನ್ಯ ಪಕ್ಷಗಳ ಶಾಸಕರನ್ನು ಖರೀದಿ ಮಾಡುತ್ತೇವೆ, ಎಗರಿಸಿಕೊಂಡೇ ಹೋಗುತ್ತೇವೆ ಎಂದರೆ, ಇವರು ಡಾ.ಬಿ.ಆರ್. ಅಂಬೇಡ್ಕರ್ ಸಂವಿಧಾನ ರಕ್ಷಣೆ ಮಾಡುತ್ತಾರೆಯೇ, ಗೆಲುವಿನ ಅಮಲು, ಅಧಿಕಾರದ ಅಹಂಕಾರ ನಾಲಿಗೆಯ ಗುಣವನ್ನು ನಿಕೃಷ್ಟಗೊಳಿಸಿದೆ.

ಇದಕ್ಕೆ ತಕ್ಕ ಉತ್ತರ ಕೊಡುವ ಶಕ್ತಿ ನಮಗಿಲ್ಲ ಎಂಬುದಾಗಿ ಭಾವಿಸಿದ್ದರೆ, ಅದು ಮೂರ್ಖತನ, ರಾಜಕಾರಣ ಎಂದರೆ ಖರೀದಿ ಅಥವಾ ಮಾರಾಟವಲ್ಲ, ವ್ಯಾಪಾರ ಅಲ್ಲವೇ ಅಲ್ಲ. ನಮ್ಮ ಶಾಸಕರು ರಾಜಕೀಯ ಉದ್ದೇಶಕ್ಕಾಗಿ ನಮ್ಮೊಂದಿಗಿಲ್ಲ, ಪಕ್ಷ ಮತ್ತು ಶಾಸಕರ ನಡುವೆ ರಕ್ತ ಸಂಬಂಧಕ್ಕಿಂತ ಮಿಗಿಲಾದ ಗಾಢ ಬಾಂಧವ್ಯವಿದೆ, ನಾಯಕರು–ಶಾಸಕರ ನಡುವೆ ಬಿಡಿಸಲಾಗದ ಭಾವನಾತ್ಮಕ ಬೆಸುಗೆ ಇದೆ. 'ನಿಖಿಲ್ ಬಚ್ಚಾ.. ಪಾಪ ನಿಖಿಲ್..' ಎಂಬ ಅನುಕಂಪಕ್ಕೆ ತುತ್ತಾಗಿ ಕೈ ಚೆಲ್ಲುವ ಬಾಲ ಬುದ್ಧಿಯ ಮನಸ್ಥಿತಿಯವನಲ್ಲ ನಾನು.

ವೀರಯೋಧರಂತೆ ದುಡಿದರು: ನನ್ನ ಸೋಲು ನನ್ನ ಕಾರ್ಯಕರ್ತರಿಗೆ ಅತೀವ ನೋವುಂಟು ಮಾಡಿದೆ. ಅದನ್ನು ನಾನು ಬಲ್ಲೆ, ಇಡೀ ರಾಜ್ಯದ ಕಾರ್ಯಕರ್ತರೆಲ್ಲರೂ ವೀರಯೋಧರಂತೆ ಚನ್ನಪಟ್ಟಣದಲ್ಲಿ ಹಗಲಿರಳೂ ದುಡಿದರು, ಮನೆ ಮನೆಯನ್ನೂ ತಲುಪಿ ನನ್ನ ಗೆಲುವಿಗಾಗಿ ಶ್ರಮಿಸಿದರು, ಅಂತಿಮವಾಗಿ ಸೋಲಾಯಿತು.

ಶಾಸಕ ತನ್ವೀರ್ ಸೇಠ್‌ರಿಂದ ಹೊಲಿಗೆಯಂತ್ರ, ಆಟೋ ವಿತರಣೆ

ಮೈಸೂರು, ನ. 27–ಮಹಾನಗರ ಪಾಲಿಕೆ ಹಾಗೂ ಶಾಸಕರ ಅನುದಾನದಿಂದ, ನಗರದ ವಾರ್ಡ್ ನಂ.30ರ ಕ್ಯಾತಮಾರನಹಳ್ಳಿ ಹುಲಿಯಮ್ಮ ದೇವಸ್ಥಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅರ್ಹ 22 ಮಂದಿಗೆ ಹೊಲಿಗೆ ಯಂತ್ರ ಹಾಗೂ 15 ಮಂದಿಗೆ ಆಟೋ ವನ್ನು ಶಾಸಕ ತನ್ವೀರ್ ಸೇಠ್ ವಿತರಿಸಿದರು.

ನಂತರ ಮಾತನಾಡಿ, ವಿದ್ಯೆಗೆ ಯಾವುದೇ ವಯಸ್ಸಿನ ಮಿತಿಯಿಲ್ಲ. ಹೀಗಾಗಿ ಹೊಲಿಗೆ ಯಂತ್ರವನ್ನು ಕಲಿತು ಸದುಪಯೋಗಪಡಿಸಿಕೊಳ್ಳಿ ಎಂದು ಹೇಳಿದರು.

ಇನ್ನೂ ಆಟೋ ಚಾಲಕರಿಗೂ ಸಮಾಜದಲ್ಲಿ ಜವಾಬ್ದಾರಿಗಳಿವೆ. ಅದನ್ನು ಅರಿತು ಪ್ರಯಾಣಿಕರ ಸ್ನೇಹಿಯಾಗಿ ಕಾರ್ಯನಿರ್ವಹಿಸಿ ಉತ್ತಮ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸಿ.ಇಂತಹ ಅವಕಾಶ ಸದುಪಯೋಗಪಡಿಸಿಕೊಂಡು ಜೀವನದಲ್ಲಿ ಮುನ್ನೆಲೆಗೆ ಬನ್ನಿ ಎಂದು ತನ್ವೀರ್ ಸೇಠ್ ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಉಪಮೇಯರ್ ಎಚ್.ಎಂ. ಶಾಂತಕುಮಾರಿ, ಎಸ್‌ಟಿ ಘಟಕದ ಅಧ್ಯಕ್ಷ ರೋಹಿತ್.ಎಸ್, ಮುಖಂಡರಾದ ಶಿವಕುಮಾರ್, ರೂವಾರಿ ಯೋಗೇಶ್, ದಿ ಮೈಸೂರು ಕೋ ಅಪರೇಟಿವ್ ಬ್ಯಾಂಕ್ ಅಧ್ಯಕ್ಷೆ ರಾಜೇಶ್ವರಿ, ಎಂ.ಎನ್.ಮಹದೇವು, ಶಿವಲಿಂಗಯ್ಯ, ರಮೇಶ್, ಸಯ್ಯದ್ ಯಾಸಿರ್, ಶ್ರೀನಿವಾಸ್, ಹರೀಶ್, ಜಯಲಕ್ಷ್ಮಿ, ನಿಹಾಲ್ ರಾಜ್, ಪಲ್ಲವಿ, ಯಶೋಧ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



22 ಮಂದಿಗೆ ಶಾಸಕ ತನ್ವೀರ್ ಸೇಠ್ ಬುಧವಾರ ಹೊಲಿಗೆ ಯಂತ್ರ ವಿತರಿಸಿದರು.

ನ.30, ಬಾಡಿ ಬಿಲ್ಡ್; ಬೆಸ್ಟ್ ಫಿಸಿಕ್ ಸ್ಪರ್ಧೆ

ಮೈಸೂರು,ನ.27(ಎಂಟಿವೈ)– ಮೈಸೂರಿನ ದಸರಾ ವಸ್ತುಪ್ರದರ್ಶನ ಮೈದಾನದಲ್ಲಿ ನ.30ರಂದು ಸಂಜೆ 6ಕ್ಕೆ ರಾಜ್ಯ ಮಟ್ಟದ ಚಾಮರಾಜ ಒಡೆಯರ್ ಕಪ್ ಬಾಡಿ ಬಿಲ್ಡ್ ಹಾಗೂ ಬೆಸ್ಟ್ ಫಿಸಿಕ್ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಮೈಸೂರು ಜಿಲ್ಲಾ ಜಿಮ್ ಮತ್ತು ಫಿಟ್ನೆಸ್ ಸಂಸ್ಥೆಯ ಅಧ್ಯಕ್ಷ ಹರ್ಷ ತಿಳಿಸಿದ್ದಾರೆ.


ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಜನರಲ್ಲಿ ದೈಹಿಕ ಆರೋಗ್ಯ ಕುರಿತ ಅರಿವು ಕಡಿಮೆ ಆಗುತ್ತಿದೆ. ದೇಹದಾರ್ಢ್ಯತೆ ಆಸಕ್ತಿಯೂ ಇಳಿಕೆ ಆಗುತ್ತಿದೆ. ಅದರ ಬಗ್ಗೆ ಜಾಗೃತಿ ಮೂಡಿಸಲು ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಮ್ಯಾರಥಾನ್, ಸೈಕ್ಲೊಥಾನ್, ವಾಕಥಾನ್‌ಗಳು ನಡೆದರೂ ಬಾಡಿ ಬಿಲ್ಡಿಂಗ್ ಹಾಗೂ ಫಿಟ್ನೆಸ್‌ಗಳ ಬಗ್ಗೆ ತಿಳಿವಳಿಕೆ ಕೊರತೆಯಿದೆ. ಹೀಗಾಗಿ ಈ ಸ್ಪರ್ಧೆಯನ್ನು ವೀಕ್ಷಿಸುವಂತೆ ಮನವಿ ಮಾಡಿದರು. ಸ್ಪರ್ಧೆಯಲ್ಲಿ ವಿವಿಧ ವಿಭಾಗದ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಒಟ್ಟು 3.45 ಲಕ್ಷ ರೂ. ಮೊತ್ತದ ಬಹುಮಾನವಿದೆ. ಪ್ರಥಮ ಬಹುಮಾನ 50 ಸಾವಿರ, 2ನೇ ಬಹುಮಾನ 25, 3ನೇ ಬಹುಮಾನ 15 ಸಾವಿರ ರೂ. ನೀಡಲಾಗುತ್ತಿದೆ ಎಂದರು. ಗೋಷ್ಠಿಯಲ್ಲಿ ಜಿಎಸ್‌ಎಸ್ ಸಂಸ್ಥೆಯ ಶ್ರೀಹರಿ, ಸಂದೇಶ್, ಬಸವರಾಜು, ಸುಮನ್ ಇದ್ದರು.

ಸಿಎಂ ಸಿದ್ದರಾಮಯ್ಯರೊಂದಿಗೆ ಯತ್ನಾಳ್ ಬಣ ಒಳ ಒಪ್ಪಂದ: ಬಿಎಸ್‌ವೈ ಬಣದಿಂದ 'ರಾಕೆಟ್'

- ಕಟ್ಟಾ ಸುಬ್ರಹ್ಮಣ್ಯ ನಾಯ್ಡು ಮನೆಯಲ್ಲಿ ಸಭೆ; ದಾವಣಗೆರೆಯಲ್ಲಿ ಸಮಾವೇಶ ನಡೆಸಲು ನಿರ್ಧಾರ
- ಬಿಎಸ್‌ವೈ ರಾಜಕೀಯಕ್ಕೆ ಬಂದಾಗ ಕೆಲವರು ಇನ್ನು ಕಣ್ಣೇ ಬಿಟ್ಟಿರಲಿಲ್ಲ; ವಿರೋಧಿಗಳಿಗೆ ಟಾಂಗ್

ಬೆಂಗಳೂರು, ನ.27(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಜೊತೆ ಒಳ ಒಪ್ಪಂದ ಮಾಡಿಕೊಂಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಂಡ ಬಿಜೆಪಿ ವಿರುದ್ಧವೇ ಹೋರಾಟ ಮಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಬಣ ಟೀಕಾ ಪ್ರಹಾರ ಮಾಡಿದೆ.

ಪಕ್ಷದ ಹಿರಿಯ ನಾಯಕ ಹಾಗೂ ಮಾಜಿ ಸಚಿವ ಕಟ್ಟಾ ಸುಬ್ರಹ್ಮಣ್ಯ ನಾಯ್ಡು ನಿವಾಸದಲ್ಲಿ ಇಂದು ಸಭೆ ಸೇರಿದ್ದ ಬಣ, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್‌ನ ದುರಾಡಳಿತದ ವಿರುದ್ಧ ಹಾಗೂ ಬಿಜೆಪಿ ಸಂಘಟನೆಗೆ ದಾವಣಗೆರೆಯಲ್ಲಿ ಬೃಹತ್ ಸಮಾವೇಶ ನಡೆಸಲು ನಿರ್ಧರಿಸಿದೆ. ಸಭೆ ನಂತರ ಜಂಟಿ ಸುದ್ದಿಗೋಷ್ಠಿಯಲ್ಲಿ ವಿಷಯ ತಿಳಿಸಿದ ಕಟ್ಟಾ ಸುಬ್ರಹ್ಮಣ್ಯ ನಾಯ್ಡು, ಬಿ.ಸಿ. ಪಾಟೀಲ್, ಎಂ.ಪಿ.ರೇಣುಕಾಚಾರ್ಯ ಮತ್ತಿತರರು, ನ.29ರಂದು ಪಕ್ಷದ ಉಳಿವಿಗಾಗಿ ಕೋಲಾರದ ಕುರುಡುಮಲೆ ಗಣೇಶನಿಗೆ ಪೂಜೆ ಸಲ್ಲಿಸಿ ನಂತರ ಮೈಸೂರು ಚಾಮುಂಡಿಬೆಟ್ಟದಲ್ಲಿ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿ ಹೋರಾಟಕ್ಕೆ ಮುಂದಾಗುತ್ತೇವೆ ಎಂದರು.



ಸರ್ಕಾರದ ಭ್ರಷ್ಟಾಚಾರವನ್ನು ಜನರಿಗೆ ತಿಳಿಸಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕೈ ಬಲಪಡಿಸಲು, ಪಕ್ಷದ ನಿಷ್ಠರಾದ ನಾವು ರಾಜ್ಯಾದ್ಯಂತ ಸಭೆ ಮತ್ತು ಸಮಾವೇಶಗಳನ್ನು ನಡೆಸುತ್ತೇವೆ. ಯತ್ನಾಳ್ ಸೇರಿದಂತೆ ಮೂರು–ನಾಲ್ಕು ಜನರ ಗುಂಪು, ಸರ್ಕಾರದಿಂದ ತಮ್ಮ ಕೆಲಸ ಮಾಡಿಸಿಕೊಳ್ಳಲು ಸಿದ್ದರಾಮಯ್ಯ ಅವರ ತುತ್ತೂರಿಯಂತೆ ಕಾರ್ಯನಿರ್ವಹಿಸುತ್ತಿದ್ದು, ಪಕ್ಷ ವಿರೋಧಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಪಕ್ಷದ ರಾಜ್ಯಾಧ್ಯಕ್ಷ ವಿಜಯೇಂದ್ರ ಮತ್ತು ಯಡಿಯೂರಪ್ಪ ವಿರುದ್ಧ ಹೇಳಿಕೆಗಳನ್ನು ನೀಡುವ ಮೂಲಕ ಪಕ್ಷದ ರಾಷ್ಟ್ರೀಯ ನಾಯಕರನ್ನು ಹಂಗಿಸುವ ಕೆಲಸ ಮಾಡುತ್ತಿದ್ದಾರೆ. ಇವರಿಗೆ ಯಾವುದೇ ಜಿಲ್ಲೆಯಲ್ಲೂ ಪಕ್ಷದ ನಾಯಕರು, ಪಕ್ಷದ ಜಿಲ್ಲಾಧ್ಯಕ್ಷರ ಬೆಂಬಲ ಸಿಗುತ್ತಿಲ್ಲ. ಪಕ್ಷ ವಿರೋಧಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿರುವ ಇವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ವರಿಷ್ಠರನ್ನು ಒತ್ತಾಯಿಸುತ್ತೇವೆ, ನಿಷ್ಠರಾದ ನಾವೂ ರಾಜ್ಯಾಧ್ಯಕ್ಷರ ಪರವಾಗಿ ಯಾತ್ರೆ ಕೈಗೊಳ್ಳಲಿದ್ದೇವೆ ಎಂದರು.

ಬಸನಗೌಡ ಪಾಟೀಲ್ ಯತ್ನಾಳ್, ಮಾಜಿ ಸಚಿವರಾದ ಕುಮಾರಬಂಗಾರಪ್ಪ, ರಮೇಶ್ ಜಾರಕಿ ಹೊಳಿ ಮತ್ತಿತರರು ಪಕ್ಷದ ಅಧ್ಯಕ್ಷರ ಅನುಮತಿ ಪಡೆಯದೆ ಚಿಹ್ನೆಯನ್ನೂ ಬಳಸದೆ ಜನಜಾಗೃತಿ ಅಭಿಯಾನ ನಡೆಸುತ್ತಿದ್ದು, ಇದಕ್ಕೆ ಭಾರಿ ವಿರೋಧ ವ್ಯಕ್ತವಾಗಿದೆ, ತಕ್ಷಣವೇ ವರಿಷ್ಠರು ಮಧ್ಯಪ್ರವೇಶಿಸಿ ಅಭಿಯಾನ ನಡೆಸದಂತೆ ಸ್ಪಷ್ಟ ಸೂಚನೆ ನೀಡಬೇಕೆಂದು ಒತ್ತಾಯಿಸಿದ್ದಾರೆ. ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷರನ್ನಾಗಿ ನೇಮಿಸಿದ್ದು ಈಗ ಪಾದಯಾತ್ರೆ ನಡೆಸುತ್ತಿರುವವರಲ್ಲ, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಷಾ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್.

ಅಪರಿಚಿತ ಶವ ಪತ್ತೆ

ಮೈಸೂರು,ನ.27– ನ.23 ರಂದು ಹನಕೆರೆ–ಮಂಡ್ಯ ರೈಲು ನಿಲ್ದಾಣಗಳ ನಡುವೆ ಸುಮಾರು 40 ವರ್ಷದ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದ್ದು, ಮೈಸೂರು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತ ವ್ಯಕ್ತಿಗೆ ಸುಮಾರು 40 ರಿಂದ 45 ವರ್ಷ ವಯಸ್ಸಾಗಿದ್ದು, 5.6 ಅಡಿ ಎತ್ತರ, ದೃಢಕಾಯ ಶರೀರ, ಗೋಧಿ ಮೈಬಣ್ಣ, ಕಪ್ಪು ಬಿಳಿ ಮಿಶ್ರಿತ ಮೀಸೆ ಹಾಗೂ ಕುರುಚಲು ಗಡ್ಡ ಬಿಟ್ಟಿದ್ದು, ಮುಖ ಜಜ್ಜಿ ಹೋಗಿರುತ್ತದೆ.

ಮೃತನ ವಾರಸುದಾರರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಮೈಸೂರು ರೈಲ್ವೆ ಪೊಲೀಸ್ ಠಾಣೆಯ ದೂ.ಸಂಖ್ಯೆ: 0821–2516579 ಅನ್ನು ಸಂಪರ್ಕಿಸಬಹುದು ಎಂದು ರೈಲ್ವೆ ಪೊಲೀಸ್ ಠಾಣೆಯ ಪ್ರಕಟಣೆ ತಿಳಿಸಿದೆ.

ಮುಸ್ಲಿಮರಿಗೆ ಮತದಾನದ ಹಕ್ಕು ನೀಡಬಾರದು ಹೇಳಿಕೆಗೆ ವಿಷಾದ ವ್ಯಕ್ತಪಡಿಸಿದ ಚಂದ್ರಶೇಖರ ಸ್ವಾಮೀಜಿ

ಬೆಂಗಳೂರು, ನ.27– ಮುಸ್ಲಿಮರಿಗೆ ಮತದಾನದ ಹಕ್ಕು ನೀಡಬಾರದು ಮತ್ತು ದೇಶದಲ್ಲಿ ವಕ್ಫ್ ಮಂಡಳಿಯೇ ಇಲ್ಲದಂತೆ ಮಾಡಬೇಕು ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಚಂದ್ರಶೇಖರ ಸ್ವಾಮೀಜಿ ಅವರು ಬುಧವಾರ ತಮ್ಮ ಹೇಳಿಕೆಗೆ ವಿಷಾದ ವ್ಯಕ್ತಪಡಿಸಿದ್ದಾರೆ.



ಇಂದು ತಮ್ಮ ಹೇಳಿಕೆ ಕುರಿತು ಪ್ರತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಸ್ವಾಮೀಜಿ, ಮುಸಲ್ಮಾನರೂ ಸಹ ಈ ದೇಶದ ಪ್ರಜೆಗಳೇ. ಎಲ್ಲರಂತೆ ಅವರಿಗೂ ಮತದಾನದ ಹಕ್ಕು ಇರುತ್ತದೆ. ನಿನ್ನೆಯ ದಿನ ತಾನು ಬಾಯಿ ತಪ್ಪಿ ನೀಡಿದ ಹೇಳಿಕೆಯಿಂದ ಮುಸಲ್ಮಾನ ಸಹೋದರರಿಗೆ ಬೇಸರವಾಗಿದ್ದರೆ, ಅದಕ್ಕಾಗಿ ಹೃತ್ಪೂರ್ವಕವಾಗಿ ವಿಷಾದ ವ್ಯಕ್ತಪಡಿಸುತ್ತೇನೆ ಎಂದು ಹೇಳಿದ್ದಾರೆ.

ಮೂಲತಃ ಒಕ್ಕಲಿಗರು ಧರ್ಮ ಸಹಿಷ್ಣುಗಳು. ನಾವು ಎಲ್ಲಾ ಧರ್ಮದವರನ್ನು ಇಲ್ಲಿಯವರೆಗೂ ಸಮಾನವಾಗಿಯೇ ಕಂಡಿರುತ್ತೇವೆ. ನಮ್ಮ ಶ್ರೀಮಠಕ್ಕೆ ಮುಸ್ಲಿಮರು ಸಹ ಬಂದು ಹೋಗುತ್ತಾರೆ. ನಾವು ಸಹ ಮುಸ್ಲಿಮರ ಮದುವೆ ಹಾಗೂ ಇತರ ಶುಭ ಸಮಾರಂಭಗಳಲ್ಲಿ ಭಾಗಿಯಾಗಿರುತ್ತೇವೆ. ಆದ್ದರಿಂದ ಈ ಜನಾಂಗದ ಬಗ್ಗೆ ಯಾವುದೇ ಅಸಹಿಷ್ಣುತೆ ಹೊಂದಿಲ್ಲ ಎಂದು ಸ್ಪಷ್ಟನೆ ನೀಡಿರುವ ಸ್ವಾಮೀಜಿ, ಆ ಹೇಳಿಕೆ ವಿಚಾರವನ್ನು ಕೈಬಿಡುವಂತೆ ಮನವಿ ಮಾಡಿದ್ದಾರೆ.

ನಿನ್ನೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಭಾರತೀಯ ಕಿಸಾನ್ ಸಂಘದ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರೈತರ ಜಮೀನು ಉಳಿಸಲು ಎಲ್ಲರೂ ಒಂದಾಗಿ ಹೋರಾಟ ನಡೆಸುವ ತುರ್ತು ಸಂದರ್ಭ ಎದುರಾಗಿದೆ. ಮುಸ್ಲಿಂ ಸಮುದಾಯಕ್ಕೆ ಮತದಾನದ ಹಕ್ಕು ನಿರಾಕರಿಸುವ ಕಾನೂನು ತರಬೇಕು. ಬೇರೆಯವರ ಭೂಮಿಯನ್ನು ಕಸಿದುಕೊಳ್ಳುವುದು ಧರ್ಮವಲ್ಲ. ಮೊದಲು ವಕ್ಫ್ ಬೋರ್ಡ್ ಇಲ್ಲದಂತೆ ನೋಡಿಕೊಳ್ಳಬೇಕು ಎಂದು ಹೇಳಿದ್ದರು.

ಶಾಸಕರಿಗೆ ಸನ್ಮಾನ...



ಅಶೋಕಪುರಂನ ಸಿದ್ದಪ್ಪಾಜಿ ದೇವಸ್ಥಾನದ ಕೊಂಡೋತ್ಸವದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಊರಿನ ಯಜಮಾನರಾದ ಮಾದೇವ, ನಾಗರಾಜ, ಬಿಲ್ಲಯ್ಯ, ಪ್ರಸಾದ್, ಜೇ.ರವಿ, ಕೆ.ಆರ್.ಕ್ಷೇತ್ರದ ಬಿಜೆಪಿ ಅಧ್ಯಕ್ಷ ಗೋಪಾಲ್ ರಾಜೇ ಅರಸ್, ಪ್ರಧಾನ ಕಾರ್ಯದರ್ಶಿ ಜಯರಾಮ್, ಪ್ರದೀಪ್ ಕುಮಾರ್, ಕೃಷ್ಣನಾಯಕ ಇನ್ನಿತರರಿದ್ದರು.

ದೇಶ - ವಿದೇಶ


ಇಸ್ರೇಲ್–ಲೆಬನಾನ್‌ನ ಹಿಜ್ಬುಲ್ಲಾ ಮಧ್ಯೆ ಕದನ ವಿರಾಮ ಘೋಷಣೆ



ಜೆರುಸಲೇಂ: ಇಸ್ರೇಲ್ ಮತ್ತು ಲೆಬನಾನ್‌ನ ಹಿಜ್ಬುಲ್ಲಾ ಉಗ್ರಗಾಮಿ ಸಂಘಟನೆ ನಡುವಿನ ಕದನ ವಿರಾಮ ಇಂದು ಬುಧವಾರ ಮುಂಜಾನೆ ಆರಂಭವಾಗಿದೆ. ಈ ಕದನ ವಿರಾಮವು ಇಸ್ರೇಲ್ ಮತ್ತು ಹಮಾಸ್ ನಡುವೆ ಗಾಜಾದಲ್ಲಿ 14 ತಿಂಗಳುಗಳಿಂದ ನಡೆಯುತ್ತಿರುವ ಯುದ್ಧವನ್ನು ಕೊನೆಗೊಳಿಸುವ ನಿಟ್ಟಿನಲ್ಲಿ ಪ್ರಮುಖ ಹೆಜ್ಜೆಯಾಗಿದೆ. ಹಿಜ್ಬುಲ್ಲಾ ಕದನ ವಿರಾಮ ಒಪ್ಪಂದವನ್ನು ಮುರಿದರೆ ದಾಳಿ ನಡೆಸುವುದಾಗಿ ಇಸ್ರೇಲ್ ಹೇಳಿದೆ. ಆರಂಭದಲ್ಲಿ ಎರಡು ತಿಂಗಳ ಕದನ ವಿರಾಮ ಘೋಷಿಸಲಾಗುತ್ತದೆ. ದಕ್ಷಿಣ ಲೆಬನಾನ್‌ನಲ್ಲಿ ಹಿಜ್ಬುಲ್ಲಾ ತನ್ನ ಸಶಸ್ತ್ರ ಪಡೆಗಳನ್ನು ಕೊನೆಗೊಳಿಸಬೇಕು, ಇಸ್ರೇಲಿ ಪಡೆಗಳು ತಮ್ಮ ಗಡಿಯ ಕಡೆಗೆ ಹಿಂತಿರುಗಬೇಕು. ಯುನೈಟೆಡ್ ಸ್ಟೇಟ್ಸ್ ನೇತೃತ್ವದ ಅಂತರರಾಷ್ಟ್ರೀಯ ಸಮಿತಿಯು ಅನುಸರಣೆಯನ್ನು ಮೇಲ್ವಿಚಾರಣೆ ಮಾಡುತ್ತದೆ. ಕದನ ವಿರಾಮವು ಇಂದು ನಸುಕಿನ ಜಾವ 4 ಗಂಟೆಗೆ ಆರಂಭವಾಗಿದೆ. ಇತ್ತೀಚಿನ ವಾರಗಳಲ್ಲಿ ಸಂಪೂರ್ಣ ಯುದ್ಧವಾಗಿ ಮಾರ್ಪಟ್ಟ ಸಂಘರ್ಷದ ಪ್ರಾರಂಭದಿಂದಲೂ ಇಸ್ರೇಲ್ ಬೈರುತ್‌ನಲ್ಲಿ ತನ್ನ ಅತ್ಯಂತ ತೀವ್ರವಾದ ವೈಮಾನಿಕ ದಾಳಿಯನ್ನು ನಿನ್ನೆ ನಡೆಸಿದ್ದು ಅದರಲ್ಲಿ ಕನಿಷ್ಠ 42 ಜನರು ಮೃತಪಟ್ಟಿದ್ದಾರೆ.

ವಿಶ್ವದ ಹಿರಿಯಜ್ಜ ಜಾನ್ ಟಿನ್ನಿಸ್ವುಡ್ ನಿಧನ

ಲಿವರ್‌ಪೂಲ್(ಇಂಗ್ಲೆಂಡ್), ನ.27– ವಿಶ್ವದ ಅತಿ ಹಿರಿಯ ವ್ಯಕ್ತಿ ಇಂಗ್ಲೆಂಡ್‌ನ ಜಾನ್ ಟಿನ್ನಿಸ್ವುಡ್(112) ಸೋಮವಾರ ಮೃತಪಟ್ಟಿದ್ದಾರೆ.



ಇಂಗ್ಲೆಂಡ್‌ನ ಲಿವರ್‌ಪೂಲ್‌ನಲ್ಲಿ 1912ರಲ್ಲಿ ಜನಿಸಿದ್ದ ಜಾನ್ ಅವರನ್ನು ಇದೇ ವರ್ಷ ಏಪ್ರಿಲ್‌ನಲ್ಲಿ 'ವಿಶ್ವದ ಹಿರಿಯ ವ್ಯಕ್ತಿ' ಎಂದು ಗುರುತಿಸಿ ಗಿನ್ನಿಸ್ ವರ್ಲ್ಡ್ ರೆಕಾರ್ಡ್ ಸಂಸ್ಥೆ ಘೋಷಿಸಿತ್ತು.

'ವಾಯವ್ಯ ಇಂಗ್ಲೆಂಡ್‌ನ ಸೌತ್‌ಪೋರ್ಟ್‌ನಲ್ಲಿರುವ ಕೇರ್ ಹೋಮ್‌ನಲ್ಲಿ ಟಿನ್ನಿಸ್ವುಡ್ ಸೋಮವಾರ ನಿಧನರಾಗಿದ್ದಾರೆ' ಎಂದು ಅವರ ಕುಟುಂಬ ಸದಸ್ಯರು ತಿಳಿಸಿದ್ದಾರೆ. 'ದೀರ್ಘಾಯುಷ್ಯವನ್ನು ಹೊಂದುವುದು ಅಥವಾ ಕಡಿಮೆ ಕಾಲ ಬದುಕುವುದು ಒಬ್ಬರ ಅದೃಷ್ಟದ ಮೇಲೆ ನಿಂತಿದೆ. ಈ ವಿಚಾರದಲ್ಲಿ ನಮಗೆ ಏನು ಮಾಡಲು ಸಾಧ್ಯ ವಿಲ್ಲ' ಎಂದು ಸಂದರ್ಶವೊಂದರಲ್ಲಿ ಜಾನ್ ಹೇಳಿದ್ದರು. ಟೈಟಾನಿಕ್ ಹಡಗು ದುರಂತ ನಡೆದ ವರ್ಷವೇ ಜನಿಸಿದ್ದ ಜಾನ್ ಅವರು ಎರಡು ಮಹಾಯುದ್ಧಗಳು ಮತ್ತು ಕೋವಿಡ್‌ನಂತಹ ಜಾಗತಿಕ ಸಾಂಕ್ರಾಮಿಕ ರೋಗದ ನಡುವೆಯು ಬದುಕುಳಿದು ವಿಶ್ವದ ಹಿರಿಯಜ್ಜ ಎನಿಸಿಕೊಂಡಿದ್ದರು.

ಅಮೆರಿಕದ ಚಾರ್ಜ್‌ಶೀಟ್‌ನಲ್ಲಿ ಅದಾನಿ ವಿರುದ್ಧ ಲಂಚದ ಆರೋಪವಿಲ್ಲ



ನವದೆಹಲಿ: ಉದ್ಯಮಿ ಗೌತಮ್ ಅದಾನಿ ಮತ್ತು ಅವರ ಸೋದರಳಿಯ ಸಾಗರ್ ಅದಾನಿ ವಿರುದ್ಧ ಅಮೆರಿಕದಲ್ಲಿ ಕೇಳಿಬಂದಿರುವ ಲಂಚದ ಆರೋಪ ಸಂಬಂಧ ಅದಾನಿ ಗ್ರೂಪ್ ಕಂಪನಿ ಇದೇ ಮೊದಲ ಬಾರಿಗೆ ಸ್ಪಷ್ಟನೆ ನೀಡಿದೆ. ಅದಾನಿ ಗ್ರೀನ್ ಎನರ್ಜಿ ಬುಧವಾರ ಷೇರು ಮಾರುಕಟ್ಟೆ ಫೈಲಿಂಗ್‌ನಲ್ಲಿ ಸ್ಪಷ್ಟನೆ ನೀಡಿದ್ದು, ಲಂಚದ ಆರೋಪಗಳ ಸುದ್ದಿ ಸುಳ್ಳು ಮತ್ತು ಆಧಾರರಹಿತ ಎಂದಿದೆ. ಯುಎಸ್ ಫೆಡರಲ್ ಕರಪ್ಶನ್ ಪ್ರಾಕ್ಟೀಸಸ್ ಆಕ್ಟ್ ಅಡಿಯಲ್ಲಿ ಆರೋಪ ಹೊರಿಸಲಾಗಿದೆ ಎಂಬ ಸುದ್ದಿ ಸಂಪೂರ್ಣವಾಗಿ ತಪ್ಪು ಎಂದು ಹೇಳಿದೆ.

ಅದಾನಿ ವಿರುದ್ಧ ಅಮೆರಿಕದ ವಿದೇಶಿ ಭ್ರಷ್ಟಾಚಾರ ಕಾಯ್ದೆಯಡಿ ಲಂಚದ ಆರೋಪ ಹೊರಿಸಲಾಗಿಲ್ಲ. ಅಮೆರಿಕದಲ್ಲಿ ಹೊರಿಸಲಾಗಿರುವ ದೋಷಾರೋಪಗಳು ಸೆಕ್ಯುರಿಟೀಸ್ ಮತ್ತು ವಂಚನೆಗೆ ಸಂಬಂಧಿಸಿದ್ದಾಗಿವೆ ಎಂದು ಕಂಪನಿ ಸ್ಪಷ್ಟಪಡಿಸಿದೆ. ವಿಶೇಷವೆಂದರೆ, ಈ ವಿಚಾರದಲ್ಲಿ ಭಾರತದ ಮಾಜಿ ಅಟಾರ್ನಿ ಜನರಲ್ ಮುಕುಲ್ ರೋಹಟಗಿ ಮತ್ತು ರಾಜ್ಯಸಭಾ ಸಂಸದ ಮತ್ತು ಹಿರಿಯ ವಕೀಲ ಮಹೇಶ್ ಜೇಠ್ಮಲಾನಿ ಅದಾನಿ ಬೆಂಬಲಕ್ಕೆ ಬಂದಿದ್ದಾರೆ. ಉಭಯರೂ ಪತ್ರಿಕಾಗೋಷ್ಠಿ ನಡೆಸಿ, ಅದಾನಿ ವಿರುದ್ಧದ ಆರೋಪಗಳಲ್ಲಿ ಹುರುಳಿಲ್ಲ ಎಂದಿದ್ದಾರೆ.

ಫೆಂಗಲ್ ಚಂಡಮಾರುತ: ತಮಿಳುನಾಡಿನಲ್ಲಿ ಭಾರಿ ಮಳೆ



ಚೆನ್ನೈ: ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತದಿಂದಾಗಿ ಸೃಷ್ಟಿಯಾಗಿರುವ ಫೆಂಗಲ್ ಚಂಡಮಾರುತ ತಮಿಳು ನಾಡಿನತ್ತ ಧಾವಿಸಿದ್ದು, ಪರಿಣಾಮ ತಮಿಳುನಾಡು ಕರಾವಳಿ ಯಾದ್ಯಂತ ಭಾರಿ ಮಳೆ ಸುರಿಯುತ್ತಿದೆ. ತಮಿಳುನಾಡು ಮತ್ತು ಪುದುಚೇರಿಯ ಹಲವು ಭಾಗಗಳಿಗೆ ಹವಾಮಾನ ಎಚ್ಚರಿಕೆ ನೀಡಿದ್ದು, ತಮಿಳುನಾಡು ಕರಾವಳಿ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಣೆ ಮಾಡಲಾಗಿದೆ. ಮುಂದಿನ ನಾಲ್ಕೈದು ದಿನಗಳಲ್ಲಿ ಭಾರಿ ಮಳೆಯಾಗಲಿದ್ದು, ಭಾರತೀಯ ಹವಾಮಾನ ಇಲಾಖೆ ತಮಿಳುನಾಡಿನ ನಾಲ್ಕು ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಣೆ ಮಾಡಿದೆ.

ಆಂಧ್ರಪ್ರದೇಶಕ್ಕೂ ಮಳೆಯ ಎಚ್ಚರಿಕೆಯನ್ನು ನೀಡಲಾಗಿದ್ದು, ನ.29ರವರೆಗೆ ಮಳೆಯಾಗಲಿದೆ. ನಾಗಪಟ್ಟಿಣಂ, ತಿರುವರೂರ್ ಮತ್ತು ಮೈಲಾಡುತುರೈ ಜಿಲ್ಲೆಗಳಿಗೆ ಮತ್ತು ಕಾರೈಕಲ್ ಪ್ರದೇಶಕ್ಕೆ ರೆಡ್ ಅಲರ್ಟ್ ಘೋಷಿಸಿದ್ದು, ಈ ನಾಲ್ಕು ಜಿಲ್ಲೆಗಳಲ್ಲಿ ಹಲವೆಡೆ ಅತೀ ಹೆಚ್ಚು ಮಳೆಯಾಗುವ ಸಾಧ್ಯತೆಯಿದೆ. ತಮಿಳುನಾಡು ಮಾತ್ರವಲ್ಲದೇ ನೆರೆಯ ಕರ್ನಾಟಕದಲ್ಲೂ ಭಾರಿ ಮಳೆಯಾಗುವ ಸಾಧ್ಯತೆ ಇದೆ. ಚಂಡಮಾರುತ ಪರಿಣಾಮ ಬೆಂಗಳೂರಿನ ಮೇಲೂ ಗೋಚರಿಸಲಿದೆ.

ಅಕ್ರಮವೆಸಗಿದರೆ ಆತ್ಮಹತ್ಯೆ: ರಕ್ತದಲ್ಲಿ ಮುಚ್ಚಳಿಕೆ ಬರೆದ ಬ್ಯಾಂಕ್ ಸಿಬ್ಬಂದಿ!

ಟೋಕಿಯೋ: ಹಣಕಾಸು ಅಕ್ರಮಗಳನ್ನು ತಡೆಯುವ ನಿಟ್ಟಿನಲ್ಲಿ ಜಪಾನ್‌ನ ಶಿಕೋಕು ಬ್ಯಾಂಕ್ ವಿಚಿತ್ರ ಹಾಗೂ ವಿಭಿನ್ನ ಕ್ರಮಕ್ಕೆ ಮುಂದಾಗಿದೆ. ಇದರ ಪ್ರಕಾರ ಬ್ಯಾಂಕಿನ ಎಲ್ಲಾ ಉದ್ಯೋಗಿಗಳಿಂದ, ಅಕ್ರಮದಲ್ಲಿ ತೊಡಗಿದರೆ ಆ ಮೊತ್ತವನ್ನು ಕೈಯ್ಯಾರೆ ಭರಿಸಿ ನಂತರ ಆತ್ಮಹತ್ಯೆಗೆ ಶರಣಾಗುತ್ತೇವೆ ಎಂಬ ಪ್ರತಿಜ್ಞೆಗೆ ರಕ್ತದಲ್ಲಿ ಸಹಿ ಮಾಡಿಸಿಕೊಳ್ಳಲಾಗಿದೆ. ಈ ಪ್ರತಿಜ್ಞೆಯ ಪ್ರತಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಜನರ ಗಮನ ಸೆಳೆಯುತ್ತಿದೆ. ಈಗಾಗಲೇ ಶಿಕೋಕು ಬ್ಯಾಂಕ್‌ನ ಪೂರ್ವವರ್ತಿಯಾದ ಥರ್ಟಿ–ಸವೆಂತ್ ನ್ಯಾಷನಲ್ ಬ್ಯಾಂಕ್‌ನ ಅಧ್ಯಕ್ಷ ಮಿಯುರಾ ಸೇರಿದಂತೆ ಎಲ್ಲಾ 23 ಉದ್ಯೋಗಿಗಳು ಈ ಪ್ರತಿಜ್ಞೆಗೆ ಸಹಿ ಮಾಡಿರುವುದಾಗಿ ಬ್ಯಾಂಕ್‌ನ ಅಧಿಕೃತ ವೆಬ್‌ಸೈಟ್ ಮಾಹಿತಿ ನೀಡಿದೆ. ಜೊತೆಗೆ, ಬ್ಯಾಂಕ್ ಉದ್ಯೋಗಿಯಾಗಿ ಮಾತ್ರವಲ್ಲದೆ ಸಮಾಜದಲ್ಲಿ ಒಬ್ಬರಾಗಿರುವ ನಮ್ಮ ನೈತಿಕತೆ ಮತ್ತು ಜವಾಬ್ದಾರಿಯನ್ನು ಇದು ಪ್ರತಿಬಿಂಬಿಸುತ್ತದೆ. ಅಂತೆಯೇ, ಇದನ್ನು ಶಿಕೋಕು ಬ್ಯಾಂಕ್‌ನ ಆಸ್ತಿಯಂತೆ ಮುಂದುವರೆಸಿಕೊಂಡು ಹೋಗಲಾಗುತ್ತದೆ ಎಂದು ತಿಳಿಸಲಾಗಿದೆ. ಬ್ಯಾಂಕ್‌ನ ಈ ನಿರ್ಧಾರದಿಂದ ಜನ ಬೆರಗಾಗಿದ್ದು, ಇದರಿಂದಲೇ ಆ ಬ್ಯಾಂಕ್‌ನಲ್ಲಿ ಅಷ್ಟೊಂದು ಹಣ ಇಡಲಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ಮಿತ್ರ ಗುರುವಾರ 28 ನವೆಂಬರ್ 2024

ಕೆ.ಎಂ.ಕಾರ್ಯಪ್ಪ, ಕೆ.ಎಸ್.ತಿಮ್ಮಯ್ಯ ಅವರ ಬಗ್ಗೆ ಅವಹೇಳನ ಮಾಡಿರುವ ಆರೋಪಿ

ವಿದ್ಯಾಧರ್‌ನನ್ನು ಗಡಿಪಾರು ಮಾಡದಿದ್ದರೆ ತೀವ್ರ ಹೋರಾಟ

ವಿವಿಧ ಕೊಡವ ಸಂಘಟನೆಗಳ ಎಚ್ಚರಿಕೆ


ಜಂಟಿಸುದ್ದಿಗೋಷ್ಠಿಯಲ್ಲಿ ವಿವಿಧ ಕೊಡವ ಸಂಘಟನೆಗಳ ಮುಖಂಡರು ಮಾತನಾಡಿದರು.

ಮಡಿಕೇರಿ, ನ.27–ದೇಶ ಕಂಡ ಮಹಾನ್ ಚೇತನಗಳಾದ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಹಾಗೂ ಪದ್ಮಭೂಷಣ ಕೆ.ಎಸ್. ತಿಮ್ಮಯ್ಯ ಅವರ ಬಗ್ಗೆ ಸಾಮಾಜಿಕ ಜಾಲ ತಾಣದಲ್ಲಿ ಅವಹೇಳನ ಮಾಡಿರುವ ವಕೀಲ ಕೆ.ಆರ್.ವಿದ್ಯಾಧರ್‌ನನ್ನು ಒಂದು ವಾರದೊಳಗೆ ಗಡಿಪಾರು ಮಾಡದಿದ್ದರೆ ತೀವ್ರ ಹೋರಾಟ ನಡೆಸುವುದಾಗಿ ವಿವಿಧ ಕೊಡವ ಸಂಘಟನೆಗಳು ಎಚ್ಚರಿಕೆ ನೀಡಿವೆ.

ನಗರದಲ್ಲಿ ಜಂಟಿಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಖಿಲ ಕೊಡವ ಸಮಾಜದ ಕಾರ್ಯದರ್ಶಿ ಕೀತಿಯಂಡ ವಿಜಯ ಕುಮಾರ್, ಕೊಡವಾಮೆರ ಕೊಂಡಾಟ ಸಂಘಟನೆ ಅಧ್ಯಕ್ಷ ಚಾಮೆರ ದಿನೇಶ್ ಬೆಳ್ಯಪ್ಪ, ಕಾರ್ಯದರ್ಶಿ ಕುಂಞೀರ ಗಿರೀಶ್ ಭೀಮಯ್ಯ, ಕನೆಕ್ಟಿಂಗ್ ಕೊಡವಾಸ್ ಸಂಚಾಲಕ ಶಾಂತೆಯಂಡ ನಿರನ್ ನಾಚಪ್ಪ, ಒಡಿಯಂಡ ನವೀನ್ ತಿಮ್ಮಯ್ಯ ಹಾಗೂ ಸಾಮಾಜಿಕ ಕಾರ್ಯಕರ್ತ ಚೊಟ್ಟೆಯಂಡ ಸಂಜುಕಾವೇರಪ್ಪ, ವೀರ ಸೇನಾನಿಗಳ ಅವಹೇಳನ ಪ್ರಕರಣವನ್ನು ಮರು ತನಿಖೆಗೆ ಒಳಪಡಿಸಿ ಗಡಿಪಾರಿಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ವೀರ ಸೇನಾನಿಗೆಳಿಗೆ ಅಪಮಾನ ಮಾಡಿದ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾದ ಪೊಲೀಸರ ಕಾರ್ಯಕ್ಷಮತೆಯನ್ನು ಅಭಿನಂದಿಸುತ್ತೇವೆ. ಆರೋಪಿ ವಕೀಲ ಕೆ.ಆರ್.ವಿದ್ಯಾಧರ್‌ನನ್ನು ಅಮಾನತು ಮಾಡಿದ ವಕೀಲರ ಸಂಘವನ್ನು ಕೂಡ ಅಭಿನಂದಿಸುವುದಾಗಿ ಹೇಳಿದರು.

ಆರೋಪಿಯನ್ನು ಬಂಧಿಸುವಲ್ಲಿ ಶ್ರಮ ವಹಿಸಿದ ಪೊಲೀಸರು, ಇತರ ಸಂಘಟನೆಗಳು ನೀಡಿದ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಿದ್ದರೆ ಕಠಿಣ ಕ್ರಮ ಕೈಗೊಳ್ಳಲು ಅವಕಾಶವಿತ್ತು. ಆದರೆ, ಪೊಲೀಸರು ಸುಮೋಟೋ ದೂರು ದಾಖಲಿಸಿದ ಪರಿಣಾಮ ನಾವು ಮೇಲ್ಮನವಿ ಸಲ್ಲಿಸಲೂ ತೊಂದರೆಯಾಗುತ್ತಿದೆ. ತಕ್ಷಣ ಪೊಲೀಸರು ಪ್ರಕರಣದ ಮರು ತನಿಖೆಗೆ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಬೇಕು ಎಂದು ಒತ್ತಾಯಿಸಿದರು.

ಕೊಡಗಿನಲ್ಲಿ ಹಿಂದೆ ನಡೆದ ಇದೇ ರೀತಿ ಪ್ರಕರಣಗಳನ್ನು ಅವಲೋಕಿಸಿದಾಗ, ಆರೋಪಿಗಳು ತಿಂಗಳುಗಟ್ಟಲೇ ಜೈಲಿನಲ್ಲಿ ಇದ್ದುದ್ದನ್ನು ನಾವು ಗಮನಿಸಿದ್ದೇವೆ. ಆದ್ದರಿಂದ ಪೊಲೀಸರು ಬಲವಾದ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಿ ಆರೋಪಿಯನ್ನು ಮತ್ತೆ ಬಂಧಿಸಲು ಅವಕಾಶವಿದೆ. ಪರಸ್ಪರರನ್ನು ಎತ್ತಿಕಟ್ಟಿ ಒಡಕು ಮೂಡಿಸುತ್ತಿರುವ ವ್ಯಕ್ತಿಯನ್ನು ಗಡಿಪಾರು ಮಾಡಬೇಕೆಂದು ಆಗ್ರಹಿಸಿದರು. ಇನ್ನು ಮುಂದೆ ಈ ರೀತಿ ಪ್ರಕರಣಗಳು ನಡೆಯದಂತೆ ತಡೆಯಲು ಆರೋಪಿಗೆ ನೀಡುವ ಶಿಕ್ಷೆ ಮಾದರಿಯಾಗಬೇಕು ಎಂದರು.

ಹಿಂದು ಜಾಗರಣ ವೇದಿಕೆಯಿಂದ ಮನವಿ ಸಲ್ಲಿಕೆ


ಹಿಂದು ಜಾಗರಣ ವೇದಿಕೆಯ ಕೊಡಗು ಘಟಕದಿಂದ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರಿಗೆ ಮನವಿ ಸಲ್ಲಿಸಲಾಯಿತು.

ಮಡಿಕೇರಿ, ನ.27–ಭಾರತೀಯ ಸೇನೆಯ ವೀರ ಸೇನಾನಿಗಳಾದ ಫೀ.ಮಾ. ಕೆ.ಎಂ.ಕಾರ್ಯಪ್ಪ ಹಾಗೂ ಜನರಲ್ ಕೆ.ಎಸ್.ತಿಮ್ಮಯ್ಯ ಅವರ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನ ಮಾಡಿದ ಆರೋಪಿ ವಕೀಲ ಕೆ.ಆರ್.ವಿದ್ಯಾಧರ್‌ನನ್ನು ಜಿಲ್ಲೆಯಿಂದ ಗಡಿಪಾರು ಮಾಡುವಂತೆ ಒತ್ತಾಯಿಸಿ ಹಿಂದು ಜಾಗರಣ ವೇದಿಕೆಯ ಕೊಡಗು ಘಟಕದಿಂದ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರಿಗೆ ಮನವಿ ಸಲ್ಲಿಸಲಾಯಿತು.

ಹಿಂದು ಜಾಗರಣ ವೇದಿಕೆಯ ಜಿಲ್ಲಾ ಸಂಚಾಲಕ ಕುಕ್ಕೇರ ಅಜಿತ್ ಹಾಗೂ ಪ್ರಮುಖರು, ಆರೋಪಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು. ಸಾಮಾಜಿಕ ಜಾಲತಾಣದಲ್ಲಿ ನಕಲಿ ಖಾತೆ ಬಳಸಿ ಅಪ್ರತಿಮ ವೀರ ಸೇನಾಧಿಕಾರಿಗಳಿಗೆ ಅಗೌರವ ತೋರಿದ ಈತನನ್ನು ಉನ್ನತ ಮಟ್ಟದ ತನಿಖೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿದರು.

ಕೇರಳ ಪೊಲೀಸರಿಂದ ಕೊಡಗಿನ ಆನ್‌ಲೈನ್ ವಂಚಕರ ಬಂಧನ


ಹನೀಫ್, ಮೊಹಮ್ಮದ್ ಸಹದ್

ಮಡಿಕೇರಿ, ನ.27–ಕೇರಳದಲ್ಲಿ ನಡೆದಿದ್ದ ಆನ್‌ಲೈನ್ ಹಣಕಾಸು ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಣ್ಣೂರು ಗ್ರಾಮಾಂತರ ಪೊಲೀಸರು ಮಡಿಕೇರಿ ತಾಲೂಕಿನ ಬೆಟ್ಟಗೇರಿ ಗ್ರಾಮದ ಇಬ್ಬರು ಯುವಕರನ್ನು ಬಂಧಿಸಿದ್ದಾರೆ.

ಬೆಟ್ಟಗೇರಿಯ ಹನೀಫ್ ಮತ್ತು ಮೊಹಮ್ಮದ್ ಸಹದ್ ಬಂಧಿತರು. ಈ ಪ್ರಕರಣದಲ್ಲಿ ಒಟ್ಟು 22 ಆರೋಪಿಗಳಿದ್ದು, ಈಗಾಗಲೇ 7 ಮಂದಿಯನ್ನು ಬಂಧಿಸಲಾಗಿದೆ. ಕಣ್ಣೂರು ಗ್ರಾಮಾಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅನುಜ್ ಪನೆವಾಲ್ ಸೂಚನೆ ಮೇರೆಗೆ ಕಣ್ಣೂರು ಗ್ರಾಮಾಂತರ ಡಿವೈಎಸ್‌ಪಿ ಕೀರ್ತಿ ಬಾಬು ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಲಾಗಿದೆ.

ಒಟ್ಟು 3.5 ಕೋಟಿ ರೂ. ಆನ್‌ಲೈನ್ ವಂಚನೆ ನಡೆಸಲಾಗಿದ್ದು, ಪ್ರಕರಣದಲ್ಲಿ ಕೇರಳ ಸೈಬರ್ ಕ್ರೈಂ ಪೊಲೀಸರ ಮಧ್ಯಸ್ಥಿಕೆಯಲ್ಲಿ 32 ಲಕ್ಷ ರೂ.ಗಳನ್ನು ವಸೂಲಿ ಮಾಡಲಾಗಿದೆ.

ಜಿಲ್ಲೆಯ ಅಭಿವೃದ್ಧಿಗೆ ಸರ್ಕಾರ ಬದ್ಧ

ಸಿದ್ದಾಪುರದಲ್ಲಿ ಕಾಮಗಾರಿಗೆ ಚಾಲನೆ ನೀಡಿ ಶಾಸಕ ಪೊನ್ನಣ್ಣ ಭರವಸೆ

ಸಿದ್ದಾಪುರ: ಕೊಡಗು ಜಿಲ್ಲೆಯ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಶಾಸಕ ಎ.ಎಸ್.ಪೊನ್ನಣ್ಣ ಹೇಳಿದರು.

ಸಿದ್ದಾಪುರದಲ್ಲಿ ವಿವಿಧ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕಳೆದ ಒಂದುವರೆ ವರ್ಷಗಳಿಂದ ಜಿಲ್ಲೆಯಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ಈಗಾಗಲೇ ಬಹುತೇಕ ಕಾಮಗಾರಿಗಳು ಪೂರ್ಣಗೊಂಡಿವೆ. ಮಳೆಯಿಂದ ರಸ್ತೆ ಕಾಮಗಾರಿ ವಿಳಂಬವಾಗುತ್ತಿದ್ದು, ಹಂತ ಹಂತವಾಗಿ ಡಾಂಬರೀಕರಣ, ಚರಂಡಿ ನಿರ್ಮಾಣ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯ ನಡೆಸಲಾಗುವುದು ಎಂದರು.

ಈಗಾಗಲೇ ಸಿದ್ದಾಪುರ, ಪಾಲಿಬೆಟ್ಟ, ವಿರಾಜಪೇಟೆ ಮಾರ್ಗದ ರಸ್ತೆ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಲಾಗಿದ್ದು, ಕಳೆದ 25 ವರ್ಷಗಳಿಂದ ಆಗದ ಅಭಿವೃದ್ಧಿ ಕಾರ್ಯ ಜಿಲ್ಲೆಯ ವಿವಿಧ ಭಾಗಗಳಲ್ಲಿ ನಡೆಯುತ್ತಿದೆ. ಇದರಿಂದ ಜಿಲ್ಲೆಯ ಜನರ ಬಹುದಿನಗಳ ಬೇಡಿಕೆ ಈಡೇರುತ್ತಿದೆ ಎಂದು ತಿಳಿಸಿದರು.

ವಿರಾಜಪೇಟೆ ತಹಸೀಲ್ದಾರ್ ರಾಮಚಂದ್ರ, ಕಂದಾಯ ಪರಿವೀಕ್ಷಕ ಅನೀಲ್, ಗ್ರಾಮಾಧಿಕಾರಿ ಓಮಪ್ಪ ಬಣಕರ್, ವಿರಾಜಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಟ್ಟಡ ರಂಜಿ ಪೂಣಚ್ಚ, ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ, ತಾಲೂಕು ಅಧ್ಯಕ್ಷ ಜಾನ್ಸನ್, ಜಿಪಂ ಮಾಜಿ ಸದಸ್ಯ ಎಂ.ಎಸ್.ವೆಂಕಟೇಶ್, ಗ್ರಾಪಂ ಅಧ್ಯಕ್ಷೆ ಪ್ರೇಮ ಗೋಪಾಲ, ಉಪಾಧ್ಯಕ್ಷ ಪಳನಿಸ್ವಾಮಿ, ಸದಸ್ಯರಾದ ಜಾಫರ್, ಪ್ರೇಮ, ಸಮೀರ ಹಾಜರಿದ್ದರು.


ಸಿದ್ದಾಪುರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗೆ ಶಾಸಕ ಎ.ಎಸ್. ಪೊನ್ನಣ್ಣ ಚಾಲನೆ ನೀಡಿದರು.

ಲಾರಿ ಡಿಕ್ಕಿ: 6 ವರ್ಷದ ಬಾಲಕಿ ಸಾವು


ಗಾನವಿ

ಮಡಿಕೇರಿ, ನ.27–ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ 6 ವರ್ಷದ ಬಾಲಕಿಗೆ ಲಾರಿ ಡಿಕ್ಕಿ ಹೊಡೆದ ಪರಿಣಾಮ ಆಕೆ ಮೃತಪಟ್ಟ ಘಟನೆ ಪೊನ್ನಂಪೇಟೆ ತಾಲೂಕಿನ ತಿತಿಮತಿ ಸಮೀಪದ ಮಜ್ಜಿಗೆಹಳ್ಳ ನರ್ಸರಿ ಬಳಿ ನಡೆದಿದೆ.

ಮಜ್ಜಿಗೆಹಳ್ಳ ನರ್ಸರಿ ನಿವಾಸಿ ರವಿ ಮತ್ತು ಸಿಂಧು ದಂಪತಿ ಪುತ್ರಿ ಗಾನವಿ (6) ಮೃತ ಬಾಲಕಿ. ಈಕೆ ಮಜ್ಜಿಗೆಹಳ್ಳ ಪರಂಬು ಶಾಲೆಯ 1ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದಳು.

ಈಕೆ ರಸ್ತೆಯಲ್ಲಿ ನಡೆದುಕೊಂಡು ಮನೆಗೆ ಹೋಗುತ್ತಿದ್ದಾಗ ಗೋಣಿಕೊಪ್ಪ ಕಡೆಯಿಂದ ಹುಣಸೂರು ಕಡೆಗೆ ತೆರಳುತ್ತಿದ್ದ ಲಾರಿ ಡಿಕ್ಕಿ ಹೊಡೆದಿದೆ. ಪರಿಣಾಮ ಗಂಭೀರವಾಗಿ ಗಾಯಗೊಂಡಿದ್ದ ಬಾಲಕಿಯನ್ನು ಸಾರ್ವಜನಿಕರು ತಕ್ಷಣ ಆಟೋದಲ್ಲಿ ತಿತಿಮತಿ ವಿವೇಕಾನಂದ ಆಸ್ಪತ್ರೆಗೆ ಕರೆದೊಯ್ದರು. ಆದರೆ, ಆಕೆ ಮೃತಪಟ್ಟಿದ್ದಾಳೆ. ಗೋಣಿಕೊಪ್ಪ ವೃತ್ತ ನಿರೀಕ್ಷಕ ಶಿವರಾಜ್ ಆರ್.ಮುಧೋಳ್, ಠಾಣಾಧಿಕಾರಿ ಪ್ರದೀಪ್ ಕುಮಾರ್, ಎಎಸ್‌ಐ ದೇವರಾಜ್ ಸಿಬಂದಿ ನೆಹರು, ಸೀರಿಲ್, ಭರತ್ ರಾಘವೇಂದ್ರ ಹಾಗೂ ಶುಭ ಭೇಟಿ ನೀಡಿ, ಸ್ಥಳ ಪರಿಶೀಲಿಸಿದರು. ನಂತರ ಲಾರಿ ಚಾಲಕ ಕನಕಪುರ ಮೂಲದ ಹರೀಶ್‌ನನ್ನು ಬಂಧಿಸಿದ ತಿತಿಮತಿ ಠಾಣೆ ಪೊಲೀಸರು ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಗಣರಾಜ್ಯೋತ್ಸವ ದಿನ ಮಾಜಿ ಸೈನಿಕರ ಪ್ರತಿಭಟನೆ


ಸುದ್ದಿಗೋಷ್ಠಿಯಲ್ಲಿ ಕೊಡಗು ಜಿಲ್ಲಾ ಮಾಜಿ ಸೈನಿಕರ ಸಹಕಾರ ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್ ಉತ್ತಯ್ಯ ಮಾತನಾಡಿದರು.

ವಿರಾಜಪೇಟೆ, ನ27–ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಹಾಗೂ ಜನರಲ್ ಕೆ.ಎಸ್.ತಿಮ್ಮಯ್ಯ ಅವರ ಬಗ್ಗೆ ಅವಹೇಳನ ಮಾಡಿರುವ ವಕೀಲ ವಿದ್ಯಾಧರ್ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಜ.26ರ ಗಣರಾಜ್ಯೋತ್ಸವದಂದು ಮಾಜಿ ಸೈನಿಕರು ವಿವಿಧ ಸಂಘ–ಸಂಸ್ಥೆಗಳೊಂದಿಗೆ ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ನಡೆಸುವುದಾಗಿ ಕೊಡಗು ಜಿಲ್ಲಾ ಮಾಜಿ ಸೈನಿಕರ ಸಹಕಾರ ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್ ಉತ್ತಯ್ಯ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತೀಯ ಸೇನೆ ಕಮಾಂಡರ್ ಇನ್ ಚೀಫ್ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಹಾಗೂ ಯುದ್ಧ ಪ್ರವೀಣ ಕೆ.ಎಸ್.ತಿಮ್ಮಯ್ಯ ಅವರ ಬಗ್ಗೆ ಅವಹೇಳನ ಸಂದೇಶವನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟ ಆರೋಪಿ ವಕೀಲ ವಿದ್ಯಾಧರ್ ಜಾಮೀನು ಪಡೆದರು ಕೂಡ ಆತನನ್ನು ವಶಕ್ಕೆ ಪಡೆದು ಸೂಕ್ತ ರೀತಿ ವಿಚಾರಣೆ ನಡೆಸುವಂತೆ ವಿರಾಜಪೇಟೆ ಡಿವೈಎಸ್ಪಿಗೆ ದೂರು ನೀಡಲಾಗಿದೆ ಎಂದರು.

ವಕೀಲ ವೃತ್ತಿ ನ್ಯಾಯ ಹಾಗೂ ಶಿಸ್ತಿನ ವೃತ್ತಿಯಾಗಿದ್ದು, ಸಮಾಜದ ಅಂಕುಡೊಂಕುಗಳನ್ನು ತಿದ್ದಿ ಶ್ರೇಷ್ಠತೆ ಕಾಪಾಡಬೇಕಿದೆ. ಆದರೆ, ಆತ ವಕೀಲ ವೃತ್ತಿಗೆ ಕಳಂಕ ತರುವ ಕೆಲಸ ಮಾಡಿದ್ದಾರೆ. ಕೆಲವರು ಮೇರು ವ್ಯಕ್ತಿಗಳನ್ನು ಅವಹೇಳನ ಮಾಡಿ ಸಮಾಜದ ದೊಡ್ಡ ವ್ಯಕ್ತಿಗಳಾಗುತ್ತೇವೆ ಎಂಬ ಭಾವನೆ ಹೊಂದಿದ್ದಾರೆ. ಅಂತಹ ಹೇಳಿಕೆಗಳು ಅವರ ವ್ಯಕ್ತಿತ್ವ ಮತ್ತು ಸಮಾಜದ ಸ್ವಾಸ್ಥ್ಯ ಹಾಳು ಮಾಡುತ್ತವೆ. ಜಾಲತಾಣದಲ್ಲಿ ಸಂದೇಶ ಹರಿಬಿಟ್ಟವರ ಮೇಲೆ ದೇಶದ್ರೋಹದ ಪ್ರಕರಣ ದಾಖಲಿಸಿ, ಜಿಲ್ಲೆಯಿಂದ ಗಡಿಪಾರು ಮಾಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಉಪಾಧ್ಯಕ್ಷ ರಾಜಾ ಚಂದ್ರಶೇಖರ್, ಕಾರ್ಯದರ್ಶಿ ಪುಗ್ಗೆರ ನಂದಾ, ಖಜಾಂಚಿ ತೋರೆರ ಪೂವಯ್ಯ, ಸದಸ್ಯ ಕೊಂಗಂಡ ಭೀಮಯ್ಯ ಉಪಸ್ಥಿತರಿದ್ದರು.

ಸಿಮ್ಸ್ ಹಾಸ್ಟೆಲ್ ವಿದ್ಯಾರ್ಥಿಗಳ ಪ್ರತಿಭಟನೆ


ಚಾಮರಾಜನಗರ ಸಿಮ್ಸ್ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯ ಎದುರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ನ.27–ಚಾಮರಾಜನಗರ ಸರ್ಕಾರಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಮೆಸ್‌ನಲ್ಲಿ ಕಳಪೆ ಊಟ ವಿತರಣೆ ಮಾಡಲಾಗುತ್ತಿದೆ. ಜೊತೆಗೆ ವಿದ್ಯಾರ್ಥಿಗಳ ಮೇಲೆ ಹಲ್ಲೆ ಪ್ರಕರಣಗಳು ನಡೆಯುತ್ತಿವೆ ಎಂದು ಆರೋಪಿಸಿ ನಗರ ಸಮೀಪದ ಯಡಬೆಟ್ಟದ ಸಿಮ್ಸ್‌ನ ವಿದ್ಯಾರ್ಥಿನಿಲಯದ ಮುಂಭಾಗ ಬುಧವಾರ ವಿದ್ಯಾರ್ಥಿಗಳು ದಿಢೀರ್ ಪ್ರತಿಭಟನೆ ನಡೆಸಿದರು.

ವಿದ್ಯಾರ್ಥಿನಿಲಯ ಆವರಣದಲ್ಲಿ ಸಮಾವೇಶಗೊಂಡ ವಿದ್ಯಾರ್ಥಿಗಳು, ಚಾಮರಾಜನಗರ ಸರ್ಕಾರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಡೀನ್ ಹಾಗೂ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿದರು. ಪ್ರಸ್ತುತ ಸರ್ಕಾರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಡೀನ್ ಅಧಿಕಾರ ವಹಿಸಿಕೊಂಡ ಬಳಿಕ ಮೆಸ್ ನಿರ್ವಹಣೆಯನ್ನು ತಮಗೆ ಬೇಕಾದ ವ್ಯಕ್ತಿಗಳಿಗೆ ನೀಡುತ್ತಿದ್ದಾರೆ. ಇದರಿಂದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಊಟ ಸಿಗುತ್ತಿಲ್ಲ. ಇದನ್ನು ಪ್ರಶ್ನಿಸಲು ಹೋದ ತಮ್ಮನ್ನು ಪರೀಕ್ಷೆಯಲ್ಲಿ ಅನುತ್ತೀರ್ಣಗೊಳಿಸುವುದಾಗಿ ಬೆದರಿಕೆ ಹಾಕುತ್ತಾರೆ ಎಂದು ದೂರಿದರು.

ವಿದ್ಯಾರ್ಥಿನಿಲಯಕ್ಕೆ ಹೊರಗಿನ ವ್ಯಕ್ತಿಗಳನ್ನು ಕರೆ ತಂದು ನಮ್ಮ ಮೇಲೆ ಹಲ್ಲೆ ಮಾಡಿಸುತ್ತಾರೆ. ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಟೇಬಲ್, ಚೇರ್ ಸೌಲಭ್ಯ ಕಲ್ಪಿಸಬೇಕು. ವಿದ್ಯಾರ್ಥಿಗಳ ದಟ್ಟಣೆ ತಡೆಗಟ್ಟಬೇಕು. ಗುಣಮಟ್ಟದ ಊಟ, ತಿಂಡಿ ನೀಡಬೇಕು. ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ನೋಡಿಕೊಳ್ಳಬೇಕು. ವಿದ್ಯುತ್ ವ್ಯತ್ಯಯವಾಗದಂತೆ ಕ್ರಮ ವಹಿಸಬೇಕು. ವಿದ್ಯಾರ್ಥಿಗಳ ಸಂಘಟನೆ ಅಸ್ತಿತ್ವಕ್ಕೆ ತರಲು ಸಿಮ್ಸ್‌ನಿಂದ ಅನುಮತಿ ನೀಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಮರಳ ಕಾಯಿ ಸೇವನೆ: ಮಕ್ಕಳು ಸೇರಿ 12 ಕಾರ್ಮಿಕರಿಗೆ ವಾಂತಿ–ಭೇದಿ


ಮರಳ ಕಾಯಿ ತಿಂದು ವಾಂತಿ–ಭೇದಿ ಕಾಣಿಸಿಕೊಂಡ ಕಾರ್ಮಿಕರು ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿರುವುದು.


ಮರಳ ಕಾಯಿ ಬೀಜ.

ಕೊಳ್ಳೇಗಾಲ, ನ.27–ಮರಳ ಕಾಯಿ ತಿಂದು ವಾಂತಿ–ಭೇದಿ ಕಾಣಿಸಿ ಕೊಂಡು ಮಕ್ಕಳು ಸೇರಿ 12 ಕೂಲಿ ಕಾರ್ಮಿಕರು ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿರುವ ಘಟನೆ ಬುಧವಾರ ಜರುಗಿದೆ.

ಕೊಪ್ಪಳ ಜಿಲ್ಲೆಯ ಕುಣಿಕೆರಿ ತಾಂಡ ಗ್ರಾಮದ ಯುವರಾಜು (4), ವೆಂಕಟೇಶ್ (8) ಪ್ರೀತಮ್(10), ಪವನ್(10), ಅನುಷಾ(11), ಅಂಕಿತಾ(10), ಅರ್ಜುನ (10), ಬದ್ರಿಬಾಯಿ(35), ಸೀತಾಬಾಯಿ (45), ಲಕ್ಷ್ಮೀ (35), ಸರಸ್ವತಿ (40), ಲಲಿತಾ(45) ಆಸ್ಪತ್ರೆಗೆ ದಾಖಲಾಗಿದ್ದಾರೆ.

ಕಬ್ಬು ಕಟಾವು ಮಾಡಲು ಒಂದು ತಿಂಗಳ ಹಿಂದೆ ಕುಣಿಕೆರಿ ತಾಂಡದಿಂದ ಕಾರ್ಮಿಕರು ಬಂದು ತಾಲೂಕಿನ ಸತ್ತೇಗಾಲ ಹ್ಯಾಂಡ್‌ಪೋಸ್ಟ್ ಬಳಿ ವಾಸವಿದ್ದಾರೆ. ಎಂದಿನಂತೆ ಬುಧವಾರ ಕಬ್ಬು ಕಟಾವು ಮಾಡಲು ಕಾರ್ಮಿಕರು ತೆರಳಿದ್ದಾರೆ. ಪಕ್ಕದಲ್ಲೇ ಆಟವಾಡುತ್ತಿದ್ದ ಬಾಲಕಿ ಅನುಷಾ ಮರಳ ಕಾಯಿ (ಜಟ್ರೋಪಾ) ತಿಂದು ಸಿಹಿಯಾಗಿದೆ ಎಂದಾಗ ಜೊತೆಯಲ್ಲಿದ್ದ ಉಳಿದವರು ಕಾಯಿ ಒಳಗಿನ ಬೀಜವನ್ನು ತಿಂದಿದ್ದಾರೆ.

ಸ್ವಲ್ಪ ಹೊತ್ತಿನಲ್ಲೇ ಮಕ್ಕಳು ಸೇರಿ ಎಲ್ಲರಿಗೂ ವಾಂತಿ–ಭೇದಿ ಕಾಣಿಸಿಕೊಂಡಿದ್ದೆ. ಬಳಿಕ ಉಳಿದ ಕೂಲಿ ಕಾರ್ಮಿಕರು ಆಟೋ ಮೂಲಕ ಕೊಳ್ಳೇಗಾಲ ಆಸ್ಪತ್ರೆಗೆ ಕರೆತಂದು ದಾಖಲಿಸಿದ್ದಾರೆ. ಬಾಲಕ ಯುವರಾಜ್‌ನನ್ನು ಹೆಚ್ಚಿನ ಚಿಕಿತ್ಸೆಗಾಗಿ ಚಾಮರಾಜನಗರಕ್ಕೆ ಕಳುಹಿಸಲಾಗಿದೆ. ಗ್ರಾಮಾಂತರ ಠಾಣೆ ಪೊಲೀಸರು ಆಸ್ಪತ್ರೆಗೆ ಆಗಮಿಸಿ ಕಾರ್ಮಿಕರಿಂದ ಮಾಹಿತಿ ಪಡೆದಿದ್ದಾರೆ.

ಜವಾಬ್ದಾರಿಯಿಂದ ಮತದಾರರ ಪಟ್ಟಿ ತಯಾರಿಸಿ

ಸಭೆಯಲ್ಲಿ ಅಧಿಕಾರಿಗಳಿಗೆ ಜಿಲ್ಲಾ ಮತದಾರರ ಪಟ್ಟಿ ವೀಕ್ಷಕ ಪಿ.ಮಣಿವಣ್ಣನ್ ಸೂಚನೆ


ಕೊಳ್ಳೇಗಾಲ ವಿಭಾಗಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮತದಾರರ ಪಟ್ಟಿ ಪರಿಷ್ಕರಣೆ ಪರಿಶೀಲನಾ ಸಭೆಯಲ್ಲಿ ಪಿ.ಮಣಿವಣ್ಣನ್ ಮಾತನಾಡಿದರು. ಜಿಲ್ಲಾಧಿಕಾರಿ ಶಿಲ್ಪನಾಗ್, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದಾ ಇದ್ದರು.

ಕೊಳ್ಳೇಗಾಲ, ನ27–ದೋಷರಹಿತ ಭಾವಚಿತ್ರವಿರುವ ಮತದಾರರ ಪಟ್ಟಿ ತಯಾರಿಕೆ ಪ್ರಕ್ರಿಯೆಯನ್ನು ಜವಾಬ್ದಾರಿ ಹಾಗೂ ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಚಾಮರಾಜನಗರ ಜಿಲ್ಲಾ ಮತದಾರರ ಪಟ್ಟಿ ವೀಕ್ಷಕ ಹಾಗೂ ಸಮಾಜ ಕಲ್ಯಾಣ ಇಲಾಖೆ ಕಾರ್ಯದರ್ಶಿ ಪಿ.ಮಣಿವಣ್ಣನ್ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ವಿಭಾಗಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಮತದಾರರ ಪಟ್ಟಿ ಪರಿಷ್ಕರಣೆ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ನಡೆಸುತ್ತಿರುವ ಸಂಬಂಧ ಕೇಂದ್ರ ಚುನಾವಣಾ ಆಯೋಗದ ನಿರ್ದೇಶನ ಅನುಸಾರ ಕರಡು ಮತದಾರರ ಪಟ್ಟಿಯನ್ನು ಪ್ರಚುರಪಡಿಸಲಾಗಿದೆ. ದೋಷರಹಿತ ಮತದಾರರ ಪಟ್ಟಿ ತಯಾರಿಸಲು ನಿಯೋಜಿತ ಅಧಿಕಾರಿಗಳು ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಚಾಮರಾಜನಗರ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ 983 ಮತಗಟ್ಟೆಗಳ ಪೈಕಿ ಇನ್ನೂ 39 ಮತಗಟ್ಟೆಗಳಿಗೆ ಇಂಟರ್‌ನೆಟ್ ಸಂಪರ್ಕ ಕಲ್ಪಿಸಬೇಕಿದೆ. ಇಂಟರ್‌ನೆಟ್ ಸಂಪರ್ಕ ಕಲ್ಪಿಸಲು ಬಿಎಸ್‌ಎನ್‌ಎಲ್ ಹಾಗೂ ಅರಣ್ಯಾಧಿಕಾರಿಗಳು ಕ್ರಮವಹಿಸಬೇಕು. ಇದಕ್ಕಾಗಿ ಸಂಬಂಧಪಟ್ಟ ಇತರೆ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಳ್ಳಬೇಕು. ಅರ್ಹ ಯುವ ಮತದಾರರನ್ನು ಪಟ್ಟಿಗೆ ನೋಂದಾಯಿಸಬೇಕು. ಈ ನಿಟ್ಟಿನಲ್ಲಿ ವಿಶೇಷ ಕ್ರಮ ಅನುಸರಿಸಬೇಕು. ಹೆಚ್ಚಿನ ಮುತುವರ್ಜಿ ವಹಿಸಿ ಯುವ ಮತದಾರರು ಪಟ್ಟಿಗೆ ಸೇರ್ಪಡೆಗೊಳಿಸುವಲ್ಲಿ ಅಧಿಕಾರಿಗಳು ನಿಯಮಾನುಸಾರ ಮುಂದಾಗಬೇಕು ಎಂದು ನಿರ್ದೇಶಿಸಿದರು.

> "ಯುವ ಮತದಾರರ ನೋಂದಣಿಗಾಗಿ ಅಗತ್ಯ ಕ್ರಮ ತೆಗೆದುಕೊಳ್ಳಲಾಗಿದೆ. ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಬಗ್ಗೆ ಅಭಿಯಾನ ಕೈಗೊಳ್ಳಲಾಗಿದೆ. ಕರಡು ಮತದಾರರ ಪಟ್ಟಿ ಸಂಬಂಧ ನ.28ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆಗೆ ಅವಕಾಶವಿದೆ. ಡಿ.24ರೊಳಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಇತ್ಯರ್ಥಪಡಿಸಿ ಅಂತಿಮ ಪಟ್ಟಿಯನ್ನು ಜ.6ರಂದು ಪ್ರಕಟಿಸಲಾಗುವುದು.
> –ಶಿಲ್ಪನಾಗ್, ಜಿಲ್ಲಾಧಿಕಾರಿ

ಕರಡು ಮತದಾರರ ಪಟ್ಟಿಯಲ್ಲಿರುವ ಲಿಂಗಾನುಪಾತ ಸಂಖ್ಯೆಯನ್ನು ಮತ್ತೊಮ್ಮೆ ಪರಿಶೀಲಿಸಿಕೊಳ್ಳಬೇಕು. ಮರಣ ಹೊಂದಿದವರ ಹೆಸರು ಪಟ್ಟಿಯಿಂದ ಕೈಬಿಡಲಾಗಿದೆಯೇ ಎಂಬ ಬಗ್ಗೆಯೂ ಖಾತರಿಪಡಿಸಿಕೊಳ್ಳಬೇಕು. ವಿಧಾನಸಭಾ ಕ್ಷೇತ್ರವಾರು ಜನಸಂಖ್ಯಾನುಸಾರ ದಾಖಲಾಗಿರುವ ಅಂಕಿ–ಅಂಶಗಳ ಬಗ್ಗೆ ಪರಿಶೀಲಿಸಬೇಕು. ಭೌತಿಕವಾಗಿ ಮತ್ತು ಭೇಟಿ ನೀಡುವ ಮೂಲಕ ನಿಖರ ವಿವರಗಳನ್ನು ದಾಖಲು ಮಾಡಬೇಕು ಎಂದರು.

ಅರಣ್ಯದಂಚಿನ ಪ್ರದೇಶಗಳ ಅರ್ಹ ಬುಡಕಟ್ಟು ಗಿರಿಜನರು ಮತದಾರರ ಪಟ್ಟಿಗೆ ಸೇರ್ಪಡೆಯಾಗಿದ್ದಾರೆಯೇ ಎಂಬ ಬಗ್ಗೆ ಅಧಿಕಾರಿಗಳು ಪರಿಶೀಲಿಸಬೇಕು. ಒಟ್ಟಾರೆ ಜಿಲ್ಲೆಯಲ್ಲಿ ಅರ್ಹರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು. ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯವನ್ನು ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ಕೈಗೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದಾ, ಉಪವಿಭಾಗಾಧಿಕಾರಿ ಬಿ.ಆರ್.ಮಹೇಶ್, ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ತೋಟೇಶ್, ರೇವಣ್ಣ, ತಹಸೀಲ್ದಾರ್‌ಗಳಾದ ಬಸವರಾಜು, ಜಯಪ್ರಕಾಶ್, ಗುರುಪ್ರಸಾದ್, ಗಿರಿಜಾ, ರಮೇಶ್ ಬಾಬು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕಾಧಿಕಾರಿಗಳಾದ ಉಮೇಶ್, ಪೂರ್ಣಿಮಾ, ಷಣ್ಮುಗಂ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮುನಿರಾಜು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಿಂದ್ಯಾ, ಇತರೆ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಹುಲಿ ಉಗುರು ಸಾಗಿಸುತ್ತಿದ್ದವನ ಬಂಧನ


ವಶಪಡಿಸಿಕೊಂಡ ಹುಲಿ ಉಗುರು.

ಚಾಮರಾಜನಗರ, ನ.27–ನೆರೆಯ ತಮಿಳುನಾಡಿಗೆ ಹುಲಿ ಉಗುರು ಸಾಗಿಸುತ್ತಿದ್ದವನನ್ನು ಅರಣ್ಯ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ.

ಬೂದಿಪಡಗ ಗ್ರಾಮದ ಚಿಕ್ಕಮಾದ ಬಂಧಿತ ಆರೋಪಿ. ಈತ ತಾಲೂಕಿನ ಪುಣಜನೂರು ವನ್ಯಜೀವಿ ವಲಯ ಮಾರ್ಗದಲ್ಲಿ ತಮಿಳುನಾಡಿಗೆ ಹುಲಿಯ ಐದು ಉಗುರುಗಳನ್ನು ಸಾಗಿಸುತ್ತಿದ್ದ. ಈ ವೇಳೆ ದಾಳಿ ನಡೆಸಿದ ಅರಣ್ಯಾಧಿಕಾರಿಗಳು ಈತನನ್ನು ಬಂಧಿಸಿ, ಹುಲಿ ಉಗುರು ವಶಪಡಿಸಿಕೊಂಡಿದ್ದಾರೆ. ನಂತರ ಆರೋಪಿ ಚಿಕ್ಕಮಾದನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದರು.

ಆಂಬುಲೆನ್ಸ್ ಡಿಕ್ಕಿ: ಬೈಕ್ ಸವಾರ ಸಾವು

ಬೇಗೂರು, ನ.27–ಆಂಬುಲೆನ್ಸ್ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸಾವನ್ನಪ್ಪಿರುವ ಘಟನೆ ಸಮೀಪದ ಮಾದಪಟ್ಟಣ ಗೇಟ್ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಬುಧವಾರ ನಡೆದಿದೆ.

ಹಳ್ಳದಮಾದಹಳ್ಳಿ ಗ್ರಾಮದ ನಾಗಪ್ಪ (75) ಮೃತಪಟ್ಟಿದ್ದು, ಪತ್ನಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ. ಈತ ತನ್ನ ಪತ್ನಿಯೊಂದಿಗೆ ಬೈಕ್‌ನಲ್ಲಿ ಹೋಗುತ್ತಿದ್ದರು. ಈ ವೇಳೆ ಮಾದಪಟ್ಟಣ ಗೇಟ್ ಬಳಿ ಆಂಬುಲೆನ್ಸ್ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ನಾಗಪ್ಪ ತಲೆಗೆ ತೀವ್ರ ಪೆಟ್ಟು ಬಿದ್ದಿದೆ. ಮೈಸೂರಿನ ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ. ಹಿಂಬದಿ ಕುಳಿತಿದ್ದ ಪತ್ನಿಗೂ ಗಾಯಗಳಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ.

ಈ ಸಂಬಂಧ ಬೇಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಸಂವಿಧಾನ ಪೀಠಿಕೆ ಬೋಧನೆ...

ಚಾಮರಾಜನಗರ ಶ್ರೀರಾಮಚಂದ್ರ ವಿದ್ಯಾಸಂಸ್ಥೆಯಲ್ಲಿ ನಡೆದ ಸಂವಿಧಾನ ದಿನಾಚರಣೆಯಲ್ಲಿ ಸಂವಿಧಾನ ಪೀಠಿಕೆ ಬೋಧಿಸಲಾಯಿತು. ವಿದ್ಯಾಸಂಸ್ಥೆ ಅಧ್ಯಕ್ಷ ಎಂಎಸ್.ಮಾದಯ್ಯ, ಕಾರ್ಯದರ್ಶಿ ರುದ್ರಮೂರ್ತಿ, ಮುಖ್ಯ ಶಿಕ್ಷಕಿ ರತ್ನಮ್ಮ, ದೈಹಿಕ ಶಿಕ್ಷಣ ಶಿಕ್ಷಕ ರಂಗಸ್ವಾಮಿ, ಶಿಕ್ಷಕರಾದ ಕುಮಾರ್, ಯಶಪಾಲ್, ಪರಶಿವಮೂರ್ತಿ, ಮಂಜುಳ. ವೀರಣ್ಣ ಇದ್ದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

FOR SALE
3000 Sqft Building on Madhavachar Road Agrahara
9591408910

ಪೈಂಟಿಂಗ್ ಕೆಲಸ ಖಾಲಿ ಇದೆ
ಉತ್ತಮ ಅನುಭವ ಇರುವ ಪೈಂಟರ್ಸ್ ಬೇಕಾಗಿದ್ದಾರೆ. ಲೇಬರ್ ಕೆಲಸಕ್ಕೆ ಮಾತ್ರ ಆಸಕ್ತಿ ಇರುವವರು ಸಂಪರ್ಕಿಸಿ
8618253781

SITE FOR SALE
40X60 East Face Suvarna Nagar Bogadi Road
9880273834

WANTED
(For Bank and NBFC)
1) TELECALLER, (M/F). Qlfn: SSLC & above.
2) FIELD EXECUTIVES (Two wheeler must). Qlfn: SSLC & Above
Walk-in on 28th, 29th & 30th Nov. 2024
Address: #8/1, 2nd Floor, Oil Mill Road, Behind Shanthala Theatre, Next to Post Office, K.R. Mohalla, Mysore-24
Call: 9845206152, 9611130538

CORNER COMMERCIAL SITE FOR SALE
60x40 North-East corner, Opp. Park, 40 Ft. Road, @ Prakruthi Layout, Mysore Rs. 6000/- Sq.Ft (Slightly Nego.)
Mob: 9060224551

Office / Commercial space for rent at J.P. Nagar, Mysuru.
Contact:
Mob: 9448208361

SITE FOR SALE
30x40 W/F Near Dattagalli MUDA Alloted Sites
9483358399
6381779015

ವೃಧ್ವಿ ಮೆಲೋಡೀಸ್‌ಗೆ
ಮಹಿಳಾ ಹಾಡುಗಾರರು ಬೇಕಾಗಿದ್ದಾರೆ.
9901080314

WANTED
Female Receptionist For Natural Hair Fixing Centre Mysuru
7625026662

WANTED
Accountant
Graphic Designer
Helper boys
97422 15777
97395 69260

ಬೊಕ್ಕ ತಲೆಗೆ ಪರಿಹಾರ
ಕೇವಲ 2 ಗಂಟೆಯಲ್ಲಿ
Turn Style HAIR FIXING
Ladies Wigs Also availabe



40, Opp. IDBI Bank, Double Road, Kuvempunagar, Mysore - 23
Ph : 0821-2344992, Mob. 98450 34559

ವೃದ್ಧಾಶ್ರಮ
ಹಿರಿಯ ಜೀವಗಳಿಗೆ, ಹಾಸಿಗೆ ಹಿಡಿದ ವೃದ್ಧರನ್ನು, ಪಾರ್ಶ್ವವಾಯು ಪೀಡಿತರು, ಹಾಗೂ ಕೈಲಾಗದ ವಯೋ ವೃದ್ಧರನ್ನು ಮನೆಯಂತೆಯೇ ನೋಡಿಕೊಳ್ಳುತ್ತಿರುವ ಸಂಸ್ಥೆ ನಮ್ಮ ಮೈಸೂರಿನಲ್ಲಿ ಊಟ, ವಸತಿ, ವೈದ್ಯಕೀಯ ಸೌಲಭ್ಯದೊಂದಿಗೆ ಇಚ್ಛೆವುಳ್ಳವರು ಸಂಪರ್ಕಿಸಿ
9110455297 | 9591557126

V-GUARD


Solar Water Heater SALES & SERVICE
BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

ಕಾರ್ ಮಾರಾಟಕ್ಕಿದೆ
2004 ಮಾಡಲ್ ಮಾರುತಿ ಓಮ್ನಿ ಕಾರ್ ಮಾರಾಟಕ್ಕಿದೆ
ಸಂಪರ್ಕಿಸಿ:
98451 75443

ಚಿಕನ್(ಕೋಳಿ) ಅಂಗಡಿ ಖರೀದಿಗೆ ಬೇಕಾಗಿದೆ
ಸುಮಾರು 20x10 or 15 ಅಳತೆ (ಶಾಪ್) ಉತ್ತಮವಾಗಿ ವ್ಯಾಪಾರ ನಡೆಯುತ್ತಿರುವ ಅಂಗಡಿ ಇದರಲ್ಲಿ ಕ್ಲೀನಿಂಗ್ ಮಿಷನ್, ಕಟಿಂಗ್ ಮಿಷನ್ ಮತ್ತು ಇನ್ನೂ ಅನೇಕ ಸಾಮಾಗ್ರಿಗಳಿಂದ ಕೂಡಿದ ಅಂಗಡಿ ತಕ್ಷಣ ಖರೀದಿಗೆ ಬೇಕಾಗಿದೆ. ಇದು ಮೈಸೂರು ನಗರದಲ್ಲಿ ಮಾತ್ರ.
9611240336
8892411101

WANTED FOR BHANAVI HOSPITAL
Experienced Maintainance Technician
CSSD Technician
Security Guard, Typist
9972982665

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8861401315

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

SITE FOR SALE
30X50 WEST FACING PRICE – 63 LAKHS
30X40 SITE – 51 LAKHS PLACE : NEAR INFOSYS
MUDA APPROVALS 90% LOAN AVAILABLE
Ph: 9538003006

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

SITE FOR SALE
30X40, 40X50, 40X60 Near MIT College Mysore-Bangalore Ring Road
6381779015
9483358399

SITE FOR SALE
At prime Location in Srirangapatna 2nd Stage Mysore East facing 50x80 Site for Sale Price Rs.5500/- Per Sqft
9845564935

ಬೇಕಾಗಿದ್ದಾರೆ
ಬೆಂಗಳೂರಿನ ಪ್ರತಿಷ್ಠಿತ ಕಂಪನಿಗೆ ಸೇರಿದ ಮಂಡ್ಯ ಜಿಲ್ಲೆ ಕೆ.ಆರ್.ಎಸ್ ಹೊಸ ಕನ್ನಂಬಾಡಿ ಗ್ರಾಮದ ಹತ್ತಿರವಿರುವ ಶ್ರೀ ವೇಣುಗೋಪಾಲ ಸ್ವಾಮಿ ದೇವಸ್ಥಾನದ ಭದ್ರತೆಗಾಗಿ ನಿವೃತ್ತ Army / BSF /ERPF / EISF (ವಯಸ್ಸು 45ರ ಒಳಗೆ) ಅಭ್ಯರ್ಥಿಗಳು ಬೇಕಾಗಿದ್ದು, ಕಂಪನಿಗೆ ನೇರ ನೇಮಕಾತಿ ಮಾಡಿಕೊಳ್ಳಲಾಗುವುದು. ಹೆಚ್ಚಿನ ಮಾಹಿತಿಗಾಗಿ ಬೆಳಿಗ್ಗೆ 11 ರಿಂದ ಸಂಜೆ 5 ರ ತನಕ ಸಂಪರ್ಕಿಸಿ
9449178814

GODOWN FOR RENT
Built up area 70,000 sq.ft & easy access for all vehicles with ample vehicle parking available for Rent (part or full) at KRS Main Road, Metagalli, Mysore. Contact:
9845118555

ಬೇಕಾಗಿದ್ದಾರೆ
ಮೈಸೂರಿನ ಹೆಬ್ಬಾಳಿನಲ್ಲಿರುವ ಪೆಟ್ರೋಲ್ ಬಂಕ್‌ನಲ್ಲಿ ಕೆಲಸಕ್ಕಾಗಿ ಪುರುಷರು/ ಮಹಿಳೆಯರು ಬೇಕಾಗಿದ್ದಾರೆ.
ಸಮಯ: ಬೆಳಿಗ್ಗೆ 8 ರಿಂದ ಸಂಜೆ 5
ಸಂಬಳ: 15,000/–
8892258814

ಅಂಜನ ಶಾಸ್ತ್ರದ ಮೂಲಕ ಪರಿಹಾರ ಶ್ರೀ ಅಂಜನ ದೇವಿ ಆರಾಧಕರು ಪಂ॥ ಶ್ರೀನಿವಾಸ್ ಆಚಾರ್ಯ
ಮೈಸೂರಿನಲ್ಲಿ ಬಹು ವರ್ಷದಿಂದ ಖಾಯಂ ಆಗಿ ನೆಲೆಸಿರುತ್ತಾರೆ. ಅನೇಕ ಜನರು ಇವರಲ್ಲಿ ಪರಿಹಾರ ಪಡೆದಿರುತ್ತಾರೆ. ಇವರು ವಂಶಪಾರಂಪರ್ಯ ಜ್ಯೋತಿಷ್ಯರು. ಇವರಲ್ಲಿ ಜ್ಯೋತಿಷ್ಯ ಕೇಳಿದರೆ ನಿರಾಸೆ ಆಗುವ ಮಾತೆ ಇಲ್ಲ. ಫೋನಿನ ಮೂಲಕ ಪರಿಹಾರ.
Mob: 9663466548

ಮನೆ ಬಾಡಿಗೆಗೆ ಇದೆ
1 ರೂಂ ಅಥವಾ 2 ರೂಂಗೆ ಅವಕಾಶವಿರುವ (G.F.) ಮನೆ ಅಕ್ಷಯ ಭಂಡಾರ ಹತ್ತಿರ, ನ್ಯೂ ಕಾಂತರಾಜ್ ಅರಸು ರಸ್ತೆ, ಸರಸ್ವತಿಪುರಂ.
ಸಸ್ಯಾಹಾರಿಗಳಿಗೆ ಮಾತ್ರ
Mob: 7760923685

ಬೇಕಾಗಿದ್ದಾರೆ
ಭುಗತಹಳ್ಳಿ ಬನ್ನೂರು ರಸ್ತೆಯ ರೆಸಾರ್ಟ್ ನಲ್ಲಿ ಕರ್ತವ್ಯ ನಿರ್ವಹಿಸಲು ಅನುಭವವುಳ್ಳ ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. 9 ಗಂಟೆ ಕೆಲಸ, ವಾರದ ರಜೆ, ESI/PF ದೊಂದಿಗೆ ಊಟ ಹಾಗು ರೂಮ್ ವ್ಯವಸ್ಥೆ ವಿರುತ್ತದೆ. ಮಾಹಿತಿಗಾಗಿ ಸಂಪರ್ಕಿಸಿ .
9900212487

URGENTLY REQUIRED
Accountant (Male) B.Com
9844353307
Supervisor (Male) PUC
9535131998

ಮನೆ ಬಾಡಿಗೆ / ಭೋಗ್ಯಕ್ಕೆ ಇದೆ
ಶ್ರೀರಾಂಪುರ ರಿಂಗ್ ರಸ್ತೆ, ಯೂನಿವರ್ಸಿಟಿ ಲೇಔಟ್ ಎದುರು, ಗಾಯತ್ರಿ ಬಡಾವಣೆಯಲ್ಲಿ 1ನೇ ಮಹಡಿ, 2 ಬಿಹೆಚ್‌ಕೆ, 2ನೇ ಮಹಡಿ 1 ಬಿಹೆಚ್‌ಕೆ ಮನೆ ಲಭ್ಯವಿದೆ. ಸಂಪರ್ಕಿಸಿ:
9481041871, 8970135618

WATER PROOFING, TILES WORK, PLUMBING, ELECTRICAL WORK
ಮಾಡಲಾಗುತ್ತದೆ. ಹಾಗೂ ಹಳೇ ಮನೆಗಳನ್ನು Renovation ಮಾಡಿಕೊಡಲಾಗುತ್ತದೆ.
Mob: 8660384527

WANTED
Resident Campus-Incharge, with very good communication skills & dedication. Qlfn: MBA / BE / MSW (Age between 30 to 50). Honorarium will be discussed during interview. Divya Deepa Charitable Trust, Mysore-570 008.
Mob: 9341369901, 9538499901, 8088586087
www.divyadeepatrust.org

SITE FOR SALE
30x40 East facing 30 feet road, opposite park. 30x50 West facing, 30 feet road, adjacent 60 feet road, KBL Silicon City, Infosys backside, KRS Road. 50x80 East facing 40 feet road at Vijayanagar 4th Stage, 2nd Phase, near Raju Corner.
Mob: 9845525434

ಮೈಸೂರಿನ ವಿಜಯನಗರದಲ್ಲಿ ಯಶಸ್ವಿಯಾಗಿ ಚಾಲನೆಯಲ್ಲಿರುವ ಹೋಟೆಲ್ ಮಾರಾಟಕ್ಕಿದೆ.
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
Mob: 9611429066

ಮನೆ ಮಾರಾಟಕ್ಕಿದೆ
30x40 ಅಳತೆಯ 3 ಮಹಡಿಯ ಮನೆ ಶಾರದಾದೇವಿನಗರದಲ್ಲಿ ಮಾರಾಟಕ್ಕೆ ಇದೆ.
7019987894

SPACE FOR RENT
At Prime Location Near Kavitha Bakery, TK Layout 2nd Floor Approximtely 2400 Sqft with lift and all amenities suitable for Office Insurance Companies BPO's Corporate Office Etc.
9845564935

FRESH AUDITOR REQUIRED
Contact:
6360166964, 9844971890

ಶ್ರೀ ಸಂಜೀವಿನಿ ಗೋಲ್ಡ್ ಕಂಪನಿ
ನೀವು ಗಿರವಿ ಇಟ್ಟು ಬಿಡಿಸಿಕೊಳ್ಳಲಾಗದ ಚಿನ್ನವನ್ನು ನಾವೇ ಬಿಡಿಸಿ ಉಳಿದ ಹಣವನ್ನು ತಕ್ಷಣ ನೀಡುತ್ತೇವೆ.
ಒಂದು ಗ್ರಾಂ ಚಿನ್ನಕ್ಕೆ ರೂ. 7600 (24 CT)
Mob: 9108146123

ಕೇರಳ ಶ್ರೀ ಪ್ರಸಿದ್ಧ ಜ್ಯೋತಿಷ್ಯರು
Famous Astrologer
ಪಂಡಿತ್ ಸಂತೋಷ್. 9741250896
ಕಾಣತೊರ್ ನಾಲ್ವರ ದೈವ, ಕಲ್ಲುಟಿ ಭಗವತಿ ಶಕ್ತಿಯಿಂದ ದಾಂಪತ್ಯ ಸಮಸ್ಯೆ, ಲೈಂಗಿಕ ಸಮಸ್ಯೆ, ಸ್ತ್ರೀ ಪುರುಷ ಪ್ರೇಮ ವಿಚಾರ, ಶತ್ರು ಬಾಧೆ, ಹಣಕಾಸಿನ ತೊಂದರೆ, ಮಾನಸಿಕ ಚಿಂತೆ, ಪ್ರೇತ ಬಾಧೆ, ವಿದೇಶ ಪ್ರಯಾಣ ಇನ್ನೂ ಮುಂತಾದ ಯಾವುದೇ ಕಠಿಣ ಸಮಸ್ಯೆಗಳಿಗೆ 3 ದಿನದಲ್ಲಿ ಶಾಶ್ವತ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ವಿನಯ ಮಾರ್ಗ ರಸ್ತೆ,, ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಎದುರು, ಬ್ಯಾಂಕ್ ಆಫ್ ಬರೋಡ ಪಕ್ಕ, ಸಿದ್ಧಾರ್ಥ ನಗರ, ಮೈಸೂರು

ಕೇರಳ ಶ್ರೀ ಪ್ರಸಿದ್ಧ ಮಹಾ ಮಾಂತ್ರಿಕ ಜ್ಯೋತಿಷ್ಯರು, ನಂ.1 ಮೋಡಿ ತಜ್ಞರು ಪಂಡಿತ್ ಕೆ.ಎಸ್.ಕೃಷ್ಣಮೂರ್ತಿ
ಮೊ.: 9741806990
ತಾಯಿ ಚಾಮುಂಡೇಶ್ವರಿ ಕಾಣತೊರೆ ನಾಲ್ವರ ದೈವ ಚೌಡನ್ ಕರೆ ಭಗವತಿ ಮಹಾ ಮಾಂತ್ರಿಕ ಶಕ್ತಿಯಿಂದ ಲೈಂಗಿಕ, ದಾಂಪತ್ಯ, ಸ್ತ್ರೀ ಪುರುಷ ಪ್ರೇಮ ವಿಚಾರ, ಕೋರ್ಟ್ ಕಚೇರಿ, ಹಣಕಾಸಿನ ತೊಂದರೆ, ವಿವಾದ, ಮನೆಯಲ್ಲಿ ಅಶಾಂತಿ, ಮಾನಸಿಕ ಚಿಂತೆ, ಇನ್ನೂ ಮುಂತಾದ ಸಮಸ್ಯೆಗಳಿಗೆ 3 ದಿನದಲ್ಲಿ ಪರಿಹಾರ ಶತಸಿದ್ಧ. ಖಾಯಂ ವಿಳಾಸ: ಸುಬರ್ಬ್ ಬಸ್‌ಸ್ಟ್ಯಾಂಡ್ ಪಕ್ಕ, ಇರ್ವಿನ್ ರೋಡ್, ಆಂಧ್ರ ಶೈಲಿ ನಂದಿನಿ ಹೋಟೆಲ್ ಹಿಂಭಾಗ, ಮಾರುತಿ ಸುಜುಕಿ ಆಟೋ ಮೊಬೈಲ್ ಪಕ್ಕ ಮನೆಯಲ್ಲಿ ನೆಲೆಸಿದ್ದಾರೆ. ಹಳ್ಳಕೇರಿ, ಮೈಸೂರು ಇಲ್ಲಿ ಹೇಳುವ ವಿಚಾರಗಳನ್ನು ಗುಪ್ತವಾಗಿ ಇಡಲಾಗುತ್ತದೆ.

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7975101020

ಮನೆ ಭೋಗ್ಯಕ್ಕೆ ದೊರೆಯುತ್ತದೆ
ಮೈಸೂರು ಸಿಟಿ, ಅಶೋಕಪುರಂ, ಬಡಾವಣೆಯ 4ನೇ ಕ್ರಾಸ್‌ನಲ್ಲಿರುವ ಹೊಸದಾಗಿ ಕಟ್ಟಿ 2 ವರ್ಷವಾಗಿರುವ ಉತ್ತರ ಬಾಗಿಲು, ಸೋಲಾರ್ 24x7 ಕಾವೇರಿ ನೀರಿನ ಸೌಲಭ್ಯವುಳ್ಳ 2BHK ಮನೆ ಭೋಗ್ಯಕ್ಕೆ ದೊರೆಯುತ್ತದೆ.
9113523954
8277678007

ಬೇಕಾಗಿದ್ದಾರೆ
ಸೆಕ್ಯೂರಿಟಿ ಫೀಲ್ಡ್ ಆಫೀಸರ್, ಸೆಕ್ಯೂರಿಟಿ ಸೂಪರ್‌ವೈಸರ್ ಮತ್ತು ಸೆಕ್ಯೂರಿಟಿ ಗಾರ್ಡ್ ಬೇಕಾಗಿದ್ದಾರೆ. ಉತ್ತಮ ವೇತನ+ಪಿಎಫ್+ಇಎಸ್‌ಐ ಸೌಲಭ್ಯವಿರುತ್ತದೆ.
ಸ್ಥಳ: ಮೈಸೂರು ಸಿಟಿ, ಹೆಬ್ಬಾಳು ಕೈಗಾರಿಕಾ ನಗರ, ಸಿದ್ದಾರ್ಥ ಬಡಾವಣೆ ಮತ್ತು ಹಿನಕಲ್
9739376832, 7829393555
9886200104

ಊಟ ದೊರೆಯುತ್ತದೆ
ಆಫೀಸ್ ಮತ್ತು ಪಿಜಿ ಗಳಿಗೆ ಮನೆಯಲ್ಲೇ ತಯಾರು ಮಾಡಿರುವ, ಸುಮಾರು 5–6 ಜನ ಊಟ ಮಾಡುವ ಹಾಗೆ ಕ್ಯಾರಿಯರ್ ಊಟ ದೊರೆಯುತ್ತದೆ.
Mob: 9945618151

WANTED
1) Front Office (Night shift) (Men): 1 No.
2) Salesmen for Hotel: 1 No.
3) Head Cheff: 1 No.
4) Asst. Cook: 2 Nos.
5) Steward: 2 Nos.
6) Front office (Female): 1 No.
Contact / Walk-in Clarks Inn Express
Mob: 8884775599

ಕಳೆದಿದೆ
ದಿ. 20–11–2024ರಂದು ವಿಜಯನಗರ 1st Stage, Mysore ನಲ್ಲಿ Titledeed ಕಳೆದಿದೆ (Deed No. 2289, 45/48 D.No. 4/417, K.R. Nagar) Name: D.K. Suresh.
ಸಿಕ್ಕಿದವರು ದಯವಿಟ್ಟು ಸಂಪರ್ಕಿಸಿ:
Mob: 9448229827

ಬೇಕಾಗಿದ್ದಾರೆ
ಮನೆಗೆ ಬಂದು ಟ್ಯೂಷನ್ ಹೇಳಿ ಕೊಡುವ ಟೀಚರ್. 3rd Std ವಿದ್ಯಾರ್ಥಿಗೆ. ಹಾಗೂ Receptionist ಮತ್ತು Room boy ಬೇಕಾಗಿದ್ದಾರೆ. ಮೈಸೂರು
Mob: 9945779995

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

SITE FOR SALE
30X50 E/F TREASURY LAYOUT
9740088990

ಬೇಕಾಗಿದ್ದಾರೆ
ದೋಸೆ ಭಟ್ರು ,
ಕೌಂಟರ್ (Food parcel) ,
ವೇಟರ್ (Supplier),
Kitchen All Rounder (Poori, chapati),
House Keeping 2nd Shift
ಸ್ಥಳ : ಮೈಸೂರು – ಕಾಳಿದಾಸ ರೋಡ್ , ಒಂಟಿಕೊಪ್ಪಲ್ ಹತ್ತಿರ
7899028086

ಬೇಕಾಗಿದ್ದಾರೆ
(Consultancy ಅಲ್ಲ) ಮೈಸೂರಿನಲ್ಲಿರುವ A.W. Group ನಲ್ಲಿ ಖಾಲಿಯಿರುವ ವಿವಿಧ ಹುದ್ದೆಗಳಿಗೆ Freshers + experience ಆದ 179 ಅಭ್ಯರ್ಥಿಗಳು ಬೇಕಾಗಿದ್ದಾರೆ. ವಿದ್ಯಾರ್ಹತೆ: SSLC (Pass), PUC, ITI, Any Degree. ವಯೋಮಿತಿ: 18–32 ವರ್ಷಗಳು. ತಿಂಗಳಿಗೆ 18,500 – 26,500 (ಉಚಿತ ವಸತಿ + ಊಟ).
ಸಂಪರ್ಕಿಸಿ: ಡಿಂಪಲ್
Mob: 7349699460

SITE FOR SALE
N/E Corner 60x70 Suvarna Nagara, Bogadi Road.
Mob: 8050821108

PREMIUM SITE FOR SALE
30x40 S/W Corner In Lakshmipuram, Vasan Eye Care backside.
8792207164, 9986300002

ನಿರುದ್ಯೋಗಿಗಳಿಗೊಂದು ಸುವರ್ಣಾವಕಾಶ
ಮನೆಯಲ್ಲೇ ಕುಳಿತು ಟಾರ್ಗೆಟ್ ಇಲ್ಲದೆ ಬರವಣಿಗೆ ಮೂಲಕ 9 ರಿಂದ 30 ಸಾವಿರದವರೆಗೆ ಹಣಗಳಿಸುವ ಸುವರ್ಣಾವಕಾಶ. ಆಸಕ್ತರು ಸಂಪರ್ಕಿಸಿ:
6361056646, 7676844160

100% TEAK WOOD
FACTORY FINISH DOORS & FRAMES
@ FACTORY DEPOT RATES



10 YEARS WARRANTY* ISI
9845426862
9901291267

ಬೇಕಾಗಿದ್ದಾರೆ
ಲೈನ್ ಸೇಲ್‌ಗೆ 40 ವರ್ಷ ಒಳಪಟ್ಟ ಡ್ರೈವರ್‌ಗಳು ಮತ್ತು ಹೆಲ್ಪರ್ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ.
0821-2491755

ಲೋಡರ್ಸ್ ಬೇಕಾಗಿದ್ದಾರೆ
ಮೈಸೂರು ಮೇಟಗಳ್ಳಿ CIPET ಕಾಲೇಜು ಹತ್ತಿರವಿರುವ ಕೋಳಿ ಫೀಡ್ ಕಂಪನಿಗೆ 45 ವರ್ಷದ ಒಳಗಿನಪುರುಷರು ಲೋಡಿಂಗ್ ಅನ್‌ಲೋಡಿಂಗ್ ಕೆಲಸ ಮಾಡಲು ಬೇಕಾಗಿದ್ದಾರೆ. ವಿದ್ಯಾರ್ಹತೆ ಅವಶ್ಯಕತೆ ಇಲ್ಲ. ಸಂಬಳ 19000/– ಸಾವಿರದಿಂದ 23,000/–ಸಾವಿರದವರೆಗೆ OT ಸೇರಿ ಸಿಗುತ್ತದೆ. ಸಂಪರ್ಕಿಸಿ: ಸಾಯಿ ಕೃಪ ಎಂಟರ್‌ಪ್ರೈಸಸ್
ರತ್ನಯ್ಯ 9900889325
ಪ್ರಕಾಶ್ 8971460235

FOR SALE
1. 20x30, 30x40, Sites @ Bogadi. Duplex House @ 53L
2. 40x50 SE Crnr 2BHK 4 Houses Near ISKCON Temple
3. 30x40 House at Vijaya Nagar 4th Stage.
4. Commercial Properties @ Kuvempu Nagar, Saraswati Puram & More.
5. 20x30, Sites & House near Yelwala 30x40 Sites attached to Brahmins Lyt
PRAKRUTHI PROPERTIES
95386 90359, 90359 90359

NEW HOUSE FOR SALE
30x40 new house for sale West facing North door G+2 Somnathanagar, Dattagali. 30x40 site for sale West-North corner, near Sriramapura ring road.
9900251194, 9738884777

ಬೇಕಾಗಿದ್ದಾರೆ
ನಂಜನಗೂಡಿನಲ್ಲಿ ಮೊಬೈಲ್ ಶೋರೂಂಗೆ ಕೆಲಸಕ್ಕೆ SSLC ವಿದ್ಯಾರ್ಹತೆ ಹೊಂದಿದ ಹುಡುಗರು ಬೇಕಾಗಿದ್ದಾರೆ.
ಆಸಕ್ತರು ಸಂಪರ್ಕಿಸಿ:
Mob: 9880218745

ಡ್ರೈಫ್ರೂಟ್ಸ್
ಬಾದಾಮಿ, ಗೋಡಂಬಿ, ಪಿಸ್ತಾ, ಒಣ ದ್ರಾಕ್ಷಿ, ಖರ್ಜೂರ, ಅಂಜೂರ ಡ್ರೈಫ್ರೂಟ್ಸ್ ದೊರೆಯುತ್ತದೆ. (5 ಕಿ.ಮೀ.ವರೆಗೂ ಉಚಿತ ಡೆಲಿವರಿ)
ರಾಜ್‌ಗುರು ಡ್ರೈಫ್ರೂಟ್ಸ್
ನಾರಾಯಣ ಶಾಸ್ತ್ರಿ ರಸ್ತೆ, ಮೈಸೂರು
7022293342, 9845460211

House for Lease
2 BHK, 1 BHK, 4th Main, 3rd Cross, SJH Road, Vidyaranyapuram, Mysore.
Mob: 9739848333

ಶೀಘ್ರ ವಿವಾಹಕ್ಕಾಗಿ ಸಂಪರ್ಕಿಸಿ
ವಧುಗಳಿಗೆ ಮದುವೆಯಾಗಲಿಲ್ಲವೇ? ವರಗಳ ಹುಡುಕಾಟದಲ್ಲಿದ್ದೀರಾ? ಒಳ್ಳೆಯ ಗುಣ ನಡತೆ, ಉದ್ಯೋಗ, ವಿದ್ಯಾರ್ಹತೆಯಿರುವ ವರಗಳಿದ್ದಾರೆ. ಬಡವಧುಗಳ ಮದುವೆಗೆ ಹಣಕಾಸಿನ ಆರ್ಥಿಕ ಸಹಾಯವಿದೆ. ವಿಧವೆ, ವಿಚ್ಛೇದಿತರು ಸಂಪರ್ಕಿಸಬಹುದು. ಬಡ ವಧುಗಳ ಮದುವೆಯ ಎಲ್ಲಾ ಖರ್ಚುಗಳನ್ನು ಹಾಕಿ ಮದುವೆಯಾಗುವ ಸದ್ಗುಣವಂತ, ಆದಾಯ ವಿರುವ ವರಗಳಿದ್ದಾರೆ. (ಸುವರ್ಣ ಅವಕಾಶ)
ಹೆಸರು ನೋಂದಾಯಿಸಿ: 9483385177

looking for worker who worksin hotel, he / she may be experienced to works in full time..
Job position-Helpers, table service (waiter), Dosa maker, cashier
Qualifications-10th or PUC
Address- Vijaya nagar 1st stage, Near Chandrakala hospital, KD road, Mysore
Channappa 9945540882
Sanjay TC 9718515635

ವಧು–ವರರಿಗೆ ಸಂಪರ್ಕಿಸಿ:
ಒಕ್ಕಲಿಗ, ಕುರುಬ, ಲಿಂಗಾಯತ, ನಾಯಕ, ಎಲ್ಲಾ ಜಾತಿಯ ವಧು–ವರರರು, ವಿಚ್ಛೇದಿತರು, ವಿಧುರ–ವಿಧವೆಯರು.
9980273659, 9731066259

ಇಂದೇ ಸಂಪರ್ಕಿಸಿ
ಮೈಸೂರಿನ ಪ್ರಸಿದ್ಧ Office Showroom & Comapany ಗಳಿಗೆ 7th, 10t, PUC, Degree, ITI, Diploma, Pass/Fail ಆದ ಯುವಕ/ಯುವತಿಯರು Packing, Helper, Telecalling, Data Entry, Receptionist, Lineincharge, Billing ಮುಂತಾದ ಕೆಲಸಗಳಿಗೆ ಬೇಕಾಗಿದ್ದಾರೆ. ಷರತ್ತು ಅನ್ವಯ ಸಂಬಳ: 14,500–39000 (ESI,PF,OT) ಸೇರಿ
6366141586
6364103418

ಬೇಕಾಗಿದ್ದಾರೆ
ಕಂಪ್ಯೂಟರ್ ಅಂಗಡಿಯಲ್ಲಿ DTP ಮತ್ತು Online ಅರ್ಜಿ ಹಾಕಲು ಕೆಲಸಕ್ಕೆ ಬೇಕಾಗಿದ್ದಾರೆ.
ಸಂಬಳ: 12000
ಸಮಯ: 9am to 6pm
ಸ್ಥಳ: ಮೈಸೂರು
9480918242

ಮಹಿಳೆ ಬೇಕಾಗಿದ್ದಾರೆ
ಒಂದು ವರ್ಷದ ಮಗುವನ್ನು ಬೆಳಿಗ್ಗೆ 10 ಗಂಟೆಯಿಂದ ಸಂಜೆ–6 ಗಂಟೆವರೆಗೆ ಜೆ.ಪಿ.ನಗರದಲ್ಲಿ ನೋಡಿಕೊಳ್ಳಲು 30–40 ವರ್ಷದ ಮಹಿಳೆ ಬೇಕಾಗಿದ್ದಾರೆ.
8088701462

ಜಮೀನು ಮಾರಾಟಕ್ಕಿದೆ
ಮೈಸೂರು–ಮಳವಳ್ಳಿ ಮುಖ್ಯರಸ್ತೆಯಲ್ಲಿ ಕಿರುಗಾವಲು ಗ್ರಾಮದ ಮುಖ್ಯರಸ್ತೆಯಿಂದ 500 ಮೀಟರ್‌ನಲ್ಲಿ 5 ಎಕರೆ ಜಮೀನು ಮಾರಾಟಕ್ಕಿದೆ. ಆಸಕ್ತರು ತಕ್ಷಣ ಸಂಪರ್ಕಿಸಿ:
7411848108

30x46 N/F
ಸೈಟು ಮಾರಾಟಕ್ಕಿದೆ 19 ಲಕ್ಷಗಳು, 28x40 S/W ಕಾರ್ನರ್ ಸೈಟು ಮಾರಾಟಕ್ಕಿದೆ. 15 ಲಕ್ಷಗಳು GSS ಲೇಔಟ್, TVS ಫ್ಯಾಕ್ಟರಿ ಹತ್ತಿರ, ಮೈಸೂರು
9972557534

ಸದ್ಗುರು ಮ್ಯಾರೇಜಸ್
1) ಲಂಬಾಣಿ MSc PhD ಡ್ರೈವರ್ಸ್ ವಧುಗೆ ಜಾತಿ ಅಭ್ಯಂತರ ಇಲ್ಲ
2) ಒಕ್ಕಲಿಗ MBBS MD ವಧುಗೆ ವರಬೇಕು
3) ಆದಿಕರ್ನಾಟಕ BE ವರನಿಗೆ ವಧುಬೇಕು
4) ಲಿಂಗಾಯತ BEMTECH ಶ್ರೀಮಂತ ವರನಿಗೆ ವಧುಬೇಕು
5) ಕುರುಬ BE Mtech ಶ್ರೀಮಂತ ವಧುವಿಗೆ ವರಬೇಕು
6) ಕೂರ್ಗಿ ಶ್ರೀಮಂತ ವಿಧವೆಗೆ ಲೈಫ್ ಪಾರ್ಟ್‌ನರ್ ಬೇಕು.
9448229184
7899625268

ಬ್ರಾಹ್ಮಣ ವರ ಬೇಕಾಗಿದೆ
ಬ್ರಾಹ್ಮಣ ವಧು, ವಯಸು 28, SSLC ಕಲಿತಿರುವ/ ವಯಸ್ಸು 34, PUC ಕಲಿತಿರುವ, ವಯಸ್ಸು 39, SSLC/ಕಲಿತಿರುವ ವಯಸು 42, PUC ಕಲಿತಿರುವ ವಧುವಿಗೆ ವರ ಬೇಕಾಗಿದೆ. (ಬ್ರಾಹ್ಮಣ ವಧುವರರಿಗಾಗಿ ಸಂಪರ್ಕಿಸಿ) ವಿಧವೆ, ವಿಚೇದಿತರು ಸಂಪರ್ಕಿಸಬಹುದು.
8792731562

SITE FOR SALE
(30x40) Manuganahally Opp. Park facing My-Hunsur Highway 7Km from Hinkal Flyover, 14 Lakhs
95388-39926

ಬೇಕಾಗಿದ್ದಾರೆ
ಫುಡ್ ಫ್ಯಾಕ್ಟರಿಯಲ್ಲಿ ಹೆಲ್ಪರ್ ಕೆಲಸಕ್ಕೆ ಪುರುಷರು ಬೇಕಾಗಿದ್ದಾರೆ.
ವಯಸು : 18 ರಿಂದ 45
ಸಂಬಳ: ESI+PF ಕಳೆದು 17000/- Week Off ಹಾಗೂ Shift ಗಳು ಇರುತ್ತದೆ.
ಹೆಚ್ಚಿನ ಮಾಹಿತಿಗಾಗಿ ಬೆಳಿಗ್ಗೆ 9 ಗಂಟೆಗೆ ಬಂದು ಸಂಪರ್ಕಿಸಿ
ಸ್ಥಳ: CIPET ಕಾಲೇಜ್ ಹತ್ತಿರ, ಮೇಟಗಳ್ಳಿ, ರಿಂಗ್ ರೋಡ್, ಮೈಸೂರು
9986874574

ಮೈಸೂರು ಮಿತ್ರ 45 ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ



ನಾಲ್ಕರಿಂದ ಐದು ಗೋಧಿ ಮೂಟೆಗಳನ್ನು ಸುಟ್ಟು ಹಾಕಿರುವುದು.

ಮಕ್ಕಳಿಗೆ ಸಿಗಬೇಕಿದ್ದ ಪೌಷ್ಟಿಕ ಆಹಾರ

ಗೋಧಿಗೆ ಬೆಂಕಿ



ಅಡುಗೆ ಸಿಬ್ಬಂದಿ, ಮುಖ್ಯಶಿಕ್ಷಕರ ನಿರ್ಲಕ್ಷ್ಯದಿಂದ ಹುಳ ಬಿದ್ದಿದ್ದ ಗೋಧಿ

● ಇಲಾಖೆಗೆ ಹಿಂತಿರುಗಿಸದೆ, ಮಾಹಿತಿ ನೀಡದೆ ಸುಟ್ಟಾಕಿದರು

ಹೆಚ್.ಡಿ.ಕೋಟೆ, ನ.27– ಮಕ್ಕಳು ಹಸಿವಿನಿಂದ ಇರಬಾರದು ಎಂಬ ಉದ್ದೇಶದಿಂದ ಸರ್ಕಾರ, ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಬಿಸಿಯೂಟಕ್ಕಾಗಿ ಸರಬರಾಜು ಮಾಡಿದ್ದ ಗೋಧಿಯನ್ನು ಸಮರ್ಪಕವಾಗಿ ಸದುಪಯೋಗಪಡಿಸಿಕೊಳ್ಳದೆ ಹುಳು ಬಿದ್ದಿದೆ ಎಂದು ನಾಲ್ಕೈದು ಗೋಧಿ ಮೂಟೆಗಳನ್ನು ಶಾಲೆಯ ಹಿಂಭಾಗದಲ್ಲಿ ಅಡುಗೆ ಸಿಬ್ಬಂದಿ ಮತ್ತು ಮುಖ್ಯ ಶಿಕ್ಷಕರು ಸುಟ್ಟು ಹಾಕಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ತಾಲೂಕಿನ ಅಂತರಸಂತೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಈ ಘಟನೆ ನಡೆದಿದೆ. ಈ ಸರ್ಕಾರಿ ಶಾಲೆಯಲ್ಲಿ 1 ರಿಂದ 7ನೇ ತರಗತಿ ವರೆಗೆ 200ಕ್ಕೂ ಹೆಚ್ಚು ಬಡ ಮಕ್ಕಳು ಓದುತ್ತಿದ್ದು, ಇವರ ಬಿಸಿಯೂಟಕ್ಕಾಗಿ ಸರ್ಕಾರ ಪ್ರತಿ ತಿಂಗಳು ಸಾವಿರಾರು ರೂ. ಖರ್ಚು ಮಾಡಿ ಆಹಾರ ಪದಾರ್ಥಗಳನ್ನು ಪೂರೈಸುತ್ತಿದೆ. ಆದರೆ ಈ ಶಾಲೆಯ ಮುಖ್ಯ ಶಿಕ್ಷಕರು ಮತ್ತು ಅಡುಗೆಯವರ ಬೇಜವಾಬ್ದಾರಿತನ ಮತ್ತು ಪರಸ್ಪರ ಮುಸುಕಿನ ಗುದ್ದಾಟದಿಂದಾಗಿ ಮಕ್ಕಳಿಗೆ ಸಿಗಬೇಕಾಗಿದ್ದ ಪೌಷ್ಟಿಕಾಂಶದ ಆಹಾರ ಪದಾರ್ಥಗಳು ಹಾಳಾಗಿ ಹೋಗಿವೆ.

ಈ ಶಾಲೆಗೆ ವಿತರಿಸಲಾಗಿದ್ದ ಗೋಧಿಯಿಂದ ಮಕ್ಕಳಿಗೆ ಆಹಾರ ಮಾಡಿಕೊಡದೆ ಹಾಗೆಯೇ ಶೇಖರಣೆ ಮಾಡಿ ಇಟ್ಟಿದ್ದರಿಂದ ಗೋಧಿಯಲ್ಲಿ ಹುಳುಗಳು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಕಳೆದ ವಾರ ಶಾಲೆ ಹಿಂಭಾಗದಲ್ಲಿ ನಾಲ್ಕರಿಂದ ಐದು ಗೋಧಿ ಮೂಟೆಗಳನ್ನು ಸುಟ್ಟು ಹಾಕಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದ ಹಿನ್ನೆಲೆಯಲ್ಲಿ ಎಚ್ಚೆತ್ತುಕೊಂಡ ಶಿಕ್ಷಣ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಗೋಧಿಯನ್ನು ಸುಟ್ಟು ಹಾಕಿರುವುದನ್ನು ಪರಿಶೀಲಿಸಿ ತಪ್ಪಿತಸ್ಥರಿಗೆ ಎಚ್ಚರಿಕೆ ನೀಡಿ ಹೋಗಿದ್ದಾರೆ.

ಈ ವಿಚಾರ ತಿಳಿಯುತ್ತಿದ್ದಂತೆ ಪ್ರಭಾರ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಎ. ರಾಜು ಅವರು ಶಾಲೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಮುಖ್ಯ ಶಿಕ್ಷಕರನ್ನು ವಿಚಾರಣೆಗೊಳಪಡಿಸಿದ್ದಾರೆ ಮುಖ್ಯ ಶಿಕ್ಷಕರು ಈ ವಿಚಾರ ನನಗೆ ಗೊತ್ತೇ ಇಲ್ಲ ಇದೆಲ್ಲ ಅಡುಗೆಯವರು ಮಾಡಿರುವುದು/ ನನ್ನಿಂದ ತಪ್ಪಾಗಿದ್ದರೆ ನಾಲ್ಕರಿಂದ ಐದು ಗೋಧಿ ಚೀಲಗಳನ್ನು ನನ್ನ ಹಣದಿಂದ ತರಿಸಿಕೊಡುತ್ತೇನೆ ಎಂದು ಉಡಾಫೆ ಮಾತಾಡಿದ್ದಾರೆ, ಮತ್ತೆ ಅಡುಗೆ ಸಿಬ್ಬಂದಿಗಳನ್ನು ವಿಚಾರಣೆ ಮಾಡಿದಾಗ ನಮಗೆ ಗೊತ್ತಿಲ್ಲ ಎಂದು ಹೇಳುತ್ತಾರೆ, ಅಡುಗೆಯವರು ಶಿಕ್ಷಕರುಗಳ ಹೊಂದಾಣಿಕೆ ಇಲ್ಲದ ಕಾರಣ ಇಂತಹ ಒಂದು ಘಟನೆಗಳು ನಡೆಯಲು ಕಾರಣವಾಗಿದ್ದ, ಮುಖ್ಯ ಶಿಕ್ಷಕರು ಅಡುಗೆ ಅವರಿಂದ ಹೇಳಿಕೆಯನ್ನು ಪಡೆದು ಲಿಖಿತವಾಗಿ ಪತ್ರದ ಮೂಲಕ ಸಂಬಂಧಪಟ್ಟ ಬಿಇಓ ಕಾಂತರಾಜು ಅವರಿಗೆ ವರದಿ ಸಲ್ಲಿಸಿದ್ದೇನೆ ಎಂದು ತಿಳಿಸಿದರು.

ಬಿಸಿ ಊಟದ ವಿಚಾರವಾಗಿ ತಾಲೂಕಿನ ಸರ್ಕಾರಿ ಶಾಲೆಗಳಲ್ಲಿ ಆಗಿಂದಾಗ್ಗೆ ಅಡುಗೆಯವರು ಮತ್ತು ಶಿಕ್ಷಕರ ನಿರ್ಲಕ್ಷ್ಯದಿಂದ ಒಂದಲ್ಲಾ ಒಂದು ಅಧ್ವಾನ ನಡೆಯುತ್ತಲೇ ಇರುತ್ತದೆ. ಈಗಲಾದರೂ ಬಡ ಮಕ್ಕಳಿಗೆ ಸಿಗಬೇಕಾಗಿದ್ದ ಬಿಸಿ ಊಟದ ವಿಚಾರದಲ್ಲಿ ಬೇಜವಾಬ್ದಾರಿ ವಹಿಸುವ ಯಾವುದೇ ಶಿಕ್ಷಕರು, ನೌಕರರ ವಿರುದ್ಧ ಕಠಿಣ ಕ್ರಮ ಕೈಗೊಂಡರೆ ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸುವುದು ತಪ್ಪುತ್ತದೆ ಎನ್ನುವುದು ಸಾರ್ವಜನಿಕರ ಅನಿಸಿಕೆಯಾಗಿದೆ.

"ಅಂತರಸಂತೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬಿಸಿ ಊಟಕ್ಕೆ ಎಂದು ಸರಬರಾಜು ಮಾಡಲಾಗಿದ್ದ ಗೋಧಿ ಮೂಟೆಗಳನ್ನು ಸುಟ್ಟು ಹಾಕಿರುವ ವಿಚಾರ ಬಗ್ಗೆ ಬಿಇಓ ಕಾಂತರಾಜ್ ಅವರು ನನಗೆ ಯಾವುದೇ ವರದಿ ಸಲ್ಲಿಸಿಲ್ಲ. ವರದಿ ಸಲ್ಲಿಸಿದ್ದೇನೆ ಎಂದು ಸುಳ್ಳು ಮಾಹಿತಿಯನ್ನು ನೀಡಿದ್ದಾರೆ. ನನಗೆ ವರದಿ ಸಲ್ಲಿಸಿಲ್ಲ. ಈ ಘಟನೆಗೆ ಮುಖ್ಯ ಶಿಕ್ಷಕರೇ ಹೊಣೆ ಆಗುತ್ತಾರೆ. ಹುಳು ಬಂದಿರುವ ಗೋಧಿ ಚೀಲಗಳನ್ನು ಇಲಾಖೆ ಗಮನಕ್ಕೆ ತಂದು ವಾಪಸ್ ನೀಡಬೇಕಾಗಿತ್ತು. ವರದಿ ಬಂದ ತಕ್ಷಣ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುತ್ತೇನೆ.

- ಜವರೇಗೌಡ, ಡಿಡಿಪಿಐ.

"ಶಾಲಾ ಮಕ್ಕಳು ಹಸಿವಿನಿಂದ ಇರಬಾರದು ಎಂದು ಸರ್ಕಾರ ಬಿಸಿಊಟ ಯೋಜನೆಯನ್ನು ಆರಂಭಿಸಿದ್ದು, ಈ ಶಾಲೆಯಲ್ಲಿ ಗೋಧಿ ಚೀಲವನ್ನು ಸುಟ್ಟು ಹಾಕಿರುವುದು ವಿಪರ್ಯಾಸ. ಈ ಒಂದು ಘಟನೆಗೆ ಮುಖ್ಯ ಶಿಕ್ಷಕರೇ ನೇರ ಹೊಣೆಯಾಗುತ್ತಾರೆ. ಸಂಬಂಧಪಟ್ಟ ಇಲಾಖೆಯವರು ಇದನ್ನು ಮುಚ್ಚುವ ಪ್ರಯತ್ನ ಮಾಡುತ್ತಿದ್ದಾರೆ, ಮುಖ್ಯ ಶಿಕ್ಷಕರನ್ನು ಅಮಾನತು ಮಾಡಬೇಕು.

- ಪ್ರಕಾಶ್ ಬುದ್ಧ, ಕರ್ನಾಟಕ ಭೀಮಸೇನೆ ತಾಲೂಕು ಅಧ್ಯಕ್ಷ

ಹೆಜ್ಜೇನು ದಾಳಿ: ರೈತ ಸಾವು

ಉಳಿದಿಬ್ಬರಿಗೆ ತೀವ್ರಗಾಯ



ಪುಟ್ಟರಾಜು

ಪಿರಿಯಾಪಟ್ಟಣ, ನ.27– ಹೆಜ್ಜೇನು ದಾಳಿಯಿಂದ ರೈತರೊಬ್ಬರು ಮೃತಪಟ್ಟಿರುವ ಘಟನೆ ತಾಲೂಕಿನ ಬೆಟ್ಟದಪುರ ಹೋಬಳಿ, ಮೇಲೂರು ಗ್ರಾಮದಲ್ಲಿ ನಡೆದಿದೆ. ಗ್ರಾಮದ ನಿವಾಸಿ ಪುಟ್ಟರಾಜು (61) ಮೃತ ರೈತ. ಇವರು ಪತ್ನಿ, ಪಾರ್ವತಮ್ಮ, ಪುತ್ರ ಎಂ.ಪಿ.ಶಿವಕುಮಾರ್, ಪುತ್ರಿ ಎಂ.ಪಿ. ಜಲಜಾಕ್ಷಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಬುಧವಾರ ಮಧ್ಯಾಹ್ನ ಜಮೀನಿನಲ್ಲಿ ದನ ಮೇಯಿಸುವಾಗ ಪುಟ್ಟರಾಜು ಅವರ ಮೇಲೆ ಇದ್ದಕ್ಕಿದ್ದಂತೆ ಹೆಜ್ಜೇನು ದಾಳಿ ನಡೆಸಿ ಮುತ್ತಿದಾಗ ಅವರ ಚೀರಾಟ ಕೇಳಿ ರಕ್ಷಣೆಗೆ ಧಾವಿಸಿದ ಅವರ ಸಹೋದರ ಬಸವರಾಜು ಹಾಗೂ ಸಂಬಂಧಿ ಮಲ್ಲಿಕಾರ್ಜುನ ಅವರ ಮೇಲೂ ಜೇನು ದಾಳಿ ನಡೆಸಿದ್ದು, ಗಾಯಗೊಂಡಿದ್ದಾರೆ.

ಬಳಿಕ ಮೂವರನ್ನೂ ಪಿರಿಯಾಪಟ್ಟಣ ತಾಲೂಕು ಆಸ್ಪತ್ರೆಗೆ ಕರೆತರಲಾಯಿತಾದರೂ ಪುಟ್ಟರಾಜು ಚಿಕಿತ್ಸೆ ಫಲಿಸದೆ ಸಾವನ್ನಪ್ಪಿದ್ದಾರೆ. ಇನ್ನಿಬ್ಬರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಸಂಬಂಧ ಬೆಟ್ಟದಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿದ್ಯಾರ್ಥಿಗಳಿಗೆ ಬ್ಯಾಗು, ಪುಸ್ತಕ ವಿತರಣೆ



ಬೆಂಗಳೂರಿನ ಬಿಎಂಎಸ್ ಇಂಜಿನಿಯರಿಂಗ್ ಕಾಲೇಜಿನ ವತಿಯಿಂದ ಹೆಚ್.ಡಿ.ಕೋಟೆಯ ಸರ್ಕಾರಿ ಪ್ರೌಢಶಾಲೆಯ ಮಕ್ಕಳಿಗೆ ನೀಡಲಾದ ಬ್ಯಾಗು , ಪುಸ್ತಕ ಮತ್ತು ಲೇಖನಿ ಸಾಮಗ್ರಿಗಳನ್ನು ಯುವ ಕಾಂಗ್ರೆಸ್ ಮುಖಂಡ ಸುನೀಲ್ ಚಿಕ್ಕಮಾದು ಅವರು ವಿತರಿಸಿದರು. ಬಿಇಓ ಕಾಂತರಾಜು , ಬಿಆರ್ ಸಿ.ಕೃಷ್ಣಯ್ಯ, ಶಾಲಾ ಶಿಕ್ಷಕರು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು. ಈ ವೇಳೆ ಮಾತನಾಡಿದ ಸುನೀಲ್ ಚಿಕ್ಕಮಾದು ವಿದ್ಯಾರ್ಥಿಗಳು ಚೆನ್ನಾಗಿ ಓದಿ ಶಾಲೆ ಮತ್ತು ಪೋಷಕರಿಗೆ ಕೀರ್ತಿ ತರಬೇಕು ಎಂದರು.

ಕನ್ನಡ ರಾಜ್ಯೋತ್ಸವದಲ್ಲಿ ಕನ್ನಡದ ಹಿರಿಮೆ–ಗರಿಮೆ ಸಾರುವ ಕೆಲಸವಾಗಬೇಕು



ಸರಗೂರು ವಿನಾಯಕ ಬೀದಿಬದಿ ವ್ಯಾಪಾರಿಗಳ ಸಂಘದ ವತಿಯಿಂದ ನಡೆಸಲಾದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಶಾಸಕರಾದ ಅನಿಲ್ ಚಿಕ್ಕಮಾದುರವರನ್ನು ಅಭಿನಂದಿಸಿ, ಸನ್ಮಾನಿಸಲಾಯಿತು.


ಸರಗೂರು, ನ.27– ಕನ್ನಡದ ಹಿರಿಮೆ–ಗರಿಮೆ ಸಾರುವ ಕೆಲಸ ಪ್ರತಿಯೊಬ್ಬ ಕನ್ನಡಿಗರ ಗುರಿಯಾಗಬೇಕು ಎಂದು ಶಾಸಕ ಅನಿಲ್ ಚಿಕ್ಕಮಾದು ಕರೆ ನೀಡಿದ್ದಾರೆ.

ಪಟ್ಟಣದ ಪಟ್ಟಣ ಪಂಚಾಯಿತಿ ಮುಂಭಾಗ ವಿನಾಯಕ ಬೀದಿಬದಿ ವ್ಯಾಪಾರಿಗಳ ಸಂಘದ ವತಿಯಿಂದ ನಡೆಸಲಾದ 69 ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭುವನೇಶ್ವರಿ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಕನ್ನಡಪರ ಕಾರ್ಯಕ್ರಮಗಳನ್ನು ನಿರಂತರ ಹಮ್ಮಿಕೊಂಡು ಕನ್ನಡ ರಾಜ್ಯೋತ್ಸವ ನಿತ್ಯೋತ್ಸವವಾಗಬೇಕು. ನಾಡು ನುಡಿ ಪರಂಪರೆ ಬಿಂಬಿಸುವ ಕಾರ್ಯವಾಗಬೇಕು ಎಂದರು.

ತಾಲೂಕಿನ ಸಮಗ್ರ ಅಭಿವೃದ್ಧಿಗೆ ಶ್ರಮಿಸುವುದೇ ನಮ್ಮ ಗುರಿಯಾಗಿದೆ. ತಾಲೂಕು ಕೇಂದ್ರವಾಗಿ ವನಜಲ ಸಿರಿ ನಾಡಾದ ಸರಗೂರಿಗೆ ಅತ್ಯಂತ ಪ್ರಮುಖವೆನಿಸಿದ ಸೌಲಭ್ಯಗಳನ್ನು ಕಲ್ಪಿಸುವುದು ಮೊದಲ ಕಾರ್ಯವೆನಿಸಿದೆ. ಮಿನಿ ವಿಧಾನಸೌಧಕ್ಕಾಗಿ ಅನುದಾನವೂ ಮಂಜೂರಾಗಿದೆ. ನೂರು ಹಾಸಿಗೆಯುಳ್ಳ ಸುಸಜ್ಜಿತ ಆಸ್ಪತ್ರೆ, ನ್ಯಾಯಾಲಯ, ಅಗ್ನಿಶಾಮಕ, ಸುಸಜ್ಜಿತ ಕ್ರೀಡಾಂಗಣ ಮುಂತಾದ ಸೌಲಭ್ಯಗಳು ಮೊದಲಾಗಬೇಕಿದೆ. ಇವುಗಳನ್ನು ಕಾರ್ಯಗತಗೊಳಿಸುವುದು ಅತಿಮುಖ್ಯ ಎಂದರು.

ಪಟ್ಟಣ ಪಂಚಾಯಿತಿಯ ಶ್ರೀನಿವಾಸ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಧ್ರುವತಾರೆ ಮೆಲೋಡಿಸ್ ತಂಡದವರಿಂದ ಕನ್ನಡ ರಸಮಂಜರಿ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಸಂಘದ ಅಧ್ಯಕ್ಷ ಮಹದೇವ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ರಾಧಿಕಾ ಶ್ರೀನಾಥ್, ಉಪಾಧ್ಯಕ್ಷ ಶಿವಕುಮಾರ್, ಸದಸ್ಯರಾದ ಶ್ರೀನಿವಾಸ್, ನುರಾಳಸ್ವಾಮಿ, ಚಲುವ ಕೃಷ್ಣ, ಕಾಂಗ್ರೆಸ್ ಟೌನ್ ಅಧ್ಯಕ್ಷ ಎಸ್.ಎನ್. ನಾಗರಾಜು, ಕಾರ್ಯದರ್ಶಿ ಚಲುವ ರಾಜು, ಮುಖಂಡರಾದ ಶಂಭುಲಿಂಗ ನಾಯಕ, ವಾಹನ ಚಾಲಕರ ಸಂಘದ ಅಧ್ಯಕ್ಷ ಬೀರ್ವಾಳ್ ಚಿಕ್ಕಣ್ಣ, ಅಕ್ರಮ–ಸಕ್ರಮ ಸಮಿತಿ ಸದಸ್ಯ ಶಿವಶಂಕರ್, ಮುಖಂಡರಾದ ಜಿನ್ನಹಳ್ಳಿ ರಾಜನಾಯಕ, ಕ್ಯಾತನಹಳ್ಳಿ ನಾಗರಾಜು, ನವೀನ್‌ಕುಮಾರ್, ರಮೇಶ್, ವಿನಾಯಕ ಬೀದಿಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷರಾದ ಮಹದೇಶ್ವರ ಟಿಫಾನಿಸ್ ಮಾಲೀಕ ಮಹದೇವ್, ಗೌರವ ಅಧ್ಯಕ್ಷ ಬೈರನಾಯಕ, ಉಪಾಧ್ಯಕ್ಷ ಗೋವಿಂದರಾಜು, ಮತ್ತು ಮಹದೇವಮ್ಮ, ಪ್ರಧಾನ ಕಾರ್ಯದರ್ಶಿ ಸತೀಶ್, ಸಹಕಾರ್ಯದರ್ಶಿ ನಂದೀಶ್, ಕೃಷ್ಣಪ್ರಸಾದ್, ಖಜಾಂಚಿ ರಂಗಸ್ವಾಮಿ (ಗೋಬಿ), ಎಂ.ರವಿಕುಮಾರ್, ನಿರ್ದೇಶಕರಾದ ವೆಂಕಟಸ್ವಾಮಿ, ಚಾಂದ್ ಖಾನ್, ರವಿಕುಮಾರ್, ನಾಗರಾಜು, ವೆಂಕಟೇಶ್, ಲಕ್ಷ್ಮೀ, ಶಶಿಕಲಾ, ಚೌಡನಾಯಕ, ರಂಗಸ್ವಾಮಿ, ಉಮೇಶ್, ಸಂಜೀವ್ ನಾಯಕ ಹಾಗೂ ಸದಸ್ಯರು ಭಾಗಿಯಾಗಿದ್ದರು.

ಅಂಕನಹಳ್ಳಿ ಗ್ರಾಪಂಗೆ ಅಧ್ಯಕ್ಷರ ಆಯ್ಕೆ



ಅಂಕನಹಳ್ಳಿ ನೂತನ ಗ್ರಾಮ ಪಂಚಾಯಿತಿ ಅಧ್ಯಕ್ಷ ಬಾಬು ಅವರನ್ನು ಅಭಿನಂದಿಸುತ್ತಿರುವುದು. ಮೈಮುಲ್ ನಿರ್ದೇಶಕ ಎ.ಟಿ.ಸೋಮಶೇಖರ್ ಇದ್ದರು.

ಸಾಲಿಗ್ರಾಮ, ನ.27– ತಾಲೂಕಿನ ಅಂಕನಹಳ್ಳಿ ಗ್ರಾಮ ಪಂಚಾಯಿತಿಗೆ ನೂತನ ಅಧ್ಯಕ್ಷರಾಗಿ ಬಾಬು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅಂಕನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಒಟ್ಟು ಹತ್ತು ಜನ ಗ್ರಾಮ ಪಂಚಾಯಿತಿ ಸದಸ್ಯರಿದ್ದು ಈ ಹಿಂದೆ ಅಧ್ಯಕ್ಷರಾಗಿದ್ದ ಎ.ವಿ. ಧನಂಜಯ ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಬುಧವಾರ ಪಂಚಾಯಿತಿ ಆವರಣದಲ್ಲಿ ಚುನಾವಣೆ ನಡೆಯಿತು. ಚುನಾವಣಾಧಿಕಾರಿಯಾಗಿ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ಕಾರ್ಯ ನಿರ್ವಹಿಸಿದರು.

ಚುನಾವಣೆಯಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಬಾಬು, ರುಕ್ಮಿಣಿ, ಧನಂಜಯ್, ಮಂಜುಳಾ, ತಮ್ಮಣ್ಣೇಗೌಡ, ತುಳಸಮ್ಮ, ಲಕ್ಷ್ಮಮ್ಮ, ದಿನೇಶ್ ಅಮ್ರೀನ್ ತಾಜು, ಚುನಾವಣೆ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರು ಅಧ್ಯಕ್ಷ ಸ್ಥಾನಕ್ಕೆ ಬಾಬು ಒಬ್ಬರೇ ನಾಮಪತ್ರ ಸಲ್ಲಿಸಿದರು. ಪ್ರತಿಸ್ಪರ್ಧಿಯಾಗಿ ಯಾರೂ ಕೂಡ ನಾಮಪತ್ರ ಸಲ್ಲಿಸದ ಕಾರಣ ಬಾಬು ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾ ಅಧಿಕಾರಿ ತಿಳಿಸಿದರು.

ಸಂದರ್ಭದಲ್ಲಿ ಜಿಲ್ಲಾ ಮೈಮುಲ್ ನಿರ್ದೇಶಕ ಎ.ಟಿ.ಸೋಮಶೇಖರ್, ಎಪಿಎಂಸಿ ಮಾಜಿ ಅಧ್ಯಕ್ಷ ಕುಪ್ಪಳಿ ಸೋಮು, ಮಿರ್ಲೆ ಗ್ರಾಮ ಅಧ್ಯಕ್ಷ ಬಾಲ್ಲು, ವಿ.ಎಸ್.ಎಸ್ ಅಧ್ಯಕ್ಷ ಭಾಸ್ಕರ್, ರಘು, ಮಧುಕುಮಾರ್, ಮುರುಳಿ, ವೈರಮುಡಿ, ರಮೇಶ್, ಅಭಿಲಾಶ್, ಎ.ಟಿ.ಸತೀಶ್,ವಕೀಲ ತಿಮ್ಮಪ್ಪ, ಗೋಪಾಲ್, ಮೂರ್ತಿ, ಮಹೇಂದ್ರ, ರವಿ, ವಿಎಸ್‌ಎಸ್ ಕಾರ್ಯದರ್ಶಿ ಸತೀಶ್, ಪಿಡಿಓ ನವೀನ್, ಕಬ್ಬು ಬೆಳೆಗಾರರ ಸಂಘದ ರಾಜ್ಯ ಉಪಾಧ್ಯಕ್ಷ ತಿಮ್ಮಪ್ಪ ಸೇರಿದಂತೆ ಇನ್ನಿತರರು ನೂತನ ಅಧ್ಯಕ್ಷರನ್ನು ಅಭಿನಂದಿಸಿದರು.

ಟ್ರ್ಯಾಕ್ಟರ್ ಹರಿದು ರಸ್ತೆ ಬದಿ ನಿಂತಿದ್ದ ವ್ಯಕ್ತಿ ಸಾವು



ಹನಗೋಡು, ನ.27–ಟ್ರ್ಯಾಕ್ಟರ್ ಹರಿದು ರಸ್ತೆ ಬದಿ ನಿಂತಿದ್ದ ವ್ಯಕ್ತಿ ಸಾವನ್ನಪ್ಪಿದ ಘಟನೆ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಂಭವಿಸಿದೆ. ಹನಗೋಡು ಗ್ರಾಮದ ಮುರಳಿ(50) ಅಪಘಾತದಲ್ಲಿ ಸಾವನ್ನಪ್ಪಿದವರಾಗಿದ್ದು, ಶುಂಠಿ ವಾಷಿಂಗ್ ಮೆಷಿನ್‌ಗೆ ಶುಂಠಿ ಇಳಿಸಿ ವಾಪಸ್ ತೆರಳುತ್ತಿದ್ದ ಎರಡು ಟ್ರ್ಯಾಕ್ಟರ್ ಚಾಲಕರು ಒಬ್ಬರಿಗೊಬ್ಬರು ಪೈಪೋಟಿಗೆ ಬಿದ್ದವರಂತೆ ಅತೀ ವೇಗವಾಗಿ ಟ್ರ್ಯಾಕ್ಟರ್‌ಗಳನ್ನು ಚಾಲನೆ ಮಾಡುತ್ತಿದ್ದರು. ಈ ವೇಳೆ ಕಿರಂಗೂರು ಗಿರೀಶ್ ಎಂಬುವರಿಗೆ ಸೇರಿದ ಟ್ರ್ಯಾಕ್ಟರ್ ರಸ್ತೆ ಬದಿ ನಿಂತಿದ್ದ ಗಿರೀಶ್ ಅವರ ಮೇಲೆ ಹರಿದಿದ್ದು, ಅವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮುರಳಿ ಅವರು ಹುಣಸೂರು ಹಿರಿಯ ಪತ್ರಕರ್ತ ಹನಗೋಡು ನಟರಾಜ ಅವರ ಸಹೋದರ. ಈ ಸಂಬಂಧ ಹುಣಸೂರು ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕೋಳಿ ವಿಷಯಕ್ಕೆ ಉಂಟಾದ ಜಗಳ ಓರ್ವನ ಕೊಲೆಯಲ್ಲಿ ಅಂತ್ಯ

ಪತ್ನಿ ಮೇಲಿನ ಹಲ್ಲೆ ಬಿಡಿಸಲು ಬಂದವನ ಮರ್ಮಾಂಗಕ್ಕೆ ಒದ್ದು ಕೊಲೆ

ತಿ.ನರಸೀಪುರ, ನ.27– ಕೋಳಿಗಳು ಮನೆಗೆ ನುಗ್ಗಿ ಗಲೀಜು ಮಾಡುವ ವಿಚಾರಕ್ಕೆ ಉಂಟಾದ ಜಗಳ ವ್ಯಕ್ತಿಯೋರ್ವನ ಕೊಲೆಯಲ್ಲಿ ಅಂತ್ಯಗೊಂಡಿದೆ.

ತಾಲೂಕಿನ ದೊಡ್ಡೇಬಾಗಿಲು ಗ್ರಾಮ ದಲ್ಲಿ ಈ ಘಟನೆ ಸಂಭವಿಸಿದ್ದು, ಗ್ರಾಮದ ವಾಸಿ ಮಹದೇವ ಸ್ವಾಮಿ ಎಂಬಾತನೆ ಕೊಲೆಯಾದ ದುರ್ದೈವಿಯಾಗಿದ್ದು, ತಿ.ನರಸೀಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮಹದೇವ ಸ್ವಾಮಿ ದಂಪತಿ ಮಕ್ಕಳಾದ ಮಾನ್ಯ ಮತ್ತು ಸಿಂಚನ ಅವರುಗಳೊಂದಿಗೆ ದೊಡ್ಡೇಬಾಗಿಲು ಗ್ರಾಮದಲ್ಲಿ ವಾಸವಾಗಿದ್ದು, ಬುಧವಾರ(ನ.27) ಬೆಳಗ್ಗೆ ಮನೆಯ ಮುಂದೆ ಮಹದೇವ ಸ್ವಾಮಿ ಅವರ ಪತ್ನಿ ಪಾತ್ರೆ ತೊಳೆಯುತ್ತಿದ್ದಾಗ, ಇವರ ದಾಯಾದಿ ನಂಜಮ್ಮನವರು ಮಾತನಾಡುತ್ತ ಮನೆಯ ಮುಂದೆ ನಿಂತಿದ್ದರು ಎಂದು ದೂರಿನಲ್ಲಿ ತಿಳಿಸಲಾಗಿದೆ. ಈ ವೇಳೆ ಎದುರು ಮನೆಯ ರಾಜಮ್ಮ ಮತ್ತು ಇವರ ತಾಯಿ ಸಿದ್ದಮ್ಮನವರು ನಿಮ್ಮ ಮನೆಯ ಕೋಳಿಗಳು ನಮ್ಮ ಮನೆಗೆ ಬಂದು ಗಲೀಜು ಮಾಡುತ್ತಿವೆ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸುತ್ತ ನಂಜಮ್ಮನವರ ಮುಂದಲೇ ಹಿಡಿದು ಎಳೆದಾಡತೊಡಗಿದರು.

ಇದನ್ನು ಕಂಡ ಮಹದೇವಸ್ವಾಮಿ ಅವರ ಪತ್ನಿ ಪಾತ್ರೆ ತೊಳೆಯುವುದನ್ನು ಬಿಟ್ಟು ಜಗಳ ಬಿಡಿಸಲು ಮುಂದಾಗಿದ್ದಾರೆ. ಆಗ ಸಿದ್ದಮ್ಮ ಜಗಳ ಬಿಡಿಸಲು ಬಂದವರ ತಲೆಗೂದಲನ್ನು ಹಿಡಿದು ಎಳೆದಾಡಿದರು. ಇದೇ ವೇಳೆ ರಾಜಮ್ಮ ಅಲ್ಲೆ ಬಿದ್ದಿದ್ದ ಕಲ್ಲಿನಿಂದ ಆಕೆಯ ಮೇಲೆ ಹಲ್ಲೆ ನಡೆಸಿದಾಗ ಎಡಗಣ್ಣಿಗೆ ಪೆಟ್ಟು ಬಿತ್ತು ಎನ್ನಲಾಗಿದೆ.

ಇದೇ ಸಂದರ್ಭದಲ್ಲಿ ತನ್ನ ಪತ್ನಿ ಮೇಲೆ ಹಲ್ಲೆ ನಡೆಯುತ್ತಿರುವುದನ್ನು ಕಂಡು ಮಹದೇವಸ್ವಾಮಿ ಜಗಳ ಬಿಡಿಸಲು ಬಂದಾಗ ರಾಜಮ್ಮ ಮತ್ತು ಸಿದ್ದಮ್ಮ ಅವರುಗಳು ಮಹದೇವಸ್ವಾಮಿಯನ್ನು ಎಳೆದಾಡಿ ಮರ್ಮಾಂಗಕ್ಕೆ ಒದ್ದು ಕೆಳಗೆ ಬೀಳಿಸಿದರು. ಆದರೂ ಸುಮಾರು ಸಮಯದ ನಂತರ ಜಗಳ ಬಿಟ್ಟು ಮನೆಯವರೆಲ್ಲ ಓಡಿ ಹೋಗಿ ಮಹದೇವಸ್ವಾಮಿಯನ್ನು ಎಬ್ಬಿಸಲು ಯತ್ನಿಸಿದಾಗ ಇಡೀ ದೇಹ ತಣ್ಣಗಾಗಿ ಸಾವನ್ನಪ್ಪಿದರು ಎಂದು ದೂರಿನಲ್ಲಿ ತಿಳಿಸಲಾಗಿದೆ. ನನ್ನ ಗಂಡನ ಮರ್ಮಾಂಗಕ್ಕೆ ಒದ್ದು ಕೊಲೆ ಮಾಡಿರುವ ರಾಜಮ್ಮ ಮತ್ತು ಸಿದ್ದಮ್ಮ ಅವರುಗಳ ಮೇಲೆ ಕ್ರಮ ಜರುಗಿಸಿ ಬಂಧಿಸಿ ತಮಗೆ ನ್ಯಾಯ ಒದಗಿಸುವಂತೆ ಪತ್ನಿ ದೂರು ನೀಡಿದ ಹಿನ್ನೆಲೆಯಲ್ಲಿ ತಿ.ನರಸೀಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಷಯ ತಿಳಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಅಡಿಷನಲ್ ಎಸ್ಪಿ ನಾಗೇಶ್, ಡಿವೈಎಸ್ಪಿ ರಘು ಹಾಗೂ ಸರ್ಕಲ್ ಇನ್ಸ್‌ಪೆಕ್ಟರ್ ಧನಂಜಯ ಅವರುಗಳು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದರು.

ಧರ್ಮಾಪುರದಲ್ಲಿ ಈಶ್ವರ, ಮಹದೇಶ್ವರ, ಚನ್ನಕೇಶವ ಸ್ವಾಮಿಯ ವೈಭವದ ಜಾತ್ರಾ ಮಹೋತ್ಸವ



ಧರ್ಮಾಪುರದಲ್ಲಿ ನಡೆದ ಜಾತ್ರಾ ಮಹೋತ್ಸವದಲ್ಲಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿವಿಧ ದೇವರುಗಳ ಮೆರವಣಿಗೆಯು ಜರುಗಿತು.

ಹುಣಸೂರು, ನ.27– ಕಡೇ ಕಾರ್ತಿಕ ಮಾಸದ ಅಂಗವಾಗಿ ತಾಲೂಕಿನ ಧರ್ಮಾಪುರ ಗ್ರಾಮದಲ್ಲಿ ಎಲ್ಲಾ ಜನಾಂಗದವರು ಒಟ್ಟಾಗಿ ಸೇರಿ ಆಚರಿಸುವ ಈಶ್ವರ, ಮಹದೇಶ್ವರ, ಚನ್ನಕೇಶವ ಸ್ವಾಮಿಯ ಜಾತ್ರಾ ಮಹೋತ್ಸವವು ವಿಜೃಂಭಣೆಯಿಂದ ನಡೆಯಿತು.

ಸೋಮವಾರ ರಾತ್ರಿ ಓಕುಳಿಯ ಉತ್ಸವವು ನಡೆಯಿತು. ಸಂಜೆ ಗ್ರಾಮದ ಮೂಡಲ ಕೆರೆಯಲ್ಲಿ ಪೂಜೆ ಸಲ್ಲಿಸಿ ಬಾಜಾ ಭಜಂತ್ರಿಯೊಂದಿಗೆ ಮೆರವಣಿಗೆ ಮೂಲಕ ಕನ್ಯಾ ಮಣಿಗಳು ಕಳಸದಲ್ಲಿ ನೀರು ಹೊತ್ತು ತಂದು ಮಾರಿಗುಡಿ ಮುಂದಿನ ಚನ್ನಕೇಶವ ಸ್ವಾಮಿ ದೇವಾಲಯದ ಮುಂದಿನ ಓಕುಳಿ ಕೊಳಕ್ಕೆ ನೀರು ತುಂಬಿಸಿದ ನಂತರ ಮೈನವಿರೇಳಿಸುವ ಓಕುಳಿಯಾಡಿದರು.

ಕೊಂಡೋತ್ಸವ: ಮಂಗಳವಾರ ಬೆಳಿಗ್ಗೆ ನಡೆದ ಕೊಂಡೋತ್ಸವಕ್ಕೆ ಪಕ್ಕದ ನಾಡಪ್ಪನಹಳ್ಳಿಯಿಂದ ಆಗಮಿಸಿದ್ದ ಮಹದೇಶ್ವರ ಸ್ವಾಮಿಯ ಉತ್ಸವ ದೇವರು ಹಾಗೂ ಗ್ರಾಮದ ಈಶ್ವರಸ್ವಾಮಿ. ಮಹದೇಶ್ವರ ಸ್ವಾಮಿ, ಮಲ್ಲದೇವರು, ಹುಲಿವಾಹನದೊಂದಿಗೆ ಮೂಡಲ ಕೆರೆಗೆ ಆಗಮಿಸಿ ಅಲ್ಲಿ ಪೂಜೆ ಸಲ್ಲಿಸಿದ ನಂತರ ಕುಣಿಯುವ ಗುಡ್ಡರ ಕುಣಿತ, ಮಂಗಳವಾದ್ಯಗಳೊಂದಿಗೆ ಕೊಂಡೋತ್ಸವ ನಡೆಯುವ ಸ್ಥಳಕ್ಕೆ ಮೆರವಣಿಗೆಯಲ್ಲಿ ಆಗಮಿಸಿದ ನಂತರ ಪೂಜಾರರಾದ ಚಂದ್ರಪ್ಪ, ಮಾದೇಗೌಡರು ದೇವರ ಅವಗಾಹನೆಗೆ ಒಳಗಾಗಿ ದೇವರಿಗೆ ಜೈಕಾರ ಹಾಕುತ್ತಾ ಕೊಂಡವನ್ನು ಹಾಯ್ದರು. ದೇವಾಲಯ ಸುತ್ತ ದೇವರುಗಳ ಪ್ರದಕ್ಷಿಣೆ ನಡೆದ ನಂತರ ಉತ್ಸವದ ಮೂಲಕ ಮೈದಾನಕ್ಕಾಗಮಿಸಿ ಎಲ್ಲಾ ಉತ್ಸವ ಮೂರ್ತಿಗಳನ್ನು ಸಾಲಿಗಿಟ್ಟು ನಂತರ ಎಲ್ಲರೂ ಪೂಜೆ ಸಲ್ಲಿಸಿದರು. ವಿವಿಧ ಜನಾಂಗಗಳ ಜಾನಪದ ಕಲಾತಂಡಗಳು ನೆರೆದಿದ್ದವರನ್ನು ಮನಸೂರೆಗೊಳಿಸಿದರು.

ಈ ಜಾತ್ರಾ ಮಹೋತ್ಸವದಲ್ಲಿ ಸುತ್ತ–ಮುತ್ತಲ ಗ್ರಾಮಸ್ಥರು ಸೇರಿದಂತೆ 10ಸಾವಿರಕ್ಕೂ ಹೆಚ್ಚು ಮಂದಿ ಭಕ್ತರು ಭಾಗವಹಿಸಿ ಪುನೀತರಾದರು. ಶಾಸಕ ಹರೀಶ್‌ಗೌಡ, ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್, ಹುಡಾ ಅಧ್ಯಕ್ಷ ಹೆಚ್.ಪಿ. ಅಮರ್‌ನಾಥ್, ಜಿಪಂ ಮಾಜಿ ಸದಸ್ಯ ಡಿ.ಕೆ.ಕುನೇಗೌಡ ದೇವರ ದರ್ಶನ ಪಡೆದರು.

ನಾಡ ಯಜಮಾನ ಪುಟ್ಟಮಾದಯ್ಯ, ಚಿಕ್ಕಯಜಮಾನ ಸೋಮಣಶೆಟ್ಟಿ, ವಿ. ಮಹದೇವ್, ಮಹದೇವಸ್ವಾಮಿ, ಗೋವಿಂದಶೆಟ್ಟಿ, ಗೌರಮ್ಮ, ಮಲ್ಲೇಶ್, ಮಹದೇವ್, ವಿಶ್ವನಾಥ್, ರಮೇಶ್, ಡಿ.ಮಹದೇವ್, ರುದ್ರಶೆಟ್ಟಿ, ನಾರಾಯಣ್ ಸೇರಿದಂತೆ ಹಲವರು ದೇವರ ದರ್ಶನ ಪಡೆದರು.

ವರ್ಗೀಕೃತ ಜಾಹೀರಾತು

ಹೆಚ್ಚಿನ ವರ್ಗೀಕೃತ ಜಾಹೀರಾತು ಪುಟ 9ರಲ್ಲಿ

ಮಠ-ಮಂದಿರಗಳಿಂದ ಹಿಂದೂ ಧರ್ಮದ ಪುನರುತ್ಥಾನ

ಮೈಸೂರಿನ ಕೆ.ಆರ್.ಕ್ಷೇತ್ರದ ಶಾಸಕ ಟಿ.ಎಸ್. ಶ್ರೀವತ್ಸ ಅಭಿಪ್ರಾಯ



ಹಿರಿಯ ಸ್ವಾಮೀಜಿಗಳಾದ ಸಿದ್ದಮಲ್ಲಿಕಾರ್ಜುನ ಸ್ವಾಮೀಜಿ ಅವರ ಗಣಾರಾಧನೆ ಮಹೋತ್ಸವ, ದತ್ತಾತ್ರೇಯರ ದಶಮಾನೋತ್ಸವ, ಹನುಮಾನ್ ಚಾಲೀಸ್ ಸಪ್ತಾಹ ಪಠಣ ಕಾರ್ಯಕ್ರಮವನ್ನು ಮೈಸೂರು ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್. ಶ್ರೀವತ್ಸ ಉದ್ಘಾಟಿಸಿದರು.

ತಿ.ನರಸೀಪುರ, ನ.27– ಮಠ ಮಂದಿರಗಳು ಸತ್ಕಾರ್ಯದಲ್ಲಿ ನಿರಂತರವಾಗಿ ಸೇವೆ ಸಲ್ಲಿಸುತ್ತಾ, ಸಮಗ್ರ ಹಿಂದೂ ಧರ್ಮದ ಪುನರುತ್ಥಾನ ಕಾರ್ಯಗಳಲ್ಲಿ ನೆರವಾಗುತ್ತಿವೆ ಎಂದು ಮೈಸೂರು ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್. ಶ್ರೀವತ್ಸ ಶ್ಲಾಘಿಸಿದರು.

ಹಳೇ ತಲಕಾಡು ಹಸ್ತಿಕೇರಿ ಮಠದ ಸಭಾಂಗಣದಲ್ಲಿ ಆಯೋಜಿಸಿದ್ದ ಮಠದ ಹಿರಿಯ ಸ್ವಾಮೀಜಿಗಳಾದ ಸಿದ್ದಮಲ್ಲಿಕಾರ್ಜುನ ಸ್ವಾಮೀಜಿ ಅವರ ಗಣಾರಾಧನೆ ಮಹೋತ್ಸವ, ದತ್ತಾತ್ರೇಯರ ದಶಮಾನೋತ್ಸವ, ಹನುಮಾನ್ ಚಾಲೀಸ್ ಸಪ್ತಾಹ ಪಠಣ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಾನು ಕೂಡ ಇದೇ ಊರಿನವನು, ಇಲ್ಲೇ ಬೆಳೆದವನು. ಇಲ್ಲಿನ ಹಸ್ತಿಕೇರಿ ಮಠ ಸರ್ಪ ಚಿಕಿತ್ಸೆಗೆ ಹೆಸರುವಾಸಿಯಾಗಿದೆ. ಸರ್ಪ ಕಚ್ಚಿಸಿಕೊಂಡ ಅನೇಕ ರೋಗಿಗಳಿಗೆ ಮಠದ ಶ್ರೀಗಳು ಚಿಕಿತ್ಸೆ ನೀಡಿ ಗುಣಪಡಿಸಿದ್ದಾರೆ ಎಂದು ಸ್ಮರಿಸಿದರು.

ಸಾನ್ನಿಧ್ಯ ವಹಿಸಿದ್ದ ಹಸ್ತಿಕೇರಿ ಮಠದ ಅಧ್ಯಕ್ಷ ಡಾ.ಸಿದ್ದಮಲ್ಲಿಕಾರ್ಜುನ ಸ್ವಾಮೀಜಿ ಮಾತನಾಡಿ, "ಸತತ 50 ವರ್ಷದಿಂದ ಮಠದ ಆಶ್ರಯದಲ್ಲಿ ಹಲವಾರು ಲೋಕ ಕಲ್ಯಾಣಾರ್ಥ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರಲಾಗಿದೆ, ಎಂದರು.

ಶ್ರೀ ಹಸ್ತಿ ಕೇರಿಮಠದ ಸಭಾಂಗಣ ಹಳೇತಲಕಾಡು ಹಸ್ತಿಕೇರಿ ಮಠದ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಮಾಜದ ನಾನಾ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಶಾಂತಾರಾಮ್, ಜಮೀನ್ದಾರ್ ನಾಗರಾಜೇಗೌಡ, ಬೆಂಗಳೂರಿನ ಡಾ. ಸತ್ಯಪ್ರಕಾಶ್ ದಂಪತಿ, ಆಶಾಲತಾ ಶಿವಪ್ರಕಾಶ್, ಕೊಳ್ಳೇಗಾಲ ಜನನಿ ಆಸ್ಪತ್ರೆಯ ಮಾಲೀಕ ಡಾ.ಪ್ರವೀಣ್ ಕುಮಾರ್, ಕೊಳ್ಳೇಗಾಲದ ಜಗದಾಂಬ ಸದಾಶಿವಮೂರ್ತಿ, ಮಂಜುಳಾ ಬಿ. ರಮೇಶ್, ಶಂಭುದೇವನಪುರದ ಸುಗಂಧರಾಜು, ತಿರುಮಲ್ಲೇಶ್, ನಾಗೇಂದ್ರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಲಿಂಗೈಕ್ಯ ಸಿದ್ದಮಲ್ಲಿಕಾರ್ಜುನ ಸ್ವಾಮೀಜಿಗಳ ಭಾವಚಿತ್ರ ಅನಾವರಣಗೊಳಿಸಿ ಪುಷ್ಪನಮನ ಸಲ್ಲಿಸಲಾಯಿತು. ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮಿಗಳು ಪೂರಿಗಾಲಿ, ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ತೋಪಿನ ಮಠ ಮುಡುಕುತೊರೆ, ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮಿಗಳು ಸಪ್ಪೆ ಮಠ ದೇವ ಪಟ್ಟಣ, ಶ್ರೀ ಷಡಕ್ಷರಿ ದೇಶಿ ಕೇಂದ್ರ ಸ್ವಾಮಿಗಳು ವೀರ ಸಿಂಹಾಸನ ಮಠ ಧನಗೂರು, ಶ್ರೀ ಬಸವರಾಜೇಂದ್ರ ಸ್ವಾಮಿಗಳು ಹೊಸಮಠ ಸರಗೂರು, ಶ್ರೀ ಶಿವಪ್ರಭು ಸ್ವಾಮಿಗಳು ಕುಂತೂರು, ಶ್ರೀ ನಂದಿಕೇಶ್ವರ ಸ್ವಾಮಿಗಳು ಕಲ್ಲು ಮಠ ಮುಡುಕುತೊರೆ, ಪೂಜ್ಯಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಗವಿಮಠ ಚಿದರಹಳ್ಳಿ, ಮತ್ತು ನೂರಾರು ಜನ ಭಾಗವಹಿಸಿದ್ದರು,

ಮೈಸೂರು ಮಿತ್ರ

ಪರಿಶಿಷ್ಟ ಸಂಶೋಧನಾ ವಿದ್ಯಾರ್ಥಿಗಳ ಶಿಷ್ಯವೇತನ ಹೆಚ್ಚಳಕ್ಕೆ ಆಗ್ರಹಿಸಿ ಪ್ರತಿಭಟನೆ



ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಎದುರು ಸಂಶೋಧನಾ ವಿದ್ಯಾರ್ಥಿಗಳು ಶಿಷ್ಯವೇತನ ಹೆಚ್ಚಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

ಮೈಸೂರು, ನ.27(ಎಂಟಿವೈ)– ಪರಿಶಿಷ್ಟ ಜಾತಿ ಮತ್ತು ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಹೆಚ್ಚಳ ಮಾಡುವಂತೆ ಆಗ್ರಹಿಸಿ ಮೈಸೂರು ವಿಶ್ವವಿದ್ಯಾನಿಲಯ ಸಂಶೋಧಕರ ಸಂಘದ ಸದಸ್ಯರು ಪ್ರತಿಭಟನೆ ನಡೆಸಿದರು.

ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಮುಂದೆ ಪ್ರತಿಭಟನೆ ಮಾಡಿದ ಸಂಶೋಧನಾ ವಿದ್ಯಾರ್ಥಿಗಳು, ವಿವಿಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕಳೆದ ಆರೇಳು ವರ್ಷಗಳಿಂದ ಶಿಷ್ಯವೇತನ ಹೆಚ್ಚಳ ಮಾಡಿಲ್ಲ. ಮನೆ ಬಾಡಿಗೆ, ಸಂಶೋಧನಾ ಲೇಖನಗಳ ಪ್ರಕಟಣಾ ವೆಚ್ಚ ಹೆಚ್ಚಳ, ವಾರ್ಷಿಕ ಹಾಗೂ ಇತರೆ ಶುಲ್ಕಗಳ ಹೆಚ್ಚಳದಿಂದ ಸಂಶೋಧನೆ ನಡೆಸಲು ಸಾಧ್ಯವಾಗುತ್ತಿಲ್ಲ. ಶಿಷ್ಯವೇತನವನ್ನು 10 ಸಾವಿರ ಹೆಚ್ಚಳ ಮಾಡುವವರೆಗೂ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸುತ್ತೇವೆ ಎಂದು ಎಚ್ಚರಿಸಿದರು.

ಸಂಘದ ಅಧ್ಯಕ್ಷ ಶಿವಶಂಕರ್, ಪ್ರಧಾನ ಕಾರ್ಯದರ್ಶಿ ಕುಶಾಲ್, ಕಾರ್ಯಾಧ್ಯಕ್ಷ ರಾದ ಕಲ್ಲಹಳ್ಳಿ ಕುಮಾರ್, ದಿಲೀಪ್ ಬಿ.ಎಸ್, ಉಪಾಧ್ಯಕ್ಷ ರಾದ ಮಲ್ಲೇಶ್ ಎಂ, ಲಿಂಗರಾಜು ಎಂ, ಗೌರವ ಸಲಹೆಗಾರ ವಿಶ್ವಪ್ರಸಾದ್, ಜಯಚಂದ್ರ ಎಚ್.ಎಂ, ಕಾನೂನು ಸಲಹೆಗಾರ ಸುಪ್ರೀತ್, ವರಹಳ್ಳಿ ಆನಂದ್, ಪ್ರಸಾದ್ ಮುಂತಾದವರಿದ್ದರು.

ಸಂಶೋಧಕರ ಸಂಘದ ಗೌರವಾಧ್ಯಕ್ಷ ಮಹೇಶ್, ಜಂಟಿ ಉಪಾಧ್ಯಕ್ಷ ಮಲ್ಲೇಶ್, ಲಿಂಗರಾಜು, ವಿದ್ಯಾರ್ಥಿಗಳಾದ ವರಹಳ್ಳಿ ಆನಂದ್, ಕೆ.ಆರ್.ರಂಗಸ್ವಾಮಿ, ವಿಶ್ವ ಪ್ರಸಾದ್, ಮಹೇಶ್, ಕುಶಾಲ್, ರಾಜೇಶ್ ಚಾಕನಹಳ್ಳಿ, ಲೋಕೇಶ್, ಮನು, ಗಣೇಶ್, ಅವಿನಾಶ್ ಗುಂಬಳ್ಳಿ, ಪ್ರತಾಪ್, ನವೀನ್, ರಾಜೇಶ್ ಶಿವ, ಸುಪ್ರಿತ್, ಸಿದ್ದಪ್ಪಾಜಿ, ದಿಲೀಪ್, ದಾಸಯ್ಯ, ಕಿರಣ್, ರಾಘವೇಂದ್ರ, ಹೆಚ್.ಜಿ ಹಳ್ಳಿ ಶಿವಶಂಕರ್, ಶಿವು, ದೀಪ ಹಾಗೂ ಹಲವಾರು ವಿದ್ಯಾರ್ಥಿಗಳು ಇದ್ದರು.

ಸರಗಳ್ಳನ ಬಂಧನ: 5.13 ಲಕ್ಷ ರೂ. ಮೌಲ್ಯದ ಚಿನ್ನಾಭರಣ, ಐದು ದ್ವಿಚಕ್ರ ವಾಹನ ವಶ



ಮೈಸೂರು, ನ.27(ಆರ್‌ಕೆ)– ಸರಗಳ್ಳನನ್ನು ಬಂಧಿಸಿರುವ ಮೈಸೂರಿನ ಸರಸ್ವತಿಪುರಂ ಠಾಣೆ ಪೊಲೀಸರು, 5,13,200 ರೂ. ಮೌಲ್ಯದ ಚಿನ್ನಾಭರಣ ಹಾಗೂ 5 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ. ಅಕ್ಟೋಬರ್ 14ರಂದು ಬಸವೇಶ್ವರ ನಗರ 1ನೇ ಕ್ರಾಸ್‌ನಲ್ಲಿ ನಡೆದುಕೊಂಡು ಹೋಗುತ್ತಿದ್ದ ಮಹಿಳೆಯನ್ನು ಬೈಕ್‌ನಲ್ಲಿ ಹಿಂಬಾಲಿಸಿದ ಅಪರಿಚಿತರು ಚಿನ್ನದ ಮಾಂಗಲ್ಯ ಸರ ಕಿತ್ತುಕೊಂಡು ಪರಾರಿಯಾಗಿದ್ದರು. ಪ್ರಕರಣ ದಾಖಲಿಸಿಕೊಂಡಿದ್ದ ಸರಸ್ವತಿಪುರಂ ಠಾಣೆ ಪೊಲೀಸರು, ತನಿಖೆ ಕೈಗೊಂಡಿದ್ದರು. ನವೆಂಬರ್ 24ರಂದು ಬೋಗಾದಿ ರಿಂಗ್ ರಸ್ತೆಯಲ್ಲಿ ಗಸ್ತಿನಲ್ಲಿದ್ದಾಗ ನಾಗಲಿಂಗೇಶ್ವರ ದೇವಸ್ಥಾನದ ಬಳಿ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಓರ್ವನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ ವೇಳೆ ಆತ ಮಹಿಳೆಯರ ಸರ ಎಗರಿಸುತ್ತಿದ್ದುದು ತಿಳಿಯಿತು. ಪ್ರಕರಣ ಸಂಬಂಧ ಆರೋಪಿಯಿಂದ 2,62,200 ರೂ. ಮೌಲ್ಯದ 43 ಗ್ರಾಂ ಚಿನ್ನದ ಮಾಂಗಲ್ಯ ಸರ ಹಾಗೂ ಕೃತ್ಯಕ್ಕೆ ಬಳಸುತ್ತಿದ್ದ 2,51,000 ರೂ. ಬೆಲೆಯ ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡರು. ಡಿಸಿಪಿ ಎಸ್.ಜಾಹ್ನವಿ ಅವರ ಮಾರ್ಗದರ್ಶನದಂತೆ ವಿಜಯನಗರ ಉಪ ವಿಭಾಗದ ಎಸಿಪಿ ಗಜೇಂದ್ರ ಪ್ರಸಾದ್ ನೇತೃತ್ವದಲ್ಲಿ ನಡೆದ ಪತ್ತೆ ಕಾರ್ಯದಲ್ಲಿ ಸರಸ್ವತಿಪುರಂ ಠಾಣೆ ಇನ್ಸ್‌ಪೆಕ್ಟರ್ ಜಿ.ಪುರುಷೋತ್ತಮ್, ಸಬ್ ಇನ್ಸ್‌ಪೆಕ್ಟರ್ ಎಸ್.ಎಸ್.ಲತಾ, ಟಿ.ಎಸ್.ಮಹೇಂದ್ರ, ಸಿಬ್ಬಂದಿಗಳಾದ ಮೋಹನಕುಮಾರ್, ಸುದೀಪ್ ಕುಮಾರ್, ಕುಮಾರ್, ರಕ್ಷಿತ್ ಕುಮಾರ್, ಚಂದ್ರಶೇಖರ್, ರಾಜೇಶ್ ಅವರು ಪಾಲ್ಗೊಂಡಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಪ್ರಭುತ್ವ (ಕ) + ಮರ್ಯಾದೆ ಪ್ರಶ್ನೆ (ಕ)	2+2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಜೀಬ್ರಾ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಂಗುವಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ವಿಶ್ವಂ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಅಮರನ್ (ತ)	4 ಪ್ರದರ್ಶನಗಳು
ಸಂಗಂ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಲಿಡೋ	
ಸಂಗೊಳ್ಳಿ ರಾಯಣ್ಣ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಅಮರನ್ (ತ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕಂಗುವಾ (3ಡಿ) (ತ): ಬೆ.10ಕ್ಕೆ, ಮ.1ಕ್ಕೆ, ರಾ.7.15ಕ್ಕೆ, ಅಮರನ್ (ತ): ಸಂ.4ಕ್ಕೆ, ಆನಂದ್ ಶ್ರೀಬಾಲ (ಮ): ರಾ.10.20ಕ್ಕೆ
ಸ್ಕ್ರೀನ್ 2	ಅಮರನ್ (ತ): ಬೆ.9.40ಕ್ಕೆ, ಮ.1ಕ್ಕೆ, ಬಘೀರ (ಕ): ಸಂ.4.15ಕ್ಕೆ, ಗ್ಲಾಡಿಯೇಟರ್ 2 (ಇಂ): ರಾ.7.20ಕ್ಕೆ, ರಾ.10.20ಕ್ಕೆ
ಸ್ಕ್ರೀನ್ 3	ದಿ ಸಬರ್‌ಮತಿ ರಿಪೋರ್ಟ್ (ಹಿಂ): ಬೆ.10.35ಕ್ಕೆ, ರಾ.7.15ಕ್ಕೆ, ಬಘೀರ (ಕ): ಮ.1.10ಕ್ಕೆ, ಲಕ್ಕಿ ಭಾಸ್ಕರ್ (ಮ): ಸಂ.4.15ಕ್ಕೆ, ಮಟ್ಕಾ (ತೆ): ರಾ.9.55ಕ್ಕೆ
ಸ್ಕ್ರೀನ್ 4	ಭೈರತಿ ರಣಗಲ್ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಬಘೀರ (ಕ): ಬೆ.10ಕ್ಕೆ, ಮ.3.55ಕ್ಕೆ, ಕಂಗುವಾ (ಕ): ಮ.1ಕ್ಕೆ, ಕಂಗುವಾ (ತ): ಸಂ.6.55ಕ್ಕೆ, ಅಮರನ್ (ತ): ರಾ.9.50ಕ್ಕೆ.
ಸ್ಕ್ರೀನ್ 2	ಅಮರನ್ (ಕ): ಬೆ.10.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಭೈರತಿ ರಣಗಲ್ (ಕ): ಬೆ.10ಕ್ಕೆ, ಸಂ.6.30ಕ್ಕೆ, ಅಮರನ್ (ಕ): ಮ.12.40ಕ್ಕೆ, ಕಂಗುವಾ (3ಡಿ)(ತ): ಮ.3.55ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಕಂಗುವಾ (ತ): ಬೆ.10.30ಕ್ಕೆ, ಸಂ.5.20ಕ್ಕೆ, ಅಮರನ್ (ತ): ಮ.2.10ಕ್ಕೆ, ಅಮರನ್ (ಕ): ರಾ.8.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಅದಾನಿ ಲಂಚ ಪ್ರಕರಣ ಸೇರಿ ಹಲವು ವಿಷಯಗಳ ಬಗ್ಗೆ ತೀವ್ರ ಗದ್ದಲ, ಕೋಲಾಹಲ: ಸಂಸತ್ತಿನ ಉಭಯ ಸದನಗಳ ಕಲಾಪ ಮುಂದೂಡಿಕೆ



ನವದೆಹಲಿ, ನ.27– ಗೌತಮ್ ಅದಾನಿ ಲಂಚ ವಿವಾದ, ಉತ್ತರ ಪ್ರದೇಶದ ಸಂಭಾಲ್‌ನಲ್ಲಿ ಇತ್ತೀಚೆಗೆ ನಡೆದ ಹಿಂಸಾಚಾರ ಮತ್ತು ಇತರ ವಿಷಯಗಳ ಕುರಿತು ವಿರೋಧ ಪಕ್ಷದ ಸದಸ್ಯರ ಪ್ರತಿಭಟನೆಯ ನಡುವೆ ಸಂಸತ್ತಿನ ಉಭಯ ಸದನಗಳ ಕಲಾಪವನ್ನು ನಾಳೆಗೆ ಮುಂದೂಡಲಾಗಿದೆ.

ಇಂದು ಅಧಿವೇಶನದ ಆರಂಭದಲ್ಲಿ ಕಾಂಗ್ರೆಸ್ ಸೇರಿದಂತೆ ಪ್ರತಿಪಕ್ಷಗಳ ಸದಸ್ಯರು ಪ್ರತಿಭಟನೆ ಮತ್ತು ವಿವಿಧ ವಿಷಯಗಳನ್ನು ಪ್ರಸ್ತಾಪಿಸಲು ಪ್ರಯತ್ನಿಸಿದ್ದರಿಂದ ಲೋಕಸಭೆಯ ಕಲಾಪವನ್ನು ಆರಂಭದಲ್ಲಿ ಮಧ್ಯಾಹ್ನ 12 ರವರೆಗೆ ಮತ್ತು ನಂತರ ನಾಳೆವರೆಗೆ ಮುಂದೂಡಲಾಯಿತು. ಕಾಂಗ್ರೆಸ್ ಮತ್ತು ಸಮಾಜವಾದಿ ಪಕ್ಷದ ಕೆಲವು ಸದಸ್ಯರು ಬಾವಿಗಿಳಿದರೆ ಇತರ ವಿರೋಧ ಪಕ್ಷದ ಸದಸ್ಯರು ಹಜಾರದಲ್ಲಿ ನಿಂತು ಘೋಷಣೆಗಳನ್ನು ಕೂಗಿದರು.

ಪ್ರತಿಪಕ್ಷದ ಸದಸ್ಯರು ಅದಾನಿ ವಿವಾದ ಮತ್ತು ಸಂಭಾಲ್‌ನಲ್ಲಿ ಇತ್ತೀಚಿನ ಹಿಂಸಾಚಾರದ ಬಗ್ಗೆ ಚರ್ಚಿಸಲು ಬಯಸಿದರು, ಸ್ಪೀಕರ್ ಓಂ ಬಿರ್ಲಾ ಅವರು ಪ್ರಶ್ನೋತ್ತರ ಅವಧಿಗೆ ಅವಕಾಶ ನೀಡುವಂತೆ ವಿರೋಧ ಪಕ್ಷದ ಸದಸ್ಯರನ್ನು ಕೇಳಿದರು. ಗದ್ದಲದ ನಡುವೆ, ಒಂದು ಪ್ರಶ್ನೆಯನ್ನು ಚರ್ಚೆಗೆ ಕೈಗೆತ್ತಿಕೊಳ್ಳಲಾಯಿತು.

ಆದರೆ, ಪ್ರತಿಭಟನೆ ಮುಂದುವರಿದಿದ್ದು, ಸುಮಾರು ಆರು ನಿಮಿಷಗಳ ಕಾಲ ನಡೆದ ಕಲಾಪವನ್ನು ಮಧ್ಯಾಹ್ನದವರೆಗೆ ಮುಂದೂಡಲಾಯಿತು. ಅದಾನಿ ಗ್ರೂಪ್‌ಗೆ ಸಂಬಂಧಿಸಿದ ಲಂಚ ಆರೋಪ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆಗೆ ಪ್ರತಿಪಕ್ಷಗಳ ಸದಸ್ಯರು ಪಟ್ಟು ಹಿಡಿದಿದ್ದರಿಂದ ರಾಜ್ಯಸಭೆಯ ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

ಪ್ರತಿಪಕ್ಷಗಳ ಪ್ರತಿಭಟನೆಯಿಂದಾಗಿ ಬೆಳಗಿನ ಅಧಿವೇಶನದಲ್ಲಿ ಕಲಾಪವನ್ನು ಸಂಕ್ಷಿಪ್ತವಾಗಿ ಮುಂದೂಡಲಾಯಿತು,11.30 ಕ್ಕೆ ಸದನವು ಪುನಃ ಸೇರಿದಾಗ, ಅದೇ ಪರಿಸ್ಥಿತಿ ಪುನಾರಂಭವಾಯಿತು. ಇದರಿಂದ ಸಭಾಪತಿ ಜಗದೀಪ್ ಧನ್‌ಕರ್ ಅವರು ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಿದರು. ಮೊನ್ನೆ ಸೋಮವಾರ ವಿರೋಧ ಪಕ್ಷಗಳು ಅದಾನಿ ದೋಷಾರೋಪಣೆಯ ವಿಷಯವನ್ನು ಪ್ರಸ್ತಾಪಿಸಲು ಪ್ರಯತ್ನಿಸಿದ ನಂತರ ಸಂಸತ್ತಿನ ಕಲಾಪವನ್ನು ಇಂದಿಗೆ ಮುಂದೂಡಲಾಗಿತ್ತು. ಗೌತಮ್ ಅದಾನಿ, ಅವರ ಸೋದರಳಿಯ ಸಾಗರ್ ಅದಾನಿ ಮತ್ತು ಇನ್ನೊಬ್ಬ ಪ್ರಮುಖ ಕಾರ್ಯನಿರ್ವಾಹಕ ವನೀತ್ ಜೈನ್, ಸೌರ ವಿದ್ಯುತ್ ಪೂರೈಕೆಯ ಗುತ್ತಿಗೆಗಳನ್ನು ಪಡೆಯಲು ಭಾರತೀಯ ಅಧಿಕಾರಿಗಳಿಗೆ 265 ಮಿಲಿಯನ್ ಡಾಲರ್ ಲಂಚ ನೀಡುವ ಯೋಜನೆಯ ಭಾಗವಾಗಿದೆ ಎಂದು ಅಮೆರಿಕ ನ್ಯಾಯಾಂಗ ಇಲಾಖೆ ಆರೋಪಿಸಿದೆ. 20 ವರ್ಷಗಳ ಅವಧಿಯಲ್ಲಿ 2 ಬಿಲಿಯನ್ ಡಾಲರ್ ಲಾಭವನ್ನು ನೀಡುತ್ತದೆ. ಆಪಾದಿತ ಲಂಚ ಪ್ರಕರಣದಲ್ಲಿ ಸಲ್ಲಿಸಲಾದ ದೋಷಾರೋಪ ಪಟ್ಟಿಯಲ್ಲಿ ಗೌತಮ್ ಅದಾನಿ ಅಥವಾ ಅವರ ಸೋದರಳಿಯ ಸಾಗರ್ ಅವರು ಯುಎಸ್ ವಿದೇಶಿ ಭ್ರಷ್ಟ ಆಚರಣೆಗಳ ಕಾಯ್ದೆಯ ಯಾವುದೇ ಉಲ್ಲಂಘನೆಯ ಆರೋಪ ಹೊರಿಸಿಲ್ಲ ಎಂದು ಅದಾನಿ ಗ್ರೂಪ್ ಹೇಳಿದೆ.

ಸೂರು ಕಲ್ಪಿಸುವಂತೆ ಆಗ್ರಹಿಸಿ ಮೈಸೂರಲ್ಲಿ ವಿಶೇಷಚೇತನರ ಪ್ರತಿಭಟನೆ



ವಸತಿ ರಹಿತ ವಿಶೇಷಚೇತನರಿಗೆ ನಿವೇಶನ ನೀಡುವಂತೆ ಆಗ್ರಹಿಸಿ ಮೈಸೂರಲ್ಲಿ ವಿಶೇಷಚೇತನರು ಪ್ರತಿಭಟನೆ ನಡೆಸಿದರು.

ಮೈಸೂರು, ನ.27(ಎಂಟಿವೈ)– ವಸತಿ ರಹಿತ ವಿಶೇಷಚೇತನರಿಗೆ ಪ್ರತ್ಯೇಕ ಬಡಾವಣೆ ಅಥವಾ ನಿವೇಶನ ನೀಡುವಂತೆ ಆಗ್ರಹಿಸಿ ಮೈಸೂರಲ್ಲಿ ವಿಶೇಷಚೇತನರು ಪ್ರತಿಭಟನೆ ನಡೆಸಿದರು.

ಮೈಸೂರು ಅರಮನೆಯ ಕೋಟೆ ಆಂಜನೇಯ ಸ್ವಾಮಿ ದೇವಾಲಯದ ಮುಂಭಾಗದ ಸ್ವಾಭಿಮಾನಿ ವಿಶೇಷಚೇತನರ ಹಕ್ಕುಗಳ ಹೋರಾಟ ಸಮಿತಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ ವಿಶೇಷಚೇತನರು, ನಗರದ ಪ್ರದೇಶದ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ವಸತಿ ರಹಿತ ವಿಶೇಷ ಚೇತನರಿಗೆ ನಿವೇಶನ ಅಥವಾ ಪ್ರತ್ಯೇಕ ಬಡಾವಣೆ ನಿರ್ಮಿಸಿಕೊಡಬೇಕು. ಜೂ. 16ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮೈಸೂರಿನಲ್ಲಿ ವಾಸಿಸುತ್ತಿರುವ ವಿಶೇಷಚೇತನರಿಗೆ ಮನೆ ನಿರ್ಮಿಸಿಕೊಟ್ಟು, ಕೌಶಾಲಾಭಿವೃದ್ಧಿ ಕೇಂದ್ರ ತೆರೆದು ಸ್ವ ಉದ್ಯೋಗಕ್ಕೆ ಅವಕಾಶ ಕಲ್ಪಿಸುವುದಾಗಿ ಭರವಸೆ ನೀಡಿದ್ದರು. ಜಿಲ್ಲಾಧಿಕಾರಿಗಳ ಸಲಹೆಯಂತೆಯೇ ಮುಡಾ ಆಯುಕ್ತರಿಗೆ ಸರ್ಕಾರಿ ಜಾಗವನ್ನು ಗುರುತು ಮಾಡಿ ಅತೀ ಶೀಘ್ರದಲ್ಲಿ ಮನೆ ಅಥವಾ ನಿವೇಶನಗಳ ನಿರ್ಮಾಣಕ್ಕೆ ಆದೇಶಿಸಿ, ನಮಗೆ ಜೀವನ ಕಟ್ಟಿಕೊಳ್ಳಲು ಅವಕಾಶ ಮಾಡಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಸಮಿತಿ ಅಧ್ಯಕ್ಷ ಗಿರೀಶ್ ಎಂ, ಗೌರವಾಧ್ಯಕ್ಷ ನರಸಿಂಹೇಗೌಡ, ದಿಲೀಪ್, ಶಕುಂತಲಾ, ಪ್ರಭುಸ್ವಾಮಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕಣ್ಣಿನ ಉಚಿತ ತಪಾಸಣಾ ಶಿಬಿರ ನಿಮಿತ್ತ ನಾಟಕ ಪ್ರದರ್ಶನ

ಮೈಸೂರು,ನ.27(ಎಂಟಿವೈ)– ಮೈಸೂರಿನ ಕಲಾಮಂದಿರದ ಕಿರುರಂಗಮಂದಿರದಲ್ಲಿ ಡಿ.1ರಂದು ಸಂಜೆ 6ಕ್ಕೆ 'ಗೆಜ್ಜಲಟ್ಟಿ' ನಾಟಕ ಪ್ರದರ್ಶನವಿದೆ ಎಂದು ರೋಟರಿ ಕ್ಲಬ್ ಹೆಚ್.ಡಿ.ಕೋಟೆ ಕ್ಲಬ್ ಅಧ್ಯಕ್ಷ ನಿರಂಜನ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೋಟರಿ ಕ್ಲಬ್ ವತಿಯಿಂದ ಹೆಚ್.ಡಿ. ಕೋಟೆಯಲ್ಲಿ ನಡೆಸುತ್ತಿರುವ ಕಣ್ಣಿನ ಉಚಿತ ತಪಾಸಣಾ ಶಿಬಿರಕ್ಕೆ ಸಹಾಯಾರ್ಥವಾಗಿ ಈ ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ. ಎಸ್. ರಾಮು ನಿರ್ದೇಶನದ, ಹೊರೆಯಾಲ ದೊರೆಸ್ವಾಮಿ ರಚನೆಯ 'ಗೆಜ್ಜಲಟ್ಟಿ' ನಾಟಕ ಎಲ್ಲರ ಮನ ಸೂರೆಗೊಳ್ಳಲಿದೆ. ನಾಟಕ ವೀಕ್ಷಣೆಗೆ ಸಾರ್ವಜನಿಕರಿಗೆ 100 ರೂ. ಪ್ರವೇಶ ದರ, ಕ್ಲಬ್ ಸದಸ್ಯರಿಗೆ 250 ರೂ. ಟಿಕೆಟ್ ಶುಲ್ಕ ನಿಗದಿ ಮಾಡಲಾಗಿದೆ. ಟಿಕೆಟ್ ಹಾಗೂ ಮಾಹಿತಿಗೆ ಮೊ.ಸಂ. 9945049479, 9880919339 ಸಂಪರ್ಕಿಸುವಂತೆ ಕೋರಿದರು. ಸುದ್ದಿಗೋಷ್ಠಿಯಲ್ಲಿ ಕ್ಲಬ್ ಕಾರ್ಯದರ್ಶಿ ಬಿ.ಎನ್.ಶಿವಣ್ಣ, ವಲಯ ಸೇನಾನಿ ಸಿ.ವೈ.ಗಣೇಶ್ ಲಾಡ್ ಇದ್ದರು.

ಯಶಸ್ವಿ ನಾಟಕ ಪ್ರದರ್ಶನ; ಕಲಾವಿದರಿಗೆ ಸನ್ಮಾನ



ಮೈಸೂರು, ನ.27–ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಶ್ರೀ ಕಂದಗಲ್ಲು ಹನುಮಂತರಾಯ ಕಲಾ ಸಂಘ, ಸೂಲದಹಳ್ಳಿ ಕೂಡ್ಲಿಗಿ ತಾ.ವಿಜಯನಗರ ಜಿಲ್ಲೆ ಇವರ ನೇತೃತ್ವದಲ್ಲಿ ನಡೆದ ಪೌರಾಣಿಕ ನಾಟಕ ಯಶಸ್ವಿ ಪ್ರದರ್ಶನಗೊಂಡಿದ್ದು, ಕಲಾವಿದರು ಹಾಗೂ ಗಣ್ಯರನ್ನು ಗೌರವಿಸಿ, ಸನ್ಮಾನಿಸಲಾಯಿತು.

ಟೌನ್‌ಹಾಲ್ (ಪುರಭವನ)ನಲ್ಲಿ ಆಯೋಜಿಸಲಾಗಿದ್ದ ರಕ್ತರಾತ್ರಿ ಹಾಗೂ ಕುರುಕ್ಷೇತ್ರ ಪೌರಾಣಿಕ ನಾಟಕಗಳು ಯಶಸ್ವಿ ಪ್ರದರ್ಶನಗೊಂಡು ವೀಕ್ಷಕರ ಗಮನ ಸೆಳೆದು, ಕಲಾಸಕ್ತರ ಮೆಚ್ಚುಗೆಗೆ ಪಾತ್ರವಾಯಿತು. ಸಂಘದ ಕಾರ್ಯದರ್ಶಿ ಹಾಗೂ ಸಂಗೀತ ನಿರ್ದೇಶಕರಾದ ಎ.ತಿಪ್ಪೇಸ್ವಾಮಿ ಸೂಲದಹಳ್ಳಿ ಅವರು ನಾಟಕದ ಯಶಸ್ಸಿಗೆ ಕಾರಣರಾದರು. ಶ್ರೀ ಕಂದಗಲ್ಲು ಹನುಮಂತರಾಯ ಕಲಾ ಸಂಘದವರು, ಉಪಸ್ಥಿತರಿದ್ದ ಗಣ್ಯರಿಗೂ ಹಾಗೂ ಕಲಾವಿದರಿಗೂ ಇದೇ ವೇಳೆ ಗೌರವಿಸಿ ಸನ್ಮಾನಿಸಲಾಯಿತು. ಉದ್ಯಮಿ, ಸಮಾಜ ಸೇವಕರು ಮತ್ತು ಹಿರಿಯ ರಂಗಭೂಮಿ ಕಲಾವಿದರಾದ ಪಟೇಲ್‌ಗಂಗರಾಜು ಬೆಟ್ಟಹಳ್ಳಿ, ಶಿವ ಶಕ್ತಿ ಗ್ಯಾಸ್ ಮಾಲೀಕರು ಹಾಗೂ ರಂಗಭೂಮಿ ಕಲಾವಿದರಾದ ಡಾ.ಮಾಯಣ್ಣಗೌಡ, ರಂಗಭೂಮಿ ಕಲಾವಿದರುಗಳಾದ ಇರಗಪ್ಪ, ಕುಮಾರಗೌಡ (ಕಲಾ ಪ್ರೋತ್ಸಾಹಕರು), ಕಳಸ್ತವಾಡಿ, ದೇವರಾಜ್, (ಮೈಸೂರು) ಪ್ರೇಮ, (ಬೆಂಗಳೂರು), ಅರ್ ಜಿ.ಪುಟ್ಟಪ್ಪ, ಸಿದ್ದಾರ್ಥ, ಲಕ್ಷ್ಮಣ ಬೋವಿ, ಸತೀಶ್ ದಾಳಿಂಬ, ಪ್ರದೀಪ್ ಬಳ್ಳಿಕೇರೆ ಈ ವೇಳೆ ಉಪಸ್ಥಿತರಿದ್ದರು.

ವಿಶ್ವ ಚೆಸ್ ಚಾಂಪಿಯನ್‌ಶಿಪ್: ಗುಕೇಶ್‌ಗೆ 3ನೇ ಗೇಮ್‌ನಲ್ಲಿ ಗೆಲುವು

ಸಿಂಗಾಪುರ, ನ.27– ವಿಶ್ವ ಚೆಸ್ ಚಾಂಪಿಯನ್‌ಶಿಪ್‌ನಲ್ಲಿ ಇಂದು (ಬುಧವಾರ) ನಡೆದ ಮೂರನೇ ಗೇಮ್‌ನಲ್ಲಿ ಭಾರತದ ಗ್ರ್ಯಾಂಡ್ ಮಾಸ್ಟರ್ ಗುಕೇಶ್ ಗೆಲುವು ಸಾಧಿಸಿದ್ದಾರೆ. ಆ ಮೂಲಕ ಹಾಲಿ ಚಾಂಪಿಯನ್ ಡಿಂಗ್ ರಿಲೆನ್‌ಗೆ ತಿರುಗೇಟು ನೀಡಿದ್ದಾರೆ.



ಗುಕೇಶ್ ಮೊದಲ ಪಂದ್ಯದಲ್ಲಿ ಸೋಲು ಕಂಡಿದ್ದರೆ ಮಂಗಳವಾರ ನಡೆದ ಎರಡನೇ ಪಂದ್ಯದಲ್ಲಿ ಡ್ರಾ ಫಲಿತಾಂಶಕ್ಕೆ ತೃಪ್ತಿಪಟ್ಟುಕೊಂಡಿದ್ದರು. ಇಂದು ನಡೆದ ಪಂದ್ಯದ 37ನೇ ನಡೆಯ ನಂತರ ಚೀನಾದ ಆಟಗಾರನ ವಿರುದ್ಧ ಗುಕೇಶ್ ಮೇಲುಗೈ ಸಾಧಿಸಿದ್ದಾರೆ. ಅಲ್ಲದೇ ಟೂರ್ನಿಯಲ್ಲಿ ಮೊದಲ ಗೆಲುವು ಸಾಧಿಸಿದ್ದಾರೆ. ಇದರೊಂದಿಗೆ 1.5–1.5 ಅಂಕಗಳ ಸಮಬಲ ಸಾಧಿಸಿದ್ದಾರೆ.

21 ಕೋಟಿ ರೂ. ಬಹುಮಾನ ಹೊಂದಿರುವ ಈ ಚಾಂಪಿಯನ್‌ಶಿಪ್ ಫೈನಲ್ ಪಂದ್ಯ 14 ಆಟಗಳನ್ನು ಹೊಂದಿದೆ. ಮೊದಲು 7.5 ಅಂಕ ತಲುಪುವ ಆಟಗಾರ ವಿಶ್ವ ಚಾಂಪಿಯನ್ ಪಟ್ಟಕ್ಕೇರಲಿದ್ದಾರೆ.

18 ವರ್ಷದ ಗುಕೇಶ್, ವಿಶ್ವನಾಥನ್ ಆನಂದ್ ನಂತರ ಭಾರತದ ಎರಡನೇ ವಿಶ್ವ ಚಾಂಪಿಯನ್ ಆಗುವ ಯತ್ನದಲ್ಲಿದ್ದಾರೆ. ಆನಂದ್ ಐದು ಬಾರಿ (2000–2013 ಅವಧಿಯಲ್ಲಿ) ವಿಶ್ವ ಚಾಂಪಿಯನ್ ಆಗಿದ್ದರು.

ಸರ್ಕಾರಿ ನೇಮಕಾತಿಯಲ್ಲಿ ಅಕ್ರಮ: 12 ವರ್ಷದ ನಂತರ ಆರೋಪಪಟ್ಟಿ ಸಲ್ಲಿಸಿದ ಸಿಬಿಐ

ನವದೆಹಲಿ, ನ.27– ಜಾರ್ಖಂಡ್ ನಾಗರಿಕ ಸೇವಾ ಆಯೋಗದಲ್ಲಿ ನಡೆದಿದೆ ಎನ್ನಲಾದ ನೇಮಕಾತಿ ಹಗರಣದಲ್ಲಿ ಆಯೋಗದ ಅಂದಿನ ಅಧ್ಯಕ್ಷ ದಿಲೀಪ್ ಕುಮಾರ್ ಪ್ರಸಾದ್ ಅವರನ್ನು ಒಳಗೊಂಡಂತೆ 60 ಜನರ ವಿರುದ್ಧ ಸಿಬಿಐ ದೋಷಾರೋಪ ಪಟ್ಟಿ ಸಲ್ಲಿಸಿದೆ. 2012ರಲ್ಲಿ ನಡೆದ ಎರಡು ನೇಮಕಾತಿ ಹಗರಣಗಳಲ್ಲಿ ಜಾರ್ಖಂಡ್ ಹೈಕೋರ್ಟ್ ಆದೇಶದಂತೆ ಪ್ರಕರಣ ದಾಖಲಿಸಿಕೊಂಡ ಸಿಬಿಐ ತನಿಖೆ ಆರಂಭಿಸಿತ್ತು. ಅಪರಾಧ ಸಂಚು, ವಂಚನೆ ಒಳಗೊಂಡಂತೆ ಐಪಿಸಿಯ ಹಲವು ಸೆಕ್ಷನ್‌ಗಳು ಹಾಗೂ ಭ್ರಷ್ಟಾಚಾರ ನಿಗ್ರಹ ಕಾಯ್ದೆ ಅಡಿಯಲ್ಲಿ ದೋಷಾರೋಪ ಪಟ್ಟಿ ಸಲ್ಲಿಕೆಯಾಗಿದೆ.

ಶಾಲಾ ಮಟ್ಟದ ಶೈಕ್ಷಣಿಕ, ವಿಜ್ಞಾನ ವಸ್ತುಪ್ರದರ್ಶನ

ಮೈಸೂರು, ನ. 27– ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಜಾತ್ರಾ ಮಹೋತ್ಸವವು ಜ. 26 ರಿಂದ 31 ರವರೆಗೆ ಸುತ್ತೂರು ಶ್ರೀಕ್ಷೇತ್ರದಲ್ಲಿ ನಡೆಯಲಿದ್ದು, ಇದರ ಅಂಗವಾಗಿ ಲಕ್ಷ್ಮೀಪುರಂನ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ಮಟ್ಟದ ಶೈಕ್ಷಣಿಕ ಹಾಗೂ ವಿಜ್ಞಾನ ವಸ್ತುಪ್ರದರ್ಶನವನ್ನು ಶ್ರೀರಾಂಪುರ ಜೆಎಸ್‌ಎಸ್ ಪ್ರೌಢಶಾಲೆಯ ಮುಖ್ಯಶಿಕ್ಷಕ ಸುರೇಶ್ ಉದ್ಘಾಟಿಸಿದರು. ವಿವಿಧ ಧ್ಯೇಯಗಳಡಿ 50 ಮಾದರಿಗಳನ್ನು ಪ್ರದರ್ಶಿಸಲಾಗಿತ್ತು. ಇವುಗಳಲ್ಲಿ 23 ಮಾದರಿಗಳನ್ನು ಕ್ಲಸ್ಟರ್ ಮಟ್ಟದ ವಸ್ತುಪ್ರದರ್ಶನಕ್ಕೆ ಆಯ್ಕೆ ಸಮಿತಿಯು ಆಯ್ಕೆ ಮಾಡಿತು. ಆಯ್ಕೆ ಸಮಿತಿ ಸದಸ್ಯರಾಗಿ ಶಿಕ್ಷಕರಾದ ಎನ್.ಜಿ. ಮಂಜು, ಸಣ್ಣಶಿವ, ಪ್ರಕಾಶ್, ಶಿವಕುಮಾರ್, ಜಗದೀಶ್, ಸಿದ್ದಲಿಂಗಸ್ವಾಮಿ ಆಗಮಿಸಿದ್ದರು.

ಪೂರ್ವ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ ತರಬೇತಿ

ಮೈಸೂರು, ನ.27–ಎಲ್‌ಕೆಜಿ, ಯುಕೆಜಿ, ಪ್ರಿಸ್ಕೂಲ್ ಹಾಗೂ ಮಾಂಟೆಸರಿ ಶಾಲಾ ಶಿಕ್ಷಕರಿಗಾಗಿ ತರಬೇತಿ ತರಗತಿಯನ್ನು ಪಡೆಯಲು ಆರ್‌ಸಿಎಸ್‌ಎಸ್ ಮೈಸೂರು ಶಾಖೆಯು ಭಾರತ ಸರ್ಕಾರದ ಯೋಜನೆಯಡಿಯಲ್ಲಿ ಎನ್‌ಡಿಎಲ್‌ಎಂನ ಸಹಭಾಗಿತ್ವದೊಂದಿಗೆ ಅರ್ಜಿಯನ್ನು ಆಹ್ವಾನಿಸಿದೆ. 2024–25ನೇ ಸಾಲಿಗೆ ಅನ್ವಯವಾಗುವ ಈ ತರಬೇತಿಯ ಅಂತಿಮ ಪರೀಕ್ಷೆಯು ಬರುವ ಏಪ್ರಿಲ್ ಮೊದಲ ವಾರದಲ್ಲಿ ನಡೆಯಲಿದೆ. ತರಬೇತಿಯಲ್ಲಿ ನುರಿತ ಅಧ್ಯಾಪಕರಿಂದ ಮಕ್ಕಳ ಮಾನಸಿಕ ಬೆಳವಣಿಗೆಗಳು, ಆಹಾರ, ಪೋಷಕಾಂಶ ಕುರಿತಂತೆ ವಿಶೇಷ ತರಗತಿಗಳಿರುತ್ತವೆ. ಆನ್‌ಲೈನ್ ತರಬೇತಿ ಬಯಸುವವರು ನೋಂದಾವಣಿಗಾಗಿ ಡಿ.10 ಕಡೇ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ 9964790442, 8310306882 ಸಂಪರ್ಕಿಸಬಹುದು.

ಕಂಚಿನ ಪದಕ



ಮೈಸೂರಿನ ಕೆಬಿಜಿ ಕ್ಲಬ್‌ನ ಉದಯೋನ್ಮುಖ ಆಟಗಾರನಾದ ರೆನಿಷ್ ಮ್ಯಾಥ್ಯೂ ಬೆಂಗಳೂರಿನಲ್ಲಿ ನಡೆದ ಕರ್ನಾಟಕ ರಾಜ್ಯ ಮಟ್ಟದ ಮಿನಿ ಒಲಂಪಿಕ್‌ನ ಬಾಸ್ಕೆಟ್ ಬಾಲ್ ಪಂದ್ಯಾವಳಿಯಲ್ಲಿ ಮೈಸೂರು ತಂಡವನ್ನು ಪ್ರತಿನಿಧಿಸಿ ಕಂಚಿನ ಪದಕವನ್ನು ಪಡೆದಿದ್ದಾನೆ. ಈತ ಶ್ರೀರಾಂಪುರದ ಸೇಂಟ್ ರೊಸೆಲೊ ಶಾಲೆಯ ವಿದ್ಯಾರ್ಥಿ.

ವಿದ್ಯಾರ್ಥಿಗಳು ಹೊಸ ಹೊಸ ಆವಿಷ್ಕಾರದತ್ತ ಉತ್ಸಾಹಭರಿತರಾಗಿರಬೇಕು

● ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಕಿವಿಮಾತು ● ವಿದ್ಯಾರ್ಥಿಗಳು ಮೊಬೈಲ್ ಮಿತ ಬಳಕೆ ಅವಶ್ಯ



ಮೈಸೂರಿನ ನಟರಾಜ ಸಭಾ ಭವನದಲ್ಲಿ ನಡೆದ ಸಾತನೂರು ದೇವರಾಜು ಅವರ ಸಾಹಿತ್ಯ ಕುರಿತ ವಿಚಾರ ಸಂಕಿರಣವನ್ನು ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್ ಉದ್ಘಾಟಿಸಿದರು.

ಮೈಸೂರು,ನ.27(ಎಂಟಿವೈ)– ವಿದ್ಯಾರ್ಥಿಗಳು ಕಲಿಕೆಯಲ್ಲಿ ಹೆಚ್ಚಿನ ಆಸಕ್ತಿ ಬೆಳೆಸಿಕೊಂಡು ಹೊಸ ಹೊಸ ಆವಿಷ್ಕಾರ ಮಾಡುವತ್ತ ಗಮನ ಹರಿಸಬೇಕು ಎಂದು ಮೈಸೂರು ವಿಶ್ವವಿದ್ಯಾನಿಲಯ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್ ಸಲಹೆ ನೀಡಿದ್ದಾರೆ.

ಮೈಸೂರಿನ ನಟರಾಜ ಸಭಾಭವನದಲ್ಲಿ ಬುಧವಾರ ನಟರಾಜ ಪ್ರತಿಷ್ಠಾನ, ಕನ್ನಡ ಸಾಹಿತ್ಯ ಕಲಾಕೂಟ, ಸ್ಪಂದನ ಸಾಂಸ್ಕೃತಿಕ ಪರಿಷತ್ತು ವತಿಯಿಂದ ಆಯೋಜಿಸಿದ್ದ ಹಿರಿಯ ಸಾಹಿತಿ, ಸರ್ಕಾರಿ ಪಿಯು ಕಾಲೇಜಿನ ನಿವೃತ್ತ ಪ್ರಾಂಶುಪಾಲ ಸಾತನೂರು ದೇವರಾಜು ಅವರ ಸಾಹಿತ್ಯ ಕುರಿತ ರಾಜ್ಯ ಮಟ್ಟದ ವಿಚಾರ ಸಂಕಿರಣ, ಸಂವಾದ ಹಾಗೂ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಮೊಬೈಲ್ ಗೀಳಿಗೆ ಬಿದ್ದಿದ್ದಾರೆ. ಮಿತವಾಗಿ ಮೊಬೈಲ್ ಬಳಕೆಗೆ ಆದ್ಯತೆ ನೀಡಿ, ಗ್ರಂಥಾಲಯಗಳಿಗೆ ಹೆಚ್ಚಾಗಿ ಭೇಟಿ ನೀಡಿ ಅಧ್ಯಯನ ಮಾಡಲು ಮುಂದಾಗಬೇಕು. ಅಲ್ಲದೆ, ಪತ್ರಿಕೆಗಳನ್ನು ಓದುವುದರಿಂದ ಗಂಭೀರ ಚಿಂತನೆ ಬೆಳೆಸಿಕೊಳ್ಳಬಹುದು. ಆ ಮೂಲಕ ಹೊಸ ಹೊಸ ಆಲೋಚನೆ ಮಾಡಬೇಕು ಎಂದರು. ನಾವು ಕಾಲಕ್ಕೆ ಅನುಗುಣವಾಗಿ ಬದಲಾಗಬೇಕು. ಒಳ್ಳೆಯ ವಿಚಾರಗಳನ್ನು ತಿಳಿದುಕೊಂಡು, ಜ್ಞಾನ ಸಂಪಾದನೆ ಮಾಡಬೇಕು. ಒಳ್ಳೆಯ ಸ್ನೇಹಿತರನ್ನು ಸಂಪಾದಿಸಬೇಕು. 'ರವಿ ಕಾಣದ್ದನ್ನು ಕವಿ ಕಂಡ' ಎಂಬ ಗಾದೆ ಮಾತಿದೆ. ಸಾಹಿತ್ಯ ರಚನೆಯಲ್ಲಿ ರಮ್ಯವಾಗಿ ವರ್ಣಿಸಬಹುದು. ಆದರೆ ವಿಜ್ಞಾನ ಸಾಹಿತ್ಯ ರಚನೆಯಲ್ಲಿ ವರ್ಣನೆ ಸಾಧ್ಯವಿಲ್ಲ. ಏಕೆಂದರೆ ಅಲ್ಲಿ ನಿಖರತೆ ಇರಬೇಕು. ಹೀಗಾಗಿ ವಿಜ್ಞಾನ ಸಾಹಿತ್ಯ ರಚನೆ ಕಷ್ಟ ಪ್ರತಿ ಪದಗಳನ್ನು ಸರಿಯಾಗಿ ಆಲೋಚಿಸಿ ಬಳಸಬೇಕಾಗುತ್ತದೆ ಎಂದು ಅವರು ಹೇಳಿದರು.

ಜೀವಶಾಸ್ತ್ರ ಉಪನ್ಯಾಸಕ, ಪ್ರಾಂಶುಪಾಲರಾಗಿ ಕೆಲಸ ಮಾಡಿರುವ ಸಾತನೂರು ದೇವರಾಜು ಅವರು ವಿಜ್ಞಾನ ಸಾಹಿತ್ಯ ಕುರಿತು 60ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ. ಮೈಸೂರು ವಿವಿ ವಿಜ್ಞಾನ ವಿಷಯಕೋಶ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದಾರೆ. ಇದು ಅವರ ಅಧ್ಯಯನದಿಂದ ಸಾಧ್ಯವಾಗಿದೆ. ಅವರ ವಿಜ್ಞಾನ ಸಾಹಿತ್ಯವನ್ನು ಜನರಿಗೆ ತಲುಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಪ್ರೊ.ಲೋಕನಾಥ್ ಶ್ಲಾಘಿಸಿದರು. ಸಾತನೂರು ದೇವರಾಜು ಅವರ ಪುಸ್ತಕಗಳ ಪ್ರದರ್ಶನವನ್ನು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಉದ್ಘಾಟಿಸಿದರು. ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ ಅಧ್ಯಕ್ಷತೆ ವಹಿಸಿದ್ದರು. 'ಜೀವಜಗತ್ತಿನ ವಿಸ್ಮಯಗಳು' ಕುರಿತು ವಿದ್ಯಾವರ್ಧಕ ಪದವಿ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ.ಜಿ. ಚಂದ್ರಶೇಖರ್, 'ಜೈವಿಕ ತಂತ್ರಜ್ಞಾನ' ಕುರಿತು ವಿಧಿವಿಜ್ಞಾನ ಪ್ರಯೋಗಾಲಯದ ವೈಜ್ಞಾನಿಕಾಧಿಕಾರಿ ಡಾ.ಎಲ್. ಶಶಿಕುಮಾರ್, 'ಸೃಜನಶೀಲ ಸಾಹಿತ್ಯ' ಕುರಿತು ನಂಜನಗೂಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕನ್ನಡ ಸಹಾಯಕ ಪ್ರಾಧ್ಯಾಪಕಿ ಡಾ.ಡಿ.ಕೆ. ಉಷಾ ವಿಚಾರ ಮಂಡಿಸಿದರು. ಸ್ಪಂದನ ಸಾಂಸ್ಕೃತಿಕ ಪರಿಷತ್ತಿನ ಅಧ್ಯಕ್ಷ ಟಿ. ಸತೀಶ್ ಜವರೇಗೌಡ, ಶ್ರೀ ವಾತ್ಸಲ್ಯ ಬಿ.ಇಡಿ ಕಾಲೇಜಿನ ಪ್ರಾಂಶುಪಾಲ ಡಾ.ಮಹೇಶ್ ದಳಪತಿ, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಇದ್ದರು. ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್ ಪ್ರಾಸ್ತಾವಿಕ ಭಾಷಣ ಮಾಡಿ, ಸ್ವಾಗತಿಸಿದರು. ಪ್ರಶಿಕ್ಷಣಾರ್ಥಿ ಕೆಡಿ. ಬಸವರಾಜು ವಂದಿಸಿದರು. ಪ್ರಶಿಕ್ಷಣಾರ್ಥಿ ಕೃತಿಕಾ ನಿರೂಪಿಸಿದರು. ಚೂಡಾಮಣಿ ಪ್ರಾರ್ಥಿಸಿದರು.

ಸಂಪುಟ ಪುನಾರಚನೆ ಸರ್ಕಸ್: ಡಿ.ಕೆ.ಶಿವಕುಮಾರ್ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ದೆಹಲಿ ಯಾತ್ರೆ!


ಡಿಕೆ ಶಿವಕುಮಾರ್


ಸಿದ್ದರಾಮಯ್ಯ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಂಪುಟ ಪುನಾರಚನೆ ಸರ್ಕಸ್ ಸಂಚಲನಕ್ಕೆ ಕಾರಣವಾಗಿರುವಂತೆ ಹಿರಿಯ ಸಚಿವ ಸತೀಶ್ ಜಾರಕಿಹೊಳಿ ಬುಧವಾರ ನೀಡಿರುವ ಹೇಳಿಕೆಯೂ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಸಂಪುಟ ಪುನಾರಚನೆಯ ಮಾತುಗಳು ನಡೆಯುತ್ತಿವೆ. ಆದರೆ, ಅದು ಯಾವಾಗ ನಡೆಯುತ್ತದೆ ಎಂಬುದು ಗೊತ್ತಿಲ್ಲ ಎಂದು ಅವರು ಹೇಳಿದ್ದಾರೆ.

ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿಕೆ ಶಿವಕುಮಾರ್ ಸಂಪುಟ ಪುನಾರಚನೆ ಸಾಧ್ಯತೆಯ ಹೇಳಿಕೆ ನೀಡಿದ ಬೆನ್ನಲ್ಲೇ ಪ್ರತಿಕ್ರಿಯಿಸಿದ ಸತೀಶ್ ಜಾರಕಿಹೊಳಿ, ಪುನಾರಚನೆ ಯಾವಾಗ ನಡೆಯುತ್ತದೆ, ಮಾಡ್ತಾರೆ ಎಂಬುದು ಗೊತ್ತಿಲ್ಲ. ಆದರೆ, ಕೆಲ ಖಾತೆಗಳು, ಸಚಿವರ ಬದಲಾವಣೆಯ ಸುದ್ದಿಯಿದೆ. ಇಂತಹ ಚರ್ಚೆಗಳು ನಡೆಯುತ್ತಿವೆ. ಆದರೆ ಯಾವಾಗ ಆಗುತ್ತದೆ ಎಂಬುದು ಗೊತ್ತಿಲ್ಲ, ನಾನು ಏನನ್ನೂ ಕೇಳಿಲ್ಲ. ಯಾರಿಗೆ ಸಂಪುಟದಲ್ಲಿ ಸ್ಥಾನ ನೀಡಬೇಕು, ಹೇಗೆ ಎಂಬುದು ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದರು.

ಕಾರ್ಯದಕ್ಷತೆ ಆಧಾರದ ಮೇಲೆ ಸಂಪುಟ ಪುನಾರಚನೆ ಆಗಲಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಇರಬಹುದು. ಕೆಲವರ ದಕ್ಷತೆ ಬಗ್ಗೆ ನಾಯಕರಿಗೆ ಅಸಮಾಧಾನ ಇರಬಹುದು ಇಲ್ಲವೇ ಈಗ ಇರುವ ಸಚಿವರೊಂದಿಗೆ ಅವರು ಮುಂದುವರೆಯಬಹುದು ಮತ್ತು ಮಾಡದೇ ಇರಬಹುದು. ಏನನ್ನೂ ಹೇಳಲೂ ಸಾಧ್ಯವಿಲ್ಲ. ನಮ್ಮ ಪಕ್ಷದಲ್ಲಿ ಅನೇಕ ಹಿರಿಯ ನಾಯಕರಿದ್ದಾರೆ ಎಂದರು. ಒಂದು ವೇಳೆ ಸಂಪುಟ ಪುನಾರಚನೆಯಾದರೆ ತಮ್ಮ ಖಾತೆ ತೊರೆಯಲು ಸಚಿವರು ಸಿದ್ಧರಿದ್ದಾರೆಯೇ ಎಂಬ ಪ್ರಶ್ನೆಗೆ, ಹೈಕಮಾಂಡ್ ಏನು ಹೇಳುತ್ತದೆಯೋ ಅದೇ ಅಂತಿಮ. ದೆಹಲಿಯಿಂದ ಪಟ್ಟಿ ಬಂದರೆ ಅಲ್ಲಿಗೆ ಕಥೆ ಮುಗಿಯಿತು. ಯಾರು ಇರಬೇಕು, ಇರಬಾರದು ಎಂಬುದು ದೆಹಲಿಯಲ್ಲಿ ಅಂತಿಮವಾಗಲಿದೆ ಎಂದರು.

ಲೋಕಸಭಾ ಚುನಾವಣೆ ಫಲಿತಾಂಶ ಬಂದಾಗಿನಿಂದಲೂ ಸಂಪುಟ ಪುನಾರಚನೆ ಬಗ್ಗೆ ವದಂತಿಗಳು ಕೇಳಿಬರುತ್ತಲೇ ಇವೆ. ಸಚಿವಾಕಾಂಕ್ಷಿ ಶಾಸಕರು ತಮಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸುತ್ತಿದ್ದಾರೆ. ಕೆಲವರು ಬಹಿರಂಗವಾಗಿಯೇ ಹೇಳಿಕೆ ನೀಡಿದ್ದಾರೆ. ಈ ಮಧ್ಯೆ ಸಿಎಂ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ದೆಹಲಿ ಭೇಟಿಯೂ ಕುತೂಹಲಕ್ಕೆ ಕಾರಣವಾಗಿದೆ. ಶಿವಕುಮಾರ್ ಈಗಾಗಲೇ ದೆಹಲಿಯಲ್ಲಿದ್ದು, ಇಂದು ಸಂಜೆ ಮುಖ್ಯಮಂತ್ರಿ ಕೂಡಾ ರಾಷ್ಟ್ರ ರಾಜಧಾನಿಗೆ ತೆರಳಿದ್ದಾರೆ.

ಸಿಎಂ ವಿವೇಚನೆಗೆ ಬಿಟ್ಟದ್ದು: ಈ ಮಧ್ಯೆ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ. ಜಿ.ಪರಮೇಶ್ವರ್, ಸಂಪುಟ ಪುನಾರಚನೆ ಸಿಎಂ ವಿವೇಚನೆಗೆ ಬಿಟ್ಟದ್ದು, ಅವರು ರಾಜ್ಯ ಕಾಂಗ್ರೆಸ್ ಅಧ್ಯಕ್ಷರು ಮತ್ತು ಹೈಕಮಾಂಡ್ ಜೊತೆಗೆ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳುತ್ತಾರೆ. ಅದರ ಬಗ್ಗೆ ಗೊತ್ತಿಲ್ಲ ಎಂದರು.

ಶಿವಮೊಗ್ಗದಲ್ಲಿ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಸಂಪುಟ ಪುನಾರಚನೆಗೆ ಸಂಬಂಧಿಸಿದಂತೆ ಯಾವುದೇ ಬೆಳವಣಿಗೆ ನಡೆದಿಲ್ಲ. ಆದರೆ ಪ್ರತಿಯೊಬ್ಬರು ಅದಕ್ಕೆ ಸಿದ್ಧರಾಗಬೇಕು ಎಂದು ಹೇಳಿದರು. ಡಿಕೆ ಶಿವಕುಮಾರ್ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಅವರು, 2 ವರ್ಷಗಳ ನಂತರ ಸಂಪುಟ ಪುನಾರಚನೆಯಾದರೆ ಒಳ್ಳೆಯದು, ಏಕೆಂದರೆ ಇತರರಿಗೆ ಅವಕಾಶ ನೀಡಬೇಕಾಗುತ್ತದೆ. ಇದೇ ಉದ್ದೇಶದಲ್ಲಿ ಡಿಕೆಶಿ ಆ ರೀತಿಯ ಹೇಳಿಕೆ ನೀಡಿರಬಹುದು. ನಾವೊಬ್ಬರೇ ಮುಂದುವರೆಯುವುದು ಸರಿಯಲ್ಲ. ಇತರರು ಸಚಿವರಾಗಬೇಕು. ಅದಕ್ಕೆ ಎಲ್ಲರೂ ಸಿದ್ಧರಾಗಬೇಕು ಎಂದರು.

ಈ ಮಧ್ಯೆ ಕೆಪಿಸಿಸಿ ಅಧ್ಯಕ್ಷ ಸ್ಥಾನದ ಸ್ಪರ್ಧಿಯಾಗಿ ಕಂಡು ಬರುತ್ತಿರುವ ಸತೀಶ್ ಜಾರಕಿಹೊಳಿ, ಪಕ್ಷದ ಅಧ್ಯಕ್ಷ ಸ್ಥಾನ ಅಂದುಕೊಂಡಷ್ಟು ಸುಲಭವಲ್ಲ. ಅದು ಕಷ್ಟದ ಕೆಲಸ. ಜವಾಬ್ದಾರಿ ನಿರ್ವಹಿಸಬೇಕಾಗುತ್ತದೆ. ಪ್ರತಿಯೊಬ್ಬರ ಸಹಕಾರ ಅಗತ್ಯವಿರುತ್ತದೆ. ಆದರೆ, ಇಲ್ಲಿಯವರೆಗೂ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಚರ್ಚೆಗಳು ನಡೆದಿಲ್ಲ ಎಂದು ತಿಳಿಸಿದರು.

ಯಾವುದೇ ವೇಳೆ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ; ಸಂಪುಟ ಪುನರ್‌ರಚನೆ

● ಸಚಿವ ಸತೀಶ್ ಜಾರಕಿಹೊಳಿ ಹೇಳಿಕೆ ● ಈ ಸಂಬಂಧ ಪಕ್ಷದ ವೇದಿಕೆಯಲ್ಲಿ ಚರ್ಚೆ ಆಗಿದೆ ● ಡಿಕೆಶಿ ಹೇಳಿದಂತೆ ಎಲ್ಲವೂ ಆಗಲ್ಲ; ಟಾಂಗ್

ಬೆಂಗಳೂರು, ನ.27(ಕೆಎಂಶಿ)– ಪ್ರದೇಶ ಕಾಂಗ್ರೆಸ್ ಅಧ್ಯಕ್ಷರ ಬದಲಾವಣೆ ಹಾಗೂ ಸಂಪುಟ ಪುನರ್‌ರಚನೆ ಸಂಬಂಧ ಪಕ್ಷದ ವೇದಿಕೆಯಲ್ಲಿ ಚರ್ಚೆಯಾಗಿದ್ದು, ಅದು ಯಾವಾಗ ಕಾರ್ಯಗತವಾಗುತ್ತದೆ ಎಂಬುದು ಗೊತ್ತಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಇಂದಿಲ್ಲಿ ತಿಳಿಸಿದ್ದಾರೆ.


ಸತೀಶ್ ಜಾರಕಿಹೊಳಿ

ಸಂಪುಟ ಪುನರ್‌ರಚನೆ ವೇಳೆ ಸಚಿವರ ಖಾತೆಗಳು ಬದಲಾವಣೆ ಆಗಲಿವೆ, ಆದರೆ, ಎರಡು ವರ್ಷಕ್ಕಷ್ಟೇ ಮಂತ್ರಿ ಸ್ಥಾನ ಎಂಬುದಾಗಿ ಪಕ್ಷದ ವರಿಷ್ಠರು ಯಾರಿಗೂ ತಿಳಿಸಿಲ್ಲ ಎಂದು ಸ್ಪಷ್ಟಪಡಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೆಹಲಿಯಿಂದ ಪಟ್ಟಿ ಬಂದರೆ ಅದಕ್ಕೆ ಎಲ್ಲರೂ ತಲೆಬಾಗಲೇಬೇಕು. ಅದಕ್ಕೆ ನಾನೂ ಹೊರತಲ್ಲ, ಸರ್ಕಾರಿ ಬಂಗಲೆ ತೆರವು ಮಾಡಲು ಸಿದ್ಧನಿದ್ದೇನೆ.

ಪಕ್ಷಕ್ಕಾಗಿ ಸಚಿವರುಗಳು ಯಾವ ತ್ಯಾಗಕ್ಕಾದರೂ ಸಿದ್ಧವಿರಬೇಕು ಎಂಬ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿಕೆ ಬಗ್ಗೆ ಪರೋಕ್ಷವಾಗಿ ಕಿಡಿಕಾರಿದ ಸತೀಶ್, ಅದು ಅವರ ವೈಯಕ್ತಿಕ ಹೇಳಿಕೆ, ಅವರು ಹೇಳಿದ ತಕ್ಷಣ ಎಲ್ಲವೂ ಬದಲಾಗುವುದಿಲ್ಲ ಎಂದರು.

ಕೆಪಿಸಿಸಿ ಅಧ್ಯಕ್ಷ ಗಾದಿಗೆ ನಿಮ್ಮ ಹೆಸರು ಕೇಳಿಬರುತ್ತಿದೆಯಲ್ಲ ಎಂಬ ಪ್ರಶ್ನೆಗೆ, ಅದು ಕಲ್ಲು–ಮುಳ್ಳುಗಳ ಹಾದಿ, ಸದ್ಯಕ್ಕೆ ನಮ್ಮ ಮುಂದೆ ಆ ವಿಚಾರ ಇಲ್ಲ, ಮುಂದೆ ನೋಡೋಣ ಏನು ಮಾಡುತ್ತಾರೋ ಎಂದರು.

ಸಿದ್ದರಾಮಯ್ಯ ಸರ್ಕಾರ ರಚನೆ ಸಂದರ್ಭದಲ್ಲೇ ಕೆಲವು ಮಾತುಕತೆಗಳು ನಡೆದಿವೆ, ಆ ವೇಳೆ ಶಿವಕುಮಾರ್ ಅವರು, ಅಧ್ಯಕ್ಷಗಾದಿ ತೆರವು ಮಾಡಬೇಕೆಂಬ ವಿಚಾರವೂ ಸೇರಿದೆ.

ಹಾಸನದಲ್ಲಿ ನಡೆಯಲಿರುವ ಅಹಿಂದ ಸಮಾವೇಶಕ್ಕೂ, ನಮಗೂ ಸಂಬಂಧವಿಲ್ಲ. ಅದನ್ನು ಯಾರು ಆಯೋಜಿಸಿದ್ದಾರೆ ಎಂಬ ಬಗ್ಗೆ ನನಗೆ ಮಾಹಿತಿ ಇಲ್ಲ. ನನಗೆ ಆಹ್ವಾನವೂ ಬಂದಿಲ್ಲ ಎಂದರು.

ವೇತನ ಹೆಚ್ಚಳ ಸೇರಿದಂತೆ ನಾನಾ ಬೇಡಿಕೆ ಈಡೇರಿಸಲು ಸಾರಿಗೆ ಸಿಬ್ಬಂದಿ ಡಿ.9ಕ್ಕೆ ಬೆಳಗಾವಿ ಚಲೋ

ಮೈಸೂರು. ನ.27(ಎಸ್‌ಪಿಎನ್)– ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳಲ್ಲಿ ಕರ್ತವ್ಯ ನಿರ್ವಹಿಸುವ ಕಾರ್ಮಿಕರ 38 ತಿಂಗಳ ಹಿಂಬಾಕಿ ಮೊತ್ತ ಬಿಡುಗಡೆ, 2024ರ ಜ.1ರಿಂದ ನೌಕರರ ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಡಿ.9ರಂದು 'ಬೆಳಗಾವಿ ಚಲೊ' ನಡೆಸಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ನಿರ್ಧರಿಸಿದೆ.

ಬೆಂಗಳೂರಿನಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಕೆಎಸ್ ಆರ್‌ಟಿಸಿ ಸ್ಟಾಫ್ ಅಂಡ್ ವರ್ಕರ್ಸ್ ಫೆಡರೇಷನ್ ಅಧ್ಯಕ್ಷ ಎಚ್.ವಿ. ಅನಂತಸುಬ್ಬರಾವ್, ಸರ್ಕಾರದಿಂದ ನಮ್ಮ ಬೇಡಿಕೆಗಳಿಗೆ ಸ್ಪಂದನೆ ದೊರೆಯದಿರುವುದರಿಂದ ನ.22ರಿಂದ ಜಂಟಿ ಕ್ರಿಯಾ ಸಮಿತಿಯ ಸಭೆ ನಡೆಸಿ, ಬೆಳಗಾವಿ ಚಲೊ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ. ನಮ್ಮ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸದಿದ್ದರೆ ಡಿ.31ರಿಂದ ಸಾರಿಗೆ ನೌಕರರ ಮುಷ್ಕರ ನಡೆಸಲಾಗುತ್ತದೆ ಎಂದು ತಿಳಿಸಿದರು.

ನಾಲ್ಕೂ ನಿಗಮಗಳಲ್ಲಿ ಕೆಲಸ ಮಾಡುವ ನೌಕರರ ಭವಿಷ್ಯ ನಿಧಿ, ನಿವೃತ್ತ ನೌಕರರ ಉಪಧನ, ತುಟ್ಟಿ ಭತ್ಯೆ, ಇಂಧನ, ಅಪಘಾತ ಪರಿಹಾರ ಸೇರಿದಂತೆ ಒಟ್ಟು 5,492.24 ಕೋಟಿಯನ್ನು ಸರ್ಕಾರ ಬಾಕಿ ಇರಿಸಿಕೊಂಡಿದೆ ಎಂದು ದೂರಿದರು.

ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾಮಂಡಳಿಯ ಬಿ.ಜಯದೇವರಾಜೇ ಅರಸು, ಚಾಲಕರು, ನಿರ್ವಾಹಕರು, ತಾಂತ್ರಿಕ ಹಾಗೂ ಆಡಳಿತ ಸಿಬ್ಬಂದಿ ಸೇರಿ ಎಲ್ಲ ನೌಕರರ ಬಾಟ, ತಿಂಗಳ ಹಾಗೂ ದೈನಂದಿನ ಭತ್ಯೆಗಳನ್ನು ಐದು ಪಟ್ಟು ಹೆಚ್ಚಿಸಬೇಕು. ಹೊಲಿಗೆ ಭತ್ಯೆ, ಜರ್ಸಿ, ರೈನ್‌ಕೋಟ್ ಇತ್ಯಾದಿಗಳಿಗೆ ಕೊಡಲಾಗುವ ಮೊತ್ತವನ್ನು ಮೂರು ಪಟ್ಟು ಹೆಚ್ಚಿಸಬೇಕು. ವೈದ್ಯಕೀಯ ಸೌಲಭ್ಯ ಸೇರಿ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ನಮ್ಮ ದೇಶಕ್ಕೆ ಚೀನಾ ಮಾದರಿ ಶಿಕ್ಷೆ ಪದ್ಧತಿ ಅವಶ್ಯವಿದೆ

ನಿವೃತ್ತ ಲೋಕಾಯುಕ್ತ ನ್ಯಾ.ಸಂತೋಷ್ ಹೆಗ್ಡೆ ಪ್ರತಿಪಾದನೆ


ಲಿಂಗಸುಗೂರು, ನ.27– ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಚೀನಾ ಮಾದರಿ ಶಿಕ್ಷೆಯ ಪದ್ಧತಿ ಬೇಕಿದೆ. ಹಾಗೆ ಆದಾಗ ಭ್ರಷ್ಟಾಚಾರ ನಿಯಂತ್ರಣ ಸಾಧ್ಯ ಎಂದು ಸುಪ್ರಿಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹಾಗೂ ವಿಶ್ರಾಂತ ಲೋಕಾಯುಕ್ತ ಎನ್.ಸಂತೋಷ ಹೆಗ್ಡೆ ಹೇಳಿದರು.

ರಾಯಚೂರು ಜಿಲ್ಲೆ ಲಿಂಗಸುಗೂರಿನಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭ್ರಷ್ಟಾಚಾರ ದಿನದಿಂದ ದಿನಕ್ಕೆ ವಿಸ್ತಾರಗೊಳ್ಳುತ್ತಿದೆ. ಈಗಿರುವ ವಿಚಾರಣೆ, ಶಿಕ್ಷೆಗೆ ಬೆಲೆಯೇ ಇಲ್ಲದಂತಾಗಿದೆ. ಗಲ್ಲುಶಿಕ್ಷೆಯಂಥ ಶಿಕ್ಷೆ ಮಾನದಂಡ ಆದಲ್ಲಿ ಭ್ರಷ್ಟಾಚಾರ ತಡೆಯಲು ಸಾಧ್ಯವಾಗಬಹುದು ಎಂದರು.

ರಾಷ್ಟ್ರಪಿತ ಮಹಾತ್ಮ ಗಾಂಧಿ ಜೈಲಿಗೆ ಹೋಗಿ ಬಂದಿದ್ದಾರೆ. ನಾವು ಹೋಗಿ ಬರುವುದರಲ್ಲಿ ತಪ್ಪೇನಿದೆ ಎಂಬ ಅಹಂ ರಾಜಕಾರಣದಲ್ಲಿ ಮನೆ ಮಾಡಿದೆ. ನೈತಿಕ ಮೌಲ್ಯಗಳು ಕುಸಿತಗೊಂಡಿವೆ. ಜೈಲಿನಿಂದ ಬಿಡುಗಡೆಯಾಗಿ ಬರುವವರ ಭವ್ಯ ಮೆರವಣಿಗೆ ಮಾಡುತ್ತಿರುವುದು ನೋವಿನ ಸಂಗತಿ ಎಂದು ಕಳವಳ ವ್ಯಕ್ತಪಡಿಸಿದರು.


ತಾವು ಈಗಾಗಲೇ 1,848 ಕಾಲೇಜುಗಳಿಗೆ ಭೇಟಿ ನೀಡಿ ಯುವಕರಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಬಗೆಗೆ ಜಾಗೃತಿ ಮೂಡಿಸಿರುವೆ. ಸಾಮಾಜಿಕ ಬದಲಾವಣೆ ಆಗಬಹುದು. ಆದರೆ, ಕ್ರಾಂತಿಕಾರಿ ಬದಲಾವಣೆ ಆದಲ್ಲಿ ದೇಶ ಛಿದ್ರಗೊಳ್ಳುವ ಸಾಧ್ಯತೆಗಳಿವೆ. ಭಾವನೆಗಳ ಬದಲಾವಣೆಗೆ ಪ್ರಯತ್ನ ನಡೆಸಿರುವೆ. ಫಲಾಪೇಕ್ಷೆ ಜನರಿಗೆ ಬಿಟ್ಟಿದ್ದು ಎಂದು ತಿಳಿಸಿದರು.

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ಮಂಜುಳಾ ಶಿವಪ್ಪ ಉಂಡಿ, ಪ್ರಧಾನ ಸಿವಿಲ್ ನ್ಯಾಯಾಧೀಶ ಅಂಬಣ್ಣ ಕೆ., ವಕೀಲರ ಸಂಘದ ಅಧ್ಯಕ್ಷ ಭೂಪನಗೌಡ ಇದ್ದರು.



ಮನುಷ್ಯರಲ್ಲಿ ಆಸೆ, ಆಕಾಂಕ್ಷೆಗಳು ಇರಬೇಕು. ಅದು ವಿಕೃತ ಮಟ್ಟಕ್ಕೆ ತಲುಪಬಾರದು. ರಾಜ್ಯದಲ್ಲಿ ಮುಡಾ ಹಗರಣದಲ್ಲಿ ಹೈಕೋರ್ಟ್ ನಿರ್ದೇಶನ ನೀಡಿದೆ. ಆದಾಗ್ಯೂ ಮೊಂಡುತನ ಪ್ರದರ್ಶನ ನೋಡುತ್ತಿದ್ದೇವೆ. ಭ್ರಷ್ಟಾಚಾರದ ಹಣದಿಂದ ಶ್ರೀಮಂತ ಆಗಬಹುದು. ನೆಮ್ಮದಿ ಬದುಕು ಕಟ್ಟಿಕೊಳ್ಳಲಾಗದು.
– ನ್ಯಾ.ಸಂತೋಷ್ ಹೆಗ್ಡೆ, ನಿವೃತ್ತ ಲೋಕಾಯುಕ್ತರು

ಉತ್ತರ ಕ್ರಿಯಾದಿ ಆಹ್ವಾನ ಪತ್ರಿಕೆ



ಶ್ರೀ.ಸಿ.ಭೈರಪ್ಪ ಇನ್ಸ್‌ಪೆಕ್ಟರ್

ಇವರು ದಿನಾಂಕ 17/11/2024ಭಾನುವಾರ ದೈವಾದೀನರಾದರೆಂದು ತಿಳಸಲು ವಿಷಾದಿಸುತ್ತೇವೆ, ತತ್ಸಬಂಧ ಮೃತರ ಉತ್ತರ ಕ್ರಿಯಾದಿ ಕಾರ್ಯವನ್ನು ದಿನಾಂಕ 28/11/2024 ಗುರುವಾರ ಮಧ್ಯಾಹ್ನ 1.00ಗಂಟೆಗೆ ನಮ್ಮ ಸ್ವಗೃಹ, #167, 8ನೇ ಕ್ರಾಸ್, ಎ.ಜೆ.ಬ್ಲಾಕ್, ಎನ್.ಆರ್. ಮೊಹಲ್ಲಾ, ಮೈಸೂರು ಜಿಲ್ಲೆ, ಇಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

ದುಃಖತಪ್ತರು: ಮೃತರ ತಾಯಿ ಶ್ರೀಮತಿ ಸಾಕಮ್ಮ, ಪತ್ನಿ ಶ್ರೀಮತಿ ಶಾಂತಕುಮಾರಿ, ಮಗಳಾದ ಬಿ.ಯಶಸ್ವಿನಿ ಮತ್ತು ಸಹೋದರ ಸಿ.ರಾಜೇಂದ್ರ ಹಾಗೂ ಕುಟುಂಬವರ್ಗದವರು

ಸಾರ್ವಜನಿಕ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ನನ್ನ ಕಕ್ಷಿದಾರರಾದ ಮೈಸೂರು ಸಿಟಿ–570 001, ಬಂಬೂಬಜಾರ್, ನ್ಯೂ ಸಯ್ಯಾಜಿರಾವ್ ರಸ್ತೆ, ಕಛೇರಿ ಸಂಖ್ಯೆ 10 ರಲ್ಲಿರುವ "ರೈ ಬಿಲ್ಡ್ ಟೆಕ್" ನ ಮಾಲೀಕರಾದ ಶ್ರೀ ಕೆ. ಸುಬ್ರಮಣ್ಯ ರೈ ರವರ ಮಗ ಶ್ರೀ ಪ್ರಣಾಮ್ ರೈ ರವರು ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು ಅದರ ಮಾಲೀಕರಾದ ಮೈಸೂರು ಸಿಟಿ 570 023, ಚಾಮರಾಜ ಮೊಹಲ್ಲಾ, ಕುವೆಂಪುನಗರ, ಲಲಿತಾದ್ರಿ ರಸ್ತೆ, 1ನೇ ಅಡ್ಡ ರಸ್ತೆ, ಸಿ ಅಂಡ್ ಡಿ ಬ್ಲಾಕ್, ಮನೆ ನಂ. 1119 ರಲ್ಲಿ ವಾಸವಾಗಿರುವ ಲೇಟ್ ಎ. ಶಂಕರ ರಾವ್ ರವರ ಮಗನಾದ ಶ್ರೀ ಆರೂರ್ ವಾಸುದೇವ್ ರಾವ್ (Aadhaar no. 6487 9037 4393) ರವರಿಂದ ಖರೀದಿಸಲು ಉದ್ದೇಶಿಸಿ, ಕ್ರಯದ ಕರಾರನ್ನು ಮಾಡಿಕೊಂಡಿರುತ್ತಾರೆ. ಷೆಡ್ಯೂಲ್ ಸ್ವತ್ತಿನ ವಿಚಾರದಲ್ಲಿ ಮೇಲೆ ಕಾಣಿಸಿದ ವ್ಯಕ್ತಿಗಲ್ಲದೆ ಬೇರೆ ಯಾರಿಗಾದರು, ಯಾವುದೇ ರೀತಿಯ ಹಕ್ಕಾಗಲೀ, ಹಿತಾಸಕ್ತಿಯಾಗಲೀ, ಭಾಗಾಂಶವಾಗಲೀ ಅಥವಾ ಋಣಗಳಾಗಲೀ ಇದ್ದಲ್ಲಿ ಈ ಕೆಳಕಂಡವರನ್ನು ಈ ದಿನದಿಂದ ಹತ್ತು (10) ದಿನಗಳ ಒಳಗಾಗಿ ಸಂಬಂಧಪಟ್ಟ ದಾಖಾಲಾತಿಗಳೊಡನೆ ಸಂಪರ್ಕಿಸುವುದು. ಇಲ್ಲವಾದಲ್ಲಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಮೇಲೆ ಕಾಣಿಸಿದವರಿಗಲ್ಲದೆ ಬೇರೆ ಯಾರಿಗೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿಯಾಗಲೀ ಇಲ್ಲವೆಂದೇ ಪರಿಗಣಿಸಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಖರೀದಿಸುವರು.

ಷೆಡ್ಯೂಲ್ ಸ್ವತ್ತಿನ ವಿವರ: ಐಟಂ ನಂ: 1

ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ದೊಡ್ಡಮಾರಗೌಡನಹಳ್ಳಿ ಗ್ರಾಮಕ್ಕೆ ಸೇರಿದ ಮೈಸೂರು ಜಿಲ್ಲಾಧಿಕಾರಿಗಳ ಆದೇಶ ಸಂಖ್ಯೆ ALN (1) CR 280/2012–13 ದಿನಾಂಕ 26–06–2014 ರ ಪ್ರಕಾರ ವಸತಿ ಉದ್ದೇಶಕ್ಕಾಗಿ ಅನ್ಯಕ್ರಾಂತಗೊಂಡು ಅಭಿವೃದ್ಧಿಯಾಗದಿರುವ ಸರ್ವೆ ನಂ. 331, ವಿಸ್ತೀರ್ಣ 8 ಎಕರೆ 18 ಗುಂಟೆ ಜಮೀನು, ಈ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ: ಸರ್ವೆ ನಂ. 333 ರ ಜಮೀನು, ಪಶ್ಚಿಮಕ್ಕೆ: ಸರ್ವೆ ನಂ. 330, 324 ರ ಜಮೀನು, ಉತ್ತರಕ್ಕೆ : ಹಳ್ಳ, ದಕ್ಷಿಣಕ್ಕೆ : ಸರ್ವೆ ನಂ. 334 ರ ಜಮೀನು.

ಐಟಂ ನಂ: 2: ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ದೊಡ್ಡಮಾರಗೌಡನಹಳ್ಳಿ ಗ್ರಾಮಕ್ಕೆ ಸೇರಿದ ಮೈಸೂರು ಜಿಲ್ಲಾಧಿಕಾರಿಗಳ ಆದೇಶ ಸಂಖ್ಯೆ ALN (1) CR 14/2013–14 ದಿನಾಂಕ 26– 06–2014 ರ ಪ್ರಕಾರ ವಸತಿ ಉದ್ದೇಶಕ್ಕಾಗಿ ಅನ್ಯಕ್ರಾಂತಗೊಂಡು ಅಭಿವೃದ್ಧಿಯಾಗದಿರುವ ಸರ್ವೆ ನಂ. 333/1, ವಿಸ್ತೀರ್ಣ 8 ಎಕರೆ 28 ಗುಂಟೆ ಜಮೀನು, ಈ ಜಮೀನಿಗೆ ಚಕ್ಕುಬಂದಿ : ಪೂರ್ವಕ್ಕೆ : ಸರ್ವೆ ನಂ.6, 7 ರ ಜಮೀನು, ಪಶ್ಚಿಮಕ್ಕೆ: ಸರ್ವೆ ನಂ. 333/2 ರ ಜಮೀನು, ಉತ್ತರಕ್ಕೆ : ಸರ್ವೆ ನಂ.332 ರ ಜಮೀನು, ದಕ್ಷಿಣಕ್ಕೆ: ಲಾಗು ಸರ್ವೆ ನಂ. 241 ರ ಜಮೀನು ಮತ್ತು ರಸ್ತೆ.

ಐಟಂ ನಂ: 3: ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ದೊಡ್ಡಮಾರಗೌಡನಹಳ್ಳಿ ಗ್ರಾಮಕ್ಕೆ ಸೇರಿದ ಮೈಸೂರು ಜಿಲ್ಲಾಧಿಕಾರಿಗಳ ಆದೇಶ ಸಂಖ್ಯೆ ALN (1) CR 15/2013–14 ದಿನಾಂಕ 26–06–2014 ರ ಪ್ರಕಾರ ವಸತಿ ಉದ್ದೇಶಕ್ಕಾಗಿ ಅನ್ಯಕ್ರಾಂತಗೊಂಡು ಅಭಿವೃದ್ಧಿಯಾಗದಿರುವ ಸರ್ವೆ ನಂ. 333/2, ವಿಸ್ತೀರ್ಣ 8 ಎಕರೆ 28 ಗುಂಟೆ ಜಮೀನು, ಈ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ : ಸರ್ವೆ ನಂ. 333/1 ರ ಜಮೀನು, ಪಶ್ಚಿಮಕ್ಕೆ : ಸರ್ವೆ ನಂ. 333/3 ರ ಜಮೀನು, ಉತ್ತರಕ್ಕೆ : ಹಳ್ಳ, ದಕ್ಷಿಣಕ್ಕೆ: ಸರ್ವೆ ನಂ. 240,328 ರ ಜಮೀನು.

ಐಟಂ ನಂ: 4: ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ದೊಡ್ಡಮಾರಗೌಡನಹಳ್ಳಿ ಗ್ರಾಮಕ್ಕೆ ಸೇರಿದ ಮೈಸೂರು ಜಿಲ್ಲಾಧಿಕಾರಿಗಳ ಆದೇಶ ಸಂಖ್ಯೆ ALN (1) CR 13/2013–14 ದಿನಾಂಕ 26– 06–2014 ರ ಪ್ರಕಾರ ವಸತಿ ಉದ್ದೇಶಕ್ಕಾಗಿ ಅನ್ಯಕ್ರಾಂತಗೊಂಡು ಅಭಿವೃದ್ಧಿಯಾಗದಿರುವ ಸರ್ವೆ ನಂ. 333/3, ವಿಸ್ತೀರ್ಣ 4–00 ಎಕರೆ ಜಮೀನು, ಈ ಜಮೀನಿಗೆ ಚಕ್ಕುಬಂದಿ : ಪೂರ್ವಕ್ಕೆ : ಸರ್ವೆ ನಂ. 333/2 ರ ಜಮೀನು, ಪಶ್ಚಿಮಕ್ಕೆ: ಸರ್ವೆ ನಂ. 333/4 ರ ಜಮೀನು, ಉತ್ತರಕ್ಕೆ: ಹಳ್ಳ, ದಕ್ಷಿಣಕ್ಕೆ: ಸರ್ವೆ ನಂ. 338 ರ ಜಮೀನು.

ಐಟಂ ನಂ: 5: ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ದೊಡ್ಡಮಾರಗೌಡನಹಳ್ಳಿ ಗ್ರಾಮಕ್ಕೆ ಸೇರಿದ ಮೈಸೂರು ಜಿಲ್ಲಾಧಿಕಾರಿಗಳ ಆದೇಶ ಸಂಖ್ಯೆ ALN (1) CR 16/2013–14 ದಿನಾಂಕ 26–06–2014 ರ ಪ್ರಕಾರ ವಸತಿ ಉದ್ದೇಶಕ್ಕಾಗಿ ಅನ್ಯಕ್ರಾಂತಗೊಂಡು ಅಭಿವೃದ್ಧಿಯಾಗದಿರುವ ಸರ್ವೆ ನಂ. 333/4, ವಿಸ್ತೀರ್ಣ 4 ಎಕರೆ 38 ಜಮೀನು, ಈ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ : ಸರ್ವೆ ನಂ.333/3 ರ ಜಮೀನು, ಪಶ್ಚಿಮಕ್ಕೆ: ಸರ್ವೆ ನಂ. 331, 334 ರ ಜಮೀನು, ಉತ್ತರಕ್ಕೆ: ಸರ್ವೆ ನಂ. 331 ರ ಜಮೀನು, ದಕ್ಷಿಣಕ್ಕೆ: ಸರ್ವೆ ನಂ. 338 ರ ಜಮೀನು.

ಸಹಿ/– ಕೆ.ಎನ್. ಮಹಾದೇವಸ್ವಾಮಿ, ಬಿ.ಎಸ್‌ಸಿ., ಎಲ್.ಎಲ್.ಬಿ.. ವಕೀಲರು ಮತ್ತು ನೋಟರಿ, ಅಲ್ಲಮ್ಮ ಪ್ರಭು ಕೃಪ ಕಮರ್ಷಿಯಲ್ ಕಾಂಪ್ಲೆಕ್ಸ್, ರೂಂ ನಂ. ಎಫ್–1 ಮತ್ತು 2, ಒಂದನೇ ಮಹಡಿ, 5ನೇ ಕ್ರಾಸ್, ರಾಮಾನುಜ ರಸ್ತೆ, ಮೈಸೂರು ಸಿಟಿ– 570004,
ಮೊ. 94482–22522, ಆಫೀಸ್ ನಂ: 0821–4287998

ದಿನಾಂಕ: 27–11–2024

ಕರ್ನಾಟಕ ಸರ್ಕಾರ,
ಕಾರ್ಯಪಾಲಕ ಅಭಿಯಂತರರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಡ್ಯ.

ಸಂಖ್ಯೆ:ಕಾಅ:ಪಂರಾಇಂವಿ:ಮಂಡ್ಯ:ಮಟೆಂಪ್ರ:ಲೇಖನಾ ಸಾಮಾಗ್ರಿ:2024–25/1797 ದಿನಾಂಕ:25.11.2024

ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ ಸಂಖ್ಯೆ:31/2024–25

ಕರ್ನಾಟಕ ಸರ್ಕಾರದ ರಾಜ್ಯಪಾಲರ ಪರವಾಗಿ, ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮಂಡ್ಯರವರ ಸೂಚನೆಯಂತೆ, ಕಾರ್ಯಪಾಲಕ ಅಭಿಯಂತರರು, ಪಂ.ರಾ.ಇಂ.ವಿಭಾಗ, ಮಂಡ್ಯರವರಿಂದ, 2024–25ನೇ ಸಾಲಿಗೆ ಮಂಡ್ಯ ಜಿಲ್ಲಾ ಪಂಚಾಯತ್ ಕಾರ್ಯಾಲಯಕ್ಕೆ ಅವಶ್ಯಕವಿರುವ ವಿವಿಧ ಲೇಖನಾ ಸಾಮಾಗ್ರಿಗಳು ಹಾಗೂ ಇತರೆ ಪರಿಕರಗಳನ್ನು ಸರಬರಾಜು ಮಾಡಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ (KTPP) ಅಧಿನಿಯಮ 1999, ನಿಯಮಗಳು 2000ರ ಪ್ರಕಾರ ನೋಂದಾಯಿತ ಅರ್ಹ ಅಧಿಕೃತ ಮಾರಾಟಗಾರರು/ಸರಬರಾಜುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮೂಲಕ ದ್ವಿಲಕೋಟೆ ಪದ್ಧತಿಯಂತೆ (Technical & Financial bids) ಐಟಂವಾರು ಮರು ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಟೆಂಡರ್‌ಗಳನ್ನು KPP Portal ಆನ್‌ಲೈನ್ ಮುಖಾಂತರ ಸಲ್ಲಿಸತಕ್ಕದ್ದು. ಟೆಂಡರಿಗೆ ಇಡಲಾದ (Approximate) ಮೊತ್ತ ರೂ. 1250000–00, ಇ.ಎಂ.ಡಿ. ಮೊತ್ತ ರೂ.31250–00. ಟೆಂಡರ್‌ಗಳನ್ನು ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ:03.12.2024 ಸಂಜೆ 4.00 ಗಂಟೆವರೆಗೆ. ಹೆಚ್ಚಿನ ವಿವರಗಳಿಗಾಗಿ **https://kppp.karnataka.gov.in, KPP Portal** ಅಥವಾ ಕಾರ್ಯಪಾಲಕ ಅಭಿಯಂತರರು, ಪಂ.ರಾ.ಇಂ.ವಿಭಾಗ, ಮಂಡ್ಯರವರ ಕಛೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದು.

ಸಹಿ/–ಕಾರ್ಯಪಾಲಕ ಅಭಿಯಂತರರು, ಪಂ.ರಾ.ಇಂ.ವಿಭಾಗ, ಮಂಡ್ಯ.

ವಾಸಾಸಂಇ/ಸನಿ–ಮಂ/ಕೆಎಸ್ಎಂಸಿ&ಎ/464/2024–25